ಸಂಪುಟ: 04 ಸಂಚಿಕೆ: 190 ಪುಟಗಳು: 08 ಭಾನುವಾರ 22 ಸೆಪ್ಟೆಂಬರ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ದಿನದಲ್ಲಿ ಒಮ್ಮೆಯಾದರೂ ನಿಮ್ಮೊಂದಿಗೆ ಮಾತನಾಡಿ. ಇಲ್ಲವಾದಲ್ಲಿ ವಿಶ್ವದ ಅತ್ಯುತ್ತಮ ವ್ಯಕ್ತಿಯನ್ನು ಭೇಟಿಯಾಗುವ ಅವಕಾಶದಿಂದ ವಂಚಿತರಾಗುತ್ತೀರಿ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಈ ದೇಶದವರಿಗೆ ಹುಟ್ಟಿದ್ದಾರ? ಬೇರೆ ದೇಶದವರಿಗೆ ಹುಟ್ಟಿದ್ದಾರ?

• ಉದಯವಾಹಿನಿ, ಬಾಗಲಕೋಟೆ

ಟಿಪ್ಪು ಔರಂಗಜೇಬ್ ವಿರುದ್ಧ ಯತ್ನಾಳ್ ಹೇಳಿಕೆಗೆ, ಯತ್ನಾಳ ವಿರುದ್ಧ ಶಾಸಕ ವಿಜಯಾನಂದ ಕಾಶಪ್ಪನವರ ವಾಗ್ದಾಳಿ ನಡೆಸಿದ್ದು, ದೇಶ ಕಂಡ ವೀರ ಧೀರ ಟಿಪ್ಪು ಸುಲ್ತಾನ್ ಬಗ್ಗೆ ಬಾಯಿಗೆ ಬಂದ ಹಾಗೆ ಮಾತನಾಡುತ್ತಾರೆ.ಇದು ಯತ್ನಾಳ್ ಅವರ ಸೌಜನ್ಯತೆ ತೋರಿಸಿ ಕೊಡುತ್ತದೆ.

ಟಿಪ್ಪು ಸುಲ್ತಾನ್ ಯಾರಿಗೆ ಹುಟ್ಟಿದ್ದ? ಎಂದು ಯತ್ನಾಳ್ ನಿಂದಿಸಿದ್ದಾರೆ. ಹಾಗಾದರೆ ಇವರು ಯಾರಿಗೆ ಹುಟ್ಟಿದ್ದಾರೆ? ಎಂದು ಕಾಶಪ್ಪನವರ ಪ್ರಶ್ನಿಸಿದ್ದಾರೆ. ಇವರು ಈ ದೇಶದವರಿಗೆ ಹುಟ್ಟಿದ್ರಾ ಅಥವಾ ಬೇರೆ ದೇಶದವರಿಗೆ ಹುಟ್ಟಿದ್ರ? ಬಿಜೆಪಿಯವರು ಧರ್ಮದ ಆಧಾರದಲ್ಲಿ ಮಾತನಾಡುವುದನ್ನು ಮೊದಲು ಬಿಡಬೇಕು ಎಂದು ಅವರು ಕಿಡಿ ಕಾರಿದರು.

## ಎಲ್ಲಾ ದೇವಾಲಯಗಳ ಪ್ರಸಾದ ಪರೀಕ್ಷೆ ಮಾಡಲು ತೀರ್ಮಾನ

• ಉದಯವಾಹಿನಿ, ಬೆಂಗಳೂರು

ತಿರುಪತಿ ಲಡ್ಡು ಪ್ರಸಾದದಲ್ಲಿ ಪ್ರಾಣಿಗಳ ಕೊಬ್ಬು ಪತ್ತೆ ಬೆನ್ನಲ್ಲೇ, ರಾಜ್ಯ ಸರ್ಕಾರ ಎಚ್ಚೆತ್ತುಕೊಂಡಿದೆ. ರಾಜ್ಯದ ಮುಜರಾಯಿ ಇಲಾಖೆಯ ದೇವಾಲಯಗಳ ಪ್ರಸಾದ ವಿವಾದಕ್ಕೆ ಕಾರಣವಾಗುವ ಮುನ್ನವೇ ಎಲ್ಲಾ ದೇವಾಲಗಳ ಪ್ರಸಾದವನ್ನು ಪರೀಕ್ಷೆ ಮಾಡುವಂತ ನಿರ್ಧಾರವನ್ನು ಕೈಗೊಂಡಿದೆ.ಈ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿ ಮಾಹಿತಿ ಹಂಚಿಕೊಂಡಂತ ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರು, ರಾಜ್ಯದ ಎಲ್ಲಾ ದೇವಾಲಯಗಳ ಪ್ರಸಾದವನ್ನು ಟೆಸ್ಟ್ ಮಾಡಿಸುತ್ತೇನೆ. ನಮ್ಮ ರಾಜ್ಯದಲ್ಲಿ ಶೇ.99%ನಷ್ಟು ದೇವಾಲಯಗಳು ನಂದಿನಿ ತುಪ್ಪವನ್ನೇ ಬಳಸಿಕೊಳ್ಳುತ್ತಾ ಇದ್ದಾರೆ ಎಂದರು.ತಿರುಪತಿ ಲಡ್ಡು ವಿವಾದದಂತೆ ನಮ್ಮಲ್ಲೂ ಆಗುವುದಕ್ಕಿಂತ ಮುಂಚೆಯೇ ಜನರಿಗೆ ಸಂಶಯ ಬೇಡ ಅಂತ ನಂದಿನಿ ತುಪ್ಪ ಬಳಕೆ ಮಾಡಬೇಕು ಎಂಬುದಾಗಿ ಆದೇಶ ಮಾಡಲಾಗಿದೆ. ಕೇಂದ್ರ ಸಚಿವರೊಬ್ಬರು ರಾಜ್ಯದ ದೇವಾಲಯಗಳ ಪ್ರಸಾದ ಪರೀಕ್ಷೆ ಮಾಡಬೇಕು ಎಂದಿದ್ದಾರೆ. ನನ್ನ ಅಭಿಪ್ರಾಯ ಅಂದ್ರೆ, ದೇಶದ ಎಲ್ಲಾ ದೇವಸ್ಥಾನಗಳ ಪ್ರಸಾದ ಟೆಸ್ಟ್ ಮಾಡಲಿ ಎಂಬುದಾಗಿದೆ ಎಂದರು.

## ಬಿಜೆಪಿಯಿಂದ ದೇಶದಾದ್ಯಂತ ದ್ವೇಷ ರಾಜಕಾರಣ: ಕುಲಕರ್ಣಿ

• ಉದಯವಾಹಿನಿ, ಬೆಳಗಾವಿ

'ಬಿಜೆಪಿಯವರಂತೆ ನಾವ್ಯಾರೂ ದ್ವೇಷ ರಾಜಕಾರಣ ಮಾಡಿಲ್ಲ. ಅವರು ಎಷ್ಟು ಜನರಿಗೆ, ಎಷ್ಟು ಹಿಂಸೆ ಕೊಟ್ಟಿದ್ದಾರೆ ಎಂಬುದು ಜನರಿಗೆ ಗೊತ್ತಿದೆ. ಇದಕ್ಕೆ ನಾನೇ ದೊಡ್ಡ ಸಾಕ್ಷಿ' ಎಂದು ಶಾಸಕ ವಿನಯ ಕುಲಕರ್ಣಿ ಹೇಳಿದರು.'ಕಾಂಗ್ರೆಸ್ ದ್ವೇಷದ ರಾಜಕಾರಣ ಮಾಡುತ್ತಿದೆ' ಎಂಬ ಸಂಸದ ಜಗದೀಶ ಶೆಟ್ಟರ್ ಹೇಳಿಕೆಗೆ, ಪ್ರತಿಕ್ರಿಯಿಸಿದ ಅವರು, 'ಇಡೀ ದೇಶದಲ್ಲಿ ವಿರೋಧ ಪಕ್ಷದವರ ವಿರುದ್ಧ ಬಿಜೆಪಿಯವರು ದ್ವೇಷದ ರಾಜಕಾರಣ ನಡೆಸಿದ್ದಾರೆ. ಧಾರವಾಡ ಗ್ರಾಮೀಣ ಕ್ಷೇತ್ರದ ಶಾಸಕನಾದರೂ ನಾಲ್ಕು ವರ್ಷಗಳಿಂದ ನನ್ನೂರು ಮತ್ತು ಕ್ಷೇತ್ರಕ್ಕೆ ಹೋಗಿಲ್ಲ. ಯಾವುದೇ ಕೆಲಸಕ್ಕಾಗಿ ಕ್ಷೇತ್ರದ ಜನ ಬೆಳಗಾವಿಗೆ ಬಂದು ನಿಲ್ಲುವ ಪರಿಸ್ಥಿತಿ ಇದೆ. ಇದು ದ್ವೇಷ ರಾಜಕಾರಣದ ಫಲ' ಎಂದರು.'ಶಾಸಕ ಮುನಿರತ್ನ ಅವರ ವಿಚಾರದಲ್ಲಿ ನಾವೇನು ದ್ವೇಷದ ರಾಜಕಾರಣ ಮಾಡಿದ್ದೇವೆ. ಅವರು ಸ್ವತಃ ಕೀಳಾಗಿ ಮಾತನಾಡಿ, ಈ ಪರಿಸ್ಥಿತಿ ಅನುಭವಿಸುತ್ತಿದ್ದಾರೆ. ಅವರು ಮಾಡಿದ್ದು ತಪ್ಪು' ಎಂದು ತಿಳಿಸಿದರು.

## ಕುಮಾರಣ್ಣನ ಆಡಳಿತ ಸ್ವಂತಕ್ಕಾಗಿ, ನಮ್ಮ ಆಡಳಿತ ಜನರಿಗಾಗಿ

• ಉದಯವಾಹಿನಿ, ರಾಮನಗರ

ಕುಮಾರಣ್ಣನ ಆಡಳಿತ ಸ್ವಂತಕ್ಕೆ, ನನ್ನ ಆಡಳಿತ ತಾಲ್ಲೂಕು ಹಾಗೂ ಜನರಿಗಾಗಿ. ನನ್ನ ಆಡಳಿತವೇ ಬೇರೆ, ಕುಮಾರಣ್ಣನ ಆಡಳಿತವೇ ಬೇರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ವಾಗ್ದಾಳಿ ನಡೆಸಿದರು. ಚನ್ನಪಟ್ಟಣದ ಆದಿಲ್ ಷಾ (ಟಿಪ್ಪು) ಮೈದಾನದಲ್ಲಿ ವಿವಿಧ ಯೋಜನೆಗಳ ಶಂಕುಸ್ಥಾಪನೆ ಹಾಗೂ ಸರ್ಕಾರದ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ದಾಖಲೆ ಪತ್ರ ವಿತರಣೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಭಾಗವಹಿಸಿ ಮಾತನಾಡಿದರು.ಕಳೆದ ಮೂರು ತಿಂಗಳಲ್ಲಿ ಚನ್ನಪಟ್ಟಣ ತಾಲ್ಲೂಕಿನಲ್ಲಿ 500 ಕೋಟಿ ಮೊತ್ತದ ಯೋಜನೆಗಳ ಗುದ್ದಲಿ ಪೂಜೆ ಮಾಡಲಾಗಿದೆ. ಈ ತಾಲ್ಲೂಕಿನಲ್ಲಿ ಆಗುತ್ತಿರುವ ಬದಲಾವಣೆಯನ್ನು ನೀವು ಕಿವಿಯಲ್ಲಿ ಕೇಳುವುದು ಮಾತ್ರವಲ್ಲ, ಕಣ್ಣಾರೆ ನೋಡುತ್ತಿದ್ದೀರಿ. ಕಳೆದ ಮೂರು ತಿಂಗಳಲ್ಲಿ ಸಚಿವರು, ಅಧಿಕಾರಿಗಳು ನಿಮ್ಮ ಬಳಿ ಬಂದು ನಿಮಗೆ ಏನು ಬೇಕು ಎಂದು ಕೇಳುತ್ತಿದ್ದಾರೆ. ಹಳೆ ಶಾಸಕರು ನಿಮ್ಮನ್ನು ಬಿಟ್ಟು ಹೋಗಿದ್ದಾರೆ. ಅವರಿಗೂ ಚನ್ನಪಟ್ಟಣಕ್ಕೂ ಸಂಬಂಧವಿಲ್ಲ. ನನ್ನ ಮತ್ತು ಚನ್ನಪಟ್ಟಣ ನಡುವಣ ಸಂಬಂಧ ಭಕ್ತ ಹಾಗೂ ಭಗವಂತ ನಡುವಿನ ಸಂಬಂಧ. ಈ ಭಾಗದವರು ನಾಲ್ಕು ಬಾರಿ ನನ್ನನ್ನು ವಿಧಾನಸಭೆಗೆ ಆರಿಸಿದ್ದಾರೆ.

**ಪ್ರಧಾನ ಮಂತ್ರಿ ಅಮೆರಿಕಕ್ಕೆ ತೆರಳಿದ್ದು , ನಾಲ್ಕನೇ ಕ್ವಾಡ್ ಲೀಡರ್ಸ್ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಸೆ.23ರಂದು ನ್ಯೂಯಾರ್ಕ್‌ನಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಭಾಷಣ ಮಾಡಲಿದ್ದಾರೆ. ಅಮೆರಿಕದ ಅಧ್ಯಕ್ಷ ಜೋ ಬೈಡನ್ ಅವರ ತವರೂರು ವಿಲಿಂಗ್ಟನ್‌ನಲ್ಲಿ ಕ್ವಾಡ್ ಶಂಗಸಭೆ ಸಭೆಯನ್ನು ಆಯೋಜಿಸಲಾಗಿದೆ. ಕ್ವಾಡ್ ಶಂಗಸಭೆಯಲ್ಲಿ ನನ್ನ ಸ್ನೇಹಿತರಾದ ಅಧ್ಯಕ್ಷ ಬೈಡನ್, ಪ್ರಧಾನಿ ಅಲ್ಬನೀಸ್ ಮತ್ತು ಪ್ರಧಾನಿ ಕಿಶಿದಾ ಅವರನ್ನು ಭೇಟಿಯಾಗಲು ನಾನು ಎದುರು ನೋಡುತ್ತಿದ್ದಾನೆ ಎಂದು ಮೋದಿ ಎಕ್ಸ್ ಮಾಡಿದ್ದಾರೆ.**

# ಶೃಂಗ ಭವಿಷ್ಯದ ಸಂಗಮ

1 ಮೂರು ದಿನಗಳ ಅಮೆರಿಕ ಪ್ರವಾಸಕ್ಕಾಗಿ ಶನಿವಾರ ತೆರಳಿದ ಪ್ರಧಾನಿ ಮೋದಿ

2 ಭಾರತ-ಅಮೆರಿಕ ಪಾಲುದಾರಿಕೆ ಬಲಪಡಿಸಲು ಹೊಸ ಮಾರ್ಗಗಳ ಹುಡುಕಾಟ

3 ಭಾರತೀಯ ಸಮುದಾಯದ ಜತೆ ಸಂವಾದಿಸಲು ಕಾತರರಾಗಿರುವುದಾಗಿ ಮೋದಿ

**ಇಂದಿನಿಂದ ಮೂರು ದಿನ ಪ್ರವಾಸ ಕ್ವಾಡ್ ಶೃಂಗಸಭೆ**



**ಅಮೆರಿಕಾಗೆ ತೆರಳಿದ ಮೋದಿ**

• ಉದಯವಾಹಿನಿ, ದೆಹಲಿ

ಈ ವೇದಿಕೆಯು ಶಾಂತಿಯನ್ನು ಉತ್ತೇಜಿಸುವ ಸಮಾನ ಮನಸ್ಕ ರಾಷ್ಟ್ರಗಳ ವೇದಿಕೆಯಾಗಲಿದೆ. ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಪ್ರಗತಿ, ಮತ್ತು ಸಮದ್ಧಿ ಬಗ್ಗೆ ಈ ಸಭೆಯಲ್ಲಿ ಚರ್ಚಿಸಲಿದ್ದೇವೆ ಎಂದು ಅವರು ಹೇಳಿದ್ದಾರೆ.

ಅಮೆರಿಕದ ಅಧ್ಯಕ್ಷ ಜೋ ಬೈಡನ್ ಜತೆ ಎರಡೂ ರಾಷ್ಟ್ರಗಳ ಮತ್ತು ಜಾಗತಿಕ ಹಿತಾಸಕ್ತಿಗಳ ಸುಧಾರಣೆಗಾಗಿ ಭಾರತ-ಯುಎಸ್ ಸಮಗ್ರ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆ ಬಗ್ಗೆ ಚರ್ಚಿಸಲಿದ್ದೇವೆ ಎಂದು ಹೇಳಿದ್ದಾರೆ. ಈ ಕ್ವಾಡ್ ಶಂಗಸಭೆಯನ್ನು ಚತುರ್ಭುಜ ಭದ್ರತಾ ಸಂವಾದ ಎಂದು ಕರೆಯಲಾಗುತ್ತದೆ. ಭಾರತ, ಯುನೈಟೆಡ್ ಸ್ಟೇಟ್ಸ್, ಜಪಾನ್ ಮತ್ತು ಆಸ್ಟ್ರೇಲಿಯಾವನ್ನು ಒಳಗೊಂಡಿದೆ.

ಮೋದಿ ಅವರ ಈ ಭೇಟಿಯಲ್ಲಿ ಜಾಗತಿಕ ಸಮಸ್ಯೆಗಳನ್ನು ಬಗೆಹರಿಸುವ ಬಗ್ಗೆ ವಿಶ್ವ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸುವ ನಿರೀಕ್ಷೆಯಿದೆ. ಭಾರತೀಯ ಸಮುದಾಯ ಮತ್ತು ಪ್ರಮುಖ ಅಮೆರಿಕನ್ ಉದ್ಯಮಿಗಳ ಜತೆಗೆ ಸಭೆ ನಡೆಸಲಿದ್ದಾರೆ ಎಂದು ಹೇಳಲಾಗಿದೆ. ಕ್ವಾಡ್ ಶಂಗಸಭೆಯು ಉಕ್ರೇನ್ ಮತ್ತು ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಸಂಘರ್ಷಗಳು, ಕಡಲ ಭದ್ರತೆ, ಉದಯೋನುಖ ತಂತ್ರಜ್ಞಾನಗಳು ಮತ್ತು ಕ್ಯಾನ್ಸರ್ ವಿರುದ್ಧ ಹೋರಾಡುವ ವಿಚಾರಗಳು ಸೇರಿದಂತೆ ಹಲವಾರು ನಿರ್ಣಾಯಕ ವಿಷಯಗಳ ಮೇಲೆ ಕೇಂದ್ರೀಕರಿಸುತ್ತದೆ.

ಇದೇ ವೇಳೆ ಅಮೆರಿಕದ ಮಾಜಿ ಅಧ್ಯಕ್ಷ ಮತ್ತು ರಿಪಬ್ಲಿಕನ್ ಅಧ್ಯಕ್ಷೀಯ ನಾಮನಿರ್ದೇಶನದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಅವರನ್ನು ಮೋದಿ ಭೇಟಿಯಾಗಲಿದ್ದಾರೆ ಎಂದು ಹೇಳಲಾಗಿದೆ. ನ.5ರಂದು ಯುಎಸ್ ಚುನಾವಣೆಗಳು ನಿಗದಿಯಾಗಿದ್ದು, ಈಗಾಗಲೇ ಡೊನಾಲ್ಡ್ ಟ್ರಂಪ್ ಅಮೆರಿಕದಲ್ಲಿ ಭರದಿಂದ ಪ್ರಚಾರ ನಡೆಸುತ್ತಿದ್ದರೆ ಅವರ ಪ್ರತಿಸ್ಪರ್ಧಿಯಾಗಿ ಭಾರತೀಯ ಮೂಲದ ಕಮಲಾ ಹ್ಯಾರೀಸ್ ಸೆಣಸುತ್ತಿದ್ದಾರೆ.

**ಶ್ವೇತಭವನದ ಅಧಿಕಾರಿಗಳನ್ನು ಭೇಟಿಯಾದ ಸಿಖ್ಖರು:** ತನ್ನ ನೆಲದಲ್ಲಿ ಯಾವುದೇ ದೇಶೀಯ ಆಕ್ರಮಣಕಾರಿ ಕೃತ್ಯಗಳಿಂದ ಅಮೆರಿಕನ್ನರನ್ನು ರಕ್ಷಿಸಲು ಅಮೆರಿಕ ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಲು ಶ್ವೇತಭವನದ ಅಧಿಕಾರಿಗಳು ಸಿಖ್ ಕಾರ್ಯಕರ್ತರ ಗುಂಪನ್ನು ಭೇಟಿ ಮಾಡಿದ್ದಾರೆ ಎಂದು ಸಮುದಾಯದ ಮುಖಂಡರೊಬ್ಬರು ತಿಳಿಸಿದ್ದಾರೆ. ಪ್ರಧಾನಮಂತ್ರಿ, ನರೇಂದ್ರ ಮೋದಿ ಯವರು ಮೂರು ದಿನಗಳ ಅಮೇರಿಕಾ ಪ್ರವಾಸದ ಮುನ್ನ ಡೆಲವೇರ್‌ನಲ್ಲಿ ನಡೆಯಲಿರುವ ಕ್ವಾಡ್ ಶಂಗಸಭೆಯಲ್ಲಿ ಭಾಗವಹಿಸಲಿದ್ದು, ನ್ಯೂಯಾರ್ಕ್‌ನಲ್ಲಿ ನಡೆಯುತ್ತಿರುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಭವಿಷ್ಯದ ಶಂಗಸಭೆಯನ್ನು ಉದ್ದೇಶಿಸಿ ಮಾತನಾಡುವ ಮುನ್ನ ಈ ಸಭೆ ನಡೆದಿದೆ. ಶ್ವೇತಭವನದ ಸಂಕೀರ್ಣದಲ್ಲಿ ನಡೆದ ಈ ಸಭೆಯಲ್ಲಿ ಅಮೇರಿಕನ್ ಸಿಖ್ ಕಾಕಸ್ ಸಮಿತಿಯ ಪ್ರೀತ್ಪಾಲ್ ಸಿಂಗ್ ಮತ್ತು ಸಿಖ್ ಒಕ್ಕೂಟ ಮತ್ತು ಸಿಖ್ ಅಮೆರಿಕನ್ ಕಾನೂನು ರಕ್ಷಣಾ ಮತ್ತು ಶಿಕ್ಷಣ ನಿಧಿಪ್ರತಿನಿಧಿಗಳು ಭಾಗವಹಿಸಿದ್ದರು. ನಾವು ಸಿಖ್ ಅಮೆರಿಕನ್ನರ ಜೀವಗಳನ್ನು ಉಳಿಸಿದ್ದಕ್ಕಾಗಿ ಮತ್ತು ನಮ ಸಮುದಾಯವನ್ನು ರಕ್ಷಿಸುವಲ್ಲಿ ಜಾಗರೂಕತೆಗಾಗಿ ಹಿರಿಯ ಫೆಡರಲ್ ಸರ್ಕಾರಿ ಅಧಿಕಾರಿಗಳಿಗೆ ಧನ್ಯವಾದ ಹೇಳಲು ಅವಕಾಶವನ್ನು ಹೊಂದಿದ್ದೇವೆ. ಹೆಚ್ಚಿನದನ್ನು ಮಾಡಲು ನಾವು ಅವರನ್ನು ಕೇಳಿದ್ದೇವೆ ಮತ್ತು ಅವರು ಮಾಡುವ ಭರವಸೆಗೆ ನಾವು ಅವರನ್ನು ಹಿಡಿದಿಟ್ಟುಕೊಳ್ಳುತ್ತೇವೆ ಎಂದು ಅಮೇರಿಕನ್ ಸಿಖ್ ಕಾಕಸ್ ಸಮಿತಿಯ ಸಂಸ್ಥಾಪಕ ಪ್ರೀತ್ಪಾಲ್ ಸಿಂಗ್ ಪಿಟಿಐಗೆ ತಿಳಿಸಿದರು.

### ಪ್ರಧಾನಿ ಮೋದಿ ಪ್ರವಾಸ

**ವಿಲ್ಮಿಂಗ್ಟನ್ ಕ್ವಾಡ್ ಶೃಂಗಸಭೆಯಲ್ಲಿ ಭಾಗವಹಿಸಿದ ಬಳಿಕ ಮೋದಿ ಅವರು ಲಾಂಗ್ ಐಲ್ಯಾಂಡ್‌ನಲ್ಲಿ ಭಾರತೀಯ ಸಮುದಾಯದ ಕಾರ್ಯಕ್ರಮದಲ್ಲಿ ಭಾಗವಹಿಸಲು ನ್ಯೂಯಾರ್ಕ್‌ಗೆ ಪ್ರಯಾಣಿಸಲಿದ್ದಾರೆ. ಸೆ.23ರಂದು ವಿಶ್ವಸಂಸ್ಥೆಯ ಜನರಲ್ ಅಸೆಂಬ್ಲಿಯಲ್ಲಿ ಭವಿಷ್ಯದ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಅಮೆರಿಕ ಉದ್ಯಮಿಗಳು ಮತ್ತು ಭಾರತೀಯ ಸಮುದಾಯವನ್ನು ಭೇಟಿಯಾಗಲು ಉತ್ಸುಕನಾಗಿರುವುದಾಗಿ ಪ್ರಧಾನಿ ತಿಳಿಸಿದ್ದಾರೆ.**

### ವಿಶ್ವಸಂಸ್ಥೆಯಲ್ಲಿ ಮೋದಿ ಭಾಷಣ

**ಮೂರನೇ ದಿನದಂದು ಅವರು ನ್ಯೂಯಾರ್ಕ್‌ನಲ್ಲಿನ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಭವಿಷ್ಯದ ಶೃಂಗದಲ್ಲಿ ಮಾತನಾಡಲಿದ್ದಾರೆ. 'ಉತ್ತಮ ನಾಳೆಗಾಗಿ ಬಹು ರಾಷ್ಟ್ರೀಯ ಪರಿಹಾರ' ಎನ್ನುವುದು ಇದರ ವಿಷಯವಾಗಿದೆ. ಇದು ತಲೆಮಾರಿನಲ್ಲಿ ಒಮ್ಮೆ ನಡೆಯುಂತಹ ಶೃಂಗ ಎಂದು ವಿಶ್ವಸಂಸ್ಥೆ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಹೇಳಿದ್ದಾರೆ. ವಿಶ್ವಸಂಸ್ಥೆ ಶೃಂಗದ ವೇಳೆ ಮೋದಿ ಅವರು ಇತರೆ ಕೆಲವು ಜಾಗತಿಕ ನಾಯಕರ ಜತೆ ದ್ವಿಪಕ್ಷೀಯ ಚರ್ಚೆಗಳನ್ನು ನಡೆಸುವ ನಿರೀಕ್ಷೆ ಇದೆ. ಪ್ರಧಾನಿ ಮೋದಿ ಅವರ ಅಮೆರಿಕ ಪ್ರವಾಸದ ವೇಳೆ ಅವರನ್ನು ಭೇಟಿ ಮಾಡುವುದಾಗಿ ಕೆಲವು ದಿನಗಳ ಹಿಂದೆ ಮಾಜಿ ಅಧ್ಯಕ್ಷ ಹಾಗೂ ಹಾಲಿ ಅಧ್ಯಕ್ಷೀಯ ಆಕಾಂಕ್ಷಿ ಡೊನಾಲ್ಡ್ ಟ್ರಂಪ್ ಹೇಳಿದ್ದರು. ಆದರೆ ಈ ಸಭೆ ಯಾವಾಗ ನಡೆಯಲಿದೆ ಎನ್ನುವುದು ಖಚಿತವಾಗಿಲ್ಲ.**

### ಕ್ವಾಡ್ ಶೃಂಗಸಭೆ

**ದ್ವಿಪಕ್ಷೀಯ ಸಭೆ ಬಳಿಕ ಬೈಡನ್ ಅವರ ಜತೆ ಕ್ವಾಡ್ ಶೃಂಗಸಭೆಗೆ ಮೋದಿ ಹಾಜರಾಗಲಿದ್ದಾರೆ. ಆಸ್ಟ್ರೇಲಿಯಾ ಹಾಗೂ ಜಪಾನ್ ಪ್ರಧಾನಿಗಳು ಕೂಡ ಭಾಗವಹಿಸಲಿರುವ ಶೃಂಗದಲ್ಲಿ ಚೀನಾ ವಿಚಾರ ಪ್ರಮುಖವಾಗಿ ಚರ್ಚೆಗೆ ಬರಲಿದೆ ಎಂದು ಶ್ವೇತಭವನದ ವಕ್ತಾರ ಜಾನ್ ಕಿರ್ಬಿ ತಿಳಿಸಿದ್ದಾರೆ. ಪ್ರವಾಸದ ಎರಡನೇ ದಿನದಂದು ಮೋದಿ ಅವರು ನ್ಯೂಯಾರ್ಕ್‌ನಲ್ಲಿನ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಮುಂಚೂಣಿ ಕಂಪೆನಿಗಳ ಸಿಇಒಗಳ ಜತೆ ಸಂವಾದ ನಡೆಸಲಿದ್ದಾರೆ.**

## ನ್ಯಾಯಾಧೀಶರ ಮುಂದೆ ಶಾಸಕ ಮುನಿರತ್ನ ಅಳಲು

# ಈಗಲೇ ರಾಜೀನಾಮೆ ಕೊಡ್ತೀನಿ ತೊಗೊಳ್ಳಿ ಸ್ವಾಮಿ

• ಉದಯವಾಹಿನಿ, ಬೆಂಗಳೂರು

ನಾನು ಬೇಕಾದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಲು ಸಿದ್ದನಿದ್ದೇನೆ. ಇಂತಹ ಮಾನಸಿಕ ಕಿರುಕುಳ ಯಾರಿಗೂ ಬೇಡ. ಬೇಕಾದರೆ ಈಗಲೇ ರಾಜೀನಾಮೆ ಪತ್ರವನ್ನು ತೆಗೆದುಕೊಳ್ಳಿ ಸ್ವಾಮಿ..!! ಅತ್ಯಾಚಾರ ಆರೋಪದ ಮೇಲೆ ಬಂಧನಕ್ಕೊಳಪಟ್ಟಿರುವ ಬಿಜೆಪಿ ಶಾಸಕ ಮುನಿರತ್ನ ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯದ ನ್ಯಾಯಾಧೀಶರ ಮುಂದೆ ಅಲವತ್ತುಕೊಂಡಿದ್ದು ಹೀಗೆ.

ರಾಮನಗರ ಜಿಲ್ಲೆ ಕಗ್ಗಲಿಪುರ ಪೊಲೀಸರು ವಿಚಾರಣೆ ನಡೆಸಿದ ನಂತರ ಮುನಿರತ್ನ ಅವರನ್ನು ಬೆಳಗ್ಗೆ ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದಾರೆ. ಈ ವೇಳೆ ನ್ಯಾಯಮೂರ್ತಿಗಳು ಪ್ರಕರಣ ಕುರಿತು ಆರೋಪಿಗೆ ಕೆಲವು ಪ್ರಶ್ನೆಗಳನ್ನು ಮುಂದಿಟ್ಟರು. ಆಗ ಮುನಿರತ್ನ ಅವರು, ಐದು ವರ್ಷದ ನಂತರ ಈ ಪ್ರಕರಣ ಆಚೆ ಬಂದಿದೆ.

ಒಂದು ವೇಳೆ ಅಂತಹ ನೀಚ ಕೆಲಸವನ್ನು ಮಾಡಿದ್ದರೆ ಸಂತ್ರಸ್ತ ಮಹಿಳೆ ಈವರೆಗೂ ಏಕೆ ಸುಮನಿದ್ದರು. ಅಂದೇ ದೂರು ಕೊಡಬಹುದಿತ್ತಲ್ಲವೇ? ಇದು ವ್ಯವಸ್ಥಿತ ರಾಜಕೀಯ ಷಡ್ಯಂತರ ಎಂದು ನೋವು ಹೊರಹಾಕಿದರು. ಲೋಕಸಭೆಯ ಚುನಾವಣೆ ಫಲಿತಾಂಶ ಬಂದ ನಂತರ ನನ್ನ ಮೇಲೆ ದ್ವೇಷದ ರಾಜಕಾರಣ ಮಾಡಲಾಗುತ್ತಿದೆ. ಕೆಲವರು ನಾನು ಪ್ರತಿನಿಧಿಸುವ ಕ್ಷೇತ್ರದಲ್ಲಿ ತನ್ನ ಸಹೋದರನಿಗೆ ಹಿನ್ನಡೆಯಾಯಿತಲ್ಲ ಎಂದು ಸುಳ್ಳು ಮೊಕದ್ದಮೆಗಳನ್ನು ದಾಖಲಿಸುತ್ತಿದ್ದಾರೆ ಸ್ವಾಮಿ.. ನೀವು ಹೇಳಿದರೆ ನನ್ನ ಶಾಸಕ ಸ್ಥಾನಕ್ಕೆ ಈಗಲೇ ರಾಜೀನಾಮೆ ಕೊಟ್ಟು ಮನೆಯಲ್ಲಿ ನೆಮದಿಯಾಗಿರುತ್ತೇನೆ ಎಂದಿದ್ದಾರೆ. ಆಗ ಮಧ್ಯಪ್ರವೇಶಿಸಿದ ನ್ಯಾಯಾಧೀಶರು, ಇದು ನ್ಯಾಯಾಲಯ ಎಂಬುದು ನಿಮ ಗಮನದಲ್ಲಿರಲಿ. ನೀವು ರಾಜೀನಾಮೆಯನ್ನು ಯಾರಿಗೆ ಕೊಡಬೇಕೋ ಅವರಿಗೆ ಕೊಡಿ. ನಾನು ಕೇಳುತ್ತಿರುವ ಪ್ರಶ್ನೆಗಳಿಗೆ ಮಾತ್ರ ಉತ್ತರ ಕೊಡಿ ಎಂದು ಸೂಚಿಸಿದರು. ಮಾತು ಮುಂದುವರೆಸಿದ ಮುನಿರತ್ನ ಇದು ಆಡಳಿತಾರೂಢ ಕಾಂಗ್ರೆಸ್ ಪಕ್ಷದ ವ್ಯವಸ್ಥಿತ ಷಡ್ಯಂತ್ರವಾಗಿದೆ.



**ಐದು ವರ್ಷ ಜೈಲಿನಲ್ಲಿ ಕೂರಿಸಲು ಆಧಾರರಹಿತ ಆರೋಪ**

ನಾನು ಯಾವ ಮಹಿಳೆಯ ಮೇಲೂ ಅತ್ಯಾಚಾರ ನಡೆಸಿಲ್ಲ. ಸಾರ್ವಜನಿಕ ಜೀವನದಲ್ಲಿ ನನ್ನದೇ ಆದ ಘನತೆ ಇಟ್ಟುಕೊಂಡಿದ್ದೇನೆ. ನಿಜ ಹೇಳಬೇಕೆಂದರೆ ಆ ಮಹಿಳೆಯೇ ನನಗೆ ಮೊಬೈಲ್‌ನಲ್ಲಿ ಅಶ್ಲೀಲ ವಿಡಿಯೋಗಳನ್ನು ಕಳುಹಿಸಿ ನೋಡುವಂತೆ ಪ್ರಚೋದನೆ ಮಾಡುತ್ತಿದ್ದರು. ನಾನು ಎಂದೂ ಇಂತಹ ನೀಚ ಕೆಲಸ ಮಾಡಲಿಲ್ಲ. ನನ್ನ ಕ್ಷೇತ್ರದಲ್ಲಿರುವ ರಾಜಕೀಯ ಎದುರಾಳಿಗಳು ಕೆಲವು ಪ್ರಭಾವಿಗಳ ಜೊತೆ ಸೇರಿಕೊಂಡು ಇಂತಹ ಷಡ್ಯಂತ್ರ ನಡೆಸಿದ್ದಾರೆ ಎಂದು ನೋವು ತೋಡಿಕೊಂಡರು.ರಾಜಕೀಯಕ್ಕೆ ಬಂದ ಮೇಲೆ ನನ್ನ ಮೇಲೆ ಇಂಥ ಆರೋಪಗಳು ಕೇಳಿಬರುತ್ತಲೇ ಇದೆ. ನಮಂಥವರು ಸಾರ್ವಜನಿಕ ಕ್ಷೇತ್ರದಲ್ಲಿ ಇರಬಾರದು ಎಂಬುದು ಕೆಲವರ ದುರಾಲೋಚನೆ. ಹೇಗಾದರೂ ಮಾಡಿ ಐದು ವರ್ಷ ಜೈಲಿನಲ್ಲಿ ಕೂರಿಸಲು ಆಧಾರರಹಿತ ಆರೋಪಗಳನ್ನು ಮಾಡುತ್ತಿದ್ದಾರೆ. ನಾನು ಶಾಸಕನಾಗಿ ಮುಂದುವರೆಯಬಾರದೆಂದ ಇಚ್ಛೆ ಇದ್ದರೆ ರಾಜೀನಾಮೆ ಕೊಟ್ಟುಬಿಡುತ್ತೇನೆ ಎಂದು ಹೇಳಿದರು. ನೀವು ರಾಜೀನಾಮೆ ನೀಡಬೇಡಿ. ಜನಪ್ರತಿನಿಧಿಯಾಗಿ ಮುಂದುವರೆಯುವ ಆಸಕ್ತಿ ಇಲ್ಲದಿದ್ದರೆ ಸಂಬಂಧಪಟ್ಟವರ ಬಳಿ ರಾಜೀನಾಮೆ ವಿಷಯವನ್ನು ಮಾತನಾಡಿ ಎಂದು ಸೂಚಿಸಿ ನ್ಯಾಯಾಂಗ ಬಂಧನಕ್ಕೆ ಆದೇಶ ನೀಡಿದರು.

# ದೇವೇಗೌಡರ ಫೋಟೋಗೆ ಚಪ್ಪಲಿ ಹಾರ ಹಾಕಿಸಿದ್ದಾಗ ಎಲ್ಲಿ ಹೋಗಿತ್ತು ಒಕ್ಕಲಿಗರ ಸ್ವಾಭಿಮಾನ?

## ನಮ್ಮ ಸಮಾಜದ ಸ್ವಾಮೀಜಿಗೆ ನಾನು ಸಾಫ್ಟ್ ಆಗಿರಲು ಹೇಳಿದ್ದೇನೆ ಎಂದು ಕೇಲವರು ಆರೋಪ ಮಾಡ್ತಿದ್ದಾರೆ, ನಾನ್ಯಾಕೆ ಅಂತಹದ್ದನ್ನು ಮಾಡಲಿ: ಹೆಚ್ ಡಿ ಕುಮಾರಸ್ವಾಮಿ

• ಉದಯವಾಹಿನಿ, ಮೈಸೂರು

ಮೈಸೂರಿನಲ್ಲಿ ದೇವೇಗೌಡರ ಫೋಟೋಗೆ ಚಪ್ಪಲಿ ಹಾರ ಹಾಕಿಸಿದ್ದಾಗ ಒಕ್ಕಲಿಗರ ಸ್ವಾಭಿಮಾನ ಎಲ್ಲಿ ಹೋಗಿತ್ತು ಎಂದು ಕಾಂಗ್ರೆಸ್ ನಾಯಕರ ವಿರುದ್ಧ ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವರಾದ ಹೆಚ್ ಡಿ ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

ಈ ಕುರಿತು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ನಮ್ಮ ಸಮಾಜದ ಸ್ವಾಮೀಜಿಗೆ ನಾನು ಸಾಫ್ಟ್ ಆಗಿರಲು ಹೇಳಿದ್ದೇನೆ ಎಂದು ಕೇಲವರು ಆರೋಪ ಮಾಡ್ತಿದ್ದಾರೆ, ನಾನ್ಯಾಕೆ ಅಂತಹದ್ದನ್ನು ಮಾಡಲಿ ಎಂದು ಡಿ ಕೆ ಬ್ರದರ್ಸ್ ಕುಟುಂಬದ ವಿರುದ್ಧ ಹೆಚ್ ಡಿ ಕುಮಾರಸ್ವಾಮಿ ಹರಿಹಾಯ್ದರು.

ನನ್ನ ವಿರುದ್ಧ ಡಿನೋಟಿ ಫಿಕೇಶನ್ ಆರೋಪ ಮಾಡಿರುವ ರಾಜ್ಯ ಕಾಂಗ್ರೆಸ್ ಸರಕಾರದ ಮೂವರು ಸಚಿವರ ವಿರುದ್ಧ ಹರಿಹಾಯ್ದಿರುವ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು; ಅದೊಂದು ಸ್ಕ್ರಿಪ್ಟೆಡ್ ಮಾಧ್ಯಮಗೋಷ್ಠಿ ಎಂದು ಲೇವಡಿ ಮಾಡಿದರು.ಮೈಸೂರು ವಿಮಾನ ನಿಲ್ದಾಣದಲ್ಲಿ ಶುಕ್ರವಾರ ಮಾಧ್ಯಮಗಳ ಜತೆ ಮಾತನಾಡಿದ ಅವರು; ಯಾರೂ ಬರೆದುಕೊಟ್ಟ ಸ್ಕ್ರಿಪ್ಟ್ ಅನ್ನು ಮೂವರು ಸಚಿವರು



ಮಾಧ್ಯಮಗಳ ಮುಂದೆ ಹೇಳಿದ್ದಾರೆ. ಅಲ್ಲಿ ಅಂದು ಮುಖ್ಯಮಂತ್ರಿ ಆಗಿದ್ದ ನಾನೇನು ಬರೆದಿದ್ದೇನೆ, ನಾನೇನು ಆದೇಶ ಮಾಡಿದ್ದೇನೆ ಎಂಬುದು ಅವರಿಗೆ ಗೊತ್ತಿಲ್ಲವೇ? ಎಂದು ಕುಟುಕಿದರು. ಈ ಸಂದರ್ಭದಲ್ಲಿ ಸಚಿವರು, ತಮ್ಮ ಹಾಗೂ ಯಡಿಯೂರಪ್ಪ ವಿರುದ್ಧ ವಾಗ್ದಾಳಿ ಮಾಡಲು ಸಚಿವರಿಗೆ ಬರೆದುಕೊಡಲಾಗಿದ್ದ ಟೂಲ್ ಕಿಟ್ ಪ್ರತಿಯನ್ನು ಮಾಧ್ಯಮಗಳ ಮುಂದೆ ಪ್ರದರ್ಶಿಸಿದರು.

ನಾನು ಕೇಂದ್ರ ಸಚಿವನಾಗಿದ್ದು ಇವರಿಗೆ ತಡೆಯಲು ಆಗುತ್ತಿಲ್ಲ. ಹೇಗಾದರೂ ನನ್ನನ್ನು ಕಟ್ಟಿ ಹಾಕಲು ಇವರು ಹಣಿಸುತ್ತಲೇ ಇದ್ದಾರೆ. ನನ್ನ ವಿರುದ್ಧ ಒಂದು ವ್ಯವಸ್ಥಿತ ಟೂಲ್ ಕಿಟ್ ರೆಡಿ ಮಾಡಿದ್ದಾರೆ. ಅದನ್ನೇ ಇವರುಗಳು ಬಾಯಿಪಾಠ ಮಾಡಿದ್ದಾರೆ ಎಂದು ಕುಮಾರಸ್ವಾಮಿ ಅವರು ಆರೋಪಿಸಿದರು.

ಇನ್ನೂ ನನ್ನ ಮೇಲೆ ಆರೋಪ ನಡೆಸಲು ಮಾಧ್ಯಮಗೋಷ್ಠಿ ನಡೆಸಿದ ಕೃಷ್ಣ ಭೈರೇಗೌಡ, ದಿನೇಶ್ ಗುಂಡೂರಾವ್ ಮತ್ತು ಸಂತೋಷ್ ಲಾಡ್ ಅವರಿಗೆ ಯಾರೋ ಸರಿಯಾಗಿ ಸ್ಕ್ರಿಪ್ಟ್ ಬರೆದು ಕೊಟ್ಟಿಲ್ಲ. ಅವರು ನನ್ನ ವಿರುದ್ಧ ಸುಳ್ಳಿನ ಕಥೆಯನ್ನೇ ಕಟ್ಟಿದ್ದಾರೆ. ನಾನು ಎಲ್ಲೂ ಕದ್ದು ಹೋಗುವ ಪ್ರಶ್ನೆಯೇ ಇಲ್ಲ. ಸುಳ್ಳು ಹೇಳಿಕೊಂಡು ಬೇರೆಯವರ ನೆರಳನ್ನು ತೆಗೆದುಕೊಳ್ಳುವ ಇವರಂತೆ ನಾನಲ್ಲ ಎಂದು ಹೆಚ್ ಡಿ ಕುಮಾರಸ್ವಾಮಿ ಅವರು ಗುಡುಗಿದರು.

ನಾನು ಬುದ್ಧಿವಂತ ಎನ್ನುತ್ತೀರಿ. ವಿದೇಶದಲ್ಲಿ ಓದಿಕೊಂಡು ಬಂದಿದ್ದೇನೆ ಎನ್ನುತ್ತೀರಿ. ಮಧ ಕೃಷ್ಣಭೈರೇಗೌಡ ವಿದೇಶದಲ್ಲಿ ಓದಿ, ಮೇಧಾವಿ ಎಂದು ಹೇಳುತ್ತೀರಿ. ಆದರೆ, ನಾನು ಹರದನಹಳ್ಳಿ ಎಂಬ ಹಳ್ಳಿಯಲ್ಲಿ ಓದಿ ಬೆಳೆದವನು. ಕೃಷ್ಣ ಭೈರೇಗೌಡರೇ.. ಮಾಧ್ಯಮಗೋಷ್ಠಿಗೂ ಮೊದಲು ಈ ಪ್ರಕರಣದ ಬಗ್ಗೆ, ದಾಖಲೆಗಳ ಬಗ್ಗೆ ಸರಿಯಾದ ಮಾಹಿತಿ ಪಡೆದುಕೊಳ್ಳಬೇಕಿತ್ತು ಅಲ್ಲವೇ? ಎಂದು ಕಂದಾಯ ಮಂತ್ರಿಗೆ ಟಾಂಗ್ ಕೊಟ್ಟರು.

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೊದಲ ದಿನದಿಂದಲೇ ವರ್ಗಾವಣೆ ದಂಧೆ ಸೇರಿ ಅನೇಕ ಅಕ್ರಮಗಳಲ್ಲಿ ಸರ್ಕಾರ ತೊಡಗಿದೆ. ಪ್ರತಿಪಕ್ಷದಲ್ಲಿ ಇರುವ ನಾನು ಸಹಜವಾಗಿಯೇ ಪ್ರಶ್ನೆ ಮಾಡಿದ್ದೇನೆ. ಅದೇ ಅಪರಾಧ ಆಗಿದೆ ಇವರಿಗೆ. ನಾನು ಸಿದ್ದರಾಮಯ್ಯ ಅವರಂತೆ ಹಲ್ಕಾ ಕೆಲಸ ಮಾಡಿಲ್ಲ. ಮೂಡಾ ಹಗರಣದಲ್ಲಿ ಸರ್ಕಾರಿ ಜಮೀನನ್ನು ಹೇಗೆ ಕಬಳಿಸಿದ್ದಾರೆ ಎಂಬುದನ್ನು ದಾಖಲೆಗಳೇ ಜಗಜ್ಜಾಹೀರು ಮಾಡಿವೆ. ಆದರೆ, ಅದನ್ನು ಮುಚ್ಚಿಹಾಕಿಕೊಳ್ಳಲು ಆರೋಪ ಮಾಡಿದವರ ವಿರುದ್ಧವೇ ಪ್ರತ್ಯಾರೋಪ ಮಾಡಲಾಗುತ್ತಿದೆ. ಇದು ಇವರ ಮನಸ್ಥಿತಿ ಎಂದು ಅವರು ಟೀಕಿಸಿದರು.

ನನ್ನ ವಿರುದ್ಧದ ಪ್ರಕರಣಕ್ಕೂ ಸಿಎಂ ಸಿದ್ದರಾಮಯ್ಯ ವಿರುದ್ಧದ ಮೂಡಾ ಹಗರಣಕ್ಕೂ ವ್ಯತ್ಯಾಸವಿದೆ. ಅವರಂತೆ ನಾನು ಹಲ್ಕಾ ಕೆಲಸ ಮಾಡಿಲ್ಲ. ನನ್ನ ಪ್ರಕರಣದ ಬಗ್ಗೆ ತನಿಖೆ ಆಗಿದೆ. 2015ರಲ್ಲಿಯೇ ಇದರ ಬಗ್ಗೆ ವಿಸ್ತೃತ ತನಿಖೆ ನಡೆದು ಬಿ ರಿಪೋರ್ಟ್ ಅನ್ನು ಕೂಡ ಹಾಕಲಾಗಿತ್ತು. ಆ ಸಂದರ್ಭದಲ್ಲಿ ಈ ಸಿದ್ದರಾಮಯ್ಯನವರೇ ಮುಖ್ಯಮಂತ್ರಿ ಆಗಿದ್ದರು. ಈಗ ರಾಜಕೀಯ ಸೇಡಿಗಾಗಿ ತೆಗೆದಿದ್ದಾರೆ. ಆಗ ತನಿಖೆ ಮಾಡದೆ ಏನು ಸುಮ್ಮನೆ ಇದ್ದಿದ್ದು ಯಾಕೆ? ಈಗ ನನ್ನನು ಸಿಲುಕಿಸಲು ಪ್ರಯತ್ನಿಸುತ್ತಿದ್ದಾರೆ. ಅವರ ಕುತಂತ್ರ ಫಲಿಸದು ಎಂದು ಕುಮಾರಸ್ವಾಮಿ ಅವರು ಗುಡುಗಿದರು.

### ಮಿಸ್ಟರ್ ಕೃಷ್ಣ ಭೈರೇಗೌಡ.. ನನ್ನನ್ನು ಅಲುಗಾಡಿಸಲು ನಿಮ್ಮಿಂದ ಸಾಧ್ಯವಿಲ್ಲ

**ನಾನು ಕೇಂದ್ರ ಮಾತ್ರಿಯಾಗಿದ್ದೇ ಇವರಿಗೆ ಸಂಕಟ ಶುರುವಾಗಿದೆ. ನನ್ನ ವಿರುದ್ಧ ಕಾಂಗ್ರೆಸ್ ಪಕ್ಷದ ಸಚಿವರು, ಶಾಸಕರು ಸಾಲ ಸಾಲಾಗಿ ಟೀಕೆ ಮಾಡುತ್ತಿದ್ದಾರೆ. ಇಡೀ ಸರ್ಕಾರದ ಟಾರ್ಗೆಟ್ ನಾನೇ ಆಗಿದ್ದೇನೆ ಎಂದು ಕುಮಾರಸ್ವಾಮಿ ಅವರು ಕಿಡಿಕಾರಿದರು. ಸಚಿವ ಕೃಷ್ಣ ಭೈರೇಗೌಡ ವಿರುದ್ಧ ವಾಗ್ದಾಳಿ ನಡೆಸಿದ ಕುಮಾರಸ್ವಾಮಿ ಅವರು, ಮಿಸ್ಟರ್ ಕೃಷ್ಣ ಭೈರೇಗೌಡ.. ನನ್ನನ್ನು ಅಲುಗಾಡಿಸಲು ನಿಮ್ಮಿಂದ ಸಾಧ್ಯವಿಲ್ಲ. ನೀವು ಏನೆಲ್ಲ ಷಡ್ಯಂತ್ರ ಮಾಡಿದರೂ ನನ್ನ ಬಗ್ಗೆ ಏನೂ ಸಿಗುವುದಿಲ್ಲ. ಕಂದಾಯ ಇಲಾಖೆಯಲ್ಲಿ ಏನೇನು ನಡೆಯುತ್ತಿದೆ, ನಡೆದಿದೆ ಎನ್ನುವುದು ನನಗೆ ಗೊತ್ತಿದೆ. ಮುಂದಿನ ದಿನಗಳಲ್ಲಿ ನಿಮ್ಮದೆಲ್ಲಾ ಹೊರಗೆ ಬರುತ್ತದೆ ಎಂದು ಎಚ್ಚರಿಕೆ ನೀಡಿದರು**

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,593/Gram24ct ₹6,960/Gram22ct ಬೆಳ್ಳಿ: ₹93.00/Gram

ಉದಯವಾಹಿನಿ

## ಪ್ರಾದೇಶಿಕ



# ಕಾನೂನು ಉಲ್ಲಂಘಿಸದಂತೆ ತಹಶೀಲ್ದಾರ್‌ಗೆ ಅಶೋಕ್ ಎಚ್ಚರಿಕೆ

## ಪಟ್ಟಣ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಯಲ್ಲಿ ನಾಮನಿರ್ದೇಶಿತ ಸದಸ್ಯರಿಗೆ ಮತದಾನದ ಹಕ್ಕು ನೀಡಿ

• ಉದಯವಾಹಿನಿ, ಕುಶಾಲನಗರ

ಪಟ್ಟಣ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಯಲ್ಲಿ ನಾಮನಿರ್ದೇಶಿತ ಸದಸ್ಯರಿಗೆ ಮತದಾನದ ಹಕ್ಕು ನೀಡಿ ಕಾನೂನು ಉಲ್ಲಂಘಿಸಬಾರದು' ಎಂದು ಚುನಾವಣಾಧಿಕಾರಿಯೂ ಆದ ತಹಶೀಲ್ದಾರ್ ಕಿರಣ್ ಗೌರಯ್ಯ ಅವರಿಗೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಎಚ್ಚರಿಕೆ ನೀಡಿದರು.


ಉದಯವಾಹಿನಿ ಚಿತ್ರ

**ಕಾನೂನು ರೀತಿಯಲ್ಲಿ ಕಾರ್ಯ ನಿರ್ವಹಿಸಿ**

ಸ್ಥಳೀಯ ಪಟ್ಟಣ ಪಂಚಾಯಿತಿಗೆ 2ನೇ ಅವಧಿಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಸೆ. 25ರಂದು ಚುನಾವಣೆ ಘೋಷಣೆಯಾಗಿದ್ದು, ಕಾನೂನು ಬಾಹಿರವಾಗಿ ನಾಮನಿರ್ದೇಶಿತ ಇಬ್ಬರು ಸದಸ್ಯರಿಗೆ ನೀಡಲಾಗಿರುವ ಮತದಾನದ ಹಕ್ಕು ರದ್ದುಪಡಿಸಿ ನ್ಯಾಯ ಸಮ್ಮತ ಚುನಾವಣೆ ನಡೆಸಬೇಕು ಎಂದು ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ತಹಶೀಲ್ದಾರ್ ಕಚೇರಿ ಮುಂದೆ ಶುಕ್ರವಾರ ಪ್ರತಿಭಟನೆ ನಡೆಸುತ್ತಿದ್ದ ಸ್ಥಳಕ್ಕೆ ಸಂಜೆ ಭೇಟಿ ನೀಡಿ ಮಾಹಿತಿ ಪಡೆದ ಅವರು, ತಹಶೀಲ್ದಾರ್ ಅವರನ್ನು ತೀವ್ರ ತರಾಟೆಗೆ ತೆಗೆದುಕೊಂಡರು.

'ಐದು ಬಾರಿ ಮಂತ್ರಿಯಾಗಿರುವ ನನಗೆ ಇದು ಹೊಸ ವಿಚಾರ. ಎಲ್ಲೂ ಇಲ್ಲದ ವಿಶೇಷ ಕಾನೂನು ನಿಮಗೆಲ್ಲಿಂದ ಬಂತು. ಯಾರದ್ದೋ ಮಾತು ಕೇಳಿ ಜೀವನ ಹಾಳುಮಾಡಿಕೊಳ್ಳಬೇಡಿ. ಕಾನೂನು ರೀತಿಯಲ್ಲಿ ಕಾರ್ಯ ನಿರ್ವಹಿಸಿ' ಎಂದು ತಾಕೀತು ಮಾಡಿದರು.ಇದಕ್ಕೂ ಮುನ್ನ ಬಿಜೆಪಿ ನಗರ ಘಟಕದ ಅಧ್ಯಕ್ಷ ಎಂ.ಎಂ.ಚರಣ್ ಹಾಗೂ ಕಾರ್ಯದರ್ಶಿ ಎಚ್.ಎಂ.ಮಧುಸೂದನ್ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಹಾಗೂ ಪುರಸಭಾ ಸದಸ್ಯರು ತಹಶೀಲ್ದಾರ್ ಕಚೇರಿ ಮುಂಭಾಗ ಧರಣಿ ನಡೆಸಿದರು. ಚುನಾವಣಾಧಿಕಾರಿ ಹಾಗೂ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಬಿಜೆಪಿ ಮುಖಂಡ ಕೆ.ಜಿ.ಮನು ಮಾತನಾಡಿ, 'ಕರ್ನಾಟಕ ಪೌರಾಡಳಿತ ಕಾಯ್ದೆ 1964ರ ನಿಯಮ 11(1)(ಬಿ)ಅನ್ವಯ ಕುಶಾಲನಗರ ಪಟ್ಟಣ ಪಂಚಾಯಿತಿಗೆ ಒಟ್ಟು 7 ನಾಮನಿರ್ದೇಶನ ಮಾಡಿರುವುದು ಕಾನೂನು ಬಾಹಿರ ಹಾಗೂ ಅದರಲ್ಲಿ ಉದ್ದೇಶ ಪೂರ್ವಕವಾಗಿ 2 ಸದಸ್ಯರಿಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಸ್ಥಾನಕ್ಕೆ ಮತದಾನ ಮಾಡಲು ಅವಕಾಶ ನೀಡಲಾಗಿದೆ.

ಕರ್ನಾಟಕ ಪೌರಾಡಳಿತ ಕಾಯ್ದೆ ಪ್ರಕಾರ ನಾಮನಿರ್ದೇಶಿತ ಸದಸ್ಯರಿಗೆ ಮತದಾನಕ್ಕೆ ಹಕ್ಕು ಇಲ್ಲ. ಆದರೆ ಚುನಾವಣಾಧಿಕಾರಿ ಆದ ತಹಶೀಲ್ದಾರ್ ಕಾಂಗ್ರೆಸ್ ಮುಖಂಡರ ಒತ್ತಡಕ್ಕೆ ಮಣಿದು ಕಾನೂನು ಉಲ್ಲಂಘಿಸಿ, ಚುನಾವಣೆ ನಡೆಸಲು ಮುಂದಾಗಿದ್ದಾರೆ' ಎಂದು ಆರೋಪಿಸಿದರು.ಪುರಸಭಾ ಸದಸ್ಯರಾದ ಡಿ.ಕೆ.ತಿಮ್ಮಪ್ಪ, ಅಮೃತ್ ರಾಜ್, ಜೈವರ್ಧನ್, ಜಗದೀಶ್, ರೇಣುಕಾ, ಮುಖಂಡರಾದ ಉಮಾಶಂಕರ್, ಎಂ.ಡಿ.ಕೃಷ್ಣಪ್ಪ, ಮಂಜುನಾಥ್, ಬೋಸ್ ಮೊಣ್ಣಪ್ಪ, ಎಂ.ವಿ.ರಾಜೇಶ್, ಎಚ್.ಟಿ.ವಸಂತ, ವೈಶಾಖ್, ಪ್ರವೀಣ್, ಆಶೀಪ್, ಪ್ರವೀಣ್, ಪ್ರಶಾಂತ್, ಸಚಿನ್ ಪಾಲ್ಗೊಂಡಿದ್ದರು. ಸಿಪಿಐ ಪ್ರಕಾಶ್ ನೇತೃತ್ವದಲ್ಲಿ ಸಿಬ್ಬಂದಿಗಳು ಭದ್ರತಾ ವ್ಯವಸ್ಥೆ ಕಲ್ಪಿಸಿದ್ದರು.

> ಚುನಾವಣಾಧಿಕಾರಿಯೂ ಆದ ತಹಶೀಲ್ದಾರ್ ಕಿರಣ್ ಗೌರಯ್ಯ ಪ್ರತಿಕ್ರಿಯೆ ನೀಡಿ 'ಕುಶಾಲನಗರ ಪುರಸಭೆಗೆ ಜಗದೀಶ್ ಮತ್ತು ಪದ್ಮಾವತಿ ಅವರನ್ನು ನಾಮನಿರ್ದೇಶನ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ಸೆ.25 ರಂದು ನಡೆಯುವ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಯಲ್ಲಿ ಪಾಲ್ಗೊಳ್ಳುವಂತೆ ನೋಟಿಸ್ ನೀಡಲಾಗಿದೆ. ನಗರಾಭಿವೃದ್ಧಿ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಹಾಗೂ ನ್ಯಾಯಾಲಯದ ಆದೇಶದನ್ವಯ ಚುನಾವಣೆ ಪ್ರಕ್ರಿಯೆ ಕೈಗೊಳ್ಳಲಾಗಿದೆ. ಆದರೆ ಪುರಸಭೆಯ ಬಿಜೆಪಿ ಸದಸ್ಯರು ಹಾಗೂ ಪಕ್ಷದ ಕಾರ್ಯಕರ್ತರು ನನ್ನ ಮೇಲೆ ಸುಳ್ಳು ಆರೋಪ ಮಾಡುತ್ತಿದ್ದಾರೆ. ನಾನು ಯಾವುದೇ ಪಕ್ಷದ ಕೈಗೊಂಬೆಯಾಗಿ ಕೆಲಸ ಮಾಡುತ್ತಿಲ್ಲ
>
> -ಆರ್.ಅಶೋಕ್, ವಿರೋಧ ಪಕ್ಷದ ನಾಯಕ

> ಕುಶಾಲನಗರ ಕೇಂದ್ರವಾಗಿರಿಸಿಕೊಂಡು ಮುಳ್ಳುಸೋಗೆ ಪಂಚಾಯಿತಿಯನ್ನು ಸೇರ್ಪಡೆ ಮಾಡಿ ಪುರಸಭೆಯಾಗಿ ಮೇಲ್ದರ್ಜೆಗೆ ಸೇರಿಸಿ ವರ್ಷಗಳೆ ಕಳೆದಿವೆ. ಆದರೆ, ಈಗ ಈ ಹಿಂದಿನ ಪಟ್ಟಣ ಪಂಚಾಯಿತಿಗೆ 2ನೇ ಅವಧಿಗೆ ಚುನಾವಣೆ ಘೋಷಣೆ ಮಾಡಲಾಗಿದೆ
>
> -ಚರಣ್, ನಗರಾಧ್ಯಕ್ಷ

## ದಸರಾ ಆನೆಗಳ ಕಾದಾಟ, ಮಾವುತರಿಗೆ ಪೀಕಲಾಟ

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವಕ್ಕೆ ಆಗಮಿಸಿರುವ ಗಜಪಡೆಗಳು ಕಳೆದ ರಾತ್ರಿ ದಿಢೀರನೇ ಕಾದಾಟಕ್ಕಿಳಿದಿದ್ದು, ಅರಮನೆಯಿಂದ ಹೊರಬಂದ ಪರಿಣಾಮ ಕೆಲಕಾಲ ಪಟ್ಟಣದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ತುಂತುರು ಮಳೆಯಿದ್ದ ಕಾರಣ ಆನೆಗಳಿಗೆ ಅರಮನೆ ಆವರಣದಲ್ಲಿ ತಾಲೀಮು ನಡೆಸಲಾಗಿತ್ತು. ಈ ವೇಳೆ 7.45 ರ ಸಮಯದಲ್ಲಿ ಧನಂಜಯ ಹಾಗೂ ಕಂಜನ್ ಆನೆಗಳನಡುವೆ ಕಾದಾಟ ನಡೆದಿದೆ.ಮಾವುತರು ಊಟ ಮಾಡುವ ವೇಳೆ ಆನೆಗಳ ನಡುವೆ ಕಾಳಗ ನಡೆದ ಪರಿಣಾಮ ಆನೆಗಳು ಅರಮನೆಯ ಜಯಮಾರ್ತಾಂಡ ದ್ವಾರದ ಬಳಿ ಕಂಜನ್ ಹಾಗೂ ಧನಂಜಯ ಆನೆಗಳು ಹೊರಬಂದಿವೆ. ಮಾವುತನಿಲ್ಲದೆ ಕಂಜನ್ ಆನೆಯನ್ನು ಅರಮನೆಯಿಂದ ಧನಂಜಯ ಆನೆ ಹೊರಗೆ ಓಡಿಸಿಕೊಂಡು ಬಂದಿದ್ದು, ಕೆಲಕಾಲ ಸಾರ್ವಜನಿಕರಲ್ಲಿ ಭಯದ ವಾತಾವರಣ ನಿರ್ಮಾಣವಾಗಿತ್ತು.

ಆನೆಗಳು ದೊಡ್ಡಕೆರೆ ಮೈದಾನದ ಬಳಿ ಬ್ಯಾರಿಕೇಡ್‌ಗಳನ್ನು ತಳ್ಳಿಕೊಂಡು ರಸ್ತೆಗೆ ಪ್ರವೇಶಿಸಿವೆ.

ತಕ್ಷಣ ಮಾವುತರು ಹಾಗೂ ಅರಣ್ಯ ಇಲಾಖಾಧಿಕಾರಿಗಳು ಸಮಯಪ್ರಜ್ಞೆಯಿಂದ ಸಂಭವಿಸಬಹುದಾದ ಅನಾಹುತ ತಪ್ಪಿದಂತಾಗಿದೆ.ಕೂಡಲೇ ಆನೆಗಳನ್ನು ಅರಮನೆಯೊಳಗೆ ಕರೆದ್ಯೊಯುವಲ್ಲಿ ಮಾವುತರು ಯಶಸ್ವಿಯಾಗಿದ್ದು, ನಾಗರಿಕರು ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ.

## ವಿದ್ಯಾರ್ಥಿನಿಯರ ಶೌಚಾಲಯದಲ್ಲಿ ವಿಡಿಯೋ: ಬಂಧನ

• ಉದಯವಾಹಿನಿ, ರಾಮನಗರ

ಕಾಲೇಜಿನ ವಿದ್ಯಾರ್ಥಿನಿಯರ ಶೌಚಾಲಯದಲ್ಲಿ ತನ್ನ ಮೊಬೈಲ್‌ನಿಂದ ವಿಡಿಯೊ ಸೆರೆ ಹಿಡಿಯುತ್ತಿದ್ದ ವಿದ್ಯಾರ್ಥಿಯೊಬ್ಬನನ್ನು ಕುಂಬಳಗೋಡು ಠಾಣೆ ಪೊಲೀಸರು ವಶಕ್ಕೆ ಪಡೆದಿದ್ದಾರೆ. ದೊಡ್ಡ ಬೆಲೆ ರಸ್ತೆಯಲ್ಲಿರುವ ಎಸಿಎಸ್ ಎಂಜಿನಿಯರ್ ಕಾಲೇಜಿನ ಕಂಪ್ಯೂಟರ್ ವಿಜ್ಞಾನ ವಿಭಾಗದ 7ನೇ ಸೆಮಿಸ್ಟರ್‌ನಲ್ಲಿ ಓದುತ್ತಿದ್ದ ಚಿಕ್ಕಗೊಲ್ಲರಹಟ್ಟಿ ಕುಶಾಲ್, ಪೊಲೀಸರು ವಶಕ್ಕೆ ಪಡೆದ ವಿದ್ಯಾರ್ಥಿ.

ಸ್ಥಳದಲ್ಲಿ ಜಮಾಯಿಸಿದ ವಿದ್ಯಾರ್ಥಿಗಳು ಹಾಗೂ ಕಾಲೇಜಿನ ಸಿಬ್ಬಂದಿಗೆ ವಿದ್ಯಾರ್ಥಿನಿ ವಿಷಯ ತಿಳಿಸಿದ್ದಾರೆ. ಆಗ, ವಿದ್ಯಾರ್ಥಿಗಳು ಶೌಚಾಲಯದ ಒಳ ಹೋಗಿ ಕೊಠಡಿ ಪರಿಶೀಲಿಸಿದಾಗ ಕುಶಾಲ್ ಅಲ್ಲಿದ್ದ. ಕೂಡಲೇ ಹೊರಗೆ ಎಳೆದುಕೊಂಡು ಬಂದು ತರಾಟೆಗೆ ತೆಗೆದುಕೊಂಡಿದ್ದಾರೆ. ಕೆಲವರು ವಿದ್ಯಾರ್ಥಿ ಮೇಲೆ ಆಕ್ರೋಶ ವ್ಯಕ್ತಪಡಿಸುತ್ತಾ ಹಲ್ಲೆ ನಡೆಸಲು ಮುಂದಾದರು. ಇದನ್ನು ಖಂಡಿಸಿ ವಿದ್ಯಾರ್ಥಿನಿಯರು ಕಾಲೇಜು ಆವರಣದಲ್ಲಿ ಪ್ರತಿಭಟನೆ ನಡೆಸಿದರು ಎಂದು ಪೊಲೀಸರು ತಿಳಿಸಿದರು. ಅಷ್ಟೊತ್ತಿಗಾಗಲೇ ಕಾಲೇಜು ಸಿಬ್ಬಂದಿ ನೀಡಿದ ಮಾಹಿತಿ ಮೇರೆಗೆ ಪೊಲೀಸರು ಸ್ಥಳಕ್ಕೆ ತೆರಳಿ ಕುಶಾಲ್‌ನನ್ನು ವಶಕ್ಕೆ ಪಡೆದು, ಪರಿಸ್ಥಿತಿ ತಿಳಿಗೊಳಿಸಿದರು. ಆರೋಪಿ ಹಿಂದೆಯೂ ಇದೇ ರೀತಿ ವಿಡಿಯೋಗಳನ್ನು ತನ್ನ ಮೊಬೈಲ್‌ನಲ್ಲಿ ಸೆರೆ ಹಿಡಿದಿದ್ದಾನೆಯೇ ಬೇರೆಯವರ ಬಳಿ ಹಂಚಿಕೊಂಡಿದ್ದಾನೆಯೇ ಎಂಬುದರ ಕುರಿತು ತನಿಖೆ ನಡೆಸಲಾಗುತ್ತಿದೆ. ಮೊಬೈಲ್‌ನಲ್ಲಿರುವ ಸಂಪೂರ್ಣ ದತ್ತಾಂಶ ರಿಕವರಿ ಮಾಡಲು ಸೈಬರ್ ವಿಭಾಗಕ್ಕೆ ಮೊಬೈಲ್ ಕಳುಹಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದರು.

> ಬೆಳಿಗ್ಗೆ 10ಗಂಟೆ ಸುಮಾರಿಗೆ ಶೌಚಾಲಯಕ್ಕೆ ಬಂದಿರುವ ಕುಶಾಲ್, ಕೊಠಡಿಯೊಂದರಲ್ಲಿ ಇದ್ದು ಕೊಂಡು ವಿದ್ಯಾರ್ಥಿನಿಯರ ವಿಡಿಯೊವನ್ನು ಮೊಬೈಲ್‌ನಲ್ಲಿ ಸೆರೆ ಹಿಡಿಯುತ್ತಿದ್ದ. ಇದನ್ನು ಗಮನಿಸಿದ ವಿದ್ಯಾರ್ಥಿನಿಯೊಬ್ಬರು ಕಿರುಚಿಕೊಂಡು ಶೌಚಾಲಯದಿಂದ ಹೊರ ಬಂದಿದ್ದಾರೆ.

## ಲಸಿಕೆಗೆ ಮುಗಿಬಿದ್ದ ಜನ ಹಸುಗಳಿಗೆ ಲಸಿಕೆ ಹಾಕಿಸಲು ಯಾಕೆ ಇಷ್ಟು ನಿರ್ಲಕ್ಷ್ಯ

• ಉದಯವಾಹಿನಿ, ಕೋಲಾರ

ಕೋವಿಡ್ ಲಸಿಕೆ ಹಾಕಿಸಿಕೊಳ್ಳುವ ಸಂದರ್ಭದಲ್ಲಿ ಸಾಲುಗಟ್ಟಿ ನಿಂತಿದ್ದ ಜನರು ರಾಸುಗಳಿಗೆ ಆರೋಗ್ಯದ ದೃಷ್ಟಿಯಿಂದ ಲಸಿಕೆ ಹಾಕಿಸಲು ನಿರ್ಲಕ್ಷ್ಯ ವಹಿಸುತ್ತಾರೆ ಇದರಿಂದಲೇ ರಾಸುಗಳಿಗೆ ಹೆಚ್ಚಿನ ರೋಗಲು ಹರಡುತ್ತವೆ ಕೂಡಲೇ ಕಡ್ಡಾಯವಾಗಿ ಲಸಿಕೆ ಹಾಕಿಸುವುದು ಉತ್ಪಾದಕರ ಜವಾಬ್ದಾರಿಯಾಗಬೇಕು ಎಂದು ಕೋಮುಲ್ ಉಪ ವ್ಯವಸ್ಥಾಪಕ ಡಾ.ಮಹೇಶ್ ತಿಳಿಸಿದರು,

ತಾಲ್ಲೂಕಿನ ಕೊಂಡರಾಜನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ 2023-24ನೇ ಸಾಲಿನ ಸರ್ವ ಸದಸ್ಯರ ಸಾಮಾನ್ಯ ವಾರ್ಷಿಕ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ರಾಸುಗಳಿಗೆ ಹವಾಮಾನದ ವೈಪರೀತ್ಯದಿಂದ ಒಂದಲ್ಲ ಒಂದು ರೋಗಗಳು ಕಾಣಿಸಿಕೊಳ್ಳುತ್ತವೆ ಉತ್ಪಾದಕರಿಗೆ ಹಸು ಸಾಕಾಣಿಕೆ ತುಂಬಾ ಕಷ್ಟವಾಗಿದೆ ಲಸಿಕೆಗಳನ್ನು ಕಡ್ಡಾಯವಾಗಿ ಹಾಕಿಸಿ ಜೊತೆಗೆ ಹಾಲಿನ ಉತ್ಪಾದನೆ ಮತ್ತು ಗುಣಮಟ್ಟಕ್ಕೆ ಹೆಚ್ಚಿನ ಅಧ್ಯತೆ ನೀಡಬೇಕು ಎಂದರು.

ಸಂಘದ ಅಧ್ಯಕ್ಷ ಹೆಚ್ ನಾಗರಾಜ್ ಮಾತನಾಡಿ


ಉದಯವಾಹಿನಿ ಚಿತ್ರ

ಪ್ರತಿ ವರ್ಷವೂ ನಷ್ಟದಲ್ಲಿ ನಡೆಯುತ್ತಿತ್ತು ಈ ಬಾರಿ 24,393 ರೂ, ಲಾಭ ಗಳಿಸಿದ್ದೇವೆ ಮುಂದೆ ಸ್ವಂತ ಕಟ್ಟಡ ನಿರ್ಮಾಣಕ್ಕೆ ಆಧ್ಯತೆ ನೀಡಲಾಗುತ್ತದೆ ಇದಕ್ಕೆ ಸಮಿತಿಯ ನಿರ್ದೇಶಕರು, ಹಾಲು ಉತ್ಪಾದಕರು, ಮತ್ತು ಗ್ರಾಮಸ್ಥರ ಸಹಕಾರ ಮುಖ್ಯವಾಗಿದೆ ಮುಂದೆ ಮಾದರಿ ಡೇರಿಯಾಗಿ ರೂಪಿಸಲು ಎಲ್ಲರೂ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕೋಮುಲ್ ವಿಸ್ತಾರಣಾಧಿಕಾರಿಗಳಾದ ಎಸ್.ನಾಗಪ್ಪ, ಎ.ಮಂಜುಳ, ಪಿಡಿಒ ಮಂಜುನಾಥ್ ಪ್ರಸಾದ್, ಮಾತನಾಡಿದರು, ಸಭೆಯಲ್ಲಿ ಗ್ರಾಪಂ ಸದಸ್ಯರಾದ ಶ್ರೀನಿವಾಸ ಯಾದವ್, ಸುಬ್ಬರಾಮಪ್ಪ, ಡೇರಿ ಉಪಾಧ್ಯಕ್ಷ ಕೆ.ವಿ ಮಂಜುನಾಥ್, ನಿರ್ದೇಶಕರಾದ ಶಂಕರಪ್ಪ, ಎಂ.ನಾರಾಯಣಸ್ವಾಮಿ. ಮುರಳಿ ಬಾಬು, ನಂದಕುಮಾರ್, ಸಿ.ನಾರಾಯಣಸ್ವಾಮಿ, ವೆಂಕಟಲಕ್ಷ್ಮೀ, ಕಾರ್ಯದರ್ಶಿ ಗಂಗಾಧರ್, ಸಹಾಯಕ ನಾರಾಯಣಪ್ಪ ಮುಖಂಡರಾದ ಕೋರ್ಟ್ ನಾಗಪ್ಪ, ಶ್ರೀಕಾಂತ್ ಯಾದವ್, ಹಾಲು ಉತ್ಪಾದಕರು, ಗ್ರಾಮಸ್ಥರು ಇದ್ದು ಕಾರ್ಯಕ್ರಮವನ್ನು ಕೊಂಡರಾಜನಹಳ್ಳಿ ಮಂಜುಳ ನಿರೂಪಿಸಿದರು,

> ಗ್ರಾಪಂ ಕೇಂದ್ರದಲ್ಲಿಯೇ ಹಾಲು ಉತ್ಪಾದನೆ ಕಡಿಮೆ ಇದ್ದು ಹಾಲು ಉತ್ಪಾದಕರನ್ನು ಉತ್ತೇಜಿಸಲು ಸರಕಾರ ಪ್ರೋತ್ಸಾಹಧನ ನೀಡುತ್ತಿದೆ ರೈತರು ಗುಣಮಟ್ಟದ ಹಾಲನ್ನು ಸಂಘಕ್ಕೆ ಸರಬರಾಜು ಮಾಡುವ ಮೂಲಕ ಹೆಚ್ಚಿನ ಲಾಭ ಪಡೆಯಬೇಕು ಗ್ರಾಮ ಪಂಚಾಯತಿ ವತಿಯಿಂದ ಅಗತ್ಯ ಮಾರ್ಗದರ್ಶನ ಮತ್ತು ಸೌಲಭ್ಯಗಳನ್ನು ನೀಡಲು ಸದಾಸಿದ್ಧ
>
> -ವಿಜಯನಗರ ಮಂಜುನಾಥ್
> ಕೊಂಡರಾಜನಹಳ್ಳಿ ಗ್ರಾಪಂ ಅಧ್ಯಕ್ಷ

## ಇದು ನಿಮ್ಮ ಗೆಲುವಲ್ಲ, ನೈತಿಕ ಅಧಃಪತನ

• ಉದಯವಾಹಿನಿ, ಮಾಗಡಿ

ಶಾಸಕ ಎಚ್.ಸಿ. ಬಾಲಕೃಷ್ಣ ಅವರು ಮಾಗಡಿ ಪುರಸಭೆ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿಯಾಗಿದ್ದ ಹಿಂದುಳಿದ ವರ್ಗದ ಮಹಿಳೆಯನ್ನು ಸೋಲಿಸುವ ಮೂಲಕ ಹಿಂದುಳಿದ ವರ್ಗಕ್ಕೆ ಅನ್ಯಾಯ ಮಾಡಿದ್ದಾರೆ ಎಂದು ಮಾಜಿ ಶಾಸಕ ಎ. ಮಂಜುನಾಥ್ ವಾಗ್ದಾಳಿ ನಡೆಸಿದರು. ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಗಡಿ ಪುರಸಭೆಯಲ್ಲಿ ಜೆಡಿಎಸ್ ಪಕ್ಷಕ್ಕೆ ಜನತೆ ಸ್ಪಷ್ಟ ಬಹುಮತ ನೀಡಿತ್ತು.

12 ಜನ ಸದಸ್ಯರ ಜೊತೆಗೆ ಬಿಜೆಪಿ ಸದಸ್ಯೆ ಹಾಗೂ ಎಂ.ಪಿ. ಮತ ಸೇರಿ ಒಟ್ಟು 14 ಸದಸ್ಯರ ಬಲವನ್ನು ಹೊಂದಿದ್ದೆವು. ಚುನಾವಣೆ ಸಂದರ್ಭದಲ್ಲಿ ನೀಡಿದ ಆಶ್ವಾಸನೆಯಂತೆ ನಮ್ಮ ಬೆಂಬಲಿತ ಮೂರು ಜನ ಸದಸ್ಯರಿಗೆ ಅಧ್ಯಕ್ಷರ ಅಧಿಕಾರ ಹಂಚಿಕೆ ಮಾಡಿಕೊಳ್ಳುತ್ತಿದ್ದೆವು. ಆದರೆ, ಶಾಸಕ ಎಚ್.ಸಿ ಬಾಲಕೃಷ್ಣ ನಮ್ಮ ಪಕ್ಷದ ಸದಸ್ಯರಿಗೆ ಹಣದ ಆಸೆ ತೋರಿಸಿ ಅವರು ತಟಸ್ಥವಾಗಿ ಉಳಿಯುವಂತೆ ಮಾಡಿದರು. ಇದು ನಿಮ್ಮ ಗೆಲುವಲ್ಲ, ನೈತಿಕ ಅದಃಪತನ. ನಮ್ಮ ಅಭ್ಯರ್ಥಿಯನ್ನು ಸೋಲಿಸುವ ಮೂಲಕ ಹಿಂದುಳಿದ ವರ್ಗದ ಮಹಿಳೆಗೆ ಅಧಿಕಾರವನ್ನು ತಪ್ಪಿಸಿದ ಕೀರ್ತಿಗೆ ನೀವು ಪಾತ್ರರಾಗಿದ್ದೀರಿ ಎಂದು ಲೇವಡಿ ಮಾಡಿದರು. ವಿಪ್ ಉಲ್ಲಂಘನೆ ಮಾಡಿದ


ಉದಯವಾಹಿನಿ ಚಿತ್ರ

ಸದಸ್ಯರ ವಿರುದ್ಧ ಕ್ರಮ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸುವಲ್ಲಿ ಪ್ರಮುಖ ಪಾತ್ರ ವಹಿಸಿ, ಪಕ್ಷಕ್ಕೆ ದ್ರೋಹ ಬಗೆದ ನಮ್ಮ ಪಕ್ಷದ ಸದಸ್ಯರಾದ ರಹಮತ್, ರಾಮು, ಕಾಂತರಾಜು, ಹೇಮಲತಾ ಅವರಿಗೆ ಚುನಾವಣೆ ದಿನದಂದು ವಿಪ್ ಜಾರಿ ಮಾಡಲಾಗಿದೆ. ವಿಪ್ ಉಲ್ಲಂಘನೆ ಮಾಡಿದ ನಾಲ್ಕು ಜನ ಸದಸ್ಯರ ವಿರುದ್ಧ ಶಿಸ್ತು ಕ್ರಮ ಕೈಕೊಳ್ಳಲಾಗುತ್ತದೆ. ಪಕ್ಷದ ವಿಪ್ ಉಲ್ಲಂಘನೆ ಮಾಡಿದ ಸದಸ್ಯರ ಸದಸ್ಯತ್ವವನ್ನು ರದ್ದುಗೊಳಿಸಿ, ಆರು ವರ್ಷ ಯಾವುದೇ ಚುನಾವಣೆಯಲ್ಲಿ ಸ್ಪರ್ಧೆ ಮಾಡದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಮಾಜಿ ಶಾಸಕ ಎ.ಮಂಜುನಾಥ್ ಎಚ್ಚರಿಕೆ ನೀಡಿದರು.

ಬೇರೆ ಯಾರೊ ಹೆತ್ತು-ಹೊತ್ತು ಸಾಕಿದ ಮಕ್ಕಳನ್ನು ಎತ್ತಿಕೊಂಡು ಬಂದು ಇನ್ನ್ಯಾರೊ ತಮ್ಮ ಮಕ್ಕಳೆಂದು ಮುಂಜಿ ಮಾಡಿದಂತೆ. ಜೆಡಿಎಸ್ ಪಕ್ಷದಿಂದ ಬಿ ಫಾರಂ ನೀಡಿ ಮನೆ ಮನೆಗೆ ತೆರಳಿ ಮತ ಕೇಳಿ ಹಣ ಖರ್ಚು ಮಾಡಿ ಗೆಲ್ಲಿಸಿಕೊಂಡು ಬಂದ ನಮ್ಮ ಸದಸ್ಯರನ್ನು ಸೆಳೆದುಕೊಂಡು ನಮ್ಮ ಅಭ್ಯರ್ಥಿಯ ಸೋಲಿಗೆ ಕಾರಣರಾಗಿದ್ದಾರೆ ಎಂದು ಹರಿಹಾಯ್ದರು.

## ಗ್ಯಾರಂಟಿ ಯೋಜನೆಗಳ ಅಧ್ಯಕ್ಷರ ಕಚೇರಿ ಉದ್ಘಾಟನೆ

• ಉದಯವಾಹಿನಿ, ಕನಕಪುರ

ಚುನಾವಣೆ ವೇಳೆ ಜನರಿಗೆ ಕೊಟ್ಟ ಮಾತಿನಂತೆ ಕಾಂಗ್ರೆಸ್ ಪಕ್ಷವು ನಡೆದುಕೊಂಡು ಪಂಚಗ್ಯಾರಂಟಿಗಳನ್ನು ಜಾರಿ ಮಾಡಿದ್ದು, ಅವುಗಳ ಅನುಷ್ಠಾನದಲ್ಲಿ ಇರುವ ಸಮಸ್ಯೆಗಳನ್ನು ದೂರ ಮಾಡಲು ತಾಲ್ಲೂಕು ಮಟ್ಟದ ಸಮಿತಿ ರಚಿಸಲಾಗಿದೆ ಎಂದು ಮಾಜಿ ಸಂಸದ ಡಿ.ಕೆ. ಸುರೇಶ್ ತಿಳಿಸಿದರು.

ಇಲ್ಲಿನ ತಾಲ್ಲೂಕು ಆಡಳಿತಸೌಧದಲ್ಲಿ ಗ್ಯಾರಂಟಿ ಯೋಜನೆಗಳ ಅಧ್ಯಕ್ಷರ ಕಚೇರಿಯನ್ನು ಉದ್ಘಾಟನೆ ಮಾಡಿ ಮಾತನಾಡಿದರು.ಗ್ಯಾರಂಟಿ ಯೋಜನೆ ಜಾರಿ ಮಾಡುವುದರ ಜೊತೆಗೆ ಅದು ಎಷ್ಟರ ಮಟ್ಟಿಗೆ ಜನರನ್ನು ತಲುಪಿದೆ ಮತ್ತು ಎಲ್ಲಿ ದೋಷಗಳಾಗಿವೆ ಎನ್ನುವುದನ್ನು ಪತ್ತೆ ಹಚ್ಚಿ ಸರಿಪಡಿಸಿ ಫಲಾನುಭವಿಗಳಿಗೆ ತಲುಪಿಸುವ ಕೆಲಸವನ್ನು ತಾಲ್ಲೂಕು ಸಮಿತಿ ಮಾಡಲಿದೆ ಎಂದರು.ಸರ್ಕಾರದ ಯೋಜನೆ ತಲುಪುವಲ್ಲಿ ವಿಳಂಬವಾದರೆ ಜನರು ಇಲ್ಲಿ ಬಂದು ಪ್ರಶ್ನಿಸಬಹುದು. ಅದಕ್ಕಾಗಿ ರಾಜ್ಯದ ಪ್ರತಿ ತಾಲ್ಲೂಕಿನಲ್ಲಿಯೂ ಸಮತಿ ರಚನೆ ಮಾಡಿ


ಉದಯವಾಹಿನಿ ಚಿತ್ರ

> ಗ್ಯಾರಂಟಿ ಯೋಜನೆಗಳ ತಾಲ್ಲೂಕು ಘಟಕದ ಅಧ್ಯಕ್ಷರಾಗಿ ಕೆ.ಎನ್.ದಿಲೀಪ್, ಉಪಾಧ್ಯಕ್ಷರಾಗಿ ಶ್ರೀನಿವಾಸಮೂರ್ತಿ, ಸದಸ್ಯರಾಗಿ ರಾಣಿ, ತಗಡೇಗೌಡ, ಸರಸ್ವತಿ, ಸೈಯದ್ ಖುದ್ರತ್ ಉಲ್ಲಾ, ವಾಣಿ, ಉಮರಾಜು, ಮಹೇಶ್ ನಾಯಕ್, ಶಿವರತ್ನಮ್ಮ, ಅರಸೇಗೌಡ, ರೂಪಾ ಡಿ.ಎಸ್., ಸಾಗರ್ ಗೌಡ, ಮಂಜುಳಾ, ಮಂಜುನಾಥ್ ಅವರನ್ನು ನೇಮಕ ಮಾಡಲಾಯಿತು.

ಯೋಜನೆಯನ್ನು ಅರ್ಹರಿಗೆ ತಲುಪಿಸಲಾಗಿತ್ತದೆ ಎಂದು ಹೇಳಿದರು.

## ಅದ್ದೂರಿಯಾಗಿ ಸಾರ್ವಜನಿಕರ ಗಮನ ಸೆಳೆದ ಪೌರ ಕಾರ್ಮಿಕರ ಕ್ರೀಡಾಕೂಟ

• ಉದಯವಾಹಿನಿ, ಕೋಲಾರ

ತಾಲ್ಲೂಕಿನ ವೇಮಗಲ್ - ಕುರುಗಲ್ ಪಟ್ಟಣ ಪಂಚಾಯತಿ ವತಿಯಿಂದ ಪೌರ ಕಾರ್ಮಿಕ ದಿನಾಚರಣೆಯ ಅಂಗವಾಗಿ ಪಟ್ಟಣದ ಸೀತಿ ರಸ್ತೆಯಲ್ಲಿರುವ ತಾಲ್ಲೂಕು ಮಟ್ಟದ ಕ್ರೀಡಾಂಗಣದಲ್ಲಿ 2024-2025ನೇ ಸಾಲಿನ ಕ್ರೀಡಾ ಕೂಟವನ್ನು ಏರ್ಪಡಿಸಲಾಗಿತ್ತು.

ವೇಮಗಲ್ ಪಟ್ಟಣದ ತಾಲ್ಲೂಕು ಮಟ್ಟದ ಕ್ರೀಡಾಂಗಣದಲ್ಲಿ ಪೌರ ಕಾರ್ಮಿಕ ಕ್ರೀಡಾಕೂಟವನ್ನು ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿಗಳಾದ ಎಸ್.ಎಂ. ವೆಂಕಟೇಶ್ ರವರು ಉದ್ಘಾಟನೆ ಮಾಡಿದರು. ವೇಮಗಲ್ - ಕುರುಗಲ್ ಪಟ್ಟಣ ಪಂಚಾಯಿತಿಯ ಪೌರಕಾರ್ಮಿಕ ಕ್ರೀಡಾಕೂಟದಲ್ಲಿ 200 ಮೀಟರ್ ಓಟ, ಗೋಣಿಚಿಲ ಜಿಗಿತ, ನಿಂಬೆ ಹಣ್ಣು ಚಮಚದಾಟ, ಗುಂಡು ಎಸೆತ, ಮಡಿಕೆ ಹೊಡೆಯುವುದು, ಮ್ಯೂಸಿಕಲ್ ಚೇರ್, ಕ್ರಿಕೆಟ್ ಮತ್ತಲವು ಆಟಗಳನ್ನು ಮಹಿಳೆಯರಿಗೆ ಮತ್ತು ಪುರುಷರಿಗೆ ಸಮಾನವಾಗಿ ಏರ್ಪಡಿಸಲಾಗಿತ್ತು ಈ ಎಲ್ಲಾ ಆಟಗಳನ್ನು ಪ್ರತಿಯೊಬ್ಬರೂ ಬಹಳ


ಉದಯವಾಹಿನಿ ಚಿತ್ರ

ಸಂತೋಷದಿಂದ ಭಾಗವಹಿಸಿ ಆಟವಾಡಿದರು.

ಕಾರ್ಯಕ್ರಮವನ್ನು ಕುರಿತು ಮಾತನಾಡಿದ ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿಗಳಾದ ಎಸ್.ಎಂ ವೆಂಕಟೇಶ್ ರವರು ಪ್ರತಿದಿನ ನಮ್ಮ ಗ್ರಾಮವನ್ನು ಶುಚಿ ಮಾಡುವ ಪೌರಕಾರ್ಮಿಕರು ಸಂತೋಷ ವಾಗಿರಲಿ ಎಂದು ಕ್ರೀಡಾಕೂಟಗಳನ್ನು ಏರ್ಪಡಿಸಲಾಗಿತ್ತು, ಸೆಪ್ಟೆಂಬರ್ 23ರಂದು ಪೌರ ಕಾರ್ಮಿಕ ದಿನಾಚರಣೆಯಂದು ರಜೆ ಇರುವುದರಿಂದ ಪೂರ್ವಭಾವಿ ಯಾಗಿ ಈ ಕ್ರೀಡೆಯನ್ನು ಆಯೋಜನೆ ಮಾಡಲಾಗಿದೆ ದೈಹಿಕವಾಗಿ ಹಾಗೂ ಮಾನಸಿಕ ವಾಗಿ ಇನ್ನೂ ಗಟ್ಟಿಗೊಳಿಸಲು ಮತ್ತು ಕೆಟ್ಟ ಚಟಗಳಿಂದ ದೂರ ಮಾಡಲು ಮತ್ತು ಉಲ್ಲಾಸದಿಂದ ಹಾಗೂ ಉತ್ಸಹದಿಂದ ಕೆಲಸ ಮಾಡಲಿ ಎಂದರು


ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿಗಳಾದ ಎಸ್.ಎಂ.ವೆಂಕಟೇಶ್, ಹೆಲ್ತ್ ಇನ್ಸ್ಪೆಕ್ಟರ್ ದೀಪ, ಅಕೌಂಟೆಂಟ್ ಶಿವಕುಮಾರ್, ಆರ್. ಐ.ಪ್ರಶಾಂತ್, ಮೈಲಾರ ಸ್ವಾಮಿ, ಜಾನಕಿರಾಮ್, ಧನಂಜಯ್, ಬಾಬು, ನಾಗರಾಜ್, ಸಿಬ್ಬಂದಿಯವರು ಪೌರಕಾರ್ಮಿಕರು ಜಲಗಾರರು ಉಪಸ್ಥಿತರಿದ್ದರು.

# ಕೋಲಾರ ಕ್ಷೇತ್ರಕ್ಕೆ 376 ಕೋಟಿ ಅನುದಾನ: ಸಚಿವ ಬೈರತಿ ಸುರೇಶ್

## ಅಭಿವೃದ್ಧಿಯ ದೃಷ್ಟಿಯಿಂದ ಇನ್ನೂ ಅನುದಾನ ಕೊಡಲು ಸರ್ಕಾರ ಸಿದ್ಧ, ಅಭಿವೃದ್ಧಿ ಕೆಲಸಗಳು ಮಾತ್ರ ಜನರ ಕಣ್ಣಮುಂದೆಯೇ ಇವೆ

• ಉದಯವಾಹಿನಿ, ಕೋಲಾರ

ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರದಿಂದ ಕಳೆದ ಒಂದು ವರ್ಷದಲ್ಲೇ ಕೋಲಾರ ವಿಧಾನಸಭಾ ಕ್ಷೇತ್ರಕ್ಕೆ 376 ಕೋಟಿ ಅನುದಾನ ಕೊಡಲಾಗಿದೆ. ಅಭಿವೃದ್ಧಿಯ ದೃಷ್ಟಿಯಿಂದ ಇನ್ನೂ ಅನುದಾನ ಕೊಡಲು ಸರ್ಕಾರ ಸಿದ್ಧವಿದೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್ ತಿಳಿಸಿದರು.


ಉದಯವಾಹಿನಿ ಚಿತ್ರ

ತಾಲ್ಲೂಕಿನ ನರಸಾಪುರ ಗ್ರಾಮದಲ್ಲಿ ಗುರುವಾರ 7 ಕೋಟಿ ವೆಚ್ಚದಲ್ಲಿ ನಾಲ್ಕು ಪಥದ ರಸ್ತೆ, ಖಾಜಿಕಲ್ಲಹಳ್ಳಿ ಮಾರ್ಗದ ರಸ್ತೆಗೆ 5 ಕೋಟಿ, ನರಸಾಪುರ ಸೊಸೈಟಿಯ ನೂತನ ಕಟ್ಟಡಕ್ಕೆ 1.5 ಕೋಟಿ ಸೇರಿದಂತೆ ಒಟ್ಟು 13.5 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

**ಉಳಿದ ರಸ್ತೆಗಳನ್ನು ಹಂತ ಹಂತವಾಗಿ ಅಭಿವೃದ್ಧಿ**

ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳ ಸರಮಾಲೆಯೇ ನಡೆಯುತ್ತಿದೆ. ಆದರೆ, ಹಣ ಖಾಲಿಯಾಗಿದೆ ಎಂದು ಬಿಜೆಪಿ ಮತ್ತು ಜೆಡಿಎಸ್ ಆಡಳಿತ ಪಕ್ಷದ ಮೇಲೆ ಗೂಬೆ ಕೂರಿಸಲು ಹೊರಟಿವೆ. ಆದರೆ, ಅಭಿವೃದ್ಧಿ ಕೆಲಸಗಳು ಮಾತ್ರ ಜನರ ಕಣ್ಣಮುಂದೆಯೇ' ಇವೆ ಎಂದರು.

'ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವು ನುಡಿದಂತೆ ನಡೆಯುತ್ತಿದೆ. ಬಡವರಿಗೆ ಏಳಿಗೆಗಾಗಿ ಐದು ಗ್ಯಾರಂಟಿಗಳನ್ನು ಕೊಡುತ್ತಿದ್ದೇವೆ. ಚುನಾವಣೆ ಸಂದರ್ಭದಲ್ಲಿ ವಿರೋಧ ಪಕ್ಷದವರು ಹೇಳಿದ ಸುಳ್ಳಿನ ಸರಪಳಿಯನ್ನು ತುಂಡರಿಸಿದ್ದೇವೆ' ಎಂದು ಹೇಳಿದರು. ಮುಖ್ಯಮಂತ್ರಿ, ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್ ಮಾತನಾಡಿ, 'ಅಭಿವೃದ್ಧಿ ಕೆಲಸಗಳು ಸರಿಯಾಗಿ ನಡೆಯುತ್ತಿದೆಯೇ ಇಲ್ಲವೇ ಎಂಬುದಕ್ಕೆ ಜನರು ಗಮನಿಸಬೇಕು. ಕಳಪೆ ಕೆಲಸವಾದರೆ ನಮಗೆ, ಮೇಲಧಿಕಾರಿಗಳಿಗೆ ದೂರು ನೀಡಬೇಕು. ಇಲ್ಲವೇ ಮಾಧ್ಯಮದವರ ಗಮನಕ್ಕೆ ತರಬೇಕು' ಎಂದರು.

ಶಾಸಕ ಕೊತ್ತೂರು ಮಂಜುನಾಥ್ ಮಾತನಾಡಿ, 'ಅಭಿವೃದ್ಧಿ ವಿಚಾರದಲ್ಲಿ ಯಾವುದೇ ತಾರತಮ್ಯ ಮತ್ತು ರಾಜಕೀಯ ಮಾಡಬಾರದು. ಜನರಿಂದ ಆಯ್ಕೆಯಾದ ಕಾಂಗ್ರೆಸ್ ಸರ್ಕಾರವು ಪ್ರಾಮಾಣಿಕವಾಗಿ ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿದೆ. ಇನ್ನೂ ಕೆಲವು ಕಡೆಗಳಲ್ಲಿ ಟೆಂಡರ್ ನಡೆದಿದ್ದು, ಉಳಿದ ರಸ್ತೆಗಳನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುತ್ತದೆ' ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ನರಸಾಪುರ ಗ್ರಾಮದಲ್ಲಿ ಹೊರ ಪೊಲೀಸ್ ಠಾಣೆ ನಿರ್ಮಿಸುವಂತೆ ನರಸಾಪುರ ರೇಷ್ಮೆ ಸೊಸೈಟಿ ಅಧ್ಯಕ್ಷ ಖಾಜಿಕಲ್ಲಹಳ್ಳಿ ಮುನಿರಾಜು ಸಚಿವರಿಗೆ ಮನವಿ ಮಾಡಿದರು.

> 'ನರಸಾಪುರ ಕೈಗಾರಿಕಾ ಪ್ರದೇಶವಾಗಿದ್ದು ಇಲ್ಲಿ ಹೊಸದಾಗಿ ಪೊಲೀಸ್ ಹೊರಠಾಣೆಯನ್ನು ಪ್ರಾರಂಭಿಸಬೇಕು. ಸೊಸೈಟಿ ನೂತನ ಕಟ್ಟಡಕ್ಕೆ ನಬಾರ್ಡ್‌ನಿಂದ 70 ಲಕ್ಷ ನೀಡಿದ್ದು, ಉಳಿದ ಹಣವನ್ನು ಸಚಿವರು, ಶಾಸಕರ ಮೂಲಕ ಕೊಡಿಸಬೇಕು
>
> -ಬೈರತಿ ಸುರೇಶ್
> ಜಿಲ್ಲಾ ಉಸ್ತುವಾರಿ ಸಚಿವ

**ಜನರ ಸೇವೆ ಮಾಡಲು ಬಂದಿದ್ದು ಅಭಿವೃದ್ಧಿಯೇ ನಮ್ಮ ಗುರಿ**

7 ಕೋಟಿ ವೆಚ್ಚದಲ್ಲಿ ನಾಲ್ಕು ಪಥದ ರಸ್ತೆ ಖಾಜಿಕಲ್ಲಹಳ್ಳಿ ರಸ್ತೆಗೆ 5 ಕೋಟಿ ಅನುದಾನ ಒಟ್ಟು 13.5 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿ ಹೊಟ್ಟೆಪಾಡಿಗೆ ವ್ಯಾಪಾರಕ್ಕೆ ರಾಜಕಾರಣ ಮಾಡುತ್ತಿಲ್ಲ 'ಹಿಂದಿನ ಬಿಜೆಪಿ ಸರ್ಕಾರದಲ್ಲಿ ಶೇ 40 ಕಮಿಷನ್‌ನಿಂದಾಗಿ ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯವಾಗಿತ್ತು. ನಮ್ಮ ಸರ್ಕಾರ ಕೂಡ ಯಾರಪ್ಪನ ಮನೆಯಿಂದ ಹಣ ತಂದಿಲ್ಲ. ಜನರ ದುಡ್ಡನ್ನೇ ಜನರಿಗೇ ಕೊಡುತ್ತಿದ್ದೇವೆ. ಜೆಡಿಎಸ್ ಮತ್ತು ಬಿಜೆಪಿ ಸರ್ಕಾರದಲ್ಲಿ ಅವರಿಗೆ ತಿನ್ನಲು ಸಾಕಾಗಲಿಲ್ಲ. ಅದಕ್ಕೆ ಅಭಿವೃದ್ಧಿ ಕುಂಠಿತಗೊಂಡಿತ್ತು. ನಾವು ರಾಜಕಾರಣವನ್ನು ಹೊಟ್ಟೆಪಾಡಿಗೆ ವ್ಯಾಪಾರಕ್ಕೆ ಮಾಡಲು ಬಂದಿಲ್ಲ. ಜನರ ಸೇವೆ ಮಾಡಲು ಬಂದಿದ್ದು ಅಭಿವೃದ್ಧಿಯೇ ನಮ್ಮ ಗುರಿ' ಎಂದರು.

## ಮಿನಿ ನ್ಯೂಸ್

### ವಿವಾದಾತ್ಮಕ ಭಾಷಣ ಸಾಧ್ಯತೆ ಹಿನ್ನೆಲೆ ಮುಖಂಡ ಪುನೀತ್ ಕೆರೆಹಳ್ಳಿ ಅರೆಸ್ಟ್

• ಉದಯವಾಹಿನಿ, ತುಮಕೂರು

ಶನಿವಾರ ತುಮಕೂರಿನ ಚರ್ಚ್ ವೃತ್ತದ ಬಳಿ ಇರುವ ಹಿಂದೂ ಮಹಾಸಭಾ ಗಣಪತಿಯ ಒಂದು ವೇದಿಕೆ ಕಾರ್ಯಕ್ರಮದಲ್ಲಿ ಹಿಂದೂಪರ ಮುಖಂಡ ಪುನೀತ್ ಕೆರೆಹಳ್ಳಿ ಭಾಷಣ ಮಾಡಬೇಕಾಗಿತ್ತು, ಆದರೆ ವಿವಾದಾತ್ಮಕ ಭಾಷಣ ಮಾಡುವ ಸಾಧ್ಯತೆ ಹಿನ್ನೆಲೆಯಲ್ಲಿ ಇದೀಗ ಪೊಲೀಸರು ಅವರನ್ನು ಅರೆಸ್ಟ್ ಮಾಡಿದ್ದಾರೆ.

ಹೌದು ಪೊಲೀಸರಿಂದ ಹಿಂದೂ ಪರ ಮುಖಂಡ ಪುನೀತ್ ಕೆರೆಹಳ್ಳಿಯನ್ನು ಬಂಧಿಸಲಾಗಿದೆ. ತುಮಕೂರಿನ ಕ್ಯಾತ್ಸಂದ್ರ ಬಳಿರುವ ಜಾಸ್ ಟೋಲ್ ಬಳಿ ಬಂಧಿಸಲಾಗಿದೆ. ತುಮಕೂರಿನ ಚರ್ಚ್ ವೃತ್ತದಲ್ಲಿ ಪುನೀತ್ ಕೆರೆಹಳ್ಳಿ ಭಾಷಣ ಮಾಡಬೇಕಾಗಿತ್ತು. ವಿವಾದಾತ್ಮಕ ಭಾಷಣ ಮಾಡುವ ಸಾಧ್ಯತೆ ಹಿನ್ನೆಲೆಯಲ್ಲಿ ಪುನೀತ್ ಕೆರೆಹಳ್ಳಿಯನ್ನು ಇದೀಗ ತುಮಕೂರು ಪೊಲೀಸರು ಬಂಧಿಸಿದ್ದಾರೆ.

### ಜೂಜಾಟ: 14 ಮಂದಿ ಬಂಧನ

• ಉದಯವಾಹಿನಿ, ಕೊಳ್ಳೇಗಾಲ

ತಾಲ್ಲೂಕಿನ ಮಧುವನಹಳ್ಳಿ ಗ್ರಾಮದ ಸಮೀಪದಲ್ಲಿ ಜೂಜಾಡುತ್ತಿದ್ದ 14 ಮಂದಿಯನ್ನು ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಚಾಮರಾಜನಗರ ತಾಲ್ಲೂಕಿನ ದೊಡ್ಡಮೋಳೆ ಗ್ರಾಮದ ಅಣ್ಣಪ್ಪ, ಕಾಗಲವಾಡಿ ವಿನಯ್, ಮಸಣಾಪುರ ಅಶ್ವತ, ರಾಜ ಶೆಟ್ಟಿ, ಮೊಹಮ್ಮದ್ ಇಫ್ತೀಯಾಜ್, ರಾಮಸಮುದ್ರ ದುಂಡು ಮಾದೇವ, ಚಾಮರಾಜನಗರದ ಸುರೇಶ್, ಸಮಾಜವಾದಿ ನಾರಾಯಣಸ್ವಾಮಿ, ಮಾದೇವಸ್ವಾಮಿ, ಪುತ್ತನಪುರ ಪ್ರಸನ್ನ, ಗುಂಡ್ಲುಪೇಟೆ ತಾಲ್ಲೂಕಿನ ಹೊಸೂರು ಗ್ರಾಮದ ನಾಗರಾಜು, ತಾಲ್ಲೂಕಿನ ಮಧುವನಹಳ್ಳಿ ಗ್ರಾಮದ ಸಿದ್ದಪ್ಪಸ್ವಾಮಿ, ಮಾದೇವಸ್ವಾಮಿ, ಮಹದೇವ ಪ್ರಸಾದ್ ಬಂಧಿತ ಆರೋಪಿಗಳು.

ಆರೋಪಿಗಳು ಪ್ರತಿನಿತ್ಯ ಜೂಜಾಡುತ್ತಿದ್ದ ಬಗ್ಗೆ ಖಚಿತ ಮಾಹಿತಿಯ ವರೆಗೆ ಪಿಎಸ್ಐ ಸುಪ್ರೀತ್ ಅವರು ಸಿಬ್ಬಂದಿಯೊಂದಿಗೆ ದಾಳಿ ನಡೆಸಿ ಪಣಕ್ಕಿಟ್ಟಿದ್ದ 1.8 ಲಕ್ಷ ವಶಪಡಿಸಿಕೊಂಡಿದ್ದಾರೆ. ಈ ಸಂಬಂಧ ಗ್ರಾಮಾಂತರ ಠಾಣೆಯಲ್ಲಿ ದೂರು ದಾಖಲಾಗಿದ್ದು ಆರೋಪಿಗಳನ್ನು ಠಾಣಾ ಜಾಮೀನು ಮೇಲೆ ಬಿಡುಗಡೆ ಮಾಡಲಾಗಿದೆ.

### ಕರ್ತವ್ಯ ಲೋಪ: ಕುಣಿಗಲ್ ಪುರಸಭೆ ಮುಖ್ಯಾಧಿಕಾರಿ ಶಿವಪ್ರಸಾದ್ ಅಮಾನತು

• ಉದಯವಾಹಿನಿ, ಕುಣಿಗಲ್

ಕರ್ತವ್ಯ ನಿರ್ವಹಣೆಯಲ್ಲಿ ಲೋಪ, ಸಕ್ಷಮ ಪ್ರಾಧಿಕಾರದ ಅನುಮೋದನೆ ಇಲ್ಲದೆ ನಿಯಮ ಬಾಹಿರವಾಗಿ ಅಂತರ್ ನಿಧಿ ವರ್ಗಾವಣೆ ಮಾಡಿ, ನಿಯಮ ಉಲ್ಲಂಘಿಸಿದ ಆರೋಪದ ಮೇಲೆ ಪುರಸಭೆ ಮುಖ್ಯಾಧಿಕಾರಿ ಪಿ.ಶಿವಪ್ರಸಾದ್ ಅವರನ್ನು ಅಮಾನತುಗೊಳಿಸಿ ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕ ಪ್ರಭುಲಿಂಗ ಕವಳಕಟ್ಟಿ ಆದೇಶಿಸಿದ್ದಾರೆ.18ನೇ ವಾರ್ಡ್‌ನ ತೇಜು ಬಡಾವಣೆಯ ಖರಾಬು ಜಾಗಕ್ಕೆ ನಿಯಮ ಬಾಹಿರವಾಗಿ ಖಾತೆ ಮಾಡಿಕೊಟ್ಟಿರುವುದು, ಪುರಸಭೆ ವ್ಯಾಪ್ತಿ ಮೀರಿ ಬಿಎಲ್‌ಎಸ್ ಆರ್ ಬಡಾವಣೆಗೆ ಇ-ತಂತ್ರಾಂಶದಲ್ಲಿ ಖಾತೆ ನೀಡಿರುವುದು, ಸಾಮಾನ್ಯ ನಿಧಿಯಡಿ ಕೊಟೇಶನ್ ಮುಖಾಂತರ ತುಂಡು ಗುತ್ತಿಗೆ ನಿರ್ವಹಿಸಿ ಪುರಸಭೆಗೆ ನಷ್ಟ ಉಂಟು ಮಾಡಿರುವುದು, ಪುರಸಭೆಗೆ ಸೇರಿದ ವಾಣಿಜ್ಯ ಮಳಿಗೆ ವಿಲೆ ಮಾಡದಿರುವುದು, ಬಫರ್ ಜೋನ್‌ನಲ್ಲಿ ಅಕ್ರಮವಾಗಿ ಖಾತೆ ಮಾಡಿಕೊಟ್ಟಿದ್ದಾರೆ ಎಂಬ ಆರೋಪದ ಮೇರೆಗೆ ಶಿಸ್ತು ಕ್ರಮಕ್ಕೈಗೊಳ್ಳಲಾಗಿದೆ.

### ಚನ್ನಪಟ್ಟಣ ನಗರಸಭೆ: ಜೆಡಿಎಸ್‌ನ 13 ಸದಸ್ಯರು ಕಾಂಗ್ರೆಸ್‌ನಲ್ಲಿ ವಿಲೀನ

• ಉದಯವಾಹಿನಿ, ರಾಮನಗರ

ಜೆಡಿಎಸ್ ಹಿಡಿತದಲ್ಲಿದ್ದ ಚನ್ನಪಟ್ಟಣ ನಗರಸಭೆಯನ್ನ ತನ್ನ ತೆಕ್ಕೆಗೆ ತೆಗೆದುಕೊಳ್ಳುವ ನಿಟ್ಟಿನಲ್ಲಿ ಕಾಂಗ್ರೆಸ್ ಪಕ್ಷವು ಹೂಡಿದ್ದ ತಂತ್ರ ಫಲಿಸಿದೆ. ಲೋಕಸಭೆ ಚುನಾವಣೆಗೆ ಮುಂಚೆ ಜೆಡಿಎಸ್ ತೊರೆದು 'ಕೈ' ಹಿಡಿದಿದ್ದ 9 ಸದಸ್ಯರ ಜೊತೆಗೆ, ಇನ್ನೂ ನಾಲ್ವರು ದಳವನ್ನು ತೊರೆದಿದ್ದಾರೆ.ಅದರೊಂದಿಗೆ 13 ಸದಸ್ಯರನ್ನು ತನ್ನತ್ತ ಸೆಳೆದಿರುವ ಕಾಂಗ್ರೆಸ್, ತನ್ನ ಬಲವನ್ನು 20ಕ್ಕೆ ಏರಿಸಿಕೊಂಡಿದೆ.

31 ಸದಸ್ಯರ ಬಲದ ನಗರಸಭೆಯಲ್ಲಿ ಜೆಡಿಎಸ್‌ನ 16, ಕಾಂಗ್ರೆಸ್ ಮತ್ತು ಬಿಜೆಪಿಯ ತಲಾ 7 ಹಾಗೂ ಒಬ್ಬರು ಪಕ್ಷೇತರ ಸದಸ್ಯರಿದ್ದರು. ಇದೀಗ ಜೆಡಿಎಸ್‌ನ ಒಟ್ಟು ಬಲದ ಪೈಕಿ 2/3ರಷ್ಟು ಅಂದರೆ, 13 ಮಂದಿ ಪಕ್ಷ ತೊರೆದಿದ್ದಾರೆ. ಅವರೊಂದಿಗೆ ಪಕ್ಷೇತರ ಸದಸ್ಯೆ ಉಮಾ ಅವರನ್ನು ಸಹ ಕಾಂಗ್ರೆಸ್‌ನಲ್ಲಿ ವಿಲೀನ ಮಾಡಿ, ಪಕ್ಷದ ಸದಸ್ಯರು ಎಂದು ಪರಿಗಣಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿಗೆ ಪಕ್ಷದ ಜಿಲ್ಲಾ ಘಟಕದ ಅಧ್ಯಕ್ಷರು ಕೋರಿದ್ದರು.

ಅದರಂತೆ, ಕರ್ನಾಟಕ ಸ್ಥಳೀಯ ಸಂಸ್ಥೆಗಳು (ಪಕ್ಷಾಂತರ ನಿಷೇಧ) ಅಧಿನಿಯಮ-1987ರ ಕಲಂ 3(ಬಿ)(2ಎ) ಅಡಿ, ಜೆಡಿಎಸ್ ಪಕ್ಷದ ಮೂಲಕ, ಪಕ್ಷೇತರರಾಗಿ ಚನ್ನಪಟ್ಟಣ ನಗರಸಭೆಗೆ ಆಯ್ಕೆಯಾಗಿರುವ 2/3ರಷ್ಟು ಮೀರಿದ ಸದಸ್ಯರುಗಳು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ. ಆ ಮೇರೆಗೆ, ಪಕ್ಷಕ್ಕೆ ವಿಲೀನತೆ ಎಂದು ಪರಿಗಣಿಸಲಾಗಿದೆ ಎಂದು ಚುನಾವಣಾಧಿಕಾರಿ ತನ್ನ ಆದೇಶದಲ್ಲಿ ತಿಳಿಸಿದ್ದಾರೆ.

### ಕ್ರೀಡಾಂಗಣ ಕಾಮಗಾರಿಗೆ ಡಿ.ಕೆ. ಶಿವಕುಮಾರ್ ಭೂಮಿಪೂಜೆ

• ಉದಯವಾಹಿನಿ, ಚನ್ನಪಟ್ಟಣ



ಉದಯವಾಹಿನಿ ಚಿತ್ರ

ಪಟ್ಟಣದ ತಟ್ಟೆಕೆರೆಯಲ್ಲಿ (ಕುಡಿಯುವ ನೀರಿನ ಕಟ್ಟೆ) 9 ಕೋಟಿ ವೆಚ್ಚದಲ್ಲಿ ಕ್ರೀಡಾಂಗಣ ಅಭಿವೃದ್ಧಿ ಕಾಮಗಾರಿಗೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶನಿವಾರ ಭೂಮಿಪೂಜೆ ನೆರವೇರಿಸಿದರು.

ವಕ್ಫ್ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್, ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್, ಬೆಂಗಳೂರು - ಮೈಸೂರು ಇನ್ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಯೋಜನೆ ಪ್ರಾಧಿಕಾರದ ಅಧ್ಯಕ್ಷ ರಘುನಂದನ್ ರಾಮಣ್ಣ, ಚನ್ನಪಟ್ಟಣ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪ್ರಮೋದ್, ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ತಿಕ್ ರೆಡ್ಡಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ದಿಗ್ವಿಜಯ್ ಬೋಡ್ಕೆ ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಇದ್ದಾರೆ.

ಅಂತರಾಳದಿಂದ..
EDITORIAL


# ಒಂದು ರಾಷ್ಟ್ರ ಒಂದು ಚುನಾವಣೆ ಕಾರ್ಯಸಾಧುವಲ್ಲ, ಬಾಧಕವೇ ಹೆಚ್ಚು


ಉದಯವಾಹಿನಿ ಚಿತ್ರ

ಒಂದು ದೇಶ, ಒಂದು ಚುನಾವಣೆ ವ್ಯವಸ್ಥೆಯ ಬಗ್ಗೆ ರಾಮನಾಥ ಕೋವಿಂದ್ ನೇತೃತ್ವದ ಸಮಿತಿ ನೀಡಿದ್ದ ಶಿಫಾರಸ್ಸುಗಳನ್ನು ಕೇಂದ್ರ ಸಚಿವ ಸಂಪುಟ ಒಪ್ಪಿಕೊಂಡಿದೆ. ಅಂದರೆ, ಈ ವ್ಯವಸ್ಥೆಯನ್ನು ಜಾರಿಗೆ ತರುವ ಪ್ರಸ್ತಾವವನ್ನು ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಅಧಿಕೃತವಾಗಿ ಅನುಮೋದಿಸಿದಂತೆ ಆಗಿದೆ. ಕೇಂದ್ರ ಸರ್ಕಾರ ಹಾಗೂ ಬಿಜೆಪಿಯು ಈ ವ್ಯವಸ್ಥೆಯ ಪರವಾಗಿ ಈಚೆಗೆ ಹಲವು ವರ್ಷಗಳಿಂದ ಮಾತನಾಡುತ್ತ ಬಂದಿವೆ. ಈಗ ಈ ವ್ಯವಸ್ಥೆಯನ್ನು ಜಾರಿಗೆ ತರಲು ನೀಲನಕ್ಷೆಯೊಂದು ಸಿದ್ಧವಾಗಿದೆ. ಈ ಸಮಿತಿಯು ಕೇಂದ್ರ ಸರ್ಕಾರ ಹೇಳಿದ್ದನ್ನು ಮಾತ್ರ ಮಾಡಲು ಸಾಧ್ಯವಿತ್ತು. ಈ ಸಮಿತಿಗೆ ರಾಷ್ಟ್ರಪತಿಯಾಗಿ ಸೇವೆ ಸಲ್ಲಿಸಿದ್ದವರನ್ನು ನೇಮಕ ಮಾಡುವ ಮೂಲಕ ಶಿಫಾರಸುಗಳಿಗೆ ಹೆಚ್ಚಿನ ವಿಶ್ವಾಸಾರ್ಹತೆ ತಂದುಕೊಡುವ ಯತ್ನವನ್ನು ಮಾಡಲಾಯಿತು. 'ಒಂದು ರಾಷ್ಟ್ರ, ಒಂದು ಚುನಾವಣೆ' ವಿಚಾರವು ಬಹಳ ವರ್ಷಗಳಿಂದ ಚರ್ಚೆ ಯಲ್ಲಿದೆ. ಆದರೆ ಈ ಪ್ರಸ್ತಾವಕ್ಕೆ ಬಿಜೆಪಿ ಹೊರತುಪಡಿಸಿ, ಇತರ ಪ್ರಬಲ ರಾಜಕೀಯ ಪಕ್ಷಗಳ ಪೈಕಿ ಹೆಚ್ಚಿನ ಪಕ್ಷಗಳ ಬೆಂಬಲ ಇಲ್ಲ. ಇಲ್ಲಿರುವುದು ಒಂದೇ ಬಗೆಯ ರಾಜಕಾರಣ, ದೇಶದ ಉದ್ದಗಲಕ್ಕೂ ಪ್ರಜಾತಾಂತ್ರಿಕ ಚುನಾವಣಾ ಪ್ರಕ್ರಿಯೆಯು ಒಂದೇ ಬಗೆಯಲ್ಲಿ ಇರುತ್ತದೆ ಎಂಬ ನಂಬಿಕೆಯು ಬಿಜೆಪಿಯಲ್ಲಿ ಇರುವಂತೆ ಕಾಣುತ್ತಿದೆ. ಆ ನಂಬಿಕೆಯ ಕಾರಣದಿಂದಾಗಿ ಬಿಜೆಪಿಯು ಈ ವ್ಯವಸ್ಥೆಯ ಪರವಾಗಿ ಇರುವಂತಿದೆ. ಆದರೆ ಈ ವ್ಯವಸ್ಥೆಯು ದೇಶದ ವೈವಿಧ್ಯಮಯ ರಾಜಕೀಯ ಸನ್ನಿವೇಶ, ಸಮಾಜದಲ್ಲಿನ ವೈವಿಧ್ಯ ಹಾಗೂ ದೇಶದ ಜನಜೀವನದಲ್ಲಿನ ವೈವಿಧ್ಯಕ್ಕೆ ವಿರುದ್ಧವಾಗಿದೆ. ಅಷ್ಟೇ ಅಲ್ಲದೆ, ಈ ವ್ಯವಸ್ಥೆಯು ದೇಶದ ಒಕ್ಕೂಟ ಸ್ವರೂಪಕ್ಕೆ ವಿರುದ್ಧವಾಗಿಯೂ ಇದೆ. ಈ ವ್ಯವಸ್ಥೆಯು ರಾಷ್ಟ್ರೀಯ ಪಕ್ಷಗಳಿಗೆ ಹೆಚ್ಚಿನ ಅನುಕೂಲವನ್ನು ಕಲ್ಪಿಸುತ್ತದೆ. ಹೊಸ ವ್ಯವಸ್ಥೆಯು ಜಾರಿಗೆ ಬಂದರೆ, ರಾಜ್ಯ ಮತ್ತು ಪ್ರಾದೇಶಿಕ ವಿಚಾರಗಳಿಗಿಂತಲೂ ಹೆಚ್ಚಾಗಿ ಚುನಾವಣೆಗಳಲ್ಲಿ ರಾಷ್ಟ್ರೀಯ ವಿಚಾರಗಳಿಗೆ ಸಂಬಂಧಿಸಿದ ಆರ್ಭಟದ ಮಾತುಗಳಿಗೇ ಪ್ರಾಧಾನ್ಯ ಸಿಗುವಂತೆ ಆಗುತ್ತದೆ. ದೇಶಕ್ಕೆ ಸ್ವಾತಂತ್ರ್ಯ ಸಿಕ್ಕ ಆರಂಭದ ವರ್ಷಗಳಲ್ಲಿ ಲೋಕಸಭೆ ಹಾಗೂವಿಧಾನಸಭೆಗಳಿಗೆ ಚುನಾವಣೆಗಳು ಏಕಕಾಲದಲ್ಲಿ ನಡೆದವು. ಅದಾದ ನಂತರದಲ್ಲಿ ದೇಶದ ರಾಜಕಾರಣವು ಬಹಳಷ್ಟು ವಿಕಾಸ ಹೊಂದಿದೆ. ಈ ವಿಕಾಸವು ಬಹಳ ಸಹಜವಾದುದು. ಮನಸ್ಸಿಗೆ ತೋಚಿದಂತೆ ಮಾನದಂಡವೊಂದನ್ನು ರೂಪಿಸಿಕೊಂಡು, ದೇಶವು ಈ ಮಾನದಂಡಕ್ಕೆ ಹೊಂದಿಕೊಳ್ಳಬೇಕು ಎಂಬ ಒತ್ತಡವನ್ನು ಸೃಷ್ಟಿಸಿ, ಸಹಜವಾಗಿ ಆಗಿರುವ ವಿಕಾಸವನ್ನು ಕೃತಕವಾಗಿ ಹಿಂದಕ್ಕೊಯ್ಯುವ ಕೆಲಸ ಮಾಡಬಾರದು. ಭಾರತವು ರಾಜ್ಯಗಳ ಒಂದು ಒಕ್ಕೂಟ. ಇಲ್ಲಿನ ಜನರಿಗೆ ತಮ್ಮ ರಾಜಕೀಯ ಆಯ್ಕೆಗಳನ್ನು ನಿರ್ಧರಿಸಲು ಸ್ವಾತಂತ್ರ್ಯ ಇರಬೇಕು.

**ಮೊದಲ ಹಂತವಾಗಿ, ಲೋಕಸಭೆ ಹಾಗೂ ವಿಧಾನಸಭೆಗಳಿಗೆ ಏಕಕಾಲದಲ್ಲಿ ಚುನಾವಣೆ ನಡೆಸಬೇಕು ಎಂದು ಸಮಿತಿಯು ಶಿಫಾರಸು ಮಾಡಿದೆ. ಮುಂದಿನ ಹಂತದಲ್ಲಿ, ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯಿತಿಗಳಿಗೆ 100 ದಿನಗಳ ಒಳಗಾಗಿ ಚುನಾವಣೆ ನಡೆಸಬೇಕು ಎಂದು ಅದು ಹೇಳಿದೆ. ಇಡೀ ಪರಿಕಲ್ಪನೆಯ ಅನುಷ್ಠಾನಕ್ಕೆ ಪ್ರಕ್ರಿಯೆಗಳನ್ನು ಹಾಗೂ ಮಾರ್ಗವನ್ನು ಸಮಿತಿಯು ತೋರಿಸಿಕೊಟ್ಟಿದೆ. ವ್ಯವಸ್ಥೆಯನ್ನು ಅನುಷ್ಠಾನಕ್ಕೆ ತರಲು ಸಂವಿಧಾನಕ್ಕೆ ಕನಿಷ್ಠ 18 ತಿದ್ದುಪಡಿಗಳನ್ನು ತರಬೇಕು ಎಂದು ಅದು ಹೇಳಿದೆ.**

'ಒಂದು ರಾಷ್ಟ್ರ, ಒಂದು ಚುನಾವಣೆ' ವ್ಯವಸ್ಥೆಯು ಜಾರಿಗೆ ಬಂದರೆ ದೇಶದ ಬೊಕ್ಕಸದ ಮೇಲಿನ ಚುನಾವಣಾ ವೆಚ್ಚಗಳು ತಗ್ಗುತ್ತವೆ. ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ಚುನಾವಣೆಗಾಗಿ ಮಾಡುವ ವೆಚ್ಚಗಳೂ ಕಡಿಮೆ ಆಗುತ್ತವೆ ಎಂಬ ವಾದವೊಂದನ್ನು ಜನರ ಮುಂದಿಡಲಾಗಿದೆ. ಈ ವ್ಯವಸ್ಥೆಯು ಜಾರಿಗೆ ಬಂದರೆ, ಆಡಳಿತಕ್ಕೆ ಎದುರಾಗುವ ಅಡ್ಡಿಗಳು ಕೂಡ ಕಡಿಮೆ ಆಗುತ್ತವೆ ಎಂದು ವಾದಿಸಲಾಗಿದೆ. ಆದರೆ ವಾಸ್ತವದಲ್ಲಿ, ಪ್ರಜಾತಂತ್ರವು ಬಹಳ ಅಗ್ಗವಾಗಿ ಸಿಗುವ ವಸ್ತುವಲ್ಲ. ಚುನಾವಣೆಗಳು ಏಕಕಾಲದಲ್ಲಿ ನಡೆಯಲಿ, ಬೇರೆ ಬೇರೆಯಾಗಿ ನಡೆಯಲಿ, ಆ ಸಂದರ್ಭಗಳಲ್ಲಿ ರಾಜಕೀಯ ಪಕ್ಷಗಳು ಸಂಗ್ರಹಿಸುವ ಹಾಗೂ ವೆಚ್ಚ ಮಾಡುವ ಹಣದ ಮೊತ್ತವನ್ನು ಕಡಿಮೆ ಮಾಡುವ ಯತ್ನವೊಂದು ಆಗಬೇಕಿದೆ. ವಾಸ್ತವದಲ್ಲಿ ಇದೇ ನಿಜವಾದ ಸಮಸ್ಯೆ. ಹೀಗಾಗಿ, 'ಒಂದು ರಾಷ್ಟ್ರ, ಒಂದು ಚುನಾವಣೆ' ವ್ಯವಸ್ಥೆಯಿಂದಾಗಿ ವೆಚ್ಚಗಳು ಕಡಿಮೆ ಆಗುತ್ತವೆ ಎಂದು ಹೇಳುವುದು ಜನರ ಗಮನವನ್ನು ಬೇರೆಡೆ ಸೆಳೆಯುವ ಒಂದು ತಂತ್ರದಂತೆ ಮಾತ್ರ ಕಾಣುತ್ತದೆ. ಹೊಸ ವ್ಯವಸ್ಥೆಯ ಬಗ್ಗೆ ಎಲ್ಲರಲ್ಲಿ ಸಹಮತ ಮೂಡಿಸುವ ಉದ್ದೇಶ ತನ್ನದು ಎಂದು ಕೇಂದ್ರ ಸರ್ಕಾರ ಹೇಳಿದೆ. ಆದರೆ ಸರ್ಕಾರದ ಮಾತುಗಳಲ್ಲಿ ಪ್ರಾಮಾಣಿಕತೆ ಕಾಣುತ್ತಿಲ್ಲ. ವಿರೋಧ ಪಕ್ಷಗಳು ತಮ್ಮ ಕಳವಳವನ್ನು ಸ್ಪಷ್ಟವಾಗಿ ತಿಳಿಸಿವೆ. ಕೋವಿಂದ್ ನೇತೃತ್ವದ ಸಮಿತಿಗೂ ಅವು ತಮ್ಮ ಕಳವಳಗಳನ್ನು ಹೇಳಿವೆ. ಹೀಗಿದ್ದರೂ ಸಮಿತಿಯು ತನ್ನ ಪೂರ್ವನಿರ್ಧರಿತ ಶಿಫಾರಸುಗಳನ್ನು ಸರ್ಕಾರಕ್ಕೆ ನೀಡಿದೆ, ಸರ್ಕಾರವು ಆ ಶಿಫಾರಸುಗಳನ್ನು ಒಪ್ಪಿಕೊಂಡಿದೆ. ದೇಶದ ರಾಜಕೀಯ ಪಕ್ಷಗಳಿಗೆ ಒಂದು ರಾಷ್ಟ್ರ ಒಂದು ಚುನಾವಣೆ ವ್ಯವಸ್ಥೆ ಬೇಕಾಗಿಲ್ಲ ಎಂದಾದರೆ, ಅದು ಜಾರಿಗೆ ಬರಲು ಸಾಧ್ಯವಿಲ್ಲ. ಈಗಿನ ಸಂದರ್ಭದಲ್ಲಿ ಕೇಂದ್ರ ಸರ್ಕಾರವು ಈ ವ್ಯವಸ್ಥೆಯನ್ನು ಜಾರಿಗೆ ತರಲು ಅಗತ್ಯವಿರುವ ಸಂವಿಧಾನ ತಿದ್ದುಪಡಿಗಳಿಗೆ ಸಂಸತ್ತಿನ ಅಂಗೀಕಾರ ಪಡೆದುಕೊಳ್ಳುವ ಸಾಧ್ಯತೆಯೂ ಕಡಿಮೆ ಇದೆ.



# ರಾಮಾಯಣ
## ಬಾಲಕಾಂಡ

• ಹಿಂದಿನ ಸಂಚಿಕೆಯಿಂದ **1ನೆಯ ಅಧ್ಯಾಯ**

ಕುಟುಂಬಿಯಲ್ಲದವನೂ, ಧನಧಾನ್ಯಗಳು ಮೊದಲಾದ ಇಷ್ಟವಸ್ತುಗಳಿಲ್ಲದವನೂ, ಕಾಮಿಯೂ, ನಿಂದಿತನೂ, ಅಸತ್ಯವನ್ನು ನುಡಿಯುವವನೂ ಒಬ್ಬನೂ ಇರಲಿಲ್ಲ, ವಿದ್ವಾಂಸನಲ್ಲದೆ ನಾಸ್ತಿಕನಾಗಿ ಧರ್ಮವಿಲ್ಲ ದೈವವಿಲ್ಲ ಎಂಬುವವನೇ ಇರಲಿಲ್ಲ, ಅತ್ಯಂತ ವ್ಯಗ್ರಚಿತ್ತನಾಗಿ ಶಿಷ್ಟನಲ್ಲದೆಯೂ, ಜಿತೇಂದ್ರಿಯನಲ್ಲದೆಯೂ ಇದ್ದವನು ಒಬ್ಬನೂ ಇರಲಿಲ್ಲ; ಈ ಪ್ರಕಾರದಲ್ಲಿ ಸಮಸ್ತರಾದ ಸ್ತ್ರೀಪುರುಷರೂ ಧರ್ಮಶೀಲರಾಗಿ ನಿಯಮಸ್ಥರಾಗಿದ್ದರು; ಕುಂಡಲವಿಲ್ಲದವನೂ, ಕಿರೀಟವಿಲ್ಲದವನೂ, ಕಂಠಮಾಲೆ ಮೊದಲಾದ ಭೂಷಣಗಳಿಲ್ಲದವನೂ, ಅಲ್ಪಭೋಗವನ್ನು ಅನುಭವಿಸುತಿದ್ದವನೂ, ಮೃಷ್ಟಾನ್ನ ಭೋಜನಗಳಿಲ್ಲದಿದ್ದವನೂ, ಸಮಸ್ತ ಸುಗಂಧಾನುಲೇಪನಗಳಿಲ್ಲದಿದ್ದವನೂ, ಸತ್ಪಾತ್ರದಲ್ಲಿ ದಾನವನ್ನು ಕೊಡದಿದ್ದವನೂ, ಆಹಿತಾಗ್ನಿಯಲ್ಲದವನೂ, ಯಜ್ಞ ಮಾಡದವನೂ, ಬಹುಶಾಸ್ತ್ರಾಭ್ಯಾಸವನ್ನು ಮಾಡದಿದ್ದವನೂ ಇರಲಿಲ್ಲ; ಮತ್ತು ಆ ಪಟ್ಟಣದಲ್ಲಿ ಜಾತಿಸಂಕರವುಳ್ಳವನೇ ಇರಲಿಲ್ಲ, ಸಮಸ್ತಜನಗಳೂ ಜಿತೇಂದ್ರಿಯರಾಗಿ, ಧರ್ಮದಲ್ಲಿ ನಿರತರಾಗಿ, ಸದಾ ವೇದಾಧ್ಯಯನಪರರಾಗಿ, ನಿಷ್ಠೆಯುಳ್ಳವರಾಗಿ ದಾನಪ್ರತಿಗ್ರಹಪರರಾಗಿದ್ದರು; ನಾಸ್ತಿಕನಾಗಿ ಹುಸಿಯನ್ನು ನುಡಿದು ಶಾಸ್ತ್ರಾಭ್ಯಾಸವನ್ನು ಮಾಡದೆ ಅಸೂಯೆಯುಳ್ಳವನಾಗಿ ವಿದ್ವಾಂಸನಲ್ಲದೆ ದುರಾಸಕ್ತನಾಗಿದ್ದವನೇ ಇಲ್ಲ; ಶಿಕ್ಷಾಕಲ್ಪವ್ಯಾಕರಣಾದಿ ಷಡಂಗಗಳನ್ನು ಅರಿಯದವನೇ ಇಲ್ಲ. ದಾನಧರ್ಮಗಳಿಲ್ಲದೆ ಸಹಸ್ರ ಬ್ರಾಹ್ಮಣಭೋಜನಗಳನ್ನು ಮಾಡಿಸದೆ ಇದ್ದವನೇ ಇಲ್ಲ, ದೀನನಾಗಿ ಚಿಂತೆಯಿಂದ ವ್ಯಥೆಪಡುವ ಮನುಷ್ಯನೇ ಇಲ್ಲ, ಐಶ್ವರವಿಲ್ಲದೆ ದೀನನಾಗಿ ಕುರೂಪಿಯಾಗಿದ್ದವನೇ ಇಲ್ಲ, ಬ್ರಹ್ಮ ಕ್ಷತ್ರಿಯ ವೈಶ್ಯ ಶೂದ್ರರೆಂಬ ನಾಲ್ಕು ಜಾತಿಯವರೂ ದೇವಪೂಜೆ ಅತಿಥಿಸತ್ಕಾರಗಳನ್ನು ಮಾಡಿದವರು ಮಾಡಿದ ಉಪಕಾರವನ್ನು ಮರೆಯದೆ, ದಾನಶೀಲರಾಗಿ ಪರಾಕ್ರಮಿಗಳಾಗಿ ದೀರ್ಘಾಯುವಂತರಾಗಿ ಧರ್ಮವನ್ನೂ ಸತ್ಯವನ್ನೂ ಆಶ್ರಯಿಸುವಂಥವರಾಗಿ ಮಕ್ಕಳು ಮೊಮ್ಮಕ್ಕಳೊಡನೆ ಕೂಡಿ ಸುಖದಿಂದಿದ್ದರು. ಸಮಸ್ತ ಜಾತಿಗಳವರೂ ತಮ್ಮ ಜಾತಿ, ಧರ್ಮಗಳನ್ನೂ ಬಿಡದೆ. ಸ್ವಧರ್ಮದಲ್ಲಿಯೇ ನಿರತರಾಗಿದ್ದರು, ಪೂರ್ವದಲ್ಲಿ ವೈವಸ್ವತಮನವು ಭೂಮಂಡಲವನ್ನು ರಕ್ಷಿಸಿದ ಪ್ರಕಾರದಲ್ಲಿ, ಮಹಾರಾಯನು ಅಯೋಧ್ಯಪಟ್ಟಣದಲ್ಲಿದ್ದು ಆ ಪಟ್ಟಣವು ಪ್ರಳಯಕಾಲಾಗ್ನಿ ಸಮಾನರಾದ ಭಟರಿಂದ ಕೂಡಿ ಮಹಾತ್ಮರಾದ ಋಷಿಗಳಿಂದ ಪರಿಪೂರ್ಣವಾಗಿ, ಅತ್ಯಂತ ಪರಾಕ್ರಮವುಳ್ಳ ಸಿಂಹಗಳಿಂದ ಗಂಭೀರವಾದ ಗುಹೆಯ ರೀತಿಯಲ್ಲಿ ಒಪ್ಪುತ್ತಿತ್ತು, ಕಾಂಭೋಜ ದೇಶದಲ್ಲಿಯೂ ವನಾಯುಜ ದೇಶದಲ್ಲಿ ಯೂ ಹುಟ್ಟಿದ ವಾಯುವೇಗವುಳ್ಳ ಉತ್ತಮ ಅಶ್ವಗಳಿಂದಲೂ ವಿಂಧ್ಯಪರ್ವತದಲ್ಲಿ ಹುಟ್ಟಿದ ಮದ್ದಾನೆಗಳಿಂದಲೂ ಮತಂಗದೇಶದಲ್ಲಿ ಹುಟ್ಟಿದ ಪರ್ವತಾಕಾರವಾದ ಅತಿ ಬಲಶಾಲಿಗಳಾದ ಮತ್ತಗಜಗಳಿಂದಲೂ ಐರಾವತ, ಮಹಾಪದ್ಮ, ಅಂಜನ, ಮಮನ ಎಂಬ ದಿಗ್ಗಜಗಳ ಕುಲದಲ್ಲಿ ಹುಟ್ಟಿದ ಮದ್ದಾನೆಗಳಿಂದಲೂ, ಭದ್ರ-ಮಂದ್ರ-ಮೃಗ-ಭದ್ರಮಂದ್ರ-ಮೃಗಮಂದ್ರಗಳೆಂಬ ಹೆಸರುಗಳುಳ್ಳ ಪರ್ವತಾಕಾರವಾದ ಮದ್ದಾನೆಗಳಿಂದಲೂ, ಎರಡು ಗಾವುದದವರೆಗೂ ಪರಿಪೂರ್ಣವಾಗಿದ್ದುದರಿಂದ, ಆ ಪಟ್ಟಣವು ಒಬ್ಬರಿಗೂ ಯುದ್ಧದಲ್ಲಿ ಸೋಲಿಸಲು ಸಾಧ್ಯವಲ್ಲದೆ ಇತ್ತು. ಆದಕಾರಣ ಅಯೋಧ್ಯ ಎಂಬ ಹೆಸರಾಯಿತು.

ಮುಂದುವರಿಯುವುದು...

## ಬೆಂಗಳೂರಿನ ಎಂ ಚೆನ್ನ ಸ್ವಾಮಿ ಕ್ರೀಡಾಂಗಣದಲ್ಲಿ ನಡೆದ 12ನೇ ವಾರ್ಷಿಕ ವನ್ಯಜೀವಿ ಸೇವಾ ಪ್ರಶಸ್ತಿ ಕಾರ್ಯಕ್ರಮದಲ್ಲಿ ಅರಣ್ಯ ಸಂರಕ್ಷಣೆಯಲ್ಲಿ ಅಪ್ರತಿಮ ಕೆಲಸ ಮಾಡಿದ ಕರ್ನಾಟಕ, ತಮಿಳುನಾಡು ಮತ್ತು ಕೇರಳದ ನಾಲ್ವರು ಗಾರ್ಡ್ ವಾಚರ್ ಗಳಿಗೆ ರೂ. 4,00,000 ನಗದು ಬಹುಮಾನ.

# ಕೇರಳದಲ್ಲಿ ನಾಲ್ವರು ಅರಣ್ಯ ಸಂರಕ್ಷಕರಿಗೆ ಗೌರವ ಪುರಸ್ಕಾರ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಭಾರತದ ಪ್ರಮುಖ ಅಗರಬತ್ತಿ ತಯಾರಕರಾದ ಸೈಕಲ್ ಪ್ಯೂರ್ ಅಗರಬತ್ತಿ ಪ್ರತೀ ವರ್ಷವೂ ಅರಣ್ಯ ಸಂರಕ್ಷರಿಗೆ ಗೌರವ ಸಲ್ಲಿಸುವ ಮಹತ್ವದ ಕಾರ್ಯ ಮಾಡುತ್ತಿದ್ದು, ಈ ಸಲ ಸೆಪ್ಟೆಂಬರ್ 21ರಂದು ಬೆಂಗಳೂರಿನ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ 12ನೇ ವಾರ್ಷಿಕ ವನ್ಯಜೀವಿ ಸೇವಾ ಪ್ರಶಸ್ತಿ ಕಾರ್ಯಕ್ರಮದಲ್ಲಿ ಕರ್ನಾಟಕ, ತಮಿಳುನಾಡು ಮತ್ತು ಕೇರಳದ ನಾಲ್ವರು ಅರಣ್ಯ ಸಂರಕ್ಷಕರಿಗೆ ಗೌರವ ಪುರಸ್ಕಾರ ಸಲ್ಲಿಸಿತು.

ಭದ್ರಾ ಹುಲಿ ಸಂರಕ್ಷಿತ ಪ್ರದೇಶದ ವಾಚರ್ ವೆಂಕಟೇಶ್ (ಕರ್ನಾಟಕ), ಕಾಳಿ ಹುಲಿ ಸಂರಕ್ಷಿತ ಪ್ರದೇಶದ ಗಾರ್ಡ್ ರಾಘವೇಂದ್ರ ಗೌಡ (ಕರ್ನಾಟಕ), ಕೊಯಮತ್ತೂರು ವನ್ಯಜೀವಿ ಸಂರಕ್ಷಣಾ ವಿಭಾಗದ ಗಾರ್ಡ್ ಎ ಅರುಣ್ ಕುಮಾರ್ (ತಮಿಳುನಾಡು) ಮತ್ತು ಪೆರಿಯಾರ್ ಹುಲಿ ಸಂರಕ್ಷಿತ ಪ್ರದೇಶದ ವಾಚರ್ ಸಾಬು ಜಾರ್ಜ್ ( ಕೇರಳ) ಅವರು ವನ್ಯಜೀವಿ ಸಂರಕ್ಷಣಾ ವಿಷಯದಲ್ಲಿ ತೋರಿರುವ ಅಪ್ರತಿಮ ಬದ್ಧತೆಗೆ ತಲಾ ರೂ.1 ಲಕ್ಷ ನಗದು ಬಹುಮಾನ ನೀಡಿ ಗೌರವಿಸಲಾಯಿತು.

ವಿಶೇಷವಾಗಿ ದಕ್ಷಿಣ ಭಾರತದ ಕಾಡುಗಳಲ್ಲಿ ಆನೆಗಳ ಸಂರಕ್ಷಣೆ ವಿಚಾರದಲ್ಲಿ ಮಹತ್ತರ ಕೆಲಸ ಮಾಡಿರುವ ಕರ್ನಾಟಕದ ಸುಧೀರ್ ಶೆಟ್ಟಿ ಮತ್ತ ಕೇರಳದ ಎಂ ಎನ್ ಜಯಚಂದ್ರನ್ ಅವರಿಗೆ ಗೌರವ ಸನ್ಮಾನ ಸಲ್ಲಿಸಲಾಯಿತು. ಈ ಕಾರ್ಯಕ್ರಮದ ಮೂಲಕ ಕೆಎಸ್‌ಸಿಎ ಟೈಗರ್ ಕಪ್ 2024ರ 12ನೇ ಆವೃತ್ತಿಯು ಯಶಸ್ವಿಯಾಗಿ ಮುಕ್ತಾಯಗೊಂಡಿದೆ.

ಕ್ರಿಕೆಟಿಗರಿಂದ ಸಂರಕ್ಷಣಾ ಕಾರ್ಯ ಎಂಬ ಮಹತ್ತರ ಯೋಜನೆಯ ಭಾಗವಾಗಿ ನಡೆದ ಕೆ ಎಸ್ ಸಿಎ ಟೈಗರ್ ಕಪ್ ಕ್ರಿಕೆಟ್ ಪಂದ್ಯಾವಳಿಯು ಬೆಂಗಳೂರಿನಲ್ಲಿ ಏಪ್ರಿಲ್ 22 ರಿಂದ ಮೇ 13ರವರೆಗೆ ನಡೆದಿತ್ತು. ಕ್ರಿಕೆಟಿಗರಿಂದ ಸಂರಕ್ಷಣಾ ಕಾರ್ಯ ಎಂಬ ಯೋಜನೆಯನ್ನು ಭಾರತದ ಕ್ರಿಕೆಟ್ ದಂತಕಥೆಗಳಾದ ಸಂದೀಪ್ ಪಾಟೀಲ್, ಯೂಸುಫ್ ಪಠಾಣ್ ಮತ್ತು ಹರ್ಭಜನ್ ಸಿಂಗ್ ಅವರು ಸ್ಥಾಪಿಸಿರುವ ಪಬ್ಲಿಕ್ ಟ್ರಸ್ಟ್ ಸಂಸ್ಥೆಯು ಹಮ್ಮಿಕೊಂಡಿದೆ. ಈ ಸಂಸ್ಥೆ ಭಾರತದ ವನ್ಯಜೀವಿ ಸಂರಕ್ಷಣಾ ಕೆಲಸದಲ್ಲಿ ಶ್ರದ್ಧಾಪೂರ್ವಕವಾಗಿ ತೊಡಗಿಸಿಕೊಂಡಿದೆ.

ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾರತ ಕ್ರಿಕೆಟ್ ತಂಡದ ಮಾಜಿ ನಾಯಕ, ಪದ್ಮಶ್ರೀ ಮತ್ತು ಅರ್ಜುನ ಪ್ರಶಸ್ತಿ ಪುರಸ್ಕೃತರಾದ ಜಿ.ಆರ್.ವಿಶ್ವನಾಥ್ ಮತ್ತು ಎನ್.ರಂಗರಾವ್ ಆಂಡ್ ಸನ್ಸ್ ನಿರ್ದೇಶಕ ಶ್ರೀ ಕಿರಣ್ ರಂಗಾ ಉಪಸ್ಥಿತರಿದ್ದು, ಅರಣ್ಯ ಸಂರಕ್ಷಕರನ್ನು ಗೌರವಿಸಿದರು. ಈ ಸಂದರ್ಭದಲ್ಲಿ ಕ್ರಿಕೆಟ್ ಕೋಚ್ ಶ್ರೀ ಜೋಸೆಫ್ ಹೂವರ್ ಅವರು ಉಪಸ್ಥಿತರಿದ್ದರು.

> ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣೆಯಲ್ಲಿ ಅವಿರತವಾಗಿ ದುಡಿಯುತ್ತಿರುವ ಅರಣ್ಯ ಸೈನಿಕರಿಗೆ ಗೌರವ ಸಲ್ಲಿಸುವ ಈ ಕಾರ್ಯ ಕ್ರಮದ ಭಾಗವಾಗಿರುವುದಕ್ಕೆ ನನಗೆ ಸಂತೋಷವಾಗಿದೆ. ನಾಡಿನ ಶ್ರೀಮಂತ ಜೀವವೈಧ್ಯತೆಯನ್ನು ರಕ್ಷಿಸಲು ಅವರ ಶ್ರಮ, ಶ್ರದ್ಧೆ ಬಹಳ ಮುಖ್ಯ. ಈ ಮಹತ್ತರ ಕಾರ್ಯದಲ್ಲಿ ಅವರ ಜೊತೆ ನಿಲ್ಲುವುದಕ್ಕೆ ನನಗೆ ಹೆಮ್ಮೆ ಇದೆ
> -ಜಿ.ಆರ್.ವಿಶ್ವನಾಥ್, ಭಾರತ ಕ್ರಿಕೆಟ್ ತಂಡದ ಮಾಜಿ ನಾಯಕ,

> ಅರಣ್ಯ ಸಂರಕ್ಷಣೆಯಲ್ಲಿ ಅತ್ಯುತ್ತಮ ಕೆಲಸ ಮಾಡಿದ ಅರಣ್ಯ ಸೈನಿಕರನ್ನು ಗುರುತಿಸುವುದು ಗೌರವದ ಕೆಲಸವಾಗಿದೆ. ಅಪ್ರತಿಮ ಕೆಲಸ ಮಾಡುತ್ತಿರುವ ಅರಣ್ಯ ಸಂರಕ್ಷಕರಿಗೆ ಗೌರವ ಸಲ್ಲಿಸಲು ಎನ್‌ಆರ್ ಗ್ರೂಪ್ ಹೆಮ್ಮೆ ಪಡುತ್ತದೆ
> - ಕಿರಣ್ ರಂಗಾ
> ಎನ್ ರಂಗರಾವ್ ಆಂಡ್ ಸನ್ಸ್‌ನ ನಿರ್ದೇಶಕ

# ರಾಯರ ವೈಭವೋಪೇತ ಉತ್ಸವ ಸುಮನೋಹರ ಭರತನಾಟ್ಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಜಯನಗರದ 5 ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮ ಪೂಜ್ಯ1008 ಶ್ರೀ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ ಆದೇಶ ಅನುಗ್ರಹದೊಂದಿಗೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಆರ್, ಕೆ ವಾದೀಂದ್ರಾಚಾರ್ಯರ ಮಾರ್ಗದರ್ಶನದಲ್ಲಿ ಪ್ರತಿ ಗುರುವಾರದಂತೆ ವಿಶೇಷವಾಗಿ ಶ್ರೀ ರಾಘವೇಂದ್ರ ಸ್ವಾಮಿಗಳ ಬೃಂದಾವನಕ್ಕೆ ಅಲಂಕಾರ, ಉತ್ಸವಗಳು, ಮತ್ತು ಸಹಸ್ರಾರು ಭಕ್ತಾದಿಗಳಿಗೆ ಅನ್ನಸಂತರ್ಪಣೆಯ ಕಾರ್ಯಕ್ರಮವು ನೆರವೇರಿತು, ಹಾಗೂ ಸಂಜೆ ಭರತನಾಟ್ಯ ಕಾರ್ಯಕ್ರಮವನ್ನು ಕಲಾಯೋಗಿ ವಿದ್ವಾನ್ - ಎಸ್ ರಘುನಂದನ್ ಮತ್ತು ಅವರ ಶಿಷ್ಯವೃಂದದ ವಿದ್ಯಾರ್ಥಿಗಳು ಭರತನಾಟ್ಯಕಾರ್ಯಕ್ರಮ ವನ್ನು ವಿಶೇಷವಾಗಿ ನಡೆಸಿಕೊಟ್ಟರು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು. ವಿಶೇಷವಾಗಿ ಈ ಕಾರ್ಯಕ್ರಮಕ್ಕೆ ಸಹಕಾರ ನೀಡಿದ ಲೇಖಕಿ ವೈ. ಕೆ. ಸಂಧ್ಯಾ ಶರ್ಮ ರವರು ಮತ್ತು ವೀಣಾ ಕಲಾವಿದೆ ಗೀತಾ ಶ್ಯಾಂ ಪ್ರಕಾಶ್ ಉಪಸ್ಥಿತರಿದ್ದರು. ಈ ಎಲ್ಲಾ ಕಾರ್ಯಕ್ರಮದಲ್ಲಿ ಭಕ್ತಾದಿಗಳು ಭಾಗವಹಿಸಿ ಶ್ರೀಹರಿ ವಾಯು ಗುರುಗಳ ಅನುಗ್ರಹಕ್ಕೆ ಪಾತ್ರರಾದರು.

ಖ್ಯಾತ 'ಅಭಿವ್ಯಕ್ತಿ ಡ್ಯಾನ್ಸ್ ಸೆಂಟರ್' ನ ಗುರು ರಘುನಂದನ್ ಮತ್ತು ಶಿಷ್ಯರು ಪುಷ್ಪಾಂಜಲಿಯಿಂದ ಪ್ರಾರಂಭಿಸಿ ಗಣೇಶ ಸ್ತುತಿ, ಜತಿಸ್ವರ, ನರ್ತನ ಗಣಪತಿ ಕೀರ್ತನೆ , ನವರಸ ರಾಮಾಯಣ, ಆನಂದ ತಾಂಡವ, ಪೋಗದಿರಲೋ ರಂಗ ದೇವರನಾಮ ಮತ್ತು ತಿಲ್ಲಾನದವರೆಗೂ ಬಹು ಸುಂದರ ಆಂಗಿಕಾಭಿನಯ-ಭಾವ-ಭಂಗಿಗಳಿಂದ ಮನಸೆಳೆದರು. ಸಮೂಹ ನೃತ್ಯದ ಸಾಮರಸ್ಯ- ರಮ್ಯ ನೃತ್ತಗಳ ನಿರೂಪಣೆ, ಚೆಂದದ ಅಭಿನಯ ನೃತ್ಯದ ಪರಿಣಾಮ ಹೆಚ್ಚಿಸಿತು. ಶ್ರೀ ರಘುನಂದನ್ ಸಾದರಪಡಿಸಿದ 'ನವರಸ ರಾಮಾಯಣ' ನುರಿತ ನೃತ್ತ ಸೌಂದರ್ಯದಿಂದ ಮತ್ತು ಅಭಿನಯ ಪ್ರೌಢತೆಯಿಂದ ಗಮನ ಸೆಳೆಯಿತು.

ಪ್ರಾರಂಭದಲ್ಲಿ ಮಾಸ್ಟರ್. ರಿಷಿಕೇಶ್ ರಘುನಂದನ್ ಸುಶ್ರಾವ್ಯವಾಗಿ ಪ್ರಾರ್ಥನೆ ನಡೆಸಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ ನೃತ್ಯ ಕಲಾವಿದೆಯರು ಅಶ್ವಿನಿ, ಸಿಂಧು, ಗುಣಶ್ರೀ, ದಿವ್ಯ, ಸೌದಾಮಿನಿ, ಅಮೂಲ್ಯ, ಮಂದಿರ, ಶ್ರೀ ರಕ್ಷಾ, ರಿಂಶ, ಅನನ್ಯ, ತುಳಸಿ, ಯಶಸ್ವಿ ಮತ್ತು ಸೇಜಲ್.

# ಬಿಬಿಎಂಪಿ ವ್ಯಾಪ್ತಿಯಲ್ಲಿ ಬೀದಿ ನಾಯಿಗಳಿಗೆ ಪ್ರಾಯೋಗಿಕವಾಗಿ ಮೈಕ್ರೋ ಚಿಪ್ ಅಳವಡಿಕೆ: ಸುರಳ್ಕರ್ ವಿಕಾಸ್ ಕಿಶೋರ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಪಶ್ಚಿಮ ವಲಯದ ಮತ್ತಿಕೆರೆ ಮತ್ತು ಮಲ್ಲೇಶ್ವರಂ ವ್ಯಾಪ್ತಿಯಲ್ಲಿ ಬೀದಿ ನಾಯಿಗಳಿಗೆ ಪ್ರಾಯೋಗಿಕವಾಗಿ ಮೈಕ್ರೋ ಚಿಪ್ ಅಳವಡಿಕೆ ಮಾಡುವ ಕಾರ್ಯಕ್ಕೆ ಚಾಲನೆ ನೀಡಲಾಗಿದೆ ಎಂದು ಆರೋಗ್ಯ ಹಾಗೂ ಪಶುಪಾಲನಾ ವಿಭಾಗದ ವಿಶೇಷ ಆಯುಕ್ತರಾದ ಶ್ರೀ ಸುರಳ್ಕರ್ ವಿಕಾಸ್ ಕಿಶೋರ್ ರವರು ತಿಳಿಸಿದರು.

**ಬೀದಿ ನಾಯಿಗಳಿಗೆ ಅಳವಡಿಕೆ**

### ಅಕ್ಕಿಕಾಳು ಗಾತ್ರದ ಮೈಕ್ರೋ ಚಿಪ್ ಅಳವಡಿಕೆ

**ಮೈಕ್ರೋಚಿಪ್ ಒಂದು ಅಕ್ಕಿಕಾಳು ಗಾತ್ರದ ಸಾಧನವಾಗಿದ್ದು, ಪ್ರಾಣಿಗಳಲ್ಲಿ ಶಾಶ್ವತ ಗುರುತಿನ ವಿಧಾನವಾಗಿರುತ್ತದೆ. ಇದನ್ನು ಪ್ರಾಣಿಗಳ ಚರ್ಮದ ಕೆಳಗೆ ಇಂಜೆಕ್ಷನ್ ಮೂಲಕ ಇರಿಸಲಾಗುವುದು. ಇದರಿಂದ ಯಾವುದೇ ರೀತಿಯ ಅಡ್ಡ ಪರಿಣಾಮ ಬೀರುವುದಿಲ್ಲ ಮತ್ತು ಇದು ಪ್ರಾಣಿಗಳ ಜೀವನ ಪರ್ಯಂತ ಶಾಶ್ವತ ಗುರುತಾಗಿ ಬಳಸಬಹುದಾಗಿರುತ್ತದೆ. ಇದು ಪ್ರಪಂಚದಾದ್ಯಂತ ಬಳಸಲಾಗುವ ಯೂನಿಕ್ ಸಂಖ್ಯೆಯಾಗಿರುತ್ತದೆ.**

### ಪ್ರಸ್ತುತ ಬಣ್ಣ ಬಳಸಿ ಗುರುತಿಸಲಾಗುತ್ತಿದೆ

**ಪಾಲಿಕೆ ವ್ಯಾಪ್ತಿಯಲ್ಲಿ ಪ್ರಸ್ತುತ ಲಸಿಕೆ ಹಾಕಿದ ಬೀದಿನಾಯಿಗಳಿಗೆ ಬಣ್ಣವನ್ನು ಬಳಸಿ ಗುರುತಿಸಲಾಗುತ್ತಿದ್ದು, ಒಂದು ವಾರ ಮಾತ್ರ ಬಣ್ಣದ ಗುರುತು ಪತ್ತೆಹಚ್ಚಬಹುದಾಗಿರುತ್ತದೆ. ಆದುದರಿಂದ ಬೀದಿನಾಯಿಗಳಿಗೆ ಪದೇ ಪದೇ ಲಸಿಕೆ ಹಾಕುವ ಸಾಧ್ಯತೆಯಿರುತ್ತದೆ. ಮೈಕ್ರೋ ಚಿಪ್ ತಂತ್ರಜ್ಞಾನದಿಂದ ಈ ನ್ಯೂನತೆಯನ್ನು ಸರಿಪಡಿಸಬಹುದಾಗಿರುತ್ತದೆ ಹಾಗು ನಾಯಿಗಳಲ್ಲಿ ಲಸಿಕೆ ಹಾಕಿರುವ ಮಾಹಿತಿಯನ್ನು ನಿಖರವಾಗಿ ತಿಳಿಯಬಹುದಾಗಿರುತ್ತದೆ.**

### ಇರತೆ ವಲಯಗಳಲ್ಲೂ ಅಳವಡಿಕೆ

**ಪ್ರಾಯೋಗಿಕ ಮೈಕ್ರೋ ಚಿಪ್ ಅಳವಡಿಸುವ ಕಾರ್ಯ ಯಶಸ್ವಿಯಾದರೆ, ಅದನ್ನು ಪಾಲಿಕೆಯ ಎಲ್ಲಾ ವಲಯಗಳಲ್ಲಿಯೂ ಬೀದಿ ನಾಯಿಗಳಿಗೆ ಅಳವಡಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಪಾಲಿಕೆ ವತಿಯಿಂದ ಬೀದಿ ನಾಯಿಗಳಿಗೆ ಸಂಯೋಜಿತ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲು ಉದ್ದೇಶಿಸಿದ್ದು, ಮೈಕ್ರೋ ಚಿಪ್ ಅಳವಡಿಸುವ ತಂತ್ರಜ್ಞಾನದಿಂದ ಬೀದಿ ನಾಯಿಗಳಿಗೆ ಮತ್ತೆ-ಮತ್ತೆ ಲಿಸಿಕೆ ಹಾಕುವುದನ್ನು ತಡೆಯಬಹುದಾಗಿರುತ್ತದೆ. ಪಾಲಿಕೆ ವ್ಯಾಪ್ತಿಯಲ್ಲಿ ಬೀದಿ ನಾಯಿಗಳಿಗೆ ಮೈಕ್ರೋ ಚಿಪ್ ಅಳವಡಿಸುವ ಕಾರ್ಯದಿಂದ, ಬೀದಿ ನಾಯಿಗಳ ನಿಖರವಾದ ಮಾಹಿತಿಯನ್ನು ಪಡೆಯಬಹುದಾಗಿದೆ. ಅಲ್ಲದೆ ಬೀದಿ ನಾಯಿಗಳಿಗೆ ಮತ್ತೆ-ಮತ್ತೆ ಲಸಿಕೆ ಹಾಕುವುದನ್ನು ತಡೆಯಬಹುದಾಗಿರುತ್ತದೆ.**

ನಗರದ ಪಶ್ಚಿಮ ವಲಯದ ಮತ್ತಿಕೆರೆ ಹಾಗೂ ಮಲ್ಲೇಶ್ವರಂ ವ್ಯಾಪ್ತಿಯಲ್ಲಿನ ಬೀದಿ ನಾಯಿಗಳಿಗೆ ಮೈಕ್ರೋ ಚಿಪ್‌ಅನ್ನು ಪ್ರಾಯೋಗಿಕವಾಗಿ ಅಳವಡಿಸಲಾಗುತ್ತಿದ್ದು, ಮೈಕ್ರೋ ಚಿಪ್ ತಂತ್ರಜ್ಞಾನದಿಂದ ನಾಯಿಯ ವಾಸಸ್ಥಳ, ಲಸಿಕೆ ನೀಡಿದ ದಿನಾಂಕ, ಸಂತಾನಹರಣ ಶಸ್ತ್ರಚಿಕಿತ್ಸೆ ಮಾಡಿದ ದಿನಾಂಕ ಹಾಗೂ ಇನ್ನಿತರ ಅಂಶಗಳನ್ನು ಶಾಶ್ವತವಾಗಿ ಅದರಲ್ಲಿ ಶೇಖರೀಡಿಸಬಹುದಾಗಿರುತ್ತದೆ.

ಮೈಕ್ರೋ ಚಿಪ್ ತಂತ್ರಜ್ಞಾನವನ್ನು ಈಗಾಗಲೇ ಹಲವಾರು ಸ್ಥಳೀಯ ಸಂಸ್ಥೆಗಳು ಬೀದಿ ನಾಯಿಗಳಿಗೆ ಅಳವಡಿಸಿಕೊಂಡಿದ್ದು, ಪಾಲಿಕೆ ವ್ಯಾಪ್ತಿಯಲ್ಲಿ BIZ ORBIT ಎಂಬ ಸಂಸ್ಥೆಯ ಸಹಯೋಗದೊಂದಿಗೆ ಪ್ರಾಯೋಗಿಕವಾಗಿ ಬೀದಿ ನಾಯಿಗಳಿಗೆ ಅಳವಡಿಕೆ ಮಾಡಲಾಗುತ್ತಿದೆ.

# ಸಾರ್ವಜನಿಕ ಸಭೆಗಳಿಗೆ ವಿವಿಧ ಇಲಾಖೆ ಅಧಿಕಾರಿಗಳಿಗೆ ಆಹ್ವಾನ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಪ್ರತಿ ತಿಂಗಳು ನಡೆಸುವ ಎರಡು ಸಾರ್ವಜನಿಕ ಸಭೆಗಳಿಗೆ ವಿವಿಧ ಇಲಾಖೆಯ ಅಧಿಕಾರಿಗಳನ್ನು ಆಹ್ವಾನಿಸಲಾಗುವುದು ಎಂದು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಅವ ರು ತಿಳಿಸಿದ್ದಾರೆ. ಗರುಡಾಚಾರ್ ಪಾಳ್ಯದ ಐಟಿಪಿಎಲ್ ರಸ್ತೆಯಲ್ಲಿರುವ ಎಂಎಲ್‌ಆರ್ ಕನ್ವೆಷನ್ ಸೆಂಟರ್‌ನಲ್ಲಿ ಹಮಿಕೊಂಡಿದ್ದ ಸಂಚಾರ ಸಂಪರ್ಕ ದಿವಸ ಕಾರ್ಯಕ್ರಮದಲ್ಲಿ ಸಾರ್ವಜನಿಕರೊಬ್ಬರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಈಗಾಗಲೇ ನಾವು ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಪತ್ರ ಬರೆದಿದ್ದೇವೆ ಎಂದು ತಿಳಿಸಿದರು.

ತಿಂಗಳ 2ನೇ ಶನಿವಾರ ಮಾಸಿಕ ಜನ ಸಂಪರ್ಕ ದಿವಸ, 4ನೇ ಶನಿವಾರ ನಡೆಯುವ ಸಂಚಾರ ಸಂಪರ್ಕ ದಿವಸ ಕಾರ್ಯಕ್ರಮಗಳು ಇಂತಹ ಕಡೆ ನಡೆಯುತ್ತವೆ ಎಂದು ನಾವು ಸಂಬಂಧಪಟ್ಟ ಅಧಿಕಾರಿಗಳಿಗೆ ಈಗಾಗಲೇ ಪತ್ರ ಬರೆದು ತಿಳಿಸಿದ್ದೇವೆ. ಮುಂದೆ ನಡೆಯುವ ಈ ಎರಡೂ ಕಾರ್ಯಕ್ರಮಗಳ ಬಗ್ಗೆ ಸಂಬಂಧಪಟ್ಟ ಇಲಾಖೆಯ ಮುಖ್ಯಸ್ಥರಿಗೆ ಪತ್ರ ಬರೆದು ತಿಳಿಸಲಾಗುವುದು ಎಂದು ಆಯುಕ್ತರು ಭರವಸೆ ನೀಡಿದರು. ಫುಟ್‌ಪಾತ್‌ಗಳಲ್ಲಿ , ಮನೆಗಳ ಮುಂದೆ ಹಾಗೂ ಎಲ್ಲೆಂದರಲ್ಲಿ ವಾಹನಗಳನ್ನು ನಿ ಲ್ಲಿಸಿ ತಿಂಗಳಾದರೂ ತೆಗೆಯುವುದಿಲ್ಲ. ಇದರಿಂದ ಸಂಚಾರಕ್ಕೆ ತೊಂದರೆಯಾಗುತ್ತಿದೆ ಎಂದು ಸಾರ್ವಜನಿಕರು ಸಭೆಯಲ್ಲಿ ಹೇಳಿದಾಗ, ಪೂರ್ವ ಸಂಚಾರ ವಿಭಾಗದ ಪೊಲೀಸರು ಸ್ಥಳಕ್ಕೆ ಬಂದು ಕ್ರಮ ಕೈಗೊಳ್ಳಲಿದ್ದಾರೆ ಎಂದು ಅವರು ಭರವಸೆ ಕೊಟ್ಟರು. ಪ್ರತಿ ಸಭೆಯಲ್ಲೂ ಪೊಲೀಸರು ಮಾತ್ರ ಇರುತ್ತಾರೆ. ಸಂಬಂಧಿಸಿದ ಬಿಬಿಎಂಪಿ, ಬಿಡಬ್ಲ್ಯುಎಸ್‌ಎಸ್‌ಬಿ, ಬೆಸ್ಕಾಂ ಸೇರಿದಂತೆ ಇನ್ನಿತರ ಇಲಾಖೆ ಅಧಿಕಾರಿಗಳು ಬಂದರೆ ತಮ ಸಮಸ್ಯೆಯನ್ನು ಅವರ ಮುಂದೆ ಹೇಳಿ ಕೊಳ್ಳಬಹುದು.

ಹಾಗಾಗಿ ಸಭೆಗಳಿಗೆ ಅವರ ನ್ನು ಕರೆಸುವಂತೆ ಸಾರ್ವನಿಕರು ಮನವಿ ಮಾಡಿ ದರು. ಸಂಚಾರ ವಿಭಾಗದ ಜಂಟಿ ಪೊಲೀಸ್ ಆಯುಕ್ತ ಅನುಚೇತ್, ಪೂರ್ವ ಸಂಚಾರ ವಿಭಾಗದ ಡಿಸಿಪಿ ಕುಲದೀಪ್ ಕುಮಾರ್ ಆರ್.ಜೈನ್ ಉಪಸ್ಥಿತರಿದ್ದರು.

# ಆಂಬುಲೆನ್ಸ್‌ ನೀಡಲಾಗದ ದುಸ್ಥಿತಿಗೆ ಸರ್ಕಾರ

• ಉದುವಾಹಿನಿ, ಬೆಂಗಳೂರು

ಒಂದು ಆಂಬುಲೆನ್ಸ್ ನೀಡಲು ಕೈಲಾಗದ ದುಸ್ಥಿತಿ ರಾಜ್ಯ ಆರೋಗ್ಯ ಇಲಾಖೆಗೆ ಬಂದಿದೆಯೇ ಎಂದು ಜೆಡಿಎಸ್ ಆಕ್ರೋಶ ವ್ಯಕ್ತಪಡಿಸಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬದುಕಿದೆಯೆ ಅಥವಾ ಸತ್ತಿದೆಯೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರನ್ನು ಪ್ರಶ್ನಿಸಿದೆ.ತಂದೆಯನ್ನು ಕಳೆದುಕೊಂಡು ನೋವಿನಲ್ಲಿದ್ದ ಆ ಮಕ್ಕಳಿಗೆ ಮೃತದೇಹ ಸಾಗಿಸಲು ಕನಿಷ್ಠ ಆಂಬುಲೆನ್ಸ್ ಒದಗಿಸದಿರುವುದು ಅಮಾನವೀಯ ಮತ್ತು ರಾಜ್ಯದ ಜನರು ತಲೆ ತಗ್ಗಿಸುವಂತದ್ದು ಎಂದು ಹೇಳಿದೆ. ಆಂಬುಲೆನ್ಸ್ ಸಿಗದೆ ತಂದೆಯ ಮೃತದೇಹವನ್ನು ಮಕ್ಕಳು ಬೈಕ್‌ನಲ್ಲಿ ಕೊಂಡೊಯ್ದ ಹೃದಯ ವಿದ್ರಾವಕ ಘಟನೆ ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನ ವೈ.ಎನ್. ಹೊಸಕೋಟೆಯಲ್ಲಿ ನಡೆದಿದೆ ಎಂದು ಹೇಳಿದೆ. ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರಕ್ಕೆ ಕಿಂಚಿತ್ತೂ ಮಾನವೀಯತೆ ಇಲ್ಲವಾಗಿರುವುದಕ್ಕೆ ಈ ಮನಕಲಕುವ ಘಟನೆಯೇ ಸಾಕ್ಷಿ.

ಪಾವಗಡ ಕಾಂಗ್ರೆಸ್ ಶಾಸಕ ಎಚ್.ವಿ.ವೆಂಕಟೇಶ್ ಕ್ಷೇತ್ರದ ಅಭಿವೃದ್ಧಿ ಕಡೆಗಣಿಸಿ, ದ್ವೇಷ ರಾಜಕಾರಣ ಮಾಡುತ್ತಿರುವುದಕ್ಕೆ ಜನರು ಪರಿತಪಿಸುವಂತಾಗಿದೆ ಎಂದು ಜೆಡಿಎಸ್ ಆರೋಪಿಸಿದೆ.

# ಶ್ರಾದ್ಧವನ್ನು ಮಾಡುವಾಗ ತೊಂದರೆಗಳು ಬಂದರೆ ಹೇಗೆ ಪರಿಹಾರ ಮಾಡಬೇಕು?

• ವಿನೋದ ಕಾಮತ್


ಉದಯವಾಹಿನಿ ಚಿತ್ರ

'ಇಂತಹ ಒಂದು ಕಾರಣಕ್ಕಾಗಿ ಶ್ರಾದ್ಧವನ್ನು ಮಾಡಲು ಆಗುವುದಿಲ್ಲ' ಎಂದು ಯಾರಿಗೂ ಹೇಳಲು ಸಾಧ್ಯವಾಗದಷ್ಟು ಪರಿಹಾರ ಮಾರ್ಗಗಳನ್ನು ಹಿಂದೂಧರ್ಮದಲ್ಲಿ ಹೇಳಲಾಗಿದೆ. ಇದರಿಂದ ಪ್ರತಿಯೊಬ್ಬರಿಗೂ ಶ್ರಾದ್ಧವನ್ನು ಮಾಡುವುದು ಎಷ್ಟು ಅವಶ್ಯಕವಾಗಿದೆ ಎಂಬುದು ತಿಳಿಯುತ್ತದೆ.

ಯೋಗ್ಯ ಬ್ರಾಹ್ಮಣರು ಸಿಗದಿದ್ದರೆ ಯಾವ ಬ್ರಾಹ್ಮಣರು ಸಿಗುತ್ತಾರೆಯೋ, ಅವರಿಂದಲೇ ಶ್ರಾದ್ಧವನ್ನು ಮಾಡಿಸಿಕೊಳ್ಳಬೇಕು. ತಾಯಿಯ ಶ್ರಾದ್ಧಕ್ಕೆ ಬ್ರಾಹ್ಮಣರು ಸಿಗದಿದ್ದರೆ ಮುತ್ತೈದೆಯರನ್ನು ಕರೆದು ಶ್ರಾದ್ಧ ಮಾಡಬೇಕು. ಬ್ರಾಹ್ಮಣರು ಹೆಚ್ಚಿಗೆ ಸಿಗದಿದ್ದರೆ ಒಬ್ಬ ಬ್ರಾಹ್ಮಣನನ್ನು ಕರೆದು ಅವನನ್ನು ಪಿತೃಸ್ಥಾನದಲ್ಲಿ ಕುಳ್ಳಿರಿಸಿ ದೇವರ ಸ್ಥಾನದಲ್ಲಿ ಸಾಲಿಗ್ರಾಮ ಇತ್ಯಾದಿಗಳನ್ನು ಇಟ್ಟು, ಸಂಕಲ್ಪವನ್ನು ಮಾಡಿ ಶ್ರಾದ್ಧವನ್ನು ಮಾಡಬೇಕು ಮತ್ತು ಆ ಎಲೆಯನ್ನು ಹಸುವಿಗೆ ಕೊಡಬೇಕು ಅಥವಾ ನದಿ, ಕೆರೆ, ಸರೋವರ, ಬಾವಿ ಇತ್ಯಾದಿಗಳಲ್ಲಿ ವಿಸರ್ಜನೆ ಮಾಡಬೇಕು. ರಾಜಕಾರ್ಯ, ಕಾರಾಗೃಹವಾಸ, ರೋಗ ಅಥವಾ ಇತರ ಕಾರಣಗಳಿಂದಾಗಿ ತನಗೆ ಶ್ರಾದ್ಧವನ್ನು ಮಾಡಲು ಆಗದಿದ್ದರೆ ಪುತ್ರ, ಶಿಷ್ಯ ಅಥವಾ ಬ್ರಾಹ್ಮಣರ ಮೂಲಕ ಶ್ರಾದ್ಧವನ್ನು ಮಾಡಿಸಬೇಕು.

ಸಂಕಲ್ಪ ವಿಧಿಯನ್ನು ಮಾಡಬೇಕು, ಅಂದರೆ ಪಿಂಡ ದಾನವನ್ನು ಹೊರತುಪಡಿಸಿ ಬಾಕಿ ಎಲ್ಲಾ ವಿಧಿಗಳನ್ನು ಮಾಡಬೇಕು. ಬ್ರಹ್ಮಾರ್ಪಣವಿಧಿಯನ್ನು ಮಾಡಬೇಕು, ಅಂದರೆ ಬ್ರಾಹ್ಮಣನನ್ನು ಕರೆದು ಅವನು ಕೈಕಾಲುಗಳನ್ನು ತೊಳೆದುಕೊಂಡ ಮೇಲೆ ಅವನನ್ನು ಆಸನದ ಮೇಲೆ ಕುಳ್ಳಿರಿಸಿ ಪಂಚೋಪಚಾರ ಪೂಜೆ ಮಾಡಿ ಭೋಜನ ಬಡಿಸಬೇಕು. ಹೋಮಶ್ರಾದ್ಧ ಮಾಡಬೇಕು, ಅಂದರೆ ಹಣ ಮತ್ತು ಬ್ರಾಹ್ಮಣರು ಇಲ್ಲದಿದ್ದರೆ ಅನ್ನವನ್ನು ಬೇಯಿಸಿ 'ಊದೀರತಾಮವರ' ಈ ಸೂಕ್ತದ ಪ್ರತಿಯೊಂದು ಋಚೆಯನ್ನು ಹೇಳಿ ಹೋಮವನ್ನು ಮಾಡಬೇಕು. (ಇದ ನ್ನು ಉತ್ತರಕ್ರಿಯೆಯ ಸಮಯದಲ್ಲಿ ನೋಡಬಹುದು.)

### ಮುಂದೆ ಹೇಳಿದಂತೆ ಶ್ರಾದ್ಧವನ್ನು ಮಾಡಬೇಕು

**ನೀರು ತುಂಬಿದ ತಂಬಿಗೆ ನೀಡಬೇಕು, ಸ್ವಲ್ಪ ಅನ್ನವನ್ನು ಕೊಡಬೇಕು. ಎಳ್ಳನ್ನು ಅರ್ಪಿಸಬೇಕು. ಸ್ವಲ್ಪ ದಕ್ಷಿಣೆ ಕೊಡಬೇಕು. ಯಥಾ ಶಕ್ತಿ ಧಾನ್ಯ ಕೊಡಬೇಕು. ಹಸುವಿಗೆ ಹುಲ್ಲನ್ನು ಹಾಕಬೇಕು. ವಿಧಿ ಮುಂತಾದವುಗಳನ್ನು ಮಾಡದೇ ಪಿಂಡವನ್ನು ಕೊಡಬೇಕು. ಸ್ನಾನ ಮಾಡಿ ಎಳ್ಳು ನೀರಿನಿಂದ ಪಿತೃತರ್ಪಣ ಕೊಡಬೇಕು, ಶ್ರಾದ್ಧದ ತಿಥಿಯಂದು ಉಪವಾಸ ಮಾಡಬೇಕು. ಶ್ರಾದ್ಧದ ದಿನ ಶ್ರಾದ್ಧವಿಧಿಯನ್ನು ಓದಬೇಕು.**

**ಮೇಲೆ ಹೇಳಿದ ಯಾವುದನ್ನೂ ಮಾಡಲು ಸಾಧ್ಯವಾಗದೇ ಇದ್ದಾಗ ಮುಂದೆ ನೀಡಿದಂತೆ ಶ್ರಾದ್ಧವನ್ನು ಮಾಡಬೇಕು:** ಅಡವಿಗೆ ಹೋಗಿ ಎರಡೂ ಕೈಗಳನ್ನು ಮೇಲೆ ಮಾಡಿ ತನ್ನ ಕಂಕಳುಗಳನ್ನು ತೋರಿಸುತ್ತಾ ಸೂರ್ಯಾದಿ ಲೋಕ ಪಾಲಕರಿಗೆ ಹುಲ್ಲುಕಡ್ಡಿಯನ್ನು ತೋರಿಸಿ ಮುಂದಿನಂತೆ ಹೇಳಬೇಕು: 'ನನ್ನ ಹತ್ತಿರ ಶ್ರಾದ್ಧೋಪಯೋಗಿ ಧನಸಂಪತ್ತು ಇತ್ಯಾದಿ ಏನೂ ಇಲ್ಲ. ನಾನು ಎಲ್ಲಾ ಪಿತೃಗಳಿಗೆ ನಮಸ್ಕಾರ ಮಾಡುತ್ತೇನೆ. ನನ್ನ ಭಕ್ತಿಯಿಂದ ನನ್ನ ಎಲ್ಲಾ ಪಿತೃಗಳು ತೃಪ್ತರಾಗಲಿ. ನಾನು ನನ್ನ ಕೈಗಳನ್ನು ಮೇಲೆ ಎತ್ತಿದ್ದೇನೆ'.

2. ನಿರ್ಜನ ಅರಣ್ಯಕ್ಕೆ ಹೋಗಿ ಕೈಗಳನ್ನು ಮೇಲೆತ್ತಿ 'ನಾನು ಧನರಹಿತ ಮತ್ತು ಅನ್ನರಹಿತವಾಗಿದ್ದೇನೆ. ನನ್ನನ್ನು ಪಿತೃಋಣದಿಂದ ಮುಕ್ತಗೊಳಿಸಿರಿ' ಎಂದು ಗಟ್ಟಿಯಾಗಿ ಹೇಳಬೇಕು.

3. ದಕ್ಷಿಣ ದಿಕ್ಕಿಗೆ ಮುಖ ಮಾಡಿ ಅಳಬೇಕು.

ಮೇಲಿನ ಎಲ್ಲಾ ಪ್ರಕಾರಗಳಿಂದ ಪ್ರತಿವರ್ಷ ಬರುವ ಶ್ರಾದ್ಧದ ದಿನ ಪಿತೃಗಳನ್ನು ಉದ್ದೇಶಿಸಿ ಯಾವುದಾದರೊಂದು ಶ್ರಾದ್ಧವನ್ನು ಮಾಡಬೇಕು, ಯಾವುದೇ ಕಾರಣಕ್ಕಾಗಿ ಶ್ರಾದ್ಧವನ್ನು ಮಾಡದೇ ಇರಬಾರದು ಎಂಬುದೇ ಇದರ ಮುಖ್ಯ ಉದ್ದೇಶವಾಗಿದೆ ಎನ್ನುವುದು ಗಮನಕ್ಕೆ ಬರುತ್ತದೆ.

ಶ್ರಾದ್ಧವಿಧಿಗಳಿಗಾಗಿ ಬ್ರಾಹ್ಮಣರು ಸಿಗದೇ ಇದ್ದಾಗ, ಅವರಿಗೆ ಪರ್ಯಾಯವೆಂದು ಇತರ ಪದ್ಧತಿಗಳಿಂದ ಶ್ರಾದ್ಧವನ್ನು ಮಾಡಿದರೆ ಅದರಿಂದ ಶ್ರಾದ್ಧವಿಧಿಯ ಲಾಭವು ಸಂಪೂರ್ಣ ಸಿಗುತ್ತದೆಯೇನು ?

ಶ್ರಾದ್ಧವಿಧಿಗಳಿಗಾಗಿ ಬ್ರಾಹ್ಮಣರು ಸಿಗದೇ ಇದ್ದಲ್ಲಿ ಹಿಂದೂ ಧರ್ಮಶಾಸ್ತ್ರದಲ್ಲಿ ಪರ್ಯಾಯಗಳನ್ನು ಹೇಳಲಾಗಿದೆ. ಆ ಪರ್ಯಾಯಗಳನ್ನು ಭಾವಪೂರ್ಣವಾಗಿ ಮಾಡಿದರೆ ಆ ಶ್ರಾದ್ಧವಿಧಿಯ ಲಾಭವು ಖಂಡಿತವಾಗಿಯೂ ಸಿಗುತ್ತದೆ. ಆದರೆ ಕೆಲವರು 'ಬ್ರಾಹ್ಮಣರೇ ಸಿಗುವುದಿಲ್ಲ' ಎಂಬ ನಕಾರಾತ್ಮಕ ದೃಷ್ಟಿಕೋನದಿಂದ ಬ್ರಾಹ್ಮಣರನ್ನು ಹುಡುಕಲು ಹೋಗುವುದೇ ಇಲ್ಲ ಅಥವಾ ಬ್ರಾಹ್ಮಣರು ಸಿಕ್ಕಿದರೂ ಮನೆಯಲ್ಲಿ ಪರಂಪರೆಗನುಸಾರವಾಗಿ ನಡೆದುಕೊಂಡು ಬಂದಿರುವ ಯಾವುದಾದರೊಂದು ಪದ್ಧತಿಯಿಂದ ಶ್ರಾದ್ಧವನ್ನು ಮಾಡುತ್ತಾರೆ. ಇದರಿಂದ ಶಾಸ್ತ್ರದಂತೆ ಶ್ರಾದ್ಧವಿಧಿಗಳನ್ನು ಮಾಡುವುದರ ತುಲನೆಯಲ್ಲಿ ಕಡಿಮೆ ಲಾಭವು ಸಿಗುತ್ತದೆ ಅಥವಾ ಸಿಗದೇ ಇರುವ ಸಾಧ್ಯತೆಯೂ ಇದೆ.

# ಕರ್ತವ್ಯಕ್ಕೆ ಬಾರದ ಪಿಜಿ ವೈದ್ಯರ ಹೊರಹಾಕಿ: ಗೋವಿಂದ ಕಾರಜೋಳ

## • ಜಿಲ್ಲೆಯಲ್ಲಿ ಬಡವರ ಸಂಖ್ಯೆಯೇ ಹೆಚ್ಚಿರುವುದರಿಂದ ಜಿಲ್ಲಾ ಆಸ್ಪತ್ರೆಯ ವೈದ್ಯರ ಮೇಲೆ ತೀವ್ರ ಒತ್ತಡ

• ಉದಯವಾಹಿನಿ ಚಿತ್ರದುರ್ಗ


ಉದಯವಾಹಿನಿ ಚಿತ್ರ

ವೈದ್ಯರ ವಿರುದ್ಧ ಕ್ರಮ

ಸಂಸದ ಗೋವಿಂದ ಕಾರಜೋಳ ಜಿಲ್ಲಾ ಆಸ್ಪತ್ರೆಗೆ ದಿಢೀರ್ ಭೇಟಿ ನೀಡಿ ಅಲ್ಲಿಯ ಅವ್ಯವಸ್ಥೆಗಳನ್ನು ಕಂಡು ಆಶ್ಚರ್ಯಚಕಿತರಾದರು. ಕೇಂದ್ರ ಸರ್ಕಾರದ ಡಿಎನ್‌ಬಿ (ಡಿಪ್ಲೊಮ್ಯಾಟ್ ನ್ಯಾಷನಲ್ ಬೋರ್ಡ್) ಅಡಿ ವೈದ್ಯಕೀಯ ಸ್ನಾತಕೋತ್ತರ ಪದವಿ ಪಡೆಯುತ್ತಿರುವ ತರಬೇತಿ ವೈದ್ಯರು ಕರ್ತವ್ಯಕ್ಕೆ ಬಾರದಿರುವುದನ್ನು ಕೇಳಿ ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾ ಆಸ್ಪತ್ರೆಯಲ್ಲಿ ದಿನೇದಿನೇ ರೋಗಿಗಳ ಸಂಖ್ಯೆ ಹೆಚ್ಚಳವಾಗುತ್ತಿದೆ. ಜಿಲ್ಲೆಯಲ್ಲಿ ಬಡವರ ಸಂಖ್ಯೆಯೇ ಹೆಚ್ಚಿರುವುದರಿಂದ ಜಿಲ್ಲಾ ಆಸ್ಪತ್ರೆಯ ವೈದ್ಯರ ಮೇಲೆ ಒತ್ತಡ ತೀವ್ರಗೊಂಡಿದೆ. ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಡಿಎನ್‌ಬಿ ಯೋಜನೆಯಡಿ 30 ಮಂದಿ ಕಿರಿಯ ವೈದ್ಯರು ಸ್ನಾತಕೋತ್ತರ ಪದವಿ ಪಡೆಯುತ್ತಿದ್ದಾರೆ. ಅವರು ಕರ್ತ್ಯವ್ಯಕ್ಕೆ ಗೈರಾಗುತ್ತಿರುವುದು ಅಕ್ಷಮ್ಯ. ಅಂಥವರ ಸ್ನಾತಕೋತ್ತರ ಪದವಿ ರದ್ದುಮಾಡಿ ಹೊರಹಾಕಲು ಕ್ರಮ ವಹಿಸಲಾಗುವುದು' ಎಂದು ಎಚ್ಚರಿಕೆ ನೀಡಿದರು. ಪ್ರಾದೇಶಿಕ ಆಯುಕ್ತ ಆದಿತ್ಯ ಬಿಸ್ವಾಸ್ ಅವರಿಗೆ ಸ್ಥಳದಲ್ಲೇ ಕರೆ ಮಾಡಿದ ಸಂಸದರು ಪಿ.ಜಿ. ಕಲಿಯುತ್ತಿರುವ ವೈದ್ಯರಿಗೆ ಸರ್ಕಾರ ಸಂಬಳ ನೀಡುತ್ತಿದೆ. ನಿಯಮಾನುಸಾರ ಅವರು ಜಿಲ್ಲಾ ಆಸ್ಪತ್ರೆಯಲ್ಲಿ ಕೆಲಸ ಮಾಡಬೇಕು.

ವೈದ್ಯರಿಗೆ ಸಹಾಯ ಮಾಡಬೇಕು. ಅದನ್ನು ಬಿಟ್ಟು ಗುಂಪುಗಾರಿಕೆ ಮಾಡುತ್ತಿದ್ದಾರೆ. ಬೇಕಾದಾಗ ಬಂದು ಹೋಗುತ್ತಾರೆ ಎಂಬ ದೂರುಗಳಿವೆ. ಆಸ್ಪತ್ರೆಗೆ ಬಂದು ಸಭೆ ನಡೆಸಿ ನಿರ್ಲಕ್ಷ್ಯ ತೋರಿಸುತ್ತಿರುವ ಕಿರಿಯ ವೈದ್ಯರ ವಿರುದ್ಧ ಕ್ರಮ ಜರುಗಿಸಬೇಕು' ಎಂದು ಸೂಚನೆ ನೀಡಿದರು.

ಆಸ್ಪತ್ರೆಯ ಅವ್ಯವಸ್ಥೆಗಳ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಗೋವಿಂದ ಕಾರಜೋಳ ನನ್ನ ಇಷ್ಟು ವರ್ಷದ ಅನುಭವದಲ್ಲಿ ಇಷ್ಟೊಂದು ಅವ್ಯವಸ್ಥೆಗಳನ್ನು ಯಾವ ಆಸ್ಪತ್ರೆಯಲ್ಲೂ ನೋಡಿಲ್ಲ. ಬಡಜನರಿಗೆ ಸಮರ್ಪಕವಾಗಿ ಚಿಕಿತ್ಸೆ ದೊರೆಯುತ್ತಿಲ್ಲ. ರಕ್ತ ಪರೀಕ್ಷೆ, ಸ್ಕ್ಯಾನಿಂಗ್, ಎಕ್ಸ್‌ರೇ ಸೇವೆಗಳಿಗೆ ಜನ ಪರದಾಡುತ್ತಿದ್ದಾರೆ. ಆಸ್ಪತ್ರೆಗೆ ಬೇಕಾದ ಅವಶ್ಯಕತೆಗಳನ್ನು ಪಟ್ಟಿ ಮಾಡಿ ಕೊಡಿ. ಬಡ ರೋಗಿಗಳಿಗೆ ಉತ್ತಮ ಚಿಕಿತ್ಸೆ ಸಿಗುವಂತೆ ಮಾಡುವ ಎಲ್ಲಾ ರೀತಿಯ ಕ್ರಮ ಕೈಗೊಳ್ಳಿ ಎಂದು ಸೂಚನೆ ನೀಡಿದರು.

> ಆಸ್ಪತ್ರೆಯಲ್ಲಿ ವೈದ್ಯರು, ಶುಶ್ರೂಷಕರು ಹಾಗೂ ಪ್ರಯೋಗಾಲಯ ಸಿಬ್ಬಂದಿಯ ಕೊರತೆ ಕಾಡುತ್ತಿದೆ. ಸರ್ಕಾರದ ಮಾರ್ಗಸೂಚಿ ಅನ್ವಯ ನೇಮಕಾತಿ ಮಾಡಿಕೊಳ್ಳಬೇಕಾಗಿದೆ. ಜಿಲ್ಲಾಧಿಕಾರಿಯೇ ನೇರವಾಗಿ ವೈದ್ಯರನ್ನು ನೇಮಕ ಮಾಡಿಕೊಳ್ಳಲು ಅಧಿಕಾರ ನೀಡಬೇಕು ಎಂದು ಕೋರಲಾಗಿದೆ. ಆಯುಷ್ ವೈದ್ಯರನ್ನಾದರೂ ನೇಮಕ ಮಾಡಿಕೊಂಡರೆ ಸಮಸ್ಯೆ ಕೊಂಚ ಬಗೆಹರಿಯಬಹುದು -ಕಾರಜೋಳ

**ಖಾಸಗಿ ಆಸ್ಪತ್ರೆ ಸೇವೆ**

ಡಾ.ರವೀಂದ್ರ ಅವರು ನಗರದಲ್ಲಿ ಖಾಸಗಿ ನರ್ಸಿಂಗ್ ಹೋಂ ನಡೆಸುತ್ತಿದ್ದಾರೆ. ಅವರು ಜಿಲ್ಲಾ ಆಸ್ಪತ್ರೆಯಲ್ಲಿ ಇರುವುದಕ್ಕಿಂತ ಹೆಚ್ಚಾಗಿ ನರ್ಸಿಂಗ್ ಹೋಂನಲ್ಲೇ ಇರುತ್ತಾರೆ. ಅವರು ಮಾತ್ರವಲ್ಲದೇ ಹಲವು ವೈದ್ಯರು ಜಿಲ್ಲಾ ಆಸ್ಪತ್ರೆಗೆ ಬಾರದೇ ಖಾಸಗಿ ಸೇವೆ ನೀಡುತ್ತಿದ್ದಾರೆ' ಎಂದು ಆರೋಪಿಸಿದರು.

ಜಿಲ್ಲಾ ಆಸ್ಪತ್ರೆ 450 ಹಾಸಿಗೆ ಸಾಮರ್ಥ್ಯವನ್ನು ಹೊಂದಿದೆ. ಆದರೆ 650 ಹಾಸಿಗೆ ಸಾಮರ್ಥ್ಯಕ್ಕೆ ಮೇಲ್ದರ್ಜೆಗೆ ಏರಿಸುವ ಅವಶ್ಯಕತೆ ಇದೆ. ನಾನು ಕೂಡ ಈ ಬಗ್ಗೆ ಸಚಿವರು, ಅಧಿಕಾರಿಗಳ ಜೊತೆ ಮಾತನಾಡುತ್ತೇನೆ. ಸದ್ಯ ನಿರ್ಮಾಣಗೊಳ್ಳುತ್ತಿರುವ ಆಸ್ಪತ್ರೆ, ವೈದ್ಯಕೀಯ ಕಾಲೇಜು ಕಟ್ಟಡ ಕಾಮಗಾರಿ ತಡವಾಗಬಹುದು. ಹೀಗಾಗಿ ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಸೌಲಭ್ಯಗಳು ಸಿಗುವ ರೀತಿಯಲ್ಲಿ ತುರ್ತಾಗಿ ಕ್ರಮ ವಹಿಸಬೇಕಾಗಿದೆ' ಎಂದರು.

ಜನರು ನಗರ ಪ್ರದೇಶಕ್ಕೆ ಬಂದು ನೆಲೆಸುತ್ತಿರುವ ಕಾರಣ ಜಿಲ್ಲಾ ಆಸ್ಪತ್ರೆಗೆ ಹೊರೆಯಾಗುತ್ತಿದೆ. ಗ್ರಾಮೀಣ ಭಾಗದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರಗಳಿದ್ದರೂ, ಅಲ್ಲಿ ಮೂಲ ಸೌಲಭ್ಯಗಳು ದೊರೆಯುತ್ತಿದ್ದರೂ ಜನರು ಜಿಲ್ಲಾ ಆಸ್ಪತ್ರೆಯನ್ನೇ ನೆಚ್ಚಿಕೊಂಡಿದ್ದಾರೆ. ಇದರಿಂದ ಹೊರೆ ಮತ್ತು ಹೆಚ್ಚುತ್ತಲೇ ಇದೆ' ಎಂದರು.

ಕಿರಿಯ ವೈದ್ಯರ ವರ್ತನೆಗಳ ಬಗ್ಗೆ ಸ್ಥಳದಲ್ಲಿದ್ದ ತಜ್ಞ ವೈದ್ಯರು ದೂರುಗಳ ಮಳೆ ಸುರಿಸಿದರು. 'ವಿವಿಧ ಪಾಳಿಯಲ್ಲಿ ಕರ್ತವ್ಯಕ್ಕೆ ಹಾಜರಾಗಿ ಕೆಲಸ ಮಾಡುವಂತೆ ಹೇಳಿದರೆ ನಮ್ಮ ವಿರುದ್ಧವೇ ಜಗಳಕ್ಕೆ ಬರುತ್ತಾರೆ. ಈಚೆಗೆ ಕೆಲವರು ಹಲ್ಲೆಗೂ ಮುಂದಾಗಿದ್ದಾರೆ. ಈ ಬಗ್ಗೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ ಅವರಿಗೆ ದೂರು ನೀಡಿದ್ದೆವು.

ಆದರೆ ಅವರು ಯಾವುದೇ ಕ್ರಮ ಕೈಗೊಳ್ಳಲಿಲ್ಲ. ಡಾ.ರವೀಂದ್ರ ಅವರ ಕುಮ್ಮಕ್ಕಿನಿಂದಲೇ ತರಬೇತಿ ವೈದ್ಯರು ಸೇವೆ ಮಾಡಲು ನಿರ್ಲಕ್ಷ್ಯ ತೋರಿಸುತ್ತಿದ್ದಾರೆ' ಎಂದು ಆರೋಪಿಸಿದರು. ಸಂಸದರು ಆಸ್ಪತ್ರೆಗೆ ಬಂದಾಗ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ ಗೈರಾಗಿದ್ದರ ಬಗ್ಗೆ ಕೆಲವರು ಆಕ್ಷೇಪ ವ್ಯಕ್ತಪಡಿಸಿದರು.

---

# ಮಾನಸಿಕ ರೋಗಿಗಳಿಗೆ ಪ್ರೀತಿಯ ಆರೈಕೆ ಮುಖ್ಯ: ಡಾ.ನಾಗರಾಜ್ ಜಿ.ಒ

• ಉದಯವಾಹಿನಿ ಚಿತ್ರದುರ್ಗ


ಉದಯವಾಹಿನಿ ಚಿತ್ರ

ಅಲ್ಜೈಮರ್ಸ್ ಜಾಗೃತಿ ಮಾಸಾಚರಣೆ ಕಾರ್ಯಕ್ರಮ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕುಟುಂಬ ಕಲ್ಯಾಣ ಕಛೇರಿ ಚಿತ್ರದುರ್ಗ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಚಿತ್ರದುರ್ಗ, ಪ್ರಾಥಮಿಕ ಆರೋಗ್ಯ ಕೇಂದ್ರ, ಬೆಳಗಟ್ಟ ಇವರುಗಳ ಸಂಯುಕ್ತಾಶ್ರಯದಲ್ಲಿ ' ವಿಶ್ವ ಅಲ್ಜೈಮರ್ಸ್ ದಿನಾಚರಣೆ2024' ಅಂಗವಾಗಿ ಗೊನೂರು ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ ಶನಿವಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ|| ನಾಗರಾಜ್ ಜಿ ಒ ಚಾಲನೆ ನೀಡಿದರು. ಕಾರ್ಯಕ್ರಮ ಕುರಿತು ಮಾತನಾಡಿ ಅವರು ಆಲ್ಜೈಮರ್ಸ್ ತಿಂಗಳ ಭಾಗವಾದ ವಿಶ್ವ ಆಲ್ಜೈಮರ್ಸ್ ದಿನವನ್ನು ಪ್ರತಿ ವರ್ಷ ಸೆಪ್ಟೆಂಬರ್ 21 ರಂದು ಆಚರಿಸಲಾಗುತ್ತದೆ , ಇದು ಬುದ್ಧಿಮಾಂದ್ಯತೆ ಮತ್ತು ಆಲ್‌ಝೈಮರ್ ತಪ್ಪು ಕಲ್ಪನೆಯ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಮತ್ತು ಆಲ್ಜೈಮರ್ -ಬಾಧಿತ ರೋಗಿಗಳ ಕುಟುಂಬಗಳನ್ನು ನಿಭಾಯಿಸಲು ಮತ್ತು ರೋಗದ ವಿರುದ್ಧ ಹೋರಾಡಲು ಈ ದಿನವನ್ನು ಆಚರಿಸಲಾಗುತ್ತದೆ. ಮಾನಸಿಕ ರೋಗಿಗಳಿಗೆ ಪ್ರೀತಿಯ ಆರೈಕೆ ಮುಖ್ಯವಾಗಿದ್ದು ಆರಂಭದಲ್ಲೇ ಪತ್ತೆಹಚ್ಚಿ ರೋಗಿಗೆ ಚಿಕಿತ್ಸೆ ನೀಡುವುದು ಮತ್ತು ನರಸಂಬಂಧಿ ರೋಗಲಕ್ಷಣಗಳು ಕಂಡುಬಂದಲ್ಲಿ ದಯವಿಟ್ಟು ಕೂಡಲೆ ನರರೋಗ ತಜ್ಞರನ್ನು ಸಂಪರ್ಕಿಸಿ ಎಂದು ತಿಳಿಸಿದರು.

ನಿರಾಶ್ರಿತರ ಪರಿಹಾರ ಕೇಂದ್ರದ ಅಧೀಕ್ಷಕ ಮಹದೇವ್ ಅಧ್ಯಕ್ಷತೆ ವಹಿಸಿ ಬೆಳಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತಾಧಿಕಾರಿ ಡಾ|| ನಳಿ ನಾಕ್ಷಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಈ ಕಾರ್ಯಕ್ರಮದಲ್ಲಿ ಕ್ಲೀನಿಕ್ ಸೈಕಾಲಜಿಸ್ಟ್ ಶ್ರೀಧರ್, ಕಭಿ ಜಿಲ್ಲಾ ಸಂಯೋಜಕ ಶರತ್ ಪಿ ಉಪಸ್ಥಿತರಿದ್ದರು.

ಆರೋಗ್ಯ ನಿರೀಕ್ಷಣಾಧಿಕಾರಿ ಮಹೇಶ್ ಡಿ. ನಿರೂಪಣೆ ಮಾಡಿದರು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಬೆಳಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದ ಯೋಗ ತರಬೇತುದಾರ ರವಿ ಕೆ.ಅಂಬೇಕರ್ ನಿರಾಶ್ರಿತರ ಪರಿಹಾರ ಕೇಂದ್ರದ ಸದಸ್ಯರಿಗೆ ಮಾನಸಿಕ ರೋಗಗಳಿಗೆ ಸಂಬಂಧಿಸಿದಂತೆ ಯೋಗ ಪ್ರಾಣಾಯಾಮ ತರಬೇತಿ ನೀಡಿ ಮನಸ್ಸಿನ ಸ್ತಿರತೆಗೆ ಪ್ರತಿದಿನ ದೈಹಿಕ ಚಟುವಟಿಕೆ ಜೊತೆಗೆ ಯೋಗಾಭ್ಯಾಸ ಮಾಡುವಂತೆ ತಿಳಿಸಿದರು.

> ಅಲ್ಜೈಮರ್ಸ್ ಜಾಗೃತಿ ಮಾಸಾಚರಣೆ 2024 ಈ ವರ್ಷದ ಘೋಷವಾಕ್ಯವಾದ ಡಿಮೆನ್ಶಿಯ ಮೇಲೆ ಕಾರ್ಯನಿರ್ವಹಿಸುವ ಸಮಯ, ಅಲ್ಜೈಮರ್ಸ್ ಮೇಲೆ ಕಾರ್ಯನಿರ್ವಹಿಸುವ ಸಮಯ ಎಂಬುದಾಗಿದ್ದು ಅದರಂತೆ ನಾವು ಆಲ್ಜೈಮರ್ಸ್ ಮತ್ತು ಮೆದುಳಿನ ಜಾಗೃತಿ ತಿಂಗಳನ್ನು ಆಚರಿಸುತ್ತಿರವ ಈ ಸಂಧರ್ಭದಲ್ಲಿ ಆಲ್ಜೈಮರ್ ಮತ್ತು ಬುದ್ಧಿಮಾಂದ್ಯತೆ ಹೊಂದಿರುವವರನ್ನು ಕಾಳಜಿ ವಹಿಸುವ ಆರೈಕೆ ಮಾಡು ವವರ ನಿಜವಾದ ಸಮರ್ಪಣೆಯನ್ನು ಗೌರವಿ ಸೋಣ -ಡಾ. ಕಿರಣ್ ಗೌಡ ಆರ್, ನರರೋಗ ತಜ್ಞರಾದ

---

# ಲಿಂಗತ್ವ ಅಲ್ಪಸಂಖ್ಯಾತರಿಗೆ ಸೌಲಭ್ಯ ತಲುಪಿಸಿ

• ಉದಯವಾಹಿನಿ ಉಡುಪಿ


ಉದಯವಾಹಿನಿ ಚಿತ್ರ

ಸರ್ಕಾರ ಲಿಂಗತ್ವ ಅಲ್ಪಸಂಖ್ಯಾತರ ಶ್ರೇಯೋಭಿವೃದ್ಧಿಗಾಗಿ ಅನೇಕ ಯೋಜನೆ ಹಾಗೂ ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ಈ ಯೋಜನೆಗಳ ಬಗ್ಗೆ ಅವರಲ್ಲಿ ಅರಿವು ಮೂಡಿಸಿ ಅವರನ್ನು ಇದರ ಫಲಾನುಭವಿಗಳನ್ನಾಗಿಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ವಿದ್ಯಾಕುಮಾರಿ ಸೂಚನೆ ನೀಡಿದರು.

ಮಣಿಪಾಲದ ರಜತಾದ್ರಿಯ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಲಿಂಗತ್ವ ಅಲ್ಪಸಂಖ್ಯಾತರ ಕುಂದು ಕೊರತೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಿಂಗತ್ವ ಅಲ್ಪಸಂಖ್ಯಾತರು ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಪುನರ್ವಸತಿ ಯೋಜನೆಯಡಿ ಸ್ವಯಂ ಉದ್ಯೋಗ ಕೈಗೊಳ್ಳಲು ಪ್ರೋತ್ಸಾಹಧನ ನೀಡಲಾಗುತ್ತಿದೆ. ಸಮುದಾಯ ಆಧಾರಿತ ಸಂಸ್ಥೆಯಲ್ಲಿ ನೋಂದಣಿ ಆಗಿರುವವರು ಈ ಯೋಜನೆಯ ಲಾಭ ಪಡೆಯಬಹುದು ಎಂದು ಹೇಳಿದರು. ಪ್ರಸ್ತುತ ಸಾಲಿನಲ್ಲಿ 15 ಜನರಿಗೆ ಅರ್ಜಿ ಸಲ್ಲಿಸಲು ಅವಕಾಶವಿದೆ. ಆದರೆ ಒಬ್ಬರೇ ಅರ್ಜಿ ಸಲಿಸಿದ್ದು, ಈ ಯೋಜನೆಯಡಿ ಹೆಚ್ಚು ಜನರು ಅರ್ಜಿ ಸಲ್ಲಿಸುವುದರೊಂದಿಗೆ ಇದರ ಸದುಪಯೋಗ ಪಡೆಯಬೇಕು ಎಂದರು. ಸರ್ಕಾರಿ ಉದ್ಯೋಗಗಳಲ್ಲಿ ಲಿಂಗತ್ವ ಅಲ್ಪಸಂಖ್ಯಾತರಿಗೆ ಮೀಸಲಾತಿ ನೀಡಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಲಿಂಗತ್ವ ಅಲ್ಪಸಂಖ್ಯಾತರು ಸಭೆಯ ಮುಂದಿರಿಸಿದರು.

> ಜಿಲ್ಲೆಯಲ್ಲಿ ಇರುವ ಲಿಂಗತ್ವ ಅಲ್ಪ ಸಂಖ್ಯಾತರು ಸರ್ಕಾರದ ಯೋಜನೆಗಳ ಲಾಭ ಪಡೆಯುವುದರೊಂದಿಗೆ ಸ್ವಯಂ ಉದ್ಯೋಗ ಕೈಗೊಂಡು ಆರ್ಥಿಕವಾಗಿ ಸಬಲರಾಗಬೇಕು -ಜಿಲ್ಲಾಧಿಕಾರಿ

---

# ಕ.ಕ ಭಾಗದ ಸಮಸ್ಯೆಗಳು ನೂರೆಂಟು: ನಾಡಗೌಡ

• ಉದಯವಾಹಿನಿ, ಸಿಂಧನೂರು



ಉದಯವಾಹಿನಿ ಚಿತ್ರ

ಕಲ್ಯಾಣ ಕರ್ನಾಟಕ ಭಾಗದ ನೂರೆಂಟು ಸಮಸ್ಯೆ ಹಾಗೂ ತಾಲ್ಲೂಕಿನಲ್ಲಿ ಇರುವ ಜ್ವಲಂತ ಸಮಸ್ಯೆಗಳ ಬಗ್ಗೆ ಸಂಪುಟ ಸಭೆಯಲ್ಲಿ ದ್ವನಿ ಎತ್ತಿದ ಇರುವುದು ನೋಡಿದರೆ ಯಾವ ಪುರುಷಾರ್ಥಕ್ಕೆ ಸಂಪುಟ ಸಭೆ ನಡೆಸಲಾಗುತ್ತಿದೆ. ಕಲಬುರ್ಗಿಯಲ್ಲಿ ಎಂದು ಮಾಜಿ ಸಚಿವ ಹಾಗೂ ಕೆಓಎಫ್ ರಾಜ್ಯಾಧ್ಯಕ್ಷ ವೆಂಕಟರಾವ್ ನಾಡಗೌಡ ಅವರ ವ್ಯಂಗ್ಯ ಮಾಡಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕ.ಕ. ಭಾಗದ ಸಮಸ್ಯೆಗಳು ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ನಿರ್ಧಾರಗಳು ಬಗ್ಗೆ ಜನರಲ್ಲಿ ನೀರೀಕ್ಷೆ ಇತ್ತು. ಚರ್ಚಿಸದೆ ಇರುವುದು ದುರಂತದ ವಿಷಯವಾಗಿದೆ. ಎಂದು ಹೇಳಿದರು. ಶಾಸಕ ಹಂಪನಗೌಡ ಬಾದರ್ಲಿ ತಾಲೂಕಿನಲ್ಲಿ ಅಭಿವೃದ್ಧಿ ಈ ಭಾಗಕ್ಕೆ ಅಲ್ಪಸಂಖ್ಯಾತರ ಬಾಲಕಿಯರ ಪದವಿ ಪೂರ್ವ ಕಾಲೇಜುಗಳ ಮಂಜೂರು ಮಾಡಿದ್ದು. ಈ ಅವಕಾಶ ಸಿಂಧನೂರಿಗೆ ಇಲ್ಲದಾಯಿತು.

ನಗರದಲ್ಲಿ ಕುಡಿಯುವ ಕೆರೆ ಒಡೆದು ಹಲವಾರು ತಿಂಗಳು ಕಳೆದರೂ ಅದರ ಕಡೆಗೆ ಗಮನ ಹರಿಸಿದೆ ಇರುವುದು ಎಂತಹಾ ವಿಪರ್ಯಾಸ. ಮಳೆಗಾಲದಲ್ಲಿ ನಗರದಲ್ಲಿ ವಾರಕ್ಕೊಮ್ಮೆ ನೀರು ಸರಬರಾಜು ಮಾಡುತ್ತಾರೆ ಎಂದರೆ ನಾಚಿಕೆಗೇಡಿನ ಸಂಗತಿ ಎಂದರೆ ತಪ್ಪಾಗಲಾರದು ಎಂದು ಮಾಜಿ ಸಚಿವ ನಾಡಗೌಡ ಶಾಸಕ ಹಂಪನಗೌಡ ಬಾದರ್ಲಿ ವಿರುದ್ಧ ಕಿಡಿಕಾರಿದರು. ಮಳೆರಾಯನ ಕೃಪೆ ಇಲ್ಲದೆ ಕೆಳಭಾಗದ ರೈತರು ಈಗಾಗಲೇ ಬಿತ್ತನೆ ಮಾಡಿದ ಬೆಳೆಗಳಗೆ ನೀರಿಲ್ಲದೆ ಒಣಗುತ್ತಿರುವ ನೋಡಿದರೆ ಶಾಸಕರು ರೈತರ ಬಗ್ಗೆ ಇಂತಿಷ್ಟು ಕಾಳಜಿ ಇಲ್ಲ ಎಂಬುದು ಗೊತ್ತಾಗುತ್ತದೆ. ಏತ ನೀರಾವರಿ ಯೋಜನೆ ಬಜೆಟಿನಲ್ಲಿ ಘೋಷಣೆ ಮಾಡಿದ್ದರೂ ಸಹ ಅವೆಲ್ಲಾ ಮುಳುಗಿ ಹೋಗಿದ್ದೇವೆ ಎಂದು ಆಪಾದಿಸಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ವರ್ಷ ಕಳೆದರೂ ಇನ್ನೂ ರಾಜ್ಯದಲ್ಲಿ ಅಭಿವೃದ್ಧಿ ಎಂಬುದು ಕಾಣುತ್ತಿಲ್ಲ. ಸಿಂಧನೂರು ಕ್ಷೇತ್ರದಲ್ಲಿ ನನ್ನ ಅವಧಿಯಲ್ಲಿ ಕಾಮಗಾರಿ ಕೆಲಸ ಇನ್ನೂ ಮುಗಿಯದೆ ನಿಂತು ಹೋಗಿವೆ ಎಂದರೆ ಇದಕ್ಕೆ ಕಾರಣ ಶಾಸಕರು ನಿಷ್ಕಾಳಜಿ ಎಂದು ತಪ್ಪಾಗಲಾರದು ಎಂದು ಕಿಡಿಕಾರಿದರು. ನಗರ ಸಭೆ ಸದಸ್ಯರು. ಮೈಲಾರ ಚಂದ್ರು. ಜಿಲಾನಿ ಪಾಷಾ. ದೇವೇಂದ್ರ ಗೌಡ ಹೊಸಳ್ಳಿ. ಧರ್ಮಗೌಡ ಮಲ್ಕಾಪುರ್ ಸುದ್ದಿಗೋಷ್ಠಿಯಲ್ಲಿ ಇದ್ದರು.


---

# ಖಾಯಂ ಪಿಡಿಓ ನೇಮಕ ಸೇರಿದಂತೆ ವಿವಿಧ ಬೇಡಿಕೆಗಳಿಗಾಗಿ ಪ್ರತಿಭಟನೆಗೆ ಇಳಿದ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು

• ಉದಯವಾಹಿನಿ, ಅರಸೀಕೆರೆ

ತಾಲ್ಲೂಕಿನ ಪುರ್ಲೆಹಳ್ಳಿ ಗ್ರಾಮ ಪಂಚಾಯಿತಿ ಮುಂದೆ ವಿವಿಧ ಬೇಡಿಕೆಗಳು ಮತ್ತು ಖಾಯಂ ಪಿಡಿಯೋ ಅವರನ್ನು ನೇಮಿಸುವಂತೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಜಿ ಎನ್ ನೀಲಾ ಇವರ ನೇತೃತ್ವದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರುಗಳು ಸೇರಿದಂತೆ ಗ್ರಾಮದ ಸಾರ್ವಜನಿಕರು ಮಹಿಳೆಯರು ಪ್ರತಿಭಟನೆ ನಡೆಸಿದರು. ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಗ್ರಾಮ ಪಂಚಾಯಿತಿ ಸದಸ್ಯರಾದ ಬ್ಯಾಡ್ರಳ್ಳಿ ಜಯರಾಮ್ ಈ ಹಿಂದೆ ಹಾಲಿರುವ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯನ್ನು ವರ್ಗಾವಣೆ ಮಾಡಿಸಿದರು ಸಹ ಅವರು ಇಲ್ಲಿಂದ ಹೋಗಲಿಲ್ಲ ಇವರ ಹಿಂದೆ ಕಾಣದ ಕೈಗಳು ಕುತಂತ್ರ ನಡೆಸಿದ್ದೆ ಇವರು ಇಲ್ಲಿ ಉಳಿದುಕೊಳ್ಳಲು ಕಾರಣವಾಯಿತು.

ಇವರು ಎರಡು ಕಡೆ ಗ್ರಾಮ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಪುರ್ಲೆಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಗರಿಕರಿಗೆ ತುಂಬಾ ತೊಂದರೆ ಉಂಟಾಗುತ್ತಿದೆ ಸಮಯಕ್ಕೆ ಸರಿಯಾಗಿ ಸ್ವಚ್ಚತೆ ಬೀದಿ ದೀಪ ಕುಡಿಯುವ ನೀರಿನ ಸಮಸ್ಯೆಯೂ ಸಹ ಉಂಟಾಗಿದ್ದು ಪುರ್ಲೆಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಗರೀಕರಿಗೆ ಸಮಸ್ಯೆ ಹೆಚ್ಚಾಗುತ್ತಿದೆ ಹೀಗಾಗಿ ನಾವು ಪ್ರತಿಭಟನೆಯ ಹಾದಿಯ ಹಿಡಿದಿದ್ದೇವೆ ನಾಗರಿಕರು ಸಹ ತಾಳ್ಮೆಯನ್ನು ಕಳೆದುಕೊಂಡಿದ್ದಾರೆ ಕೂಡಲೇ ಜಿಲ್ಲಾ ಪಂಚಾಯತ್ ಹಾಸನ ಮುಖ್ಯ ಕಾರ್ಯನಿರ್ಹಣಾಧಿಕಾರಿಗಳು ಹಾಗೂ ಅರಸಿಕೆರೆ ತಾಲ್ಲೂಕ್ ಪಂಚಾಯಿತಿ ಕಡೆ ಅಧಿಕಾರಿಗಳು ಹಾಲಿ ಇರುವ ಪಿಡಿಓ ರವರನ್ನು ವರ್ಗಾವಣೆ ಮಾಡಿ ಖಾಯಂ ಪಿಡಿಓ ರವರನ್ನು ನೇಮಿಸಬೇಕಿದೆ ಎಂದು ಗ್ರಾಮ ಪಂಚಾಯಿತಿ ಸದಸ್ಯರಾದ ಬ್ಯಾಡ್ರಳ್ಳಿ ಜಯರಾಮ್ ಆಕ್ರೋಶ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

ನಂತರ ಮಾತನಾಡಿದ ಕಾಂಗ್ರೆಸ್ ಪಕ್ಷದ ಮುಖಂಡರಾದ ರಾಜ ನಾಯಕ್ ನಾವು ಕಾಂಗ್ರೆಸ್ ಪಕ್ಷದಲ್ಲಿಯೇ ಇದ್ದು ಸಣ್ಣ ಮಟ್ಟದಿಂದ ಶಾಸಕರು ಶಾಸಕರಿಂದ ಮಂತ್ರಿಗಳು ಮಂತ್ರಿಗಳಿಂದ ಮುಖ್ಯಮಂತ್ರಿಗಳ ವರೆಗೆ ನಮ್ಮದೇ ಸರ್ಕಾರ ಇದ್ದರೂ ಸಹ ನಮ್ಮ ಪುರ್ಲೆಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಒಬ್ಬ ದಲಿತ ಮಹಿಳೆ ಅಧ್ಯಕ್ಷರಾಗಿದ್ದಾರೆ.

ಇವರು ಉತ್ತಮ ಅಧಿಕಾರ ನಡೆಸಲು ಬಿಡದ ಕೆಲವು ಕಿಡಿಗೇಡಿಗಳು ನಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕುತಂತ್ರದ ರಾಜಕಾರಣ ನಡೆಸಿ ತೊಂದರೆ ನೀಡುತ್ತಿದ್ದಾರೆ ಇದು ಹೀಗೆ ಮುಂದುವರೆದರೆ ಹಾಸನ ಜಿಲ್ಲಾ ಪಂಚಾಯಿತಿ ಕಚೇರಿ ಮುಂದೆಯೂ ಸಹ ಉಗ್ರ ಪ್ರತಿಭಟನೆ ನಡೆಸಬೇಕಾಗುತ್ತದೆ ಕೂಡಲೇ ಹಾಲಿರುವ ನಿಯೋಜಿತ ಪಿಡಿಓ ರವರನ್ನು ವರ್ಗಾವಣೆ ಮಾಡಿ ಕಾಯಂ ಪಿಡಿಓ ರವರನ್ನು ನೇಮಿಸಿಕೊಡಬೇಕು ಎಂದು ರಾಜ ನಾಯಕ್ ತಮ್ಮ ಆಕ್ರೋಶವನ್ನು ಹೊರ ಹಾಕಿದರು. ಗ್ರಾಮ ಪಂಚಾಯಿತಿ ಸದಸ್ಯರುಗಳಾದ ನಟರಾಜು ರವಿನಾಯಕ್ ದೇವಮ್ಮ ಜೈರಾಮ್ ಶೀಲಾಬಾಯಿ ಲತಾ ಚಂದ್ರು ರುಕ್ಮಿಣಿ ಬಾಯಿ ಉಪಸ್ಥಿತರಿದ್ದರು.

ಮತ್ತು ಗ್ರಾಮದ ಕೆಲ ಮಹಿಳೆಯರು ಕಾಲಿಕೂಡ ಪ್ರದರ್ಶನ ನಡೆಸಿದರು.

> ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸುಮಾರು ವರ್ಷಗಳಿಂದಲೂ ಕಂದಾಯ ಗ್ರಾಮಗಳಾಗಿ ಬರುತ್ತಿದ್ದು ಈ ಸತ್ತು ಸಿಗದೆ ಜನರು ಪರದಾಡುತ್ತಿದ್ದಾರೆ ಇದಕ್ಕಾಗಿ ಮಾನ್ಯ ಹಾಸನ ಜಿಲ್ಲಾ ಉಸ್ತುವಾರಿ ಸಚಿವರು ಆದ ಕೆ ಎನ್ ರಾಜಣ್ಣರವರಿಗೂ ಮನವಿ ಸಲ್ಲಿಸಲಾಗಿದೆ ಈ ಭಾಗದಲ್ಲಿ ಹಿಂದುಳಿದ ದಲಿತ ಬಡ ಕೂಲಿ ಕಾರ್ಮಿಕರೇ ಹೆಚ್ಚಾಗಿ ವಾಸಿಸುತ್ತಿದ್ದು ಸರ್ಕಾರ ಇದ್ದ ಕೂಡಲೇ ಗಮನ ಹರಿಸಬೇಕು -ರಾಜ ನಾಯಕ್, ಪುರ್ಲೆ ಹಳ್ಳಿ ಗ್ರಾಮದ ಕಾಂಗ್ರೆಸ್ ಮುಖಂಡರಾದ

---

# ಜನರ ಆರ್ಥಿಕ, ಶೈಕ್ಷಣಿಕ ಅಭಿವೃದ್ಧಿಗೆ ಯೋಜನೆ ಪೂರಕವಾಗಲಿ

• ಉದಯವಾಹಿನಿ ನವಲಗುಂದ

ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಂಸ್ಥೆಯಲ್ಲಿ ಕೆಲಸ ಮಾಡುವ ಸೇವಾ ಪ್ರತಿನಿಧಿಗಳು ವೀರೇಂದ್ರ ಹೆಗಡೆಯವರ ಆಶಯದಂತೆ ಗ್ರಾಮೀಣ ಜನರ ಬದುಕಿಗೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಹಾಗೂ ಅಭಿವೃದ್ಧಿಗೆ ಪೂರಕವಾದಂತ ಯೋಜನೆಯ ಕಾರ್ಯಕ್ರಮಗಳನ್ನು ಪಾರದರ್ಶಕವಾಗಿ ಅನುಷ್ಠಾನಗೊಳಿಸಬೇಕು ಎಂದು ಕೊಪ್ಪಳ ಪ್ರಾದೇಶಿಕ ವ್ಯಾಪ್ತಿಯ ನಿರ್ದೇಶಕ ಚಂದ್ರಶೇಖರ.ಜೆ ಹೇಳಿದರು. ಅವರು ಪಟ್ಟಣದ ಶ್ರೀ ಅಜಾತ ನಾಗಲಿಂಗ ಸ್ವಾಮೀಜಿ ಮಠದಲ್ಲಿರುವ ಸಭಾ ಭವನದಲ್ಲಿ ಹಮ್ಮಿಕೊಂಡಿದ್ದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲ್ಲೂಕು ಸೇವಾ ಪ್ರತಿನಿಧಿಗಳಿಗೆ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಸೇವಾ ಪ್ರತಿನಿಧಿಗಳು ಸ್ವಸಾಯ ಸಂಘಗಳ ಬಲವರ್ಧನೆ ಹಾಗೂ ಅವರ ಬದುಕಿನ ಯೋಜನೆಗಳಿಗೆ ಸಂಸ್ಥೆಯ ಕಾರ್ಯಕ್ರಮ ಅನುಷ್ಠಾನಗೊಳಿಸುವ ಕೆಲಸ ಮಾಡಿ ಎಂದರು.

ಧರ್ಮಸ್ಥಳ ಸಂಸ್ಥೆಯ ಮಾನವ ಸಂಪನ್ಮೂಲ ತರಬೇತಿ ಕೇಂದ್ರದ ಪ್ರಾಚಾರ್ಯ ಸೋಮನಾಥ ಮಾತನಾಡಿ, ಸೇವಾ ಪ್ರತಿನಿಧಿಗಳು ಯೋಜನೆಯಲ್ಲಿ ಮಾಡುವ ಕಾರ್ಯಚಟುವಟಿಕೆ ಹಾಗೂ ಸ್ವಸಹಾಯ ಸಂಘಗಳಿಗೆ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುವ ಬಗ್ಗೆ, ಯೋಜನೆಯ ಕಾರ್ಯಕ್ರಮಗಳ ಅನುಷ್ಠಾನ ಕುರಿತು ತರಬೇತಿ ನೀಡಿದರು. ಹಿರಿಯ ನಿರ್ದೇಶಕ ಯೋಗೇಶ.ಎ ಅವರು ಸೇವಾ ಪ್ರತಿನಿಧಿಗಳು ಸಂಸ್ಥೆಯ ಕಾರ್ಯಕ್ರಮಗಳನ್ನು ಗ್ರಾಮೀಣ ಮಟ್ಟದಲ್ಲಿ ಜನರಿಗೆ ಅನುಕೂಲವಾಗುವಂತೆ ಅನುಷ್ಠಾನ ಮಾಡಲು ಮಾಹಿತಿ ನೀಡಿದರು.


ಉದಯವಾಹಿನಿ ಚಿತ್ರ

ತಾಲ್ಲೂಕಿನ ಯೋಜನಾಧಿಕಾರಿ ದಿನೇಶ ಶೇರಿಗಾರ, ಐಟಿ ವಿಭಾಗದ ಮಹಾಂತೇಶ, ಕಚೇರಿಯ ವ್ಯವಸ್ಥಾಪಕ ಅಮಿತ್ ಇದ್ದರು. ತರಬೇತಿ ಕಾರ್ಯಾಗಾರವನ್ನು ಕೃಷಿ ಮೇಲ್ವಿಚಾರಕ ಶಂಕರ ಅರಗೋಳ ನಿರ್ವಹಿಸಿದರು.

---

# ನೀರಿಲ್ಲ, ವಿದ್ಯುತ್ತಿಲ್ಲ: ಸೊರಗಿದ ಹುರುಳಿಕುಪ್ಪಿ ಆಸ್ಪತ್ರೆ

## ಮಳೆ ಬಂದರೆ ಸೋರುವ ಕಟ್ಟಡ, ಆವರಣದಲ್ಲಿ ಹೆಚ್ಚಾಗಿರುವ ಕಸ-ಕಂಟಿ, ತುರ್ತು ಪರಿಸ್ಥಿತಿಯಲ್ಲಿ ಲಭ್ಯವಾಗದ ಚಿಕಿತ್ಸೆ

• ಉದಯವಾಹಿನಿ ಹಾವೇರಿ

ಮಳೆ ಬಂದರೆ ಸೋರುವ ಕಟ್ಟಡ, ಆವರಣದಲ್ಲಿ ಹೆಚ್ಚಾಗಿರುವ ಕಸ-ಕಂಟಿ, ತುರ್ತು ಪರಿಸ್ಥಿತಿಯಲ್ಲಿ ಲಭ್ಯವಾಗದ ಚಿಕಿತ್ಸೆ, ನೀರಿನ ಸೌಲಭ್ಯ ಹಾಗೂ ವಿದ್ಯುತ್ ಸಂಪರ್ಕವಿಲ್ಲದೇ ದಿನದೂಡುತ್ತಿರುವ ಸಿಬ್ಬಂದಿ, ಅರ್ಧಕ್ಕೆ ನಿಂತ ಮೇಲ್ದರ್ಜೆಗೇರಿಸುವ ಪ್ರಕ್ರಿಯೆ ಜಿಲ್ಲೆಯ ಸವಣೂರು ತಾಲ್ಲೂಕಿನ ಹುರುಳಿಕುಪ್ಪಿ ಗ್ರಾಮದಲ್ಲಿರುವ ಆರೋಗ್ಯ ವಿಸ್ತರಣಾ ಚಿಕಿತ್ಸಾಲಯ ಕೇಂದ್ರದ ದುಸ್ಥಿತಿ ಇದು. ಮೂಲಸೌಕರ್ಯಗಳ ಕೊರತೆಯಿಂದಾಗಿ ಕೇಂದ್ರ ಸೊರಗುತ್ತಿದೆ. ಗ್ರಾಮಸ್ಥರ ಹೋರಾಟದ ಫಲವಾಗಿ ಉದ್ಘಾಟನೆಗೊಂಡಿದ್ದ ಕೇಂದ್ರದಲ್ಲಿ ಗುಣಮಟ್ಟದ ಆರೋಗ್ಯ ಸೇವೆ ಲಭ್ಯವಾಗದಿದ್ದರಿಂದ, ಹುರುಳಿಕುಪ್ಪಿ ಹಾಗೂ ಸುತ್ತಲಿನ ಗ್ರಾಮದ ಜನರು ಪರದಾಡುತ್ತಿದ್ದಾರೆ.

ಗ್ರಾಮದ ಹೊರವಲಯದಲ್ಲಿ ನಿರ್ಮಿಸಿರುವ ಕಟ್ಟಡದಲ್ಲಿ ಆರೋಗ್ಯ ವಿಸ್ತರಣಾ ಚಿಕಿತ್ಸಾಲಯ ಕೇಂದ್ರ ಸ್ಥಾಪಿಸಿ, 2018ರಲ್ಲಿ ಉದ್ಘಾಟನೆ ಮಾಡಲಾಗಿದೆ. ಅಂದಿನ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ರುದ್ರಪ್ಪ ಲಮಾಣಿ ಅವರು ಉದ್ಘಾಟನೆ ನೆರವೇರಿಸಿದ್ದರು. ಇದಾದ ನಂತರ, ಗ್ರಾಮದಲ್ಲಿ ಜನಸಂಖ್ಯೆ ಹೆಚ್ಚಾಗಿದೆ. ಆದರೆ, ಕೇಂದ್ರ ಮಾತ್ರ ಬದಲಾಗಿಲ್ಲ.ಕೇಂದ್ರವಿರುವ ಕಟ್ಟಡ, ಮಳೆಗಾಲದಲ್ಲಿ ಸೋರುತ್ತಿದೆ. ಕಟ್ಟಡದಲ್ಲಿ ನೀರಿನ ಸೌಲಭ್ಯ ಇಲ್ಲದಿದ್ದರಿಂದ, ಶೌಚಾಲಯ ಬಳಕೆ ಸಂಪೂರ್ಣ ಬಂದ್ ಆಗಿದೆ. ವಿದ್ಯುತ್ ಸಂಪರ್ಕವೂ ಇಲ್ಲದಿದ್ದರಿಂದ, ಸೂರ್ಯನ ಬೆಳಕಿನಲ್ಲಷ್ಟೇ ಕೇಂದ್ರದ ಕೆಲಸಗಳನ್ನು ಮಾಡಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಕಟ್ಟಡದ ಹಲವೆಡೆ ಬಿರುಕು ಬಿಟ್ಟಿದೆ. ಕಳಪೆ ಕಾಮಗಾರಿ ಮಾಡಿರುವ ಆರೋಪವೂ ಇದೆ.

ವೈದ್ಯ, ಸ್ಟಾಫ್ ನರ್ಸ್ ಹಾಗೂ ಡಿ ಗ್ರೂಪ್ ದರ್ಜೆ ಸಿಬ್ಬಂದಿ ಮಾತ್ರ ಕೇಂದ್ರದಲ್ಲಿ ಕೆಲಸ ಮಾಡುತ್ತಿದ್ದಾರೆ.

> ಶಿಗ್ಗಾವಿ-ಸವಣೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಹುರುಳಿಕುಪ್ಪಿಯಲ್ಲಿ ಜನಸಂಖ್ಯೆ ಹೆಚ್ಚಾಗಿದೆ. ವಾತಾವರಣ ಬದಲಾವಣೆಯಿಂದಾಗಿ ಆರೋಗ್ಯ ಸಮಸ್ಯೆಗಳು ಉಂಟಾಗುತ್ತಿವೆ. ಜನರಿಗೆ ಗುಣಮಟ್ಟದ ಚಿಕಿತ್ಸೆ ಬೇಕು. ಹೀಗಾಗಿ ಆಸ್ಪತ್ರೆಯನ್ನು ಮೇಲ್ದರ್ಜೇಗೇರಿಸಬೇಕು. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಗಮನ ಹರಿಸಬೇಕು -ಗ್ರಾಮಸ್ಥರು


ಉದಯವಾಹಿನಿ ಚಿತ್ರ

**ಹೋರಾಟ ನಡೆಸಬೇಕಾದ ಅನಿವಾರ್ಯತೆ**

ಆರೋಗ್ಯ ವಿಸ್ತರಣಾ ಚಿಕಿತ್ಸಾಲಯ ಕೇಂದ್ರ ಆರಂಭಿಸಲು ನಿರ್ದಿಷ್ಟಾವಧಿ ಹೋರಾಟ ನಡೆಸಲಾಗಿತ್ತು. ಈಗ ಕೇಂದ್ರದಲ್ಲಿ ಮೂಲಸೌಕರ್ಯ ಕಲ್ಪಿಸಲು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಮೇಲ್ದರ್ಜೇಗೇರಿಸಲು ಒತ್ತಾಯಿಸಿ ಪುನಃ ಹೋರಾಟ ನಡೆಸಬೇಕಾದ ಅನಿವಾರ್ಯತೆ ಎದುರಾಗಿದೆ' ಎಂದು ಗ್ರಾಮಸ್ಥರು ಹೇಳಿದರು.

ಹುರುಳಿಕುಪ್ಪಿಯಲ್ಲಿ ಸುಮಾರು 6 ಸಾವಿರ ಜನಸಂಖ್ಯೆ ಇದೆ. ಇಲ್ಲಿಯ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ಲಭ್ಯವಾಗುತ್ತಿಲ್ಲ. ತುರ್ತು ಪರಿಸ್ಥಿತಿ ಹಾಗೂ ಯಾವುದಾದರೂ ಆರೋಗ್ಯ ಸಮಸ್ಯೆ ಎದುರಾದರೆ ಪಕ್ಕದ ಊರುಗಳಿಗೆ ಹಾಗೂ ಸವಣೂರಿನಲ್ಲಿರುವ ತಾಲ್ಲೂಕು ಆಸ್ಪತ್ರೆಗೆ ಹೋಗುತ್ತಿದ್ದಾರೆ. ಡಾ. ಚಂದ್ರಕಲಾ, ತಾಲ್ಲೂಕು ಆರೋಗ್ಯಾಧಿಕಾರಿಹುರುಳಿಕುಪ್ಪಿ ಆರೋಗ್ಯ ವಿಸ್ತರಣಾ ಚಿಕಿತ್ಸಾಲಯ ಕೇಂದ್ರವನ್ನು ಪ್ರಾಥಮಿಕ ಆರೋಗ್ಯ ಕೇಂದ್ರವನ್ನಾಗಿಸುವ ಪ್ರಸ್ತಾವವಿದೆ. ಹಿಂದಿನ ಸರ್ಕಾರ ಹೊರಡಿಸಿದ್ದ ಆದೇಶದ ಜಾರಿ ಪ್ರಕ್ರಿಯೆ ಹಣಕಾಸು ಇಲಾಖೆಯಲ್ಲಿ ಬಾಕಿ ಉಳಿದಿದೆ.

'ನೆಗಡಿ, ಕೆಮ್ಮು ಸೇರಿದಂತೆ ಸಣ್ಣಪುಟ್ಟ ಆರೋಗ್ಯ ಸಮಸ್ಯೆಗಳಿಗೆ ಮಾತ್ರ ಕೇಂದ್ರದ ಸಿಬ್ಬಂದಿ ಚಿಕಿತ್ಸೆ ನೀಡುತ್ತಿದ್ದಾರೆ. ಕೆಲವು ಬಾರಿ ಮಾತ್ರೆಯಷ್ಟೇ ಕೊಟ್ಟು ಕಳುಹಿಸುತ್ತಿದ್ದಾರೆ. ಆರೋಗ್ಯದಲ್ಲಿ ಏನಾದರೂ ಏರುಪೇರು ಉಂಟಾದರೆ, ತುರ್ತು ಸ್ಥಿತಿಯಲ್ಲಿ ಚಿಕಿತ್ಸೆ ಸಿಗುತ್ತಿಲ್ಲ. ಅದಕ್ಕಾಗಿ ಸವಣೂರು ಹಾಗೂ ಸುತ್ತಲಿನ ಆಸ್ಪತ್ರೆಗೆ ಹೋಗಬೇಕಾದ ಅನಿವಾರ್ಯತೆ ಇದೆ' ಎಂದು ಗ್ರಾಮಸ್ಥ ಸಿದ್ದಪ್ಪ ಪೂಜಾರ ಹೇಳಿದರು.

ಮನ್ನಂಗಿ, ಕುರುಬರ ಮಲ್ಲೂರು, ಮೆಳ್ಳಿಗಟ್ಟಿ ಹಾಗೂ ಸುತ್ತಲಿನ ಗ್ರಾಮಸ್ಥರು ಸಹ ಹುರುಳಿ ಕುಪ್ಪಿಯ ಆರೋಗ್ಯ ವಿಸ್ತರಣಾ ಚಿಕಿತ್ಸಾಲಯ ಕೇಂದ್ರಕ್ಕೆ ಬರುತ್ತಿದ್ದಾರೆ. ಅವರಿಗೂ ಸೂಕ್ತ ರೀತಿಯಲ್ಲಿ ಚಿಕಿತ್ಸೆ ಸಿಗುತ್ತಿಲ್ಲ. ಔಷಧ ಹಾಗೂ ಮಾತ್ರೆ ಸಂಗ್ರಹವಿಲ್ಲ. ಎಲ್ಲವನ್ನೂ ಕಳಸೂರು ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ತಂದು ವಿತರಿಸಲಾಗುತ್ತಿದೆ' ಎಂದು ದೂರಿದರು.

**ಶೌಚಾಲಯ ಬಳಕೆ ಸಂಪೂರ್ಣ ಬಂದ್**

**ಮೇಲ್ದರ್ಜೆಗೇರಿಸುವ ಪ್ರಕ್ರಿಯೆ ವಿಳಂಬ:** ಜನಸಂಖ್ಯೆಗೆ ಅನುಗುಣವಾಗಿ ಆರೋಗ್ಯ ವಿಸ್ತರಣಾ ಚಿಕಿತ್ಸಾಲಯ ಕೇಂದ್ರವನ್ನು ಪ್ರಾಥಮಿಕ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೇಗೇರಿಸುವುದಾಗಿ ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿದ್ದಾಗ ಘೋಷಿಸಿದ್ದರು.

ಆದರೆ, ಇದುವರೆಗೂ ಮೇಲ್ದರ್ಜೇಗೇರಿಸುವ ಕೆಲಸವಾಗಿಲ್ಲವೆಂದು ಗ್ರಾಮಸ್ಥರು ದೂರುತ್ತಿದ್ದಾರೆ. ಕಟ್ಟಡ ಚೆನ್ನಾಗಿದೆ. ಹೆಚ್ಚು ಜಾಗವೂ ಲಭ್ಯವಿದೆ. ಆದರೆ, ಕಳಪೆ ಕಾಮಗಾರಿಯಿಂದ ಹಾಳಾಗಿದೆ. ಹೊರಗಡೆ ಪ್ರಾಥಮಿಕ ಆರೋಗ್ಯ ಕೇಂದ್ರವೆಂದು ಬರೆಸಲಾಗಿದೆ. ಆದರೆ, ಒಳಗಡೆ ಮಾತ್ರ ಆರೋಗ್ಯ ವಿಸ್ತರಣಾ ಚಿಕಿತ್ಸಾಲಯ ಕೇಂದ್ರವಾಗಿಯೇ ಕಾರ್ಯನಿರ್ವಹಿಸುತ್ತಿದೆ ಎಂದು ಗ್ರಾಮಸ್ಥರು ಹೇಳಿದರು.

---

## ಮಿನಿ ನ್ಯೂಸ್

### ಅಕ್ರಮ ಕಟ್ಟಡ: ಕ್ರಮಕ್ಕೆ ಡಿಸಿ ಆದೇಶ

• ಉದಯವಾಹಿನಿ ಪಡುಬಿದ್ರಿ

ಇಲ್ಲಿನ ಮುಖ್ಯ ಬೀಚ್‌ನಲ್ಲಿ ಪರವಾನಗಿ ಪಡೆಯದೆ ವ್ಯಕ್ತಿಯೊಬ್ಬರು ಅಕ್ರಮವಾಗಿ ಕಟ್ಟಡ ನಿರ್ಮಾಣ ಮಾಡುತ್ತಿದ್ದಾರೆ ಎಂದು ಬೀಚ್ ಗುತ್ತಿಗೆ ಪಡೆದಿರುವ ಬೀಚ್ ಅಭಿವೃದ್ಧಿ ಸಮಿತಿಯು ಜಿಲ್ಲಾಧಿಕಾರಿಗೆ ನೀಡಿದ ದೂರಿಗೆ ಸಂಬಂಧಿಸಿ, ಸ್ಥಳ ತನಿಖೆ ನಡೆಸುವಂತೆ ಜಿಲ್ಲಾಧಿಕಾರಿ, ಕಾಪು ತಹಶೀಲ್ದಾರರಿಗೆ ಆದೇಶಿಸಿದ್ದಾರೆ.

ಪ್ರವಾಸೋದ್ಯಮ ಇಲಾಖೆ ಸೇರಿದ ಜಾಗದಲ್ಲಿ ಸೆ.15ರಂದು ಕಟ್ಟಡ ನಿರ್ಮಾಣ ಕಾಮಗಾರಿ ಆರಂಭಿಸಲಾಗಿದೆ. ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ ಅಥವಾ ಸ್ಥಳೀಯ ಗ್ರಾಮ ಪಂಚಾಯಿತಿಯಿಂದ ಅನುಮತಿ ಪಡೆದು ಕಟ್ಟಡ ನಿರ್ಮಾಣ ಮಾಡುವಂತೆ ಸಮಿತಿ ತಿಳಿಸಿದಾಗ ಕಾಮಗಾರಿ ಸ್ಥಗಿತಗೊಳಿಸಲಾಗಿತ್ತು. ನಂತರ ಮತ್ತೆ ಕಾಮಗಾರಿ ಶುರು ಮಾಡಿದಾಗ, ಪಡುಬಿದ್ರಿ ಪಂಚಾಯಿತಿ ಪಿಡಿಒಗೆ ದೂರು ನೀಡಲಾಗಿದ್ದು, ಅವರು, ಕಾಮಗಾರಿ ನಿಲ್ಲಿಸುವಂತೆ ಮೌಖಿಕ ಸೂಚನೆ ನೀಡಿದ್ದರು. ಆದರೂ, ಕಾಮಗಾರಿ ಮುಂದುವರಿದ ಬಗ್ಗೆ ಜಿಲ್ಲಾಡಳಿತ ಕ್ರಮ ವಹಿಸುವಂತೆ, ದೂರಿನಲ್ಲಿ ತಿಳಿಸಲಾಗಿತ್ತು. ದೂರನ್ನು ಪರಿಶೀಲಿಸಿದ ಜಿಲ್ಲಾಧಿಕಾರಿ ಕಟ್ಟಡ ತೆರವುಗೊಳಿಸಲು ತಹಶೀಲ್ದಾರರಿಗೆ ಆದೇಶಿಸಿದ್ದಾರೆ ಎಂದು ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕುಮಾರ್ ತಿಳಿಸಿದ್ದಾರೆ.

### ಕ್ರೀಡಾಪ್ರದರ್ಶನಕ್ಕೆ ಉತ್ತಮ ವೇದಿಕೆ

• ಉದಯವಾಹಿನಿ ನರಗುಂದ

ಕ್ರೀಡೆ ಜೀವನದಲ್ಲಿ ಬಹುಮುಖ್ಯ ಪಾತ್ರ ವಹಿಸುತ್ತದೆ. ದೈಹಿಕವಾಗಿ ಸದೃಢ ವ್ಯಕ್ತಿಯನ್ನಾಗಿ ಮಾಡುತ್ತದೆ. ದಸರಾ ಕ್ರೀಡಾಕೂಟವು ಕ್ರೀಡಾಪ್ರದರ್ಶನಕ್ಕೆ ಉತ್ತಮ ವೇದಿಕೆಯಾಗಿದೆ' ಎಂದು ಶಾಸಕ ಸಿ.ಸಿ. ಪಾಟೀಲ ಹೇಳಿದರು. ಪಟ್ಟಣದ ತಾಲ್ಲೂಕು ಕ್ರೀಡಾಂಗಣದಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿ ಮತ್ತು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ನಡೆದ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟಕ್ಕೆ ಚಾಲನೆ ಮಾತನಾಡಿದರು. ಭಾರತ ದೇಶ ಹೆಚ್ಚು ಯುವ ಸಮುದಾಯ ಹೊಂದಿದ ರಾಷ್ಟ್ರವಾಗಿದೆ. ಆದರೆ ನಮ್ಮ ದೇಶದ ಯುವ ಕ್ರೀಡಾಪಟುಗಳು ಅಂತರರಾಷ್ಟ್ರೀಯ ಮಟ್ಟದಲ್ಲಿ ಇನ್ನೂ ಹೆಚ್ಚಿನ ಸಾಧನೆ ಮಾಡಬೇಕಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಯುವ ಕ್ರೀಡಾಪಟುಗಳಿಗೆ, ವಿದ್ಯಾರ್ಥಿಗಳಿಗೆ ಕ್ರೀಡೆಯಲ್ಲಿ ಸಾಧನೆ ಮಾಡಲು ಸಾಕಷ್ಟು ಹಣ ಖರ್ಚು ಮಾಡುತ್ತಿದೆ. ಸರ್ಕಾರದ ಸೌಲಭ್ಯಗಳನ್ನು ಯುವ ಸಮುದಾಯ ಹಾಗೂ ವಿದ್ಯಾರ್ಥಿಗಳು ಸದುಪಯೋಗ ಮಾಡಿಕೊಳ್ಳಬೇಕು' ಎಂದರು.

### ಅಡಿಕೆ ಸಿಪ್ಪೆರಸದ ಸಾಬೂನಿಗೆ ಪೇಟೆಂಟ್

• ಉದಯವಾಹಿನಿ ಬಂಟ್ವಾಳ



ಉದಯವಾಹಿನಿ ಚಿತ್ರ

ಇಲ್ಲಿನ ಕೆದಿಲ ಹಾರ್ದಿಕ್ ಹರ್ಬಲ್ಸ್ ಸಂಸ್ಥೆಯು ಹಣ್ಣಡಿಕೆ ಸಿಪ್ಪೆ ರಸದಿಂದ ತಯಾರಿಸಿದ 'ಸತ್ವಂ' ಹರ್ಬಲ್ ಸ್ನಾನದ ಸಾಬೂನಿಗೆ ಕೇಂದ್ರ ಸರ್ಕಾರವು ಸೆ. 13ರಂದು ಪೇಟೆಂಟ್ ನೀಡಿದೆ. ಈ ಕೋಕಾರೇಕ ಹರ್ಬಲ್ ಸ್ನಾನದ ಸಾಬೂನು ಮೂರು ವರ್ಷದಿಂದ ಮಾರುಕಟ್ಟೆಯಲ್ಲಿದೆ.'ಬಾಲ್ಯದಲ್ಲಿ ಬೆವರಿನಿಂದ ಉಂಟಾಗುವ ತುರಿಕೆಗೆ ಹಿರಿಯರು ಹಣ್ಣಡಿಕೆ ಸಿಪ್ಪೆ ರಸ ಸವರುವ ಮೂಲಕ ತುರಿಕೆ ಗುಣಪಡಿಸುತ್ತಿದ್ದರು. ಇದನ್ನೇ ಮುಂದಿಟ್ಟುಕೊಂಡು ಸಂಶೋಧನೆಗೆ ಒಳಪಡಿಸಿ ಸಾಬೂನು ತಯಾರಿಸಿದ್ದೇವೆ. ಇಲ್ಲಿನ ಸಂಶೋಧಕ ಬದನಾಜೆ ಶಂಕರ ಭಟ್, ಶ್ರೀಕುಮಾರ್ ಅವರು ಮಾರ್ಗದರ್ಶನ ನೀಡಿದ್ದಾರೆ ಎಂದು ಸಂಸ್ಥೆಯ ಸಿಇಒ ಮುರಳೀಧರ ಕೆ. ತಿಳಿಸಿದ್ದಾರೆ.

'ಹಣ್ಣಡಿಕೆ ಸಿಪ್ಪೆ ರಸದೊಂದಿಗೆ ಕೊತ್ತಂಬರಿ, ಲಾವಂಚ, ಅಲೊವೆರಾ, ಸಾಗುವಾನಿ ಎಲೆ, ಅರಿಸಿನ, ತೆಂಗಿನ ಎಣ್ಣೆ ಸೇರಿಸಿ ಸಾಬೂನು ತಯಾರಿಸಲಾಗಿದೆ. 2021ರಲ್ಲಿ ಪೇಟೆಂಟ್ ಪಡೆಯುವ ಕಾರ್ಯ ಆರಂಭಿಸಿದ್ದು, ರಾಷ್ಟ್ರೀಯ ಜೀವ ವೈವಿಧ್ಯ ಪ್ರಾಧಿಕಾರದ ಅನುಮೋದನೆ ಪಡೆದ ಬಳಿಕ ಭಾರತದ ಹಕ್ಕುಸ್ವಾಮ್ಯ ಕಾರ್ಯಾಲಯವು ಪೇಟೆಂಟ್ ನೀಡಿದೆ' ಎಂದು ತಿಳಿಸಿದ್ದಾರೆ. ಈಗಾಗಲೇ, ಅಡಿಕೆ ಚೊಗರಿನಿಂದ ತಯಾರಿಸಲಾದ ಬಣ್ಣವನ್ನು ಬಟ್ಟೆಗಳಿಗೆ ಬಳಸಲಾಗುತ್ತಿದೆ. ಅಡಿಕೆಯಿಂದ ಐಸ್‌ಕ್ರೀಂ, ಚಹಾ ಪುಡಿ, ತಂಪು ಪಾನೀಯ ಉತ್ಪಾದಿಸಿ ಅಡಿಕೆಯ ಮೌಲ್ಯವರ್ಧನೆ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

### ಬದುಕಲು ಕಲಿಸುವುದು ಸರ್ಕಾರಿ ಶಿಕ್ಷಣ

• ಉದಯವಾಹಿನಿ ಮಂಗಳೂರು



ಸರ್ಕಾರಿ ಶಿಕ್ಷಣ ವ್ಯವಸ್ಥೆಯಲ್ಲಿ ಸಮಾಜದ ಎಲ್ಲಾ ಸ್ತರದವರು ಕಲಿಕೆಗೆ ಬರುತ್ತಾರೆ. ಹೀಗಾಗಿ, ಸರ್ಕಾರಿ ಶಿಕ್ಷಣವು ಬದುಕಲು ಕಲಿಸುತ್ತದೆ. ನನ್ನನ್ನು ಬೆಳೆಸಿದ್ದು ಕೂಡ ಸರ್ಕಾರಿ ಕಾಲೇಜು ಎಂದು ಸಂಗೀತ ನಿರ್ದೇಶಕ ಗುರುಕಿರಣ್ ಹೇಳಿದರು.ಇಲ್ಲಿ ಮಂಗಳೂರು ಪ್ರೆಸ್ ಕ್ಲಬ್‌ನ 'ಗೌರವ ಅತಿಥಿ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಸಂಗೀತಗಾರ ಆಗಬೇಕೆಂದು ಕನಸು ಕಂಡಿರಲಿಲ್ಲ. ಪದವಿ ಶಿಕ್ಷಣಕ್ಕೆ ಮಂಗಳೂರಿನ ಸರ್ಕಾರಿ ಕಾಲೇಜಿಗೆ ಸೇರಿದ್ದೆ. ಒಮ್ಮೆ ಅವಮಾನ ಎದುರಿಸುವ ಸಂದರ್ಭ ಎದುರಾಯಿತು. ಅದೇ ನನ್ನನ್ನು ಹಾಡುಗಾರನಾಗಿ ಬೆಳೆಯಲು ಪ್ರೇರಣೆ ನೀಡಿತು. ಬದುಕಿನಲ್ಲಿ ಖುಷಿ ಮುಖ್ಯ. ನಾನು ಖುಷಿ ಅರಸಿ ಹೋದೆನೇ ವಿನಾ ಕನಸು ಬೆನ್ನತ್ತಿಲ್ಲ. ಆದರೆ, ಸಂಗೀತಕ್ಕೆ ಅಗಾಧ ಶಕ್ತಿ ಇದೆ. ಅದು ನನ್ನನ್ನು ಹೊಸ ಲೋಕಕ್ಕೆ ಎಳೆದೊಯ್ದು ಎಲ್ಲವನ್ನೂ ಕೊಟ್ಟಿತು' ಎಂದರು.

### ಕಲಬುರ್ಗಿಯಲ್ಲಿ ಗುಂಡಿನ ಸದ್ದು

• ಉದಯವಾಹಿನಿ ಕಲಬುರ್ಗಿ

ಕಲಬುರ್ಗಿಯಲ್ಲಿ ಬೆಳ್ಳಂಬೆಳಗ್ಗೆ ರೌಡಿಶೀಟರ್, ಮಾಜಿ ಗ್ರಾ.ಪಂ ಸದಸ್ಯನ ಕೊಲೆ ಆರೋಪಿ ಮೇಲೆ ಗುಂಡಿನ ದಾಳಿ ನಡೆದಿದ್ದು, ಆಳಂದ ತಾಲ್ಲೂಕಿನ ಖಾನಾಪುರದ ಕ್ರಾಸ್ ಬಳಿ ನಡೆದಿದ್ದ ವಿಶ್ವನಾಥ್ ಜಮಾದಾರ ಕೊಲೆ ಪ್ರಕರಣದ ಆರೋಪಿ ಲಕ್ಷ್ಮಣ ಪೂಜಾರಿ ಮೇಲೆ ಶನಿವಾರ ಮಾಡ್ಯಾಳ ಗ್ರಾಮದ ಬಳಿಯಲ್ಲಿ ಬೆಳಗ್ಗೆ ಪೊಲೀಸರು ಗುಂಡು ಹಾರಿಸಿ ಬಂಧಿಸಿರುವ ಘಟನೆ ನಡೆದಿದೆ.

ಸೆ.13ರಂದು ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ವಿಶ್ವನಾಥ ಜಮಾದಾರ ಮೇಲೆ ಮೂರು ಸುತ್ತು ಗುಂಡು ಹಾರಿಸಿ ಕೊಲೆ ಮಾಡಲಾಗಿತ್ತು. ಈ ಪ್ರಕರಣದ ಪ್ರಮುಖ ಆರೋಪಿ ಲಕ್ಷ್ಮಣ ಪೂಜಾರಿಯು ತಾನು ಬಚ್ಚಿಟ್ಟಿದ್ದ ಗನ್ ವಶಕ್ಕೆ ಪಡೆಯಲು ಪೊಲೀಸರು ತೆರಳಿದಾಗ ನಿಂಬರ್ಗಾ ಮಹಿಳಾ ಪಿಎಸ್‌ಐ ಮೇಲೆ ಲಕ್ಷ್ಮಣ ಹಲ್ಲೆ ಮಾಡಿದ್ದಾನೆ. ಇದರಿಂದ ಪಿಎಸ್‌ಐ ಕೈಗೆ ಗಾಯವಾಗಿದೆ. ಈ ವೇಳೆ ಆತ್ಮರಕ್ಷಣೆಗಾಗಿ ಪಿಎಸ್‌ಐ ಸೋಮಲಿಂಗ ಒಡೆಯರ್ ಲಕ್ಷ್ಮಣ ಕಾಲಿಗೆ ಗುಂಡು ಹಾರಿಸಿದ್ದಾರೆ. ಕೂಡಲೇ ಸ್ಥಳದಲ್ಲಿ ಕುಸಿದು ಬಿದ್ದ ಆತನನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಲಕ್ಷ್ಮಣ ವಿರುದ್ಧ ಒಟ್ಟು 11 ಪ್ರಕರಣಗಳು ದಾಖಲಾಗಿವೆ. ಬೆಂಗಳೂರು, ಕಲಬುರಗಿಯಲ್ಲಿ ಗನ್ ಸಪ್ಲೈ ಮಾಡಿಕೊಂಡಿದ್ದ ಈತ ಸೆಕ್ಷನ್ 307 ಸೇರಿದಂತೆ ಇನ್ನೂ ಹಲವು ಪ್ರಕರಣಗಳಲ್ಲಿ ಪೊಲೀಸರಿಗೂ ಬೇಕಾಗಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** ಆರೋಗ್ಯದ ಆರೈಕೆ ಮಾಡಿಕೊಳ್ಳಿ ಮತ್ತು ಎಲ್ಲವನ್ನೂ ಹೊಂದಿಸಿ. ನಿಮ್ಮ ತಾಯಿಯು ದುಂದುಗಾರಿಕೆಯನ್ನು ನೋಡಿ ನೀವು ಚಿಂತಿತರಾಗಬಹುದು ಮತ್ತು ಆದ್ದರಿಂದ ನೀವು ಅವರ ಕೋಪದ ಬೇಟೆಯಾಗಬಹುದು.

**ವೃಷಭ** ನಿಮ್ಮ ಸಂಗಾತಿ ನಿಮ್ಮ ಬಹುನಿರೀಕ್ಷಿತ ಕಲ್ಪನೆಗಳನ್ನು ಸಾಕ್ಷಾತ್ಕಾರ ಮಾಡುವ ಮೂಲಕ ನಿಮ್ಮನ್ನು ಅಚ್ಚರಿಗೊಳಿಸುತ್ತಾರೆ. ಉಚಿತ ಸಮಯವನ್ನು ಸರಿಯಾಗಿ ಬಳಸಬೇಕು.

**ಮಿಥುನ** ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಿಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ.

**ಕರ್ಕಾಟಕ** ನೀವು ಮಾನಸಿಕವಾಗಿ ಮತ್ತು ದೈಹಿಕವಾಗಿ ಸ್ವಲ್ಪ ಸುಸ್ತನ್ನು ಅನುಭವಿಸಬಹುದು. ನಿಮ್ಮ ಚೈತನ್ಯವನ್ನು ಹೆಚ್ಚಿಸಲು ಸ್ವಲ್ಪ ವಿಶ್ರಾಂತಿ ಮತ್ತು ಪೌಷ್ಟಿಕ ಆಹಾರ ಬಹಳ ಸಹಾಯ ಮಾಡುತ್ತದೆ.

**ಸಿಂಹ** ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ಇಂದಿನ ವರೆಗೂ ಅಗತ್ಯವಿಲ್ಲದೆ ಹಣವನ್ನು ಖರ್ಚು ಮಾಡುತ್ತಿದ್ದ ಜನರು, ಇಂದು ಅವರು ತನ್ನನ್ನು ನಿಯಂತ್ರಿಸಬೇಕು ಮತ್ತು ಹಣವನ್ನು ಉಳಿಸಬೇಕು.

**ಕನ್ಯಾ** ಈ ರಾಶಿಚಕ್ರದ ಜನರು ಇಂದು ಉಚಿತ ಸಮಯದಲ್ಲಿ ಸೃಜನಾತ್ಮಕ ಕೆಲಸಗಳನ್ನು ಮಾಡಲು ಯೋಜಿಸುತ್ತಾರೆ ಆದರೆ ಅವರ ಈ ಯೋಜನೆಯನ್ನು ಪೂರೈಸಲು ಸಾಧ್ಯವಾಗುವುದಿಲ್ಲ.

**ತುಲಾ** ಇಂದು ನಿಮ್ಮ ವೈವಾಹಿಕ ಜೀವನದ ಅತ್ಯುತ್ತಮ ನೆನಪುಗಳನ್ನು ರಚಿಸುತ್ತೀರಿ. ಸಾರಾಯಿ ಅಥವಾ ಸಿಗರೇಟ್ ಹೆಚ್ಚು ಕುಡಿಯುವುದು, ಇಂದು ನಿಮ್ಮ ಆರೋಗ್ಯವನ್ನು ಇನ್ನಷ್ಟು ಹದಗೆಡಿಸಬಹುದು.

**ವೃಶ್ಚಿಕ** ಆರೋಗ್ಯ ಚೆನ್ನಾಗಿರುತ್ತದೆ. ಕಳೆದ ದಿನಗಳನ್ನು ಹೋಲಿಸಿದರೆ ಇಂದು ಆರ್ಥಿಕ ಉತ್ತಮವಾಗಲಿದೆ ಮತ್ತು ನೀವು ಹೆಚ್ಚಿನ ಹಣವನ್ನು ಪಡೆಯುತ್ತೀರಿ . ನಿಮ್ಮ ಹೆಂಡತಿಯ ಜೊತೆ ಪ್ರವಾಸಕ್ಕೆ ಹೋಗಲು ಒಳ್ಳೆಯ ದಿನ.

**ಧನಸ್ಸು** ನೀವು ಇತರರ ಅಗತ್ಯಗಳಿಗೆ ಗಮನ ನೀಡಬೇಕಾದರೂ ಮಕ್ಕಳೊಂದಿಗೆ ಅತೀ ಉದಾರತೆ ತೋರಿಸುವುದು ತೊಂದರೆಗೆ ಕಾರಣವಾಗುತ್ತದೆ. ನಿಮ್ಮನ್ನು ತನ್ನ ಜೀವಕ್ಕಿಂತಲೂ ಹೆಚ್ಚು ಪ್ರೀತಿಸುವ ವ್ಯಕ್ತಿಯನ್ನು ಸಂಧಿಸುತ್ತೀರಿ.

**ಮಕರ** ವಿಶ್ರಾಂತಿಯ ಸಲುವಾಗಿ ನಿಕಟ ಸ್ನೇಹಿತರೊಂದಿಗೆ ಸ್ವಲ್ಪ ಸಮಯ ಕಳೆಯಿರಿ. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು.ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು.

**ಕುಂಭ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

**ಮೀನ** ನೀವು ಭಯವೆಂಬ ದೈತ್ಯನ ಜೊತೆ ಹೋರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ. ಇಲ್ಲದಿದ್ದಲ್ಲಿ ನೀವು ಈ ರಾಕ್ಷಸನಿಗೆ ನಿಷ್ಕರುಣೆಯ ಬಲಿಯಾಗುತ್ತೀರಿ.

## ರಸ್ತೆ ವಿಭಜಕ ಮೇಲೇರಿದ ಸಾರಿಗೆ ಬಸ್, ಯಾವುದೇ ಪ್ರಾಣಹಾನಿಯಿಲ್ಲ



ಉದಯವಾಹಿನಿ ಚಿತ್ರ

• ಉದಯವಾಹಿನಿ ಸಿರುಗುಪ್ಪ

ಕೆಎ 36, ಎಫ್-1607 ಸಂಖ್ಯೆಯ ರಾಯಚೂರು ವಿಭಾಗಕ್ಕೆ ಸಂಬಂದಿಸಿದ ಸಾರಿಗೆ ಬಸ್ಸು ಆಯತಪ್ಪಿ ನಗರದ ಹಳೇ ಪೆಟ್ರೋಲ್ ಬಂಕ್ (ಟ್ರೆಂಡ್ ಕಟ್ಟಡದ) ಹತ್ತಿರ ರಸ್ತೆ ವಿಭಜಕದ ಮೇಲೆರಿದೆ. ಬೆಳಗಿನ ಜಾವ 4ಗಂಟೆಗೆ ಅಪಘಾತ ಸಂಭವಿಸಿದ್ದು ಯಾವುದೇ ರೀತಿಯ ಪ್ರಾಣಹಾನಿ ಆಗಿರುವ ವರದಿಯಾಗಿಲ್ಲ.

## ಕೇರಳ ಮೂಲದ ಅರ್ಜುನ್ ಲಾರಿ ಪತ್ತೆ

• ಉದಯವಾಹಿನಿ, ಉತ್ತರ ಕನ್ನಡ

ಜಿಲ್ಲೆಯ ಶಿರೂರು ಬಳಿಯ ಹೆದ್ದಾರಿ 66ರಲ್ಲಿ ಬೆಟ್ಟ ಕುಸಿತ ಉಂಟಾಗಿ, ಕೇರಳ ಮೂಲದ ಅರ್ಜುನ್ ಎಂಬುವರ ಲಾರಿ ನಾಪತ್ತೆಯಾಗಿತ್ತು. ಇಂದು ಲಾರಿಯು ಗಂಗಾವಳಿ ನದಿಯಲ್ಲಿ ಪತ್ತೆಯಾಗಿದೆ. ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲ್ಲೂಕಿನ ಶಿರೂರು ಬಳಿಯ ರಾಷ್ಟ್ರೀಯ ಹೆದ್ದಾರಿ 66ರಲ್ಲಿ ಗುಡ್ಡ ಕುಸಿತಗೊಂಡು 10 ಮಂದಿ ನಾಪತ್ತೆಯಾಗಿ ಸಾವನ್ನಪ್ಪಿದ್ದರು. ಈ ದುರಂತದಲ್ಲಿ ಕೇರಳ ಮೂಲಕ ಅರ್ಜುನ್ ಎಂಬುವರಿಗೆ ಸೇರಿದಂತ ಲಾರಿ ಕೂಡ ನಾಪತ್ತೆಯಾಗಿತ್ತು. ಮುಳುಗು ತಜ್ಞ ಈಶ್ವರ್ ಮಲ್ಪೆ ತಂಡದಿಂದ ಗಂಗಾವಳಿ ನದಿಯಲ್ಲಿ ಮುಳುಗಿದ್ದಂತ ಕೇರಳ ಮೂಲದ ಅರ್ಜುನ್ ಎಂಬುವರಿಗೆ ಸೇರಿದಂತೆ ಲಾರಿಯನ್ನು ಪತ್ತೆ ಹಚ್ಚಲಾಗಿದೆ. ಇದೀಗ ಲಾರಿಗೆ ಹಗ್ಗವನ್ನು ಕಟ್ಟಿ, ಮೇಲೆ ಎಳೆಯುವಂತ ಕಾರ್ಯಾಚರಣೆ ನಡೆಯುತ್ತಿದೆ.

## 6 ತಿಂಗಳಿಂದ ಮುಚ್ಚಿದ ಆಧಾರ್ ಕೇಂದ್ರ

• ಉದಯವಾಹಿನಿ ತುರ್ವಿಹಾಳ

ಸಿಂಧನೂರು ತಾಲ್ಲೂಕಿನ ದೊಡ್ಡ ಹೋಬಳಿಯಾದ ತುರ್ವಿಹಾಳದಲ್ಲಿ ಆರು ತಿಂಗಳಿಂದ ಆಧಾರ್ ಸೇವಾ ಕೇಂದ್ರ ಮುಚ್ಚಿದ್ದರಿಂದ ಪಟ್ಟಣ ಹಾಗೂ ಸುತ್ತಲಿನ ಗ್ರಾಮಗಳ ಜನರು ಮತ್ತು ವಿದ್ಯಾರ್ಥಿಗಳು ಹೊಸ ಆಧಾರ್ ಕಾರ್ಡ್ ಮತ್ತು ತಿದ್ದುಪಡಿಗಾಗಿ ನಿತ್ಯ ಪರದಾಡುತ್ತಿದ್ದಾರೆ. ಪಟ್ಟಣದ ವ್ಯಾಪ್ತಿಗೆ ಗುಂಜಳ್ಳಿ ಕ್ಯಾಂಪ್, ಶ್ರೀನಿವಾಸ ಕ್ಯಾಂಪ್, ಬಸಣ್ಣ ಕ್ಯಾಂಪ್, ಮಧ್ಯಕ್ಯಾಂಪ್‌ಗಳಲ್ಲಿ ಒಟ್ಟು 20 ಸಾವಿರ ಜನರು ಸೇರಿದಂತೆ ಹೋಬಳಿ ವ್ಯಾಪ್ತಿಯ 20 ಹಳ್ಳಿಗಳಲ್ಲಿ ಅಂದಾಜು 50 ಸಾವಿರ ಜನಸಂಖ್ಯೆ ಇದೆ. ಆದರೆ ಕಳೆದ 6 ತಿಂಗಳಿಂದ ಆಧಾರ್ ಸೇವಾ ಕೇಂದ್ರ ಮುಚಿದ್ದರಿಂದ ಜನರು ಸರ್ಕಾರಿ ಸೇವೆ ಪಡೆಯಲು ಹಾಗೂ ಮಕ್ಕಳ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಹಾಕಲು ಸಮಸ್ಯೆಯಾಗಿದೆ.

'ಹೊಲದ ಪಹಣಿಗೆ ಆಧಾರ್ ಸಂಖ್ಯೆ ಜೋಡಣೆ ಮಾಡಬೇಕು. ಆದರೆ ಕೆಲವರ ಆಧಾರ್ ಕಾರ್ಡ್‌ನಲ್ಲಿ ಹೆಸರು, ವಿಳಾಸ ತಿದ್ದುಪಡಿ ಹಾಗೂ ದೂರವಾಣಿ ಸಂಖ್ಯೆ ಸೇರಿಸಲು ತೊಂದರೆಯಾಗಿದೆ ಎಂದು ರೈತ ಶಿವಪುತ್ರಪ್ಪ ಕೆಂಗೇರಿ ದೂರಿದರು.

'ಶಾಲೆ ದಾಖಲಾತಿ, ವಿದ್ಯಾರ್ಥಿ ವೇತನ ಸೇರಿದಂತೆ ರೈತರು ಪ್ರತಿಯೊಂದು ಸರ್ಕಾರಿ ಹಾಗೂ ಸರ್ಕಾರೇತರ ಸೌಲಭ್ಯ ಮತ್ತು ಸರ್ಕಾರಿ ನೌಕರಿಗೆ ಅರ್ಜಿ ಹಾಕಲು ಹಾಗೂ ಬ್ಯಾಂಕ್ ಇತರೆ ಸೌಲಭ್ಯಕ್ಕಾಗಿ ಆಧಾರ್ ಕಾರ್ಡ್ ಅವಶ್ಯಕವಾಗಿದೆ. ಕೆಲವು ಮಕ್ಕಳ ಜನನ ಪ್ರಮಾಣಪತ್ರಕ್ಕೂ ಮತ್ತು ಮಗುವಿನ ಹೆಸರಿಗೂ ವ್ಯತ್ಯಾಸವಿದೆ. ಹೀಗಾಗಿ ಆಧಾರ್ ತಿದ್ದುಪಡಿಯಾಗಬೇಕು. ಪಟ್ಟಣದಲ್ಲಿ ಶೀಘ್ರ ಆಧಾರ್ ಸೇವಾ ಕೇಂದ್ರ ತೆರೆಯಬೇಕು' ಎಂದು ಪಾಲಕರು ಆಗ್ರಹಿಸಿದ್ದಾರೆ.

ಅಂಬಾದಾಸ್, ಉಪ ತಹಶೀಲ್ದಾರ್ ತುರ್ವಿಹಾಳನೌಕರರ ಹಳೆಯ ಗುತ್ತಿಗೆ ಮುಗಿದಿದೆ. ಹೊಸ ಗುತ್ತಿಗೆ ನೌಕರರ ನೇಮಕ ಮಾಡಿಕೊಂಡು ಸೇವಾ ಕೇಂದ್ರ ಆರಂಭಿಸಲಾಗುವುದು ಶಾಮೀದ್ ಅಲಿ ಅರಬ್, ತುರ್ವಿಹಾಳಮಕ್ಕಳ ಶಾಲಾ ಪ್ರವೇಶಾತಿ ಸೇರಿ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಆಧಾರ್ ಕಾರ್ಡ್ ಅವಶ್ಯಕ. ಆಧಾರ್ ಸೇವಾ ಕೇಂದ್ರ ತೆರೆಯದ ಕಾರಣ ಆಧಾರ್ ಕಾರ್ಡ್ ಪಡೆಯಲು ನಿತ್ಯ ತಾಲ್ಲೂಕು ಕೇಂದ್ರಕ್ಕೆ ಅಲೆಯುವಂತಾಗಿದೆ.

# ತಾಲ್ಲೂಕಿನಾದ್ಯಂತ ಹದಗೆಟ್ಟ ರಸ್ತೆಗಳು: ಸಾರ್ವಜನಿಕರು ಹಿಡಿಶಾಪ

### ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಓಡಾಟ ಮಾಡುತ್ತಾರೆ ಆದರೆ ಸೈಲೆಂಟ್ ಆಗಿದ್ದಾರೆ

ಉದಯವಾಹಿನಿ, ವಿಶೇಷ ವರದಿ

• ಮಹೇಬೂಬಶಾ ಅಣವಾರ

• ಉದಯವಾಹಿನಿ ಚಿಂಚೋಳಿ



ಉದಯವಾಹಿನಿ ಚಿತ್ರ

ಪಟ್ಟಣ ಸೇರಿದಂತೆ ತಾಲ್ಲೂಕಿನಾದ್ಯಂತ ಗ್ರಾಮೀಣ ಪ್ರದೇಶದ ಡಾಂಬರೀಕರಣ ರಸ್ತೆಗಳು ಹದಗೆಟ್ಟಿದ್ದು ಪಿಡಬ್ಲ್ಯೂಡಿ ಇಲಾಖೆ ಅಧಿಕಾರಿಗಳು ಮಾತ್ರ ರಸ್ತೆಗೂ ನಮಗೂ ಸಂಬಂಧ ಇಲ್ಲದಂತೆ ಕಣ್ಮುಚ್ಚಿ ಕುಳಿತುಕೊಂಡಿದ್ದಾರೆ ಎಂದು ಸಾರ್ವಜನಿಕರು ಹಿಡಿಶಾಪ ಹಾಕುತ್ತಿದ್ದಾರೆ.

ಪಟ್ಟಣದ ಸಂಗೊಳ್ಳಿ ರಾಯಣ್ಣ ವೃತ್ತದಿಂದ ತಹಶೀಲ್ ಕಛೇರಿವರೆಗೆ ಅಲ್ಲಲ್ಲಿ ತೆಗ್ಗುಗುಂಡಿ ಬಿದ್ದಿದ್ದು ತಾಲ್ಲೂಕಾಮಟ್ಟದ ಅಧಿಕಾರಿಗಳು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಓಡಾಟ ಮಾಡುತ್ತಾರೆ ಆದರೆ ಸೈಲೆಂಟ್ ಆಗಿ ಇದ್ದಾರೆ.

ಪಟ್ಟಣದ ರಸ್ತೆಗಳು ಹದಗೆಟ್ಟಿವೆ ಆದರೆ ತಾಲ್ಲೂಕಿನಾದ್ಯಂತ ಗ್ರಾಮಗಳಿಗೆ ತೆರಳುವ ರಸ್ತೆಗಳ ಹಣೆಬರಹ ಕೇಳುವಂತ್ತಿಲ್ಲಾ,ಕುಂಚಾವರಂ ಕ್ರಾಸ್ ದಿಂದ ಚೆತ್ರಸಾಲ ಮಾರ್ಗವಾಗಿ ನಿಡಗುಂದಾ ಸೇಡಂಗೆ ಹೋಗುವ ರಸ್ತೆ ಅಂದರೆ ಸಾಕು ಸಾರ್ವಜನಿಕರು ಭಯಪಡುವ ಪರಿಸ್ಥಿತಿ ನಿರ್ಮಾಣವಾಗಿದೆ ಅಷ್ಟೆ ರಸ್ತೆಯಲ್ಲಿ ತೆಗ್ಗುಗುಂಡಿಗಳು ಬಿದ್ದಿರುವುದರಿಂದ ಅನೇಕ ಸವಾರರು ತೆಗ್ಗುಗುಂಡಿಗಳಲ್ಲಿ ಬಿದ್ದು ಕೈಕಾಲು ಮುರಿದುಕೊಂಡಿದ್ದು ಅನೇಕ ಉದಹಾರಣೆಗಳಿವೆ ಹಾಗೆಯೇ ಅಪಘಾತಗಳು ಕೂಡ ಬಹಳಷ್ಟುವಾಗಿವೆ,ಅನೇಕ ಬಾರಿ ಈ ಭಾಗದ ಸಾರ್ವಜನಿಕರು ವಿದ್ಯಾರ್ಥಿಗಳು ಮೌಖಿಕವಾಗಿ ಲಿಖಿತವಾಗಿ ಮನವಿಗಳು ಸಲ್ಲಿಸಿ ಸಾಕಾಗಿದೆ ಆದರೆ ರಸ್ತೆಗಳು ಮಾತ್ರ ದುರಸ್ತಿಗೆ ಜನಪ್ರತಿನಿಧಿಗಳಾಗಲಿ ಅಂಥವ ಅಧಿಕಾರಿಗಳಾಗಲಿ ಮುಂದಾಗುತ್ತಿಲ್ಲಾ ಇದು ದುರದೃಷ್ಟಕರ ಸಂಗತಿಯಾಗಿದೆ.

**ಕಣ್ಮುಚ್ಚಿ ಕುಳಿತ ಪಿಡಬ್ಲ್ಯೂಡಿ ಅಧಿಕಾರಿಗಳು**

ಚಿಮ್ಮಾಯಿದ್ಲಾಯಿ ಕ್ರಾಸ್ ದಿಂದ ಐನಾಪೂರ ಗ್ರಾಮಕ್ಕೆ ಹೋಗುವ ರಾಜ್ಯ ಹೆದ್ದಾರಿಯು ಸಂಪೂರ್ಣವಾಗಿ ಅಲ್ಲಲ್ಲಿ ತೆಗ್ಗುಗುಂಡಿಗಳು ಬಿದ್ದು ಡಾಂಬರಿಕರಣ ರಸ್ತೆ ಕಿತ್ತುಹೋಗಿದೆ ಆದರೆ ಪಿಡಬ್ಲ್ಯೂಡಿ ಇಲಾಖೆಯ ಅಧಿಕಾರಿಗಳಾಗಲಿ ಜನಪ್ರತಿನಿಧಿಗಳಾಗಲಿ ಮೌನಕ್ಕೆ ಜಾರಿದ್ದಾರೆ,ಹಾಗೆಯೇ ಚಿಂಚೋಳಿ ಬಸವೇಶ್ವರ ವೃತ್ತದಿಂದ ಹೊಡೆಬೀರನಳ್ಳಿ ಕ್ರಾಸ್ ವರೆಗೂ ಸಹ ಡಾಂಬರಿಕರಣ ರಸ್ತೆ ತುಂಬಾ ಹದಗೆಟ್ಟಿದ್ದು ತೆಗ್ಗುಗುಂಡಿಯಿಂದ ಸಾರ್ವಜನಿಕರು ಹಿಡಿಶಾಪ ಹಾಕುತ್ತಿದ್ದಾರೆ. ಇವೆಲ್ಲವೂ ರಸ್ತೆಗಳಲ್ಲಿ ಅನೇಕ ಗ್ರಾಮ ತಾಂಡಾಗಳು ಒಳಪಡುತ್ತವೆ ದಿನಾಲು ಚಿಂಚೋಳಿ, ಕಲಬುರ್ಗಿ,ಸೇಡಂ,ಚಿಟಗುಪ್ಪಾ, ನೇರೆಯ ತಾಂಡೂರ,ಕುಂಚಾವರಂಗಳಿಗೆ ದಿನಾಲು ವಿಧ್ಯಾಭ್ಯಾಸಕ್ಕಾಗಿ ವಿದ್ಯಾರ್ಥಿಗಳು,ಸಾಮಾಗ್ರಿಗಳು ಖರೀದಿಸಲು ರೈತರು,ಇನ್ನಿತರ ಕೆಲಸಗಳಿಗಾಗಿ ಸರ್ಕಾರಿ ಕಛೇರಿಗಳಿಗೆ ಬರುವ ಸಾರ್ವಜನಿಕರು ಬಹಳಷ್ಟು ಕಷ್ಟಪಡುತ್ತಿದ್ದಾರೆ,ಅನೇಕ ಸವಾರರು ತೆಗ್ಗುಗುಂಡಿಗಳಲ್ಲಿ ಬಿದ್ದು ಕೈಕಾಲು ಮುರಿದಿವೆ ಜೋತೆಗೆ ಕಾರು ಜೀಪುಗಳು ಅನೇಕ ಅಪಘಾತ ಸಂಭವಿಸಿವೆ,ರಸ್ತೆಗಳು ಹದಗೆಟ್ಟಿರುವುದರಿಂದ ತಾಲ್ಲೂಕಿನಾದ್ಯಂತ ಸಮಯಕ್ಕೆ ವಿದ್ಯಾರ್ಥಿಗಳು ಶಾಲಾಕಾಲೇಜುಗಳಿಗೆ ಹೋಗಲು ತೊಂದರೆಯಾಗುತ್ತಿದೆ,ಪಟ್ಟಣಕ್ಕೆ ಸರ್ಕಾರಿ ಕೆಲಸಗಳಿಗೆ ಸಾರ್ವಜನಿಕರು ಬರಬೇಕಾದರೆ ಸಮಯ ಬಹಳಷ್ಟು ಹಾಳಾಗುತ್ತಿದೆ,ಮಳೆಗಾಲದ ಮಳೆ ಬಹಳಷ್ಟು ಸುರಿದು ರಸ್ತೆಗಳು ಸಹ ತೆಗ್ಗುಗುಂಡಿ ಬಿದ್ದಿವೆ ಆದರೆ ಪಿಡಬ್ಲ್ಯೂಡಿ ಇಲಾಖೆ ಅಧಿಕಾರಿಗಳು ಮಾತ್ರ ತಾತ್ಕಾಲಿಕ ದುರಸ್ತಿ ಕಾರ್ಯ ಕೂಡ ಮಾಡದೆ ನಿರ್ಲಕ್ಷ್ಯವಹಿಸುತ್ತಿದ್ದಾರೆ ಎಂಬುವುದು ಜನರ ಅಭಿಪ್ರಾಯವಾಗಿದೆ.

ಕುಂಚಾವರಂ,ವೆಂಕಟಾಪುರ, ಚೆತ್ರಸಾಲ, ಗಣಾಪುರ, ಭಕ್ತಂಪಳ್ಳಿ,ಗರಗಪಳ್ಳಿ, ಅಣವಾರ, ಗಂಗನಪಳ್ಳಿ,ಚಿಮ್ಮಾಯಿದ್ಲಾಯಿ,ಹುಡದಳ್ಳಿ, ದೋಟಿಕೋಳ,ಚಿಮ್ಮಾನಚೋಡ, ನರನಾಳ, ರಾಣಾಪುರ ಕ್ರಾಸ್ ಗಡಿಲಿಂಗದಳ್ಳಿ,ಐನಾಪೂರ,ಚೆಂಗಟಾ, ರುಸ್ತಾಂಪುರ, ಸೇರಿದಂತೆ ಹಲವಾರು ಗ್ರಾಮಗಳ ರಸ್ತೆಗಳು ತೆಗ್ಗುಗುಂಡಿ ಬಿದ್ದು ಹದೆಗೆಟ್ಟಿವೆ ಪಟ್ಟಣಕ್ಕೆ ಬರುವ ರೋಗಿಗಳಿಗೆ, ಭಾಣಂತಿಯರಿಗೆ, ಶಾಲಾಮಕ್ಕಳಿಗೆ, ರೈತರಿಗೆ ಬರಲು ಬಹಳಷ್ಟು ತೊಂದರೆ ಅನುಭವಿಸುತ್ತಿದ್ದು ಹಿಡಿಶಾಪ ಹಾಕುತ್ತಿದ್ದಾರೆ ಜನರ ಅನುಕೂಲಕ್ಕಾಗಿ ಜನಪ್ರತಿನಿಧಿಗಳು ಇಲಾಖೆ ಅಧಿಕಾರಿಗಳು ರಸ್ತೆಗಳು ದುರಸ್ತಿಗೊಳಿಸಿ ಜನರಿಗೆ ಅನುಕೂಲ ಕಲ್ಪಿಸಿಕೊಡುತ್ತಾರೆಯೋ ಇಲ್ಲವೋ ಕಾದುನೋಡಬೇಕಾಗಿದೆ.

> ಈಗಾಗಲೇ ರಸ್ತೆಗಳು ಹದಗೆಟ್ಟಿದ್ದು ನೋಡಿ ಸರ್ವೆ ನಡೆಸಿ ನೂತನ ರಸ್ತೆ ಅಥವಾ ದುರಸ್ತಿಗಾಗಿ ವರದಿ ಕಳುಹಿಸಿದ್ದೇನೆ, ಐನಾಪೂರಯಿಂದ ರಾಣಾಪುರ ಕ್ರಾಸ್ ವರೆಗೆ ತಾತ್ಕಾಲಿಕ ದುರಸ್ತಿಗೊಳಿಸಲು ಅನುಮೋದನೆ ದೊರಕಿದ್ದು ಎಡ್ಮೂರು ದಿನಗಳಲ್ಲಿ ಕೆಲಸ ಪ್ರಾರಂಭವಾಗಲಿದೆ.ಚೆತ್ರಸಾಲ ಯಿಂದ ಕುಂಚಾವರಂ ಕ್ರಾಸ್ ವರೆಗೆ ಬಿದ್ದ ತೆಗ್ಗುಗುಂಡಿ ಮುಚ್ಚಲು ಈಗಾಗಲೇ ಮುರುಬ್ ಹಾಕಲು ಸೂಚಿಸಲಾಗಿದೆ ತೆಗ್ಗುಗುಂಡಿಗಳು ಮುಚ್ಚಾಲಾಗುವುದು,ಹಾಗೆಯೇ ಸಿಮೆಂಟ್ ಕಾರ್ಖಾನೆಗಳ ಅತಿಯಾದ ಭಾರವುಳ್ಳ ಲಾರಿಗಳು ಸಂಚಾರ ಮಾಡುತ್ತಿರುವುದರಿಂದ ರಸ್ತೆ ಕೆಟ್ಟುಹೋಗುತ್ತಿದೆ ಅದಕಾರಣ ಕಾರ್ಖಾನೆಯವರಿಗೂ ಸಹ ಪತ್ರ ಬರೆದು ಪಿಡಬ್ಲ್ಯೂಡಿ ಮೇಲಾಧಿಕಾರಿಗಳಿಗೆ ಪತ್ರ ಬರೆದಿದ್ದೇನೆ,ಉಳಿದ ಎಲ್ಲಾ ರಸ್ತೆಗಳ ಸಣ್ಣಪುಟ್ಟ ತೆಗ್ಗುಗುಂಡಿಗಳು ಮುಚ್ಚುವ ಕೆಲಸ ಮಾಗಲಾಗುವುದು - **ಬಸವರಾಜ ಬೇನೂರ**, ಎಇಇ ಪಿಡಬ್ಲ್ಯೂಡಿ ಇಲಾಖೆ ಚಿಂಚೋಳಿ

> ತಾಲ್ಲೂಕಿನಾದ್ಯಂತ ಎಲ್ಲಾ ಡಾಂಬರಿಕರಣ ರಸ್ತೆಗಳು ಹದೆಗೆಟ್ಟಿವೆ,ಅನೇಕರು ಹದಗೆಟ್ಟ ರಸ್ತೆಯ ತೆಗ್ಗುಗುಂಡಿಗಳಲ್ಲಿ ಅನೇಕ ವಾಹನ ಸವಾರರು ಬಿದ್ದು ಘಾಯ ಮತ್ತು ಕೈಕಾಲು ಮುರಿದುಕೊಂಡಿದ್ದಾರೆ,ಆದರೆ ಜನಪ್ರತಿನಿಧಿಗಳಾಗಲಿ ಅಧಿಕಾರಿಗಳಾಗಲಿ ಗಮನಹರಿಸುತ್ತಿಲ್ಲಾ ಬಹಳಷ್ಟು ನೋವಿನ ಸಂಗತಿಯಾಗಿದೆ. ಅನೇಕ ಬಾರಿ ಸಂಬಂಧ ಪಟ್ಟ ಅಧಿಕಾರಿಗಳಿಗೆ ಮೌಖಿಕವಾಗಿ ಮನವಿಸಲ್ಲಿಸಿದರು ಪ್ರಯೋಜನವಾಗಿಲ್ಲ,ಅಧಿಕಾರಿಗಳು ಗಾಢ ನಿದ್ರೆಯಲ್ಲಿದ್ದು ಕಣ್ಮುಚ್ಚಿ ಕುಳಿತ್ತಿದ್ದಾರೆ,ಐನಾಪೂರ ಯಿಂದ ಚಿಂಚೋಳಿ ವರೆಗೆ ರಸ್ತೆ ತುಂಬಾ ಹದೆಗೆಟ್ಟಿದೆ, ಶಾಲಾಮಕ್ಕಳಿಗೆ, ಗರ್ಭಿಣಿಯರಿಗೆ,ಹಿರಿಯ ಅಜ್ಜ ಅಜ್ಜಿಯರಿಗೆ, ಚಿಂಚೋಳಿ ಇನ್ನಿತರ ಸಂಚಾರ ಮಾಡಲು ಬಹಳಷ್ಟು ಕಷ್ಟಪಡಬೇಕಾಗಿದೆ ಸಾರ್ವಜನಿಕರ ಅನುಕೂಲಕ್ಕಾಗಿ ತಾಲ್ಲೂಕಿನಾದ್ಯಂತ ಹದಗೆಟ್ಟ ರಸ್ತೆಗಳು ದುರಸ್ತಿಗೊಳಿಸಿ ಜನರಿಗೆ ಅನುಕೂಲ ಕಲ್ಪಿಸಿಕೊಡಬೇಕು
> -**ಶಿವಾನಂದ ಮಾಲಿ ಪಾಟೀಲ**, ರೈತ ಹೋರಾಟಗಾರ ಐನಾಪೂರ

## ತಾಂಬಾ ಮಾಹಾಶಕ್ತಿ ಕೇಂದ್ರದಲ್ಲಿ ಬಿಜೆಪಿ ಸದಸ್ಯತ್ವ ಅಭಿಯಾನ ಕೈಗೊಂಡ ನಿಕಟಪೂರ್ವ ಶಾಸಕ ರಮೇಶ ಭೂಸನೂರ

• ಉದಯವಾಹಿನಿ ತಾಂಬಾ


ಉದಯವಾಹಿನಿ ಚಿತ್ರ


ಭಾರತೀಯ ಜನತಾ ಪಕ್ಷದ ಸದಸ್ಯತಾ ಅಭಿಯಾನ -2024 ರ ಭಾಗವಾಗಿ ನಮ್ಮೆಲ್ಲ ಕಾರ್ಯಕರ್ತರು ಹಾಗೂ ಪದಾಧಿಕಾರಿಗಳು ಪ್ರತಿ ಭೂತನಲ್ಲಿ ಸುಮಾರು ಮೂರು ನೂರು ಸದಸ್ಯರನ್ನು ಮಾಡುವ ಮುಖಾಂತರ ಸಿಂದಗಿ ಮತಕ್ಷೇತ್ರಕ್ಕೆ ಐವತ್ತು ಸಾವಿರ ಸದಸ್ಯರನ್ನು ಮಾಡಬೇಕು ಎಂದು ಸಿಂದಗಿ ಕ್ಷೇತ್ರದ ನಿಕಟಪೂರ್ವ ಶಾಸಕ ರಮೇಶ ಭೂಸನೂರ ಈ ಸಂದರ್ಭದಲ್ಲಿ ಹೇಳಿದರು. ಇದೆ ಸಂದರ್ಭದಲ್ಲಿ ಜಿಲ್ಲೆಯ ಬಿಜೆಪಿ ವಕ್ತಾರರು ಹಾಗೂ ತಾಂಬಾ ಜಿಲ್ಲಾ ಪಂಚಾಯತ ಸದಸ್ಯತ್ವ ಅಭಿಯಾನ ಉಸ್ತುವಾರಿಗಳು ಡಾ. ಸುರೇಶ ಗೌಡ ಬಿರಾದಾರ ಮಾತನಾಡಿ ಪ್ರತಿಯೊಂದು ಭೂತದಲ್ಲಿ ನಮ್ಮ ಪ್ರತಿಯೊಬ್ಬ ಕಾರ್ಯಕರ್ತರು ಸಕ್ರಿಯರಾಗಿ ಕೈಜೋಡಿಸಿ ಎಂದು ಮನವಿ ಮಾಡಿದರು.

ಇದೆ ಸಂದರ್ಭದಲ್ಲಿ ಸಿಂದಗಿ ತಾಲ್ಲೂಕು ಸದಸ್ಯತ್ವ ಅಭಿಯಾನ ಸಂಚಾಲಕರು ಹಾಗೂ ಬಿಜೆಪಿ ಜಿಲ್ಲಾ ರೈತ ಮೋರ್ಚಾ ಉಪಾಧ್ಯಕ್ಷರು ಶಿವರಾಜ್ ಕೆಂಗನಾಳ ಪ್ರಸ್ತಾವಿಕ ಮಾತನಾಡಿ ಇಡೀ ವಿಶ್ವದಲ್ಲಿಯೇ ನಮ್ಮ ಬಿಜೆಪಿ ಪಕ್ಷ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ, ನಮ್ಮೆಲ್ಲ ಕಾರ್ಯಕರ್ತರು ಬಿಜೆಪಿ ಪಕ್ಷದ ಆಧಾರ ಸ್ಥಂಭವಾಗಿ ಮೋದಿಜೀ ವಿಕಸಿತ ಭಾರತ ಕನಸು ನನಸು ಮಾಡುವ ನಿಟ್ಟಿನಲ್ಲಿ ನಾವೆಲ್ಲರೂ ಅಭಿಯಾನದಲ್ಲಿ ಪಾಲ್ಗೊಂಡು ಸದಸ್ಯತ್ವ ಪಡೆದು ಪ್ರಧಾನಿ ಶ್ರೀ ನರೇಂದ್ರ ಮೋದಿ ಜಿ ಅವರ ವಿಕಸಿತ ಭಾರತ ನಿರ್ಮಾಣಕ್ಕೆ ನಾವೆಲ್ಲರೂ ಕಾರಣೀಭೂತರಾಗೋಣ ಎಂದರು.

ಈ ಸಮಯದಲ್ಲಿ ಗ್ರಾಮದ ಹಿರಿಯ ಮುಖಂಡ ಜಿ ವಾಯ್ ಗೊರನಾಳ, ಶಂಕರ ಯಳಕೋಟಿ, ಭೀಮಾಶಂಕರ ಗೊಂಗಿ, ರಾಜು ಗಂಗನಳ್ಳಿ, ಬಸವರಾಜ ಸರಸಂಬಿ, ಸಿದ್ದಪ್ಪ ತೋರವಿ, ಗುರುರಾಜ್ ಚಿಂಚೋಳಿ, ಶ್ರೀಶೈಲ್ ನಿಂಗಮನಿ ಹಾಗೂ ಬಿಜೆಪಿ ಕಾರ್ಯಕರ್ತರು, ಅಭಿಮಾನಿಗಳು ಇದ್ದರು.

## ಸಂಘದ ಹೆಮ್ಮರವಾಗಿ ಬೆಳೆಯಬೇಕು: ಚಿದಾನಂದ ಸೀತಿಮನಿ

• ಉದಯವಾಹಿನಿ ಮುದ್ದೇಬಿಹಾಳ


ಉದಯವಾಹಿನಿ ಚಿತ್ರ

ಸಂಘದಲ್ಲಿರುವ ರೈತರೆಲ್ಲರೂ ನಮ್ಮವರು ನಾನು ನಿಮ್ಮವನು ನಮ್ಮ ಪ್ರಾಥಮಿಕ ಕೃಷಿ ಸಂಘ ಹೆಮ್ಮರವಾಗಿ ಬೆಳೆಯಬೇಕು ಎಂದು ಚಿದಾನಂದ ಸೀತಿಮನಿ ಹೇಳಿದರು ಕೋಳೂರ ಎಲ್ ಟಿ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ 59 ನೇ ವಾರ್ಷಿಕ ಮಹಾಸಭೆ ಉದ್ದೇಶಿಸಿ ಮಾತನಾಡಿದರು.

ಇಲ್ಲಿಯವರೆಗೆ ಸ್ವಂತ ಕಟ್ಟಡ ಇರಲಿಲ್ಲ ಸದ್ಯ ನೂತನ ಕಟ್ಟಡ ಮುಂದಿನ ತಿಂಗಳು ಲೋಕಾರ್ಪಣೆಗೂಳ್ಳಲಿದೆ ಸರಕಾರದಿಂದ ಸಿಗುವಂತಹ ಎಲ್ಲಾ ಸೌಲಭ್ಯ ಒದಗಿಸುವ ಪ್ರಯತ್ನ ಮಾಡುತ್ತೇನೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ರವಿ ನಾಯಕ ಸಂಘದ ಎಲ್ಲಾ ಸದಸ್ಯರ ಸಲಹೆ ಮಾರ್ಗದರ್ಶನದಿಂದ ಅಧ್ಯಕ್ಷರು ಸಂಘವನ್ನು ಮುನ್ನಡೆಸುತ್ತಿದ್ದಾರೆ ಸಂಘದ ಏಳ್ಗಗೆ ಹಗಲಿರುಳು ಶ್ರಮಿಸಿದ ಫಲವಾಗಿ ಇಂದು ಸಂಘದ ನೂತನ ಭವ್ಯ ಕಟ್ಟಡ ತಲೆ ಎತ್ತಿ ನಿಂತಿದೆ ಎಂದರು.

ಈ ವೇಳೆ ತಾಲೂಕು ರೈತ ಸಂಘದ ಅಧ್ಯಕ್ಷ ಅಯ್ಯಪ್ಪ ಬಿದರಕುಂದಿ ಮಾತನಾಡಿದರು

ವಾರ್ಷಿಕ ಅಡಾವೆ ಪತ್ರಿಕೆ ಓದಿ ಹೇಳಿದ ಮುಖ್ಯ ಕಾರ್ಯನಿರ್ವಾಹಕ ಸಂಗಯ್ಯಾ ಹೊನ್ನಳ್ಳಿ ಪ್ರಸಕ್ತ ವರ್ಷ ಸಂಘದಲ್ಲಿ 10 ಲಕ್ಷ 33 ಸಾವಿರ ರೂ ನಿವ್ವಳ ಲಾಭಗಳಿಸಿದೆ ಎಂದರು.

ಸಭೆಯಲ್ಲಿ ಉಪಾಧ್ಯಕ್ಷ ಯಲಗೂರದಪ್ಪ ಝುಳಕಿ, ನಿರ್ದೇಶಕರುಗಳಾದ ಅಯ್ಯಪ್ಪ ಬಿದರಕುಂದಿ, ಚನ್ನಬಸಪ್ಪ ಕೋಳೂರ, ಭೀಮಪ್ಪ ವಾಲಿಕಾರ, ಮಲ್ಲಮ್ಮ ಹಳ್ಳೂರ, ಶ್ರೀಮತಿ ಚನ್ನವ್ವ ಬೈಯ್ಯಾಪೂರ , ಮಲ್ಲಪ್ಪ ತಾರನಾಳ, ರೀತಿಬಾಯಿ ಲಮಾಣಿ, ಗುರುಬಾಯಿ ಜಾಧವ, ಕೋಬಾನಾಯಕ ಧರ್ಮಗಿರಿ, ಸದಸ್ಯರುಗಳಾದ ಸಿಬ್ಬಂದಿ ಮಲ್ಲಿಕಾರ್ಜುನ ಬಿರಾದಾರ ಸೇರಿದಂತೆ ಕೋ ಳೂರ, ನೇಬಗೇರಿ, ಬನೋಶಿ, ಗೋನಾಳ ಎಸ್ ಹೆಚ್, ದೇವೂರ ಗ್ರಾಮದ ಸದಸ್ಯರು ಭಾಗವಹಿಸಿದ್ದರು.

> ಕೋಳೂರ ಎಲ್ ಟಿ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಂಘದ ನೂತನ ಕಟ್ಟಡಕ್ಕೆ ಬಂದ ಅನುದಾನಕ್ಕಿಂತ ಹೆಚ್ಚಿನ ವೆಚ್ಚವನ್ನು ನನ್ನ ಕೈಯಿಂದ ಹಾಕಿರುವೆ ಇಲ್ಲಿಯವರೆಗೆ ಸಂಘದ ಸದಸ್ಯರ ಹಣವನ್ನು ಖರ್ಚು ಮಾಡಿಸಿಲ್ಲ ಮತ್ತು ನೂತನ ಕಟ್ಟಡ ಲೋಕಾರ್ಪಣೆಗೆ ತಗುಲುವ ವೆಚ್ಚವನ್ನು ನಾನೇ ಭರಿಸುತ್ತೇನೆ ಎಲ್ಲಾ ಸದಸ್ಯರು ರೈತರು ಮುಂದೆ ನಿಂತು ಕಾರ್ಯಕ್ರಮ ಯಶಸ್ವಿಗೂಳಿಸಿ
> -ಚಿದಾನಂದ ಸೀತಿಮನಿ, ಅಧ್ಯಕ್ಷರು

## ಉದಯವಾಹಿನಿ ವರದಿಗೆ ಎಚ್ಚೆತ್ತ ತಾಪಂ ಅಧಿಕಾರಿಗಳು


ಉದಯವಾಹಿನಿ ಚಿತ್ರ



ಶುದ್ಧ ನೀರು ಸರಬರಾಜು ಘಟಕ ಆರಂಭ ಎಂದು?
• ಗ್ರಾಪಂ ಇಲಾಖೆ ಅಧಿಕಾರಿಗಳು ಇದಕ್ಕೂ ನಮಗೂ ಯಾವುದೇ ಸಂಬಂಧವಿಲ್ಲದಂತೆ ಗಪ್ ಚುಪ್ ಆಗಿದ್ದಾರೆ

• ಉದಯವಾಹಿನಿ ಮುದ್ದೇಬಿಹಾಳ

ಶುಕ್ರವಾರ ತಾಲ್ಲೂಕಿನ ಮಡಿಕೇಶ್ವರ ಗ್ರಾಮದ ಘನ ತ್ಯಾಜ್ಯ ಘಟಕಕ್ಕೆ ದಾರಿ ಯಾವುದಯ್ಯಾ ? ಶುದ್ದ ನೀರು ಸರಬರಾಜು ಘಟಕ ಆರಂಭ ಎಂದು ಶೀರ್ಷಿಕೆ ಅಡಿಯಲ್ಲಿ ವರದಿ ಮಾಡಲಾಗಿತ್ತು. ನಮ್ಮ ಪತ್ರಿಕೆ ವರದಿಗೆ ಎಚ್ಚೆತ್ತ ಗ್ರಾಪಂ ಸಂಭಂಧಿಸಿದ ಜಿಲ್ಲೆಯ ಹಿರಿಯ ಅಧಿಕಾರಿಗಳು ಹಾಗೂ ತಾಪಂ ಅಧಿಕಾರಿಗಳು ಮಡಿಕೇಶ್ವರ ಗ್ರಾಪಂ ಪಿಡಿಓ ಗೆ ಘನ ತಾಜ್ಯ ಘಟಕಕ್ಕೆ ರಸ್ತೆ ನಿರ್ಮಾಣ ಸೂಚಿಸಿದ್ದರು. ಅದರಂತೆ ಶನಿವಾರ ಬೆಳಗ್ಗೆಯೇ ಮಡಿಕೇಶ್ವರ ಗ್ರಾಮದಲ್ಲಿ ಘನ ತಾಜ್ಯ ಘಟಕಕ್ಕೆ ಹೋಗಲು ಆಗದಂತೆ ಇದ್ದ ಎಲ್ಲಾಮುಳ್ಳು ಕಂಟಿಗಳನ್ನು ಜೆಸಿಬಿಯಿಂದ ಸ್ವಚ್ಚತೆ ಮಾಡಿ ಕಸದ ವಾಹನ ಹೋಗುವಂತೆ ಸುಗಮ ಸಂಚಾರಕ್ಕೆ ಅನುಕೂಲ ಮಾಡಿದ್ದಾರೆ ಮತ್ತು ಹಳ್ಳದಲ್ಲಿ ಎಸೆಯಲಾಗಿದ್ದ ಕಸವನ್ನು ತೆಗೆದಿದ್ದಾರೆ. ಈ ಕುರಿತು ಮಾಧ್ಯಮಗಳ ಜೊತೆ ಮಾತನಾಡಿದ ಮಡಿಕೇಶ್ವರ ಪಿಡಿಓ ಬಸವರಾಜ ಹಿರೇಕುರಬರ ಘನ ತಾಜ್ಯ ಘಟಕಕ್ಕೆ ಹೋಗಲು ರಸ್ತೆ ಸ್ವಚ್ಚತೆ ಮಾಡಿದ್ದೇವೆ ಮತ್ತು ಶುದ್ದ ನೀರಿನ ಘಟಕದ ಬಗ್ಗೆ ಸ್ಪಷ್ಟನೆ ನೀಡಿದ ಅವರು ಟಾಟಾ ಏಜೆನ್ಸಿ ಅಧಿನದಲ್ಲಿದೆ ನಮಗೆ ಹ್ಯಾಂಡ್ ಅವರ ಮಾಡಿರುವುದಿಲ್ಲ ಗ್ರಾಮದ ಜನರಿಗೆ ಶುದ್ದ ಕ ಕುಡಿಯುವ ನೀರಿನ ವ್ಯವಸ್ಥೆ ಮಾಡುತ್ತೇವೆ ಹಿಂದುಳಿದ ವರ್ಗದ ಬಡಾವಣೆ ಬಿಡುವ ಕುಡಿಯುವ ನೀರನ್ನು ಪ್ರಯೋಗಾಲಯಕ್ಕೆ ಕಳಿಸಿದ್ದೇವೆ ಅಲ್ಲಿಯೂ ಸಹ ಪರ್ಯಾಯವಾಗಿ ಶುದ್ದ ನೀರು ಪೂರೈಕೆ ಮಾಡುತ್ತೇವೆ ಎಂದರು. ನಿಮ್ಮ ಪತ್ರಿಕೆ ವರದಿ ಪರಿಣಾಮ ಘನ ತಾಜ್ಯ ಘಟಕಕ್ಕೆ ರಸ್ತೆ ಸುಗಮವಾಗಿದೆ ಮತ್ತು ಶುದ್ದ ನೀರನ್ನು ಪೂರೈಕೆ ಮಾಡುವ ಭರವಸೆ ನೀಡಿದ್ದಾರೆ ಎಂದು ಮುಖಂಡ ಬಸನಗೌಡ ಪಾಟೀಲ್, ಶಾಂತಪ್ಪ ಚಲವಾದಿ ಕೃತಜ್ಞತೆ ಸಲ್ಲಿಸಿದರು.

## ಚದುರಂಗ ಆಟದಲ್ಲಿ ವಿದ್ಯಾರ್ಥಿನಿ ರಾಜ್ಯ ಮಟ್ಟಕ್ಕೆ ಆಯ್ಕೆ

• ಉದಯವಾಹಿನಿ ಸಿರುಗುಪ್ಪ


ಉದಯವಾಹಿನಿ ಚಿತ್ರ

ನಗರದ ಎಸ್.ಇ.ಎಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಜಿಲ್ಲಾ ಮಟ್ಟದಲ್ಲಿ ನಡೆದ ಕ್ರೀಡೆಯಲ್ಲಿ ವಿಜೇತರಾಗಿ ರಾಜ್ಯ ಮಟ್ಟಕ್ಕೆ ಆಯ್ಕೆಗೊಂಡಿರುವ ವಿದ್ಯಾರ್ಥಿನಿಯನ್ನು ಶಾಲಾ ಆಡಳಿತ ಮಂಡಳಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು.

ಶಾಲೆಯ ಮುಖ್ಯೋಪಾಧ್ಯಾಯಿನಿ ಲಿಲ್ಲಿ ಥಾಮಸ್ ಅವರು ಮಾತನಾಡಿ ನಮ್ಮ ಶಾಲೆಯ ಸಹ ಶಿಕ್ಷಕರು ಮತ್ತು ದೈಹಿಕ ಶಿಕ್ಷಕರ ಪರಿಶ್ರಮದಿಂದಾಗಿ 7ನೇ ತರಗತಿ ವಿದ್ಯಾರ್ಥಿನಿ ಮೈತ್ರಿ.ಜಿ. ಚದುರಂಗ ಆಟವನ್ನು ಜಿಲ್ಲಾ ಮಟ್ಟದಲ್ಲಿ ವಿಜೇತರಾಗಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿರುವುದು ನಮ್ಮ ಶಾಲೆಗೆ ಕೀರ್ತಿ ತಂದಿದ್ದಾರೆ.

ಮುಂದಿನ ರಾಜ್ಯ ಮಟ್ಟದ ಕ್ರೀಡೆಯಲ್ಲೂ ಉತ್ತಮ ಸಾಧನೆಗೈದು ರಾಷ್ಟ್ರ ಮಟ್ಟದಲ್ಲೂ ನಮ್ಮ ಶಾಲೆಯ ಗರಿಮೆಯನ್ನು ಹೆಚ್ಚಿಸಲೆಂದು ಅದಕ್ಕಾಗಿ ಪೂರಕ ತರಬೇತಿಯನ್ನು ಹೆಚ್ಚಿನದಾಗಿ ನೀಡುವುದಾಗಿ ತಿಳಿಸಿದರು. ವಿದ್ಯಾರ್ಥಿನಿ ಮೈತ್ರಿ.ಜಿ, ಮಾತನಾಡಿ ಚದುರಂಗ ಆಟದಲ್ಲಿ ಸ್ಫೂರ್ತಿ ಮುಖ್ಯವಾಗಿದ್ದು ನನ್ನ ಸಾಧನೆಗೆ ಶ್ರಮಿಸಿದ ಎಲ್ಲಾ ಶಿಕ್ಷಕ ರಿಗೂ ಧನ್ಯವಾದಗಳನ್ನು ತಿಳಿಸುತ್ತೇನೆಂದರು. ಇದೇ ವೇಳೆ ಶಿಕ್ಷಕರಾದ ಸುಬ್ರಹ್ಮಣ್ಯ, ಅನ್ನಪೂರ್ಣ, ಆಶಾರಾಣಿ, ಖಾದರ್‌ಭಾಷ, ಹಾಗೂ ವಿದ್ಯಾರ್ಥಿಗಳು ಇದ್ದರು.

> ಹಾಸನದಲ್ಲಿ ರಾಜ್ಯ ಮಟ್ಟದ ಕ್ರೀಡೆಗಳು ಜರುಗಲಿವೆ ಅಲ್ಲಿಯೂ ಉತ್ತಮ ಸಾಧನೆಗೈಯಲೆಂಬುದು ನಮ್ಮೆಲ್ಲರ ಆಶಯವಾಗಿದೆ
> -ವೈ.ಡಿ.ವೆಂಕಟೇಶ, ದೈಹಿಕ ಶಿಕ್ಷಕ

## ಸ್ಥಾಯಿ ಸಮಿತಿಗಳ ಚುನಾವಣೆಗೆ ಮಹೂರ್ತ ಫಿಕ್ಸ್

• ಉದಯವಾಹಿನಿ ಧಾರವಾಡ



ಉದಯವಾಹಿನಿ ಚಿತ್ರ

ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ 23ನೇ ಅವಧಿಯ ವಿವಿಧ ನಾಲ್ಕು ಸ್ಥಾಯಿ ಸಮಿತಿಗಳಿಗೆ ಸದಸ್ಯರ ಆಯ್ಕೆಗೆ ಚುನಾವಣೆಯನ್ನು ಆಯೋಜಿಸಲಾಗಿದೆ. ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ವಿವಿಧ ನಾಲ್ಕು ಸ್ಥಾಯಿ ಸಮಿತಿಗೆ ಸ್ಪರ್ಧಿಸುವವರು ಅಕ್ಟೋಬರ್ 3, 2024 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 12 ಗಂಟೆಯವರೆಗೆ ನಾಮಪತ್ರಗಳನ್ನು ಸ್ವೀಕರಿಸಲಾಗುವುದು. ಪಾಲಿಕೆಯ ಚುನಾವಣೆಯನ್ನು ಅಕ್ಟೋಬರ್ 3, 2024 ರಂದು ಮಧ್ಯಾಹ್ನ 3 ಗಂಟೆಗೆ ಹುಬ್ಬಳ್ಳಿ ಮಹಾನಗರ ಪಾಲಿಕೆಯ ಸಭಾಭವನದಲ್ಲಿ ನಡೆಸಲಾಗುವುದು ಎಂದು ಬೆಳಗಾವಿ ಪ್ರಾದೇಶಿಕ ಆಯುಕ್ತರು ಹಾಗೂ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸ್ಥಾಯಿ ಸಮಿತಿಯ ಚುನಾವಣೆಯ ಅಧ್ಯಕ್ಷಾಧಿಕಾರಿ ಎಸ್.ಬಿ.ಶೆಟ್ಟೆಣ್ಣವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಾಖಲೆಯಿಲ್ಲದ 1 ಕೋಟಿ ಮೌಲ್ಯದ ತಂಬಾಕು ಪದಾರ್ಥ ಜಪ್ತಿ

• ಉದಯವಾಹಿನಿ ಬೀದರ್

ವಾಣಿಜ್ಯ ತೆರಿಗೆ, ಪೊಲೀಸ್ ಮತ್ತು ಆಹಾರ ಸುರಕ್ಷತಾ ಇಲಾಖೆ ಅಧಿಕಾರಿಗಳು ಜಂಟಿ ಕಾರ್ಯಚರಣೆ ನಡೆಸಿ ನಗರ ಹೊರವಲಯದ ಕೊಳಾರ ಕೈಗಾರಿಕಾ ಪ್ರದೇಶದ ಗೋದಾಮಿನಲ್ಲಿ ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ 1 ಕೋಟಿ ಮೌಲ್ಯದ ತಂಬಾಕು ಪದಾರ್ಥ, ಪಾನ್ ಮಸಾಲ ಜಪ್ತಿ ಮಾಡಿದ್ದಾರೆ. ಘಟನೆ ಸಂಬಂಧ ಲಾರಿ ಚಾಲಕ ಹಾಗೂ ಗೋದಾಮಿನ ಸಿಬ್ಬಂದಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದಾಗ ಗೋಡಂಬಿ ಪ್ಯಾಕೇಟ್‌ನಲ್ಲಿ ಸುಮಾರು 40 ವಿವಿಧ ಬ್ರಾಂಡ್‌ನ ತಂಬಾಕು ಹಾಗೂ ಕಚ್ಚಾ ವಸ್ತುಗಳನ್ನು ಸಂಗ್ರಹಿಸಿ ಇಡಲಾಗಿತ್ತು.

ಅದಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆಗಳು ಇಲ್ಲದ ಕಾರಣ ಜಪ್ತಿ ಮಾಡಲಾಗಿದೆ' ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವಾಣಿಜ್ಯ ತೆರಿಗೆ ಇಲಾಖೆಯ ಸಹಾಯಕ ಆಯುಕ್ತ ಮಹೇಶ್ ಪಾಟೀಲ, ಅಧಿಕಾರಿಗಳಾದ ಅಶೋಕ್ ಶಂಭುಲಿ, ಮಹೇಶ್ ಶೆಟ್ಟಿ, ಸಿಪಿಐ ವಿಜಯಕುಮಾರ್, ಆಹಾರ ಸುರಕ್ಷತಾ ಇಲಾಖೆಯ ಮನೋಹರ್ ಕಲಶೆಟ್ಟಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

# ಬಳ್ಳಾರಿ ಬ್ರೂಸ್ ಪೇಟೆ ಪೊಲೀಸರಿಂದ ಭರ್ಜರಿ ಕಾರ್ಯಾಚರಣೆ

### • ದರೋಡೆ ಪ್ರಕರಣಲ್ಲಿ ಹೆಡ್ ಕಾನ್ಸ್‌ಟೇಬಲ್, ಹೋಂ ಗಾರ್ಡ್ ಸಹಿತ ಏಳು ಜನ ಡಕಾಯಿತರ ಬಂಧನ

• ಉದಯವಾಹಿನಿ ಬಳ್ಳಾರಿ

ಬಳ್ಳಾರಿ ಬ್ರೂಸ್ ಪೇಟೆ ಪೊಲೀಸರಿಂದ ಮತ್ತೊಂದು ಭರ್ಜರಿ ಕಾರ್ಯಾಚರಣೆ ನಡೆಸಿದ್ದು ಇತ್ತೀಚೆಗೆ ನಗರದಲ್ಲಿ ನಡೆದ ದರೋಡೆ ಪ್ರಕರಣವೊಂದು ಭೇದಿಸಿದ ಹೆಡ್ ಕಾನ್ಸ್‌ಟೇಬಲ್ ಹೋಂ ಗಾರ್ಡ್ ಸಹಿತ ಏಳು ಜನ ಡಕಾಯಿತರನ್ನು ಬಂಧಿಸಿದ್ದಾರೆ.

**ಇಲಾಖೆಯ ಸಿಬ್ಬಂದಿಯೇ ಕಳ್ಳತನ**

ಈ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭರಾಣಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿ, ನಗರದ ಗಂಗಪ್ಪ ಜಿನ್ ಸರ್ಕಲ್ ನಲ್ಲಿ ಬಂಗಾರದ ವ್ಯಾಪಾರಿ ರಘು ಎಂಬುವರಿಗೆ ಕಣ್ಣಿಗೆ ಕಾರದ ಪುಡಿ ಎರಚಿ ಸಿನಿಮೀಯ ಶೈಲಿಯಲ್ಲಿ ಪೊಲೀಸನ ನೆರವಿನಿಂದ ನಡೆದ ದರೋಡೆ ಪ್ರಕರಣ ಬಯಲಿಗೆಳೆಯಲಾಗಿದ್ದು, ತಮ್ಮ ಇಲಾಖೆಯ ಸಿಬ್ಬಂದಿಯೇ ಕಳ್ಳತನದ ಪ್ರಕರಣದಲ್ಲಿ ಭಾಗಿಯಾಗಿದ್ದು ಬಿಡದೇ ನಿರ್ದಾಕ್ಷಿಣ್ಯ ಕ್ರಮ ಕೈಗೊಂಡಿದ್ದಾರೆ ಎಂದು ಬಳ್ಳಾರಿ ಎಸ್ಪಿ ಶೋಭಾರಾಣಿ ತಿಳಿಸಿದ್ದಾರೆ.

ಇದರಿಂದ ಅಕ್ರಮ ಚಟುವಟಿಕೆಗಳಿಗೆ ನೆರವು ನೀಡುತ್ತಿದ್ದ ಇಡೀ ಬಳ್ಳಾರಿ ಪೊಲೀಸ್ ಇಲಾಖೆಗೆ ಎಚ್ಚರಿಕೆ ಸಂದೇಶ ನೀಡಿದಂತಾಗಿದೆ. ಕಳ್ಳರ ಜೊತೆಗೆ ಸೇರಿಕೊಂಡು ಪೊಲೀಸಪ್ಪ ಡಾಕಾಯಿತಿ ಮಾಡಿರೋ ಪ್ರಕರಣ ಬಯಲಿಗೆಳೆದ ಎಸ್ಪಿ ಶೋಭಾ ರಾಣಿ, ಬ್ರೂಸ್


ಉದಯವಾಹಿನಿ ಚಿತ್ರ

ಪೇಟೆ ಪೊಲೀಸ್ ಠಾಣೆ ಹೆಡ್ ಕಾನ್ಸ್‌ಟೇಬಲ್ ಹಾಗೂ ಹೋಂ ಗಾರ್ಡ್ ನಿಂದ ಲಕ್ಷಾಂತರ ರೂಪಾಯಿಗಳನ್ನು ಜಪ್ತಿ ಮಾಡಿಕೊಂಡಿದ್ದಾರೆ.

**ಪ್ರಕರಣ ಹಿನ್ನೆಲೆ:** ರಘು ಎನ್ನುವ ಬಂಗಾರ ಅಂಗಡಿ ಮಾಲೀಕ ಕಳೆದ 12ನೇ ತಾರೀಖು ಬೆಳಿಗಿನ ಜಾವ ಬೈಕ್ ಮೇಲೆ 22 ಲಕ್ಷ 99 ಸಾವಿರ ನಗದು ಹಣ ಮತ್ತು 318 ಗ್ರಾಂ ಬಂಗಾರ ತೆಗೆದುಕೊಂಡು ಹೋಗುತ್ತಿದ್ದರು. ನಗರದ ರಾಯದುರ್ಗಾ ಬಸ್ ನಿಲ್ದಾಣದ ಕಡೆ ಹೋಗ್ತಿರುವಾಗ ಅವರ ಕಣ್ಣಿಗೆ ಕಾರದ ಪುಡಿ ಎರಚಿ ಹಣ ಒಡವೆ ಸೇರಿದಂತೆ ಲಕ್ಷಾಂತರ ರೂಪಾಯಿಗಳನ್ನು ದರೋಡೆ ಮಾಡಲಾಗಿತ್ತು.

ಪ್ರಮುಖ ಆರೋಪಿಗಳಾದ ತೌಸೀಫ್ ಜಾವೀದ್, ಖಲಂದರ್, ಮುಸ್ತಕ್ ಅಲಿ ರೆಹಮಾನ್, ಆರೀಫ್ ಎಂಬ ಖದೀಮರು ಸಿನಿಮೀಯ ರೀತಿ ದರೋಡೆ ಮಾಡಿದ್ದರು. ಈ ಕಳ್ಳರು ಸೆರೆ ಸಿಕ್ಕಾಗ ಈ ಕಳ್ಳತನಕ್ಕೆ ಬ್ರೂಸ್ ಪೇಟ್ ಠಾಣೆಯ ಹೆಡ್ ಕಾನ್ಸಟೇಬಲ್ ಸಾಥ್ ನೀಡಿದ್ದ ಸತ್ಯ ತನಿಖೆ ವೇಳೆ ಬಯಲಾಗಿತ್ತು. ಹೆಡ್ ಕಾನ್ಸಟೇಬಲ್ ಮಹಬೂಬ್ ಪಾಷ ಮತ್ತು ಪ್ರಮುಖ ಆರೋಪಿ ಆರೀಫ್ ಆತ್ಮೀಯ ಗೆಳೆಯರಾಗಿದ್ದು. ಆ ಸಲುಗೆಯಿಂದಲೇ ದರೋಡೆ ಮಾಡುವ ಪ್ಲಾನ್ ಮಾಡಲಾಗಿತ್ತು. ಆರೋಪಿಗಳನ್ನು ಬಂಧಿಸಿದಾಗ ಹೆಡ್ ಕಾನ್ಸಟೇಬಲ್ ಪಾತ್ರ ಇರೋದು ಬಯಲಿಗೆ ಬಂದಿದೆ. ದರೋಡೆ ಹಣದಲ್ಲಿ ಹೆಡ್ ಕಾನ್ಸಟೇಬಲ್ ಮೆಹಬೂಬ್ ಒಂಭತ್ತು ಲಕ್ಷ ಹಣವನ್ನು ಪಡೆದಿದ್ದಾರೆ. ಸದ್ಯ15 ಲಕ್ಷ 91ಸಾವಿರ ನಗದು, 116 ಗ್ರಾಂ ರಿಕವರಿ ಮಾಡಲಾಗಿದೆ.

ಪ್ರಮುಖ ಆರೋಪಿ ಆರೀಫ್ ಮತ್ತು ಹೆಡ್ ಕಾನ್ಸಟೇಬಲ್ ಮೆಹಬೂಬ್ ಸೇರಿ ಏಳು ಜನರ ಖದೀಮರು ಅರೆಸ್ಟ್ ಮಾಡಿದ್ದಾರೆ.

ಆರೀಪ್ ಈ ಮೊದಲು ಹೋಮ್ ಗಾರ್ಡ್ ಕೆಲಸ ಮಾಡ್ತಿರುತ್ತಾರೆ, ಹೀಗಾಗಿ ಇಬ್ಬರ ಮಧ್ಯೆ ಗೆಳೆತನ ಇದ್ದು. ಹೆಡ್ ಕಾನ್ಸಟೇಬಲ್ ಮೆಹಬೂಬ್ ಪಾಷ ಅಮಾನತ್ತು ಮಾಡಿದ್ದಷ್ಟೇ ಅಲ್ಲದೇ ಎಲ್ಲಾ ಏಳು ಜನ ಡಕಾಯಿತರನ್ನು ಬಂಧಿಸಲಾಗಿದೆ.

# ವೇಗವಾಗಿ ಕರಗುತ್ತಿದೆ ಡೇಮ್ಸ್‌ಡೇ ಐಸ್ ಗ್ಲೇಸಿಯರ್

## ಭೂಮಿಯ ಉಷ್ಣಾಂಶ ಹೆಚ್ಚಾಗಿದ್ದರಿಂದಾಗಿ ಭೂಮಿಯ ಉತ್ತರ ತುದಿಯಲ್ಲಿರುವ ಅಂಟಾರ್ಟಿಕಾದಲ್ಲಿ ಬದಲಾವಣೆ

**ಉತ್ತರ ಅಂಟಾರ್ಟಿಕಾ:** ಭೂಮಿಯ ಉಷ್ಣಾಂಶ ಹೆಚ್ಚಳದಿಂದ (ಗ್ಲೋಬಲ್ ವಾರ್ಮಿಂಗ್) ಭೂಮಿಯ ಉತ್ತರ ಹಾಗೂ ದಕ್ಷಿಣ ಧ್ರುವಗಳಲ್ಲಿನ ಮಂಜುಗಡ್ಡೆಯು ಕರಗುತ್ತಿದ್ದು, ಅದರ ಪರಿಣಾಮವಾಗಿ ಸಮುದ್ರದ ಮಟ್ಟ ಗಣನೀಯವಾಗಿ ಏರುತ್ತಿದೆ. ಇದು ಜಗತ್ತಿನಲ್ಲಿ ಜಲಪ್ರಳಯಕ್ಕೆ ನಾಂದಿ ಹಾಡುತ್ತದೆ ಎಂದು ವಿಜ್ಞಾನಿಗಳು ಎಚ್ಚರಿಸುತ್ತಲೇ ಬಂದಿದ್ದಾರೆ.

ಕಾಲಾನುಕ್ರಮದಲ್ಲಿ ಧ್ರುವಗಳಲ್ಲಿ ಮಂಜುಗಡ್ಡೆಯ ಕರಗುವಿಕೆಯನ್ನು ವಿಜ್ಞಾನಿಗಳು ಅಧ್ಯಯನ ಮಾಡುತ್ತಲೇ ಬಂದಿದ್ದಾರೆ. ತೀರಾ ಇತ್ತೀಚಿಗೆ ನಡೆಸಲಾಗಿರುವ ಅಧ್ಯಯನವೊಂದರಲ್ಲಿ ಉತ್ತರ ಅಂಟಾರ್ಟಿಕಾದಲ್ಲಿರುವ ಬೃಹತ್ ಮಂಜುಗಡ್ಡೆಯ ಶಿಖರಗಳು ಈವರೆಗೆ ವಿಜ್ಞಾನಿಗಳು ಊಹಿಸಿದ್ದಕ್ಕಿಂತ ವೇಗವಾಗಿ ಕರಗುತ್ತಿವೆ ಎಂಬ ಸತ್ಯ ಬಯಲಾಗಿದೆ. ಅಲ್ಲಿಗೆ, ಮುಂದೊಂದು ಜಲಪ್ರಳಯವಾಗುವುದಲ್ಲ?. ಈ ಮಂಜುಗಡ್ಡೆಯ ಕರಗುವಿಕೆ ಮತ್ತಷ್ಟು ವೇಗವನ್ನು ಪಡೆದುಕೊಂಡರೆ ನಮ್ಮ ಜೀವಿತಾವಧಿಗಳಲ್ಲೇ ನಾವು ದೊಡ್ಡ ಜಲಪ್ರಳಯವನ್ನು ಕಂಡರೂ ಅಚ್ಚರಿಪಡಬೇಕಿಲ್ಲ ಎಂದು ವಿಜ್ಞಾನಿಗಳು ಎಚ್ಚರಿಸಿದ್ದಾರೆ. 2018ರಿಂದ ಉತ್ತರ ಅಂಟಾರ್ಟಿಕಾದ ಥ್ವೈಟ್ಸ್ ಗ್ಲೇಸಿಯರ್ ಅನ್ನು (ಹಿಮದ ಬೃಹತ್ ಹೆಬ್ಬಂಡೆ) ವಿಜ್ಞಾನಿಗಳು ಅಧ್ಯಯನ ಮಾಡುತ್ತಲೇ ಬಂದಿದ್ದಾರೆ.

ಆ ಹೆಬ್ಬಂಡೆಗೆ ಡೂಮ್ಸ್ ಡೇ ಗ್ಲೇಸಿಯರ್ ಎಂದೂ ಕರೆಯುವುದುಂಟು. ಅದರ ಅಧ್ಯಯನದ ಮೊದಲ ಹಂತದ ವರದಿಯನ್ನು ಸೆ. 20ರಂದು ಪ್ರಕಟಿಸಲಾಗಿದೆ. ಈಗಿರುವ ಸ್ಪೀಡ್ ನಲ್ಲೇ ಆ ಹಿಮದ ಹೆಬ್ಬಂಡೆ ಕರಗುತ್ತಾ ಹೋದರೆ, ಆ ಕರಗುವಿಕೆಯು ಒಂದು ಹಂತಕ್ಕೆ ಬಂದಾಗ ಆ ಹೆಬ್ಬಂಡೆ ಭಯಂಕರ ಶಬ್ದದೊಂದಿಗೆ ಬಂದು ಸಮುದ್ರಕ್ಕೆ ಬೀಳುತ್ತದೆ. ಆ ಹೆಬ್ಬಂಡೆಯು ಸಮುದ್ರಕ್ಕೆ ಬಂದು ಬಿದ್ದ ಕೂಡಲೇ ಭಾರೀ ದೊಡ್ಡಮಟ್ಟದಲ್ಲಿ ಸಮುದ್ರದಲ್ಲಿ ಅಲೆಗಳು ಏಳುತ್ತವೆ. ಆ ದೈತ್ಯ ಅಲೆಗಳು ಸುನಾಮಿಯ ಅಲೆಗಳಿಗಿಂತಲೂ ಹಲವು ಪಟ್ಟು ಹೆಚ್ಚಿರಲಿದ್ದು, ಅವು ಮೊದಲಿಗೆ ಕರಾವಳಿಯ ಪಕ್ಕದಲ್ಲಿರುವ ನಗರಗಳು, ಅನಂತರ ಅನೇಕ ಭೂಭಾಗವನ್ನು ನುಂಗುತ್ತದೆ ಎಂದು ಹೇಳಲಾಗಿದೆ. ಅಂಥ ಅನುಭವ 200 ವರ್ಷಗಳಿಗೆ ಒಗ್ಗುತ್ತದೆ ಎಂದು ವಿಜ್ಞಾನಿಗಳು ಹೇಳಿದ್ದಾರಾದರೂ ಮಂಜುಗಡ್ಡೆಯ ಕರಗುವಿಕೆ ವೇಗ ಪಡೆದುಕೊಂಡರೆ, ಅಥವಾ ಮತ್ತೇನಾದರೂ ಅವಘಡ ಸಂಭವಿಸಿದರೆ ಅದು ಖಂಡಿತವಾಗಿಯೂ ಸದ್ಯದಲ್ಲೇ ಮುರಿದುಬಿದ್ದು ಭೀಕರ ಜಲಪ್ರಳಯ ಉಂಟಾಗುತ್ತದೆ ಎಂದು ಎಚ್ಚರಿಸಿದ್ದಾರೆ ವಿಜ್ಞಾನಿಗಳು.

### ಡೂಮ್ಸ್‌ಡೇ ಬಗ್ಗೆಯೇ ಏಕಿಷ್ಟು ಆತಂಕ?

ಇದು ಅಂಟಾರ್ಟಿಕಾದಲ್ಲಿರುವ ಅಷ್ಟೂ ಹಿಮದ ಬಹುತೇಕ ಭಾಗವನ್ನು ತನ್ನೊಡಲ್ಲೇ ಇಟ್ಟುಕೊಂಡಿರುವ ಬೃಹತ್ ಹಿಮಶಿಲೆ. ಇದು ಒಮ್ಮೆ ಕುಸಿದುಬಿದ್ದರೆ ಆಗುವ ಅನಾಹುತ ಅಷ್ಟಿಷ್ಟಲ್ಲ. ಇದರ ಒಂದು ತುದಿ ಕುಸಿದುಬಿದ್ದರೆ ಸಮುದ್ರದ ನೀರಿನ ಮಟ್ಟ ಸುಮಾರು 10 ಏರಿಕೆಯಾಗುತ್ತದೆ. ಇನ್ನು ಇಡೀ ಪರ್ವತವೇ ಕುಸಿದರೆ ವಿನಾಶವೇಜಡ ಎಂಬುದನ್ನು ಯಾರಾದರೂ ಊಹಿಸಬಹುದು ಎಂದು ಹೇಳಿದ್ದಾರೆ.



- ಭೂಮಿಯ ಉಷ್ಣಾಂಶ ಹೆಚ್ಚಾಗಿದ್ದರಿಂದಾಗಿ ಭೂಮಿಯ ಉತ್ತರ ತುದಿಯಲ್ಲಿರುವ ಅಂಟಾರ್ಟಿಕಾದಲ್ಲಿ ಬದಲಾವಣೆ.
- ಡೂಮ್ಸ್ ಗ್ಲೇಸಿಯರ್ ಎಂಬ ಮಂಜುಗಡ್ಡೆಯ ಬೃಹತ್ ಹೆಬ್ಬಂಡೆಯು ಕರಗುತ್ತಿರುವ ಬಗ್ಗೆ ಎಚ್ಚರಿಕೆ.
- ಈ ಮೊದಲು ಊಹಿಸಿದ್ದಕ್ಕಿಂತ ವೇಗವಾಗಿ ಅದು ಕರಗುತ್ತಿದ್ದು ಜಲಪ್ರಳಯ ಖಂಡಿತ ಎಂದ ವಿಜ್ಞಾನಿಗಳು.

**ಕೆಲವೇ ವರ್ಷಗಳಲ್ಲಿ ಜಲಪ್ರಳಯ ಗ್ಯಾರಂಟಿ**

---

# ಇಸ್ರೇಲ್ ದಾಳಿಗೆ ಹೆಜ್ಬುಲ್ಲಾ ಕಮಾಂಡರ್ ಸಾವು

**ಬೈರುತ್:** ಲೆಬನಾನ್‌ನಲ್ಲಿ ಪೇಜರ್ ಮತ್ತು ವಾಕಿ-ಟಾಕಿ ಸ್ಫೋಟದ ಮೂಲಕ ಹೆಜ್ಬುಲ್ಲಾ ಉಗ್ರರಿಗೆ ಶಾಕ್ ನೀಡಿದ್ದ ಇಸ್ರೇಲ್, ಶುಕ್ರವಾರ ಕ್ಷಿಪಣಿ ದಾಳಿಗಳನ್ನು ನಡೆಸಿದೆ. ದಾಳಿಯಲ್ಲಿ ಹೆಜ್ಬುಲ್ಲಾ ಕಮಾಂಡರ್, ರಾಡ್ವಾನ್ ಘಟಕದ ಮುಖ್ಯಸ್ಥ ಇಬ್ರಾಹಿಂ ಅಕಿಲ್ ಸೇರಿದಂತೆ 8 ಜನರು ಮೃತಪಟ್ಟಿದ್ದಾರೆ ಎಂದು ಇಸ್ರೇಲ್ ಸೇನೆ ಹೇಳಿಕೊಂಡಿದೆ. ಅದರೆ, ಕಮಾಂಡರ್ ಸಾವನ್ನು ಹೆಜ್ಬುಲ್ಲಾ ಕೂಡಾ ಖಚಿತಪಡಿಸಿದೆ. ಅಕ್ಟೋಬರ್ 7ರಂದು ಇಸ್ರೇಲ್-ಹಮಾಸ್ ಯುದ್ಧ ಆರಂಭವಾದ ಬಳಿಕ ಬೈರುತ್ ಮೇಲೆ ಇಸ್ರೇಲ್ ನಡೆಸಿದ ಅತ್ಯಂತ ಪ್ರಬಲ ದಾಳಿ ಇದಾಗಿದೆ. ವಾಯುದಾಳಿಯಲ್ಲಿ 59ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ ಎಂದು ಲೆಬನಾನ್ ಆರೋಗ್ಯ ಸಚಿವಾಲಯ ತಿಳಿಸಿದೆ.

ಬೈರುತ್ ಟ್ರಕ್ ಬಾಂಬ್ ಸ್ಫೋಟ ಘಟನೆಗೆ ಸಂಬಂಧಿಸಿದಂತೆ 1883 ರಲ್ಲಿ ಅಮೆರಿಕಾದ ರಾಯಭಾರಿ ಕಚೇರಿ ಹಾಗೂ ಯುಎಸ್ ಮರೈನ್ ಬ್ಯಾರಕ್‌ಗಳಲ್ಲಿ 300 ಕ್ಕೂ ಹೆಚ್ಚು ಜನರನ್ನು ಕೊಂದಿದ್ದ ಈ ಕಮಾಂಡರ್ ತಲೆಯ ಮೇಲೆ 7 ಮಿಲಿಯನ್ ಬಹುಮಾನ ಘೋಷಿಸಲಾಗಿತ್ತು.



**ಹಿನ್ನೆಲೆ:** ಲೆಬನಾನ್‌ನಲ್ಲಿ ಹೆಜ್ಬುಲ್ಲಾ ಉಗ್ರರಿಗೆ 'ಸೈಬರ್ ಶಾಕ್' ಮುಂದುವರಿದಿದ್ದು, ಹೆಜ್ಬುಲ್ಲಾ ಪಡೆಗಳು ಬಳಸುತ್ತಿದ್ದ ನೂರಾರು 'ವಾಕಿ ಟಾಕಿ' ಸಾಧನಗಳು ಒಮ್ಮೆಲೆ ಸ್ಫೋಟಗೊಂಡಿವೆ. ಪರಿಣಾಮವಾಗಿ 9 ಮಂದಿ ಮೃತಪಟ್ಟಿದ್ದಾರೆ. 300ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಲೆಬನಾನ್‌ನ ಹಲವು ಭಾಗಗಳಲ್ಲಿ ಈ ಸ್ಫೋಟಗಳು ಸಂಭವಿಸಿವೆ. ಹೆಜ್ಬುಲ್ಲಾ ಉಗ್ರರು ಬಳಸುತ್ತಿದ್ದ ಸಾವಿರಾರು 'ಪೇಜರ್' ಸಾಧನಗಳು ಒಮ್ಮೆಲೆ ಸ್ಫೋಟಿಸಿ 12 ಮಂದಿ ಮೃತಪಟ್ಟಿದ್ದರು. ಸುಮಾರು 3000 ಮಂದಿ ಗಾಯಗೊಂಡಿದ್ದರು. ದುರಂತವೆಂದರೆ, ಪೇಜರ್ ಸ್ಫೋಟದಿಂದ ಮೃತಪಟ್ಟಿದ್ದ ಉಗ್ರನ ಅಂತಿಮಯಾತ್ರೆ ಸಾಗುತ್ತಿದ್ದ ಕಡೆಯೂ 'ವಾಕಿ ಟಾಕಿ' ಸ್ಫೋಟಿಸಿದೆ. ಈ ದಾಳಿಗಳ ಹಿಂದೆ ಇಸ್ರೇಲ್ ಗುಪ್ತಚರ ಸಂಸ್ಥೆ 'ಮೊಸ್ಸಾದ್' ಕೈವಾಡವಿದೆ ಎಂದು 'ಹೆಜ್ಬುಲ್ಲಾ' ಸಂಘಟನೆ ಆರೋಪಿಸಿದೆ. ಈ ಮಧ್ಯೆ, ಇಸ್ರೇಲ್ ವಿರುದ್ಧ ಹೆಜ್ಬುಲ್ಲಾ ಪಡೆ ಪ್ರತಿದಾಳಿ ಆರಂಭಿಸಿದ್ದು, ಮಧ್ಯ ಪ್ರಾಚ್ಯ ಸಂಘರ್ಷ ತೀವ್ರಗೊಂಡಿದೆ.

**ಈ ದಾಳಿಯು ಎರಡು ತಿಂಗಳಲ್ಲಿ ಇಸ್ರೇಲ್ ದಾಳಿ ನಡೆಸಿ ಕೊಂದ ಹಿಜ್ಬುಲ್ಲಾದ ಅತ್ಯುನ್ನತ ಜಿಹಾದ್ ಕೌನ್ಸಿಲ್‌ನ ಎರಡನೇ ಸದಸ್ಯನಾಗಿದ್ದಾನೆ. ಈ ದಾಳಿಯು ಇರಾನ್ ಬೆಂಬಲಿತ ಲೆಬನಾನಿನ ಉಗ್ರಗಾಮಿ ಗುಂಪಿನ ರಾಡ್ವಾನ್ ಘಟಕದ ಸಭೆ ನಡೆಯುತ್ತಿದ್ದ ಸಂದರ್ಭದಲ್ಲಿ ಬೈರುತ್ ದಕ್ಷಿಣ ಉಪನಗರಗಳ ಮೇಲೆ ನಡೆದ ದಾಳಿಯಲ್ಲಿ ಎಂದು ದೃಢಪಟ್ಟಿದೆ. ಇಲ್ಲೇ ಕಮಾಂಡರ್ ಮೃತಪಟ್ಟಿದ್ದಾನೆ.**

---

# ಶ್ರೀಲಂಕಾ ನೂತನ ಅಧ್ಯಕ್ಷರ ಆಯ್ಕೆಗೆ ಮತದಾನ

**ಕೊಲೊಂಬೊ:** ಶ್ರೀಲಂಕಾದಲ್ಲಿ 2022ರಲ್ಲಿ ದೇಶದ ಅತ್ಯಂತ ಕೆಟ್ಟ ಆರ್ಥಿಕ ಬಿಕ್ಕಟ್ಟಿನಿಂದ ಉಂಟಾದ ಸಾಮೂಹಿಕ ಪ್ರತಿಭಟನೆಯಿಂದ ಅಧ್ಯಕ್ಷ ಗೋಟಬಾಯ ರಾಜಪಕ್ಸೆ ಅವರನ್ನು ಪದಚ್ಯುತಗೊಳಿಸಿದ ನಂತರ ನೂತನ ಅಧ್ಯಕ್ಷರ ಆಯ್ಕೆಗೆ ಮತದಾನ ನಡೆದಿದೆ.

ಮತದಾನ ಮುಗಿದ ಬಳಿಕ ಇಂದು ಸಂಜೆಯಿಂದಲೇ ಮತ ಎಣಿಕೆ ಆರಂಭವಾಗಲಿದ್ದು ವೇಳೆಗೆ ಶ್ರೀಲಂಕಾದ ನೂತನ ಅಧ್ಯಕ್ಷರು ಯಾರಾಗಲಿದ್ದಾರೆ ಎನ್ನುವುದು ಬಹಿರಂಗವಾಗಲಿದೆ.

ಶ್ರೀಲಂಕಾದ ಆರ್ಥಿಕ ಕುಸಿತದಿಂದ ಹೊರತರುವ ಗುರುತರ ಕಾರ್ಯದ ಹೊಣೆ ಹೊತ್ತಿರುವ ಅಧ್ಯಕ್ಷ ರನಿಲ್ ವಿಕ್ರಮಸಿಂಘೆ ಅವರು ಮತ್ತೊಂದು ಅವಧಿಗೆ ಆಯ್ಕೆಯಾಗಲು ಪ್ರಯತ್ನಿಸುತ್ತಿದ್ದಾರೆ.

ದ್ವೀಪರಾಷ್ಟ್ರದ ಆರ್ಥಿಕ ಸುಧಾರಣೆಗಳ ಮೇಲೆ ಜನಾಭಿಪ್ರಾಯ ಸಂಗ್ರಹವಾಗಿದ್ದು ತೆರಿಗೆ ಹೆಚ್ಚಳ ಮತ್ತು ಸಬ್ಸಿಡಿಗಳು ಮತ್ತು ಕಲ್ಯಾಣಕ್ಕೆ



ಕಡಿತದ ಕಾರಣದಿಂದಾಗಿ ಅನೇಕರು ಇನ್ನೂ ತಮ್ಮ ಜೀವನ ಪೂರೈಸಲು ಹೆಣಗಾಡುತ್ತಿದ್ದಾರೆ.

ದೇಶ ಎದುರಿಸುತ್ತಿರುವ ಹಣದುಬ್ಬರ, ಗಗನಕ್ಕೇರುತ್ತಿರುವ ಜೀವನ ವೆಚ್ಚ ಮತ್ತು ಬಡತನ ಬೆಲೆಗಳನ್ನು ಸ್ಥಿರಗೊಳಿಸಲು ಮತ್ತು ಜೀವನೋಪಾಯವನ್ನು ಸುಧಾರಿಸಲು ಪರಿಹಾರಕ್ಕಾಗಿ ಮತದಾರರು ಸೂಕ್ತ ಅಭ್ಯರ್ಥಿಗೆ ಮತ ಚಲಾಯಿಸುವ ಸಾಧ್ಯತೆ ಇದೆ

ಭಾರತ ಮೂಲದ ಥಿಂಕ್ ಟ್ಯಾಂಕ್ ಅಬ್ಸರ್ವರ್ ರಿಸರ್ಚ್ ಫೌಂಡೇಶನ್‌ನ ಸಹವರ್ತಿ ಸೌಮ್ಯ ಭೌಮಿಕ್ ತಿಳಿಸಿದ್ದಾರೆ.

---

# ಮಣಿಪುರಕ್ಕೆ ನುಸುಳಿದ 900 ಕುಕಿ ಉಗ್ರರು

**ಇಂಪಾಲ್:** ಮ್ಯಾನ್ಮಾರ್‌ನಲ್ಲಿ ಸಶಸ್ತ್ರ ತರಬೇತಿ ಪಡೆದ 900 ಕುಕಿ ಉಗ್ರರು ಮಣಿಪುರಕ್ಕೆ ನುಸುಳಿದ್ದಾರೆಯೇ? ಅವರು ಭಾರತೀಯ ಭದ್ರತಾ ಪಡೆಗಳು ಮತ್ತು ಎದುರಾಳಿ ಬಣಗಳ ಮೇಲೆ ಡ್ರೋನ್ ದಾಳಿಗಳನ್ನು ನಡೆಸುತ್ತಿದ್ದಾರೆಯೇ ಎನ್ನುವ ಸಂದೇಹಗಳಿಗೆ ರಾಜ್ಯ ಸರ್ಕಾರ ಪ್ರಥಮ ಬಾರಿಗೆ ಸ್ಪಂದಿಸಿದೆ. ಮಣಿಪುರ ಸರ್ಕಾರದ ಭದ್ರತಾ ಸಲಹೆಗಾರ ಕುಲದೀಪ್ ಸಿಂಗ್ ಈ ವಿಷಯ ನೂರಕ್ಕೆ ನೂರರಷ್ಟು ಸತ್ಯ ಎಂದು ಅಧಿಕೃತವಾಗಿ ಒಪ್ಪಿಕೊಂಡಿದ್ದಾರೆ.

ಕುಕಿ ಉಗ್ರರು ಮ್ಯಾನ್ಮಾರ್ ನಲ್ಲಿ ತರಬೇತಿ ಪಡೆದು ಮಣಿಪುರದೊಳಗೆ ನುಸುಳಿದ್ದರು. ಈ ಬಗ್ಗೆ ಭಾರತೀಯ ಗುಪ್ತಚರ ಸಂಸ್ಥೆಗಳಿಂದ ರಹಸ್ಯ ಮಾಹಿತಿ ಲಭಿಸಿದೆ. ನಾವು ಅದನ್ನು ನಿರ್ಲಕ್ಷಿಸಲಾಗುವುದಿಲ್ಲ. ನಾವು ಹದ್ದಿನ ಕಣ್ಣಿಟ್ಟು ಎಲ್ಲಾ ರೀತಿಯ ರಕ್ಷಣೆಗೆ ಎಚ್ಚರಿಕೆ ವಹಿಸುತ್ತೇವೆ ಎಂದಿದ್ದಾರೆ. ಈ ಗುಪ್ತಚರ ಮಾಹಿತಿ ಸಿಕ್ಕ ತಕ್ಷಣ ಮಣಿಪುರ-ಮ್ಯಾನ್ಮಾರ್ ಗಡಿಯಲ್ಲಿರುವ ಎಲ್ಲಾ ಜಿಲ್ಲೆಗಳ ಹಿರಿಯ ಪೊಲೀಸ್ ಅಧಿಕಾರಿಗಳು ಎಲ್ಲರಿಗೂ ಮಾಹಿತಿ ರವಾನಿಸಲಾಗಿದೆ ಎಂದು ತಿಳಿದುಬಂದಿದೆ.



ಕುಕಿ ಉಗ್ರಗಾಮಿಗಳು ಮ್ಯಾನ್ಮಾರ್‌ನ ಕಾಡುಗಳಲ್ಲಿ ಡ್ರೋನ್ ಬಾಂಬ್ ಸ್ಫೋಟಗಳು, ಕ್ಷಿಪಣಿಗಳು ಮತ್ತು ಗೆರಿಲ್ಲಾ ಯುದ್ಧವನ್ನು ಕಲಿತಿದ್ದಾರೆ ಎಂದು ವರದಿಯಾಗಿದೆ. ಪ್ರಸ್ತುತ ಮಣಿಪುರದಾದ್ಯಂತ ಕುಕಿ ಉಗ್ರಗಾಮಿಗಳ 30 ಗುಂಪುಗಳು ಅಡಗಿದ್ದು, ತಲಾ 30 ಜನರಿದ್ದಾರೆ ಎಂದು ಹೇಳಲಾಗಿದೆ.

ಈ ತಿಂಗಳ ಅಂತ್ಯದ ವೇಳೆಗೆ ಕುಕಿ ಉಗ್ರರು ಮೈತೈ ಸಮುದಾಯದವರೇ ಹೆಚ್ಚಾಗಿರುವ ಗ್ರಾಮಗಳ ಜನರನ್ನು ಗುರಿಯಾಗಿಸಿಕೊಂಡು ದಾಳಿ ನಡೆಸುವ ನಿರೀಕ್ಷೆಯಿದೆ.

**ನಾರ್ವೆ:** ಲೆಬನಾನ್‌ನಲ್ಲಿ 12 ಜನರನ್ನು ಕೊಂದು ಸಾವಿರಾರು ಜನರನ್ನು ಗಾಯಗೊಳಿಸಿದ ಹೆಜ್ಬೊಲ್ಲಾ ಕಾರ್ಯಕರ್ತರನ್ನು ಗುರಿಯಾಗಿಟ್ಟುಕೊಂಡು ನಡೆಸಿದ ಪೇಜರ್ ಸ್ಫೋಟಗಳ ಪ್ರಕರಣದಲ್ಲಿ ಭಾರತೀಯ ಮೂಲದ ವ್ಯಕ್ತಿಯ ಹೆಸರು ಕೇಳಿಬಂದಿದೆ. ನಾರ್ವೆಗೆ ವಲಸೆ ಹೋಗಿರುವ ಕೇರಳದ ವಯನಾಡು ನಿವಾಸಿಯಾಗಿದ್ದ ರಿನ್ಸನ್ ಜೋಸ್ ಬಲ್ಗೇರಿಯಾದಲ್ಲಿರುವ ತನ್ನ ಕಂಪನಿಯಿಂದ ಉಗ್ರಗಾಮಿ ಗುಂಪಿಗೆ ಪೇಜರ್‌ಗಳ ಪೂರೈಕೆಯಲ್ಲಿ ತೊಡಗಿಸಿಕೊಂಡಿದೆ ಎಂದು ವರದಿಗಳು ಆರಂಭದಲ್ಲಿ ಸೂಚಿಸಿದ್ದವು.

ಪ್ರತಿ ಸಾಧನದಲ್ಲಿ ಮೂರು ಗ್ರಾಂ ಸ್ಫೋಟಕಗಳನ್ನು ಮರೆಮಾಡಲು ಮೊಸಾದ್ ಮಾರ್ಪಡಿಸಿದ ಪೇಜರ್‌ಗಳನ್ನು ತೈವಾನ್ ಮೂಲದ ಕಂಪನಿ ಗೋಲ್ಡ್ ಅಪೊಲೊ ತಯಾರಿಸಿದೆ ಎಂದು ಆರಂಭಿಕ ತನಿಖೆಗಳು ಬಹಿರಂಗಪಡಿಸಿವೆ. ಕಂಪನಿಯು ಹೇಳಿಕೆಯಲ್ಲಿ, ಆದಾಗ್ಯೂ, ಸ್ಫೋಟದಲ್ಲಿ ಬಳಸಿದ ಪೇಜರ್ ಮಾಡೆಲ್, ಎಆರ್-924 ಅನ್ನು ವಾಸ್ತವವಾಗಿ ಬಿಎಸಿ ಕನ್ಸಲ್ಟಿಂಗ್ ಓಕೆಯ ಹಂಗೇರಿಯ ಬುಡಾಪೆಸ್ಟ್ ಮೂಲದ ಕಂಪನಿಯು

# ಲೆಬನಾನ್ ಪೇಜರ್ ಸ್ಫೋಟ ಪ್ರಕರಣದಲ್ಲಿ ಭಾರತೀಯ ಮೂಲದ ವ್ಯಕ್ತಿಯ ಹೆಸರು ಥಳಕು




**ಕೇರಳದ ವಯನಾಡು ನಿವಾಸಿ**

ತನ್ನ ಟ್ರೇಡ್‌ಮಾರ್ಕ್ ಅನ್ನು ಬಳಸಲು ಅಧಿಕತಗೊಳಿಸಿದೆ ಮತ್ತು ಮಾರಾಟ ಮಾಡಿದೆ. ಪೇಜರ್‌ಗಳು ಸ್ಫೋಟಗೊಂಡ ಎರಡು ದಿನಗಳ ನಂತರ, ಬಲ್ಗೇರಿಯನ್ ರಾಜ್ಯ ಭದ್ರತಾ ಸಂಸ್ಥೆ ಡಿಎಎನ್‌ಎಸ್ ದೇಶದ ಆಂತರಿಕ ಸಚಿವಾಲಯದೊಂದಿಗೆ ಸಮನ್ವಯ ಸಾಧಿಸುತ್ತಿದೆ ಮತ್ತು ಕಂಪನಿಯ ಪಾತ್ರವನ್ನು ತನಿಖೆ ಮಾಡುತ್ತಿದೆ ಎಂದು ಹೇಳಿದೆ, ಅದರ ಹೆಸರನ್ನು ನಂತರ ನಾರ್ಟಾ ಗ್ಲೋಬಲ್ ಲಿಮಿಟೆಡ್ ಎಂದು ಬಹಿರಂಗಪಡಿಸಲಾಯಿತು. 2022 ರಲ್ಲಿ ಸೋಫಿಯಾದಲ್ಲಿ ನೋಂದಾಯಿಸಲಾಗಿದೆ, ನಾರ್ವೇಜಿಯನ್ ರಿನ್ಸನ್ ಜೋಸ್ ಒಡೆತನದಲ್ಲಿದೆ ಎಂದು ತಿಳಿದುಬಂದಿದೆ.

ಪರಿಶೀಲನೆಗಳನ್ನು ಅನುಸರಿಸಿ, ಸೆಪ್ಟೆಂಬರ್ 17 ರಂದು ಸ್ಫೋಟಗೊಂಡ ಯಾವುದೇ ಸಂವಹನ ಸಾಧನಗಳನ್ನು ಬಲ್ಗೇರಿಯಾದಲ್ಲಿ ಆಮದು ಮಾಡಿಕೊಳ್ಳಲಾಗಿಲ್ಲ, ರಫ್ತು ಮಾಡಲಾಗಿಲ್ಲ ಅಥವಾ ತಯಾರಿಸಲಾಗಿಲ್ಲ ಎಂದು ನಿರ್ವಿವಾದವಾಗಿ ದಢಪಡಿಸಲಾಗಿದೆ ಎನ್ನಲಾಗಿದೆ.

ಕಂಪನಿ ಮತ್ತು ಅದರ ಮಾಲೀಕರು ಮಾರಾಟದ ಅಥವಾ ಖರೀದಿಗೆ ಸಂಬಂಧಿಸಿದ ಯಾವುದೇ ವಹಿವಾಟುಗಳನ್ನು ನಡೆಸಿಲ್ಲ ಅಥವಾ ಭಯೋತ್ಪಾದನೆಗೆ ಹಣಕಾಸು ಒದಗಿಸುವ ಕಾನೂನುಗಳ ಅಡಿಯಲ್ಲಿ ಬರುತ್ತದೆ ಎಂದು ಅದು ಸೇರಿಸಿದೆ.

---

# ದೆಹಲಿಯ ನೂತನ ಸಿಎಂ ಆಗಿ ಅತಿಶಿ ಸಿಂಗ್ ಅಧಿಕಾರ ಸ್ವೀಕಾರ

**ನವದೆಹಲಿ:** ರಾಷ್ಟ್ರ ರಾಜಧಾನಿ ದೆಹಲಿಯ ನೂತನ ಮುಖ್ಯಮಂತ್ರಿಯಾಗಿ ಎಎಪಿ ನಾಯಕಿ ಅತಿಶಿ ಸಿಂಗ್ ಅವರು ಇಂದು ಸಂಜೆ ಅಧಿಕಾರ ಸ್ವೀಕರಿಸಿದರು. ಸಂಜೆ 4.30ಕ್ಕೆ ರಾಜಭವನದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಅತಿಶಿ ಸಿಂಗ್ ಅವರಿಗೆ ದೆಹಲಿಯ ಲೆಫ್ಟಿನೆಂಟ್ ಗೌರ್ನರ್ ಜನರಲ್ ವಿನಯ್ ಕುಮಾರ್ ಸಕ್ಸೇನಾ ಅಧಿಕಾರ ಗೌಪ್ಯತೆ ಬೋಧಿಸಲಿದ್ದಾರೆ.

ಅತಿಶಿ ಸಿಂಗ್ ದೆಹಲಿಯ 3ನೇ ಹಾಗೂ ಅತ್ಯಂತ ಚಿಕ್ಕವಯಸ್ಸಿನ ಮಹಿಳಾ ಮುಖ್ಯಮಂತ್ರಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಲಿದ್ದಾರೆ. ಅವರ ಜೊತೆಗೆ ಶಾಸಕರಾದ ಗೋಪಾಲ್ ರೈ, ಕೈಲಾಶ್ ಗೆಹ್ಲೋಟ್ ಮತ್ತು ಸೌರವ್ ಭಾರದ್ವಾಜ್ ಹಾಗೂ ಇಮ್ರಾನ್ ಕೂಡ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಸುಲ್ತಾನಪುರ ಮುಜ್ರಾದ್‌ನಿಂದ ಮೊದಲ ಬಾರಿಗೆ ಶಾಸಕರಾಗಿರುವ ದಲಿತ ನಾಯಕ ಮುಖೇಶ್ ಅಹ್ಲಾವತ್ ಕೂಡ ಸಂಪುಟಕ್ಕೆ ಸೇರ್ಪಡೆಯಾಗಲಿದ್ದಾರೆ ಎಂಬ ಮಾತುಗಳು ಕೇಳಿಬಂದಿವೆ.



**ಅತಿಶಿ ಸಿಂಗ್ ಭವಿಷ್ಯದ ನಾಯಕಿ**

ದೆಹಲಿ ಮುಖ್ಯಮಂತ್ರಿಯಾಗಿದ್ದ ಅರವಿಂದ ಕ್ರೇಜಿವಾಲ್ ಅವರು ತಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರಿಂದ ತೆರವಾಗಿದ್ದ ಸ್ಥಾನಕ್ಕೆ ಮಂಗಳವಾರ ನಡೆದ ಶಾಸಕಾಂಗ ಸಭೆಯಲ್ಲಿ ಅತಿಶಿ ಸಿಂಗ್ ಅವರನ್ನು ಸರ್ವಾನುಮತದಿಂದ ಶಾಸಕಾಂಗ ಪಕ್ಷದ ನಾಯಕಿಯನ್ನಾಗಿ ಆಯ್ಕೆ ಮಾಡಿದ್ದರು.

### ಕೇಜ್ರಿವಾಲ್ ಅವರ ನಂಬಿಕಸ್ಥೆ

**ಹಿಂದಿನ ಕೇಜ್ರಿವಾಲ್ ಸಂಪುಟದಲ್ಲಿ ಅವರು ಮಹತ್ವದ ಹಣಕಾಸು , ಕಂದಾಯ, ಲೋಕೋಪಯೋಗಿ, ವಿದ್ಯುತ್, ಶಿಕ್ಷಣ ಸೇರಿದಂತೆ ಒಟ್ಟು 13 ಖಾತೆಗಳನ್ನು ನಿಭಾಯಿಸಿದ ಕೀರ್ತಿ ಸಲ್ಲುತ್ತದೆ. ಕ್ರೇಜಿವಾಲ್ ಅವರ ನಂಬಿಕಸ್ಥರಲ್ಲಿ ಒಬ್ಬರಾಗಿರುವ ಅತಿಶಿ ಸಿಂಗ್ ಭವಿಷ್ಯದ ನಾಯಕಿ ಎಂದೇ ಗುರುತಿಸಿಕೊಂಡವರು.**

ಇನ್ನು ದೆಹಲಿ ಅಬಕಾರಿ ಪರಿಷ್ಕರಣಾ ನೀತಿಯಲ್ಲಿ ಆರೋಪಿ ಸ್ಥಾನದಲ್ಲಿದ್ದ ಕೇಜ್ರಿವಾಲ್ ತಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದರು. ನಾನು ನನಗೆ ದೆಹಲಿಯ ಜನತೆ ಮತ್ತೆ ಆಶೀರ್ವಾದ ಮಾಡುವವರೆಗೂ ನಾನು ಈ ಸ್ಥಾನದಲ್ಲಿ ಕೂರುವುದಿಲ್ಲ ಎಂದಿದ್ದರು.

---

# ಉದ್ಯೋಗಿ ಸಾವು ತೀವ್ರ ಚರ್ಚೆಗೆ ಗ್ರಾಸ

**ಪುಣೆ:** ಕೆಲಸದ ಹೊರೆಯಿಂದ ಯುವ ಉದ್ಯೋಗಿಯೊಬ್ಬರು ಸಾವನ್ನಪ್ಪಿರುವುದು ದೇಶಾದ್ಯಂತ ಚರ್ಚೆಗೆ ಗ್ರಾಸವಾಗಿದೆ. ಈ ಬೆಳವಣಿಗೆಗೆ ಕಾಂಗ್ರೆಸ್ ಹಿರಿಯ ನಾಯಕ ಹಾಗೂ ಸಂಸದ ಶಶಿ ತರೂರ್ ವಿಭಿನ್ನವಾಗಿ ಪ್ರತಿಕ್ರಿಯಿಸಿದ್ದಾರೆ.



ಕೆಲಸದ ದಿನಗಳು ವಾರದಲ್ಲಿ ಐದು ದಿನಗಳು ಇರಬೇಕು. ಸರ್ಕಾರಿ-ಖಾಸಗಿ ನೌಕರರು ದಿನಕ್ಕೆ ಎಂಟು ಗಂಟೆ ಮಾತ್ರ ಕೆಲಸ ಮಾಡಬೇಕು. ಎಲ್ಲಾ ಕೆಲಸದ ಸ್ಥಳಗಳಲ್ಲಿ ನಿಗದಿತ ಕ್ಯಾಲೆಂಡರ್ ಇರಬೇಕು,ಮುಂಬರುವ ಸಂಸತ್ ಅಧಿವೇಶನಗಳಲ್ಲಿ ಅದಕ್ಕಾಗಿ ಸಂಸತ್ತಿನಲ್ಲಿ ಕಾನೂನು ತರಲು ಶ್ರಮಿಸುತ್ತೇನೆ , ಕೈಲಾದಷ್ಟು ಪ್ರಯತ್ನ ಮಾಡುತ್ತೇನೆ ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಸಂದೇಶವನ್ನು ಹಾಕಿದ್ದಾರೆ. ಮೇಲಾಗಿ ಇದೇ ವಿಚಾರವಾಗಿ ಅನ್ನಾ ಅವರ ತಂದೆ ಸಿಬಿ ಜೋಸೆಫ್ ಅವರೊಂದಿಗೆ ಮಾತನಾಡಿದ್ದೇನೆ ಎಂದು ತರೂರ್ ಹೇಳಿದ್ದಾರೆ. ಮಾನವ ಹಕ್ಕುಗಳನ್ನು ಕಸಿದುಕೊಳ್ಳಬಾರದು. ಈ ಸಂಸ್ಥೆಗಳು ಅಮಾನವೀಯ ಕೃತ್ಯ ಎಸಗಿದರೆ ಕಠಿಣ ಶಿಕ್ಷೆ ಹಾಗೂ ದಂಡ ವಿಧಿಸುವ ಕಾನೂನು ತರಬೇಕು ಎಂದು ಅನ್ನಾ ಸೆಬಾಸ್ಟಿಯನ್ ತಂದೆ ಹೇಳಿದ್ದಾರೆ. ಇದೇ ವಿಷಯವನ್ನು ಮುಂಬರುವ ಸಂಸತ್ ಅಧಿವೇಶನದಲ್ಲಿ ಪ್ರಸ್ತಾಪಿಸಲಾಗುವುದು ಎಂದು ಶಶಿ ತರೂರ್ ಟ್ವಿಟರ್ ನಲ್ಲಿ ತಿಳಿಸಿದ್ದಾರೆ.

ಅನ್ನಾ ಸಾವಿನ ಬಗ್ಗೆ ಸಂತಾಪ ವ್ಯಕ್ತಪಡಿಸಿದ್ದಾರೆ.

ಕೇರಳದ ಅನ್ನಾ ಸೆಬಾಸ್ಟಿಯನ್ ಪೆರೈಲ್ (26) ನಾಲ್ಕು ತಿಂಗಳ ಕಾಲ ಪುಣೆ ಇವೈ ಕಚೇರಿಯಲ್ಲಿ ಕೆಲಸ ಮಾಡುತ್ತಿದ್ದಾಗ ಜುಲೈ ತಿಂಗಳಲ್ಲಿ ನಿಧನರಾದರು. ಆದರೆ ಕೆಲಸದ ಒತ್ತಡದಿಂದ ತಮ್ಮ ಮಗಳು ಸಾವನ್ನಪ್ಪಿದ್ದಾಳೆ ಎಂದು ಆಕೆಯ ತಾಯಿ ಅನಿತಾ ಇವೈ ಇಂಡಿಯಾ ಅಧ್ಯಕ್ಷ ರಾಜೀವ್ ಮೆಮಾನಿ ಅವರಿಗೆ ಪತ್ರ ಬರೆದಿದ್ದು ತೀವ್ರ ಚರ್ಚೆಗೆ ಗ್ರಾಸವಾಗಿದೆ.

---

# ಬಸ್ ಅಪಘಾತ: ಮೂವರು ಯೋಧರ ಸಾವು

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯ ಎರಡನೇ ಹಂತದ ಚುನಾವಣೆಗೆ ಸಿಬ್ಬಂಧಿಯನ್ನು ಸಾಗಿಸುತ್ತಿದ್ದ ಗಡಿ ಭದ್ರತಾ ಪಡೆ- ಬಿಎಸ್‌ಎಫ್ ಬಸ್ ಅಪಘಾತಕ್ಕೆ ಒಳಗಾದ ಪರಿಣಾಮ ಕನಿಷ್ಠ ಮೂವರು ಸೈನಿಕರು ಸಾವನ್ನಪ್ಪಿ, 32ಕ್ಕೂ ಅಧೀಕ ಮಂದಿ ಗಾಯಗೊಂಡಿರುವ ಘಟನೆ ನಡೆದಿದೆ.

ಬುದ್ಗಾಮ್ ಜಿಲ್ಲೆಯ ಬ್ರೆಲ್ ವಾಟರ್ಹೇಲ್ ಪ್ರದೇಶದಲ್ಲಿ ಚುನಾವಣಾ ಕರ್ತವ್ಯಕ್ಕೆ ತೆರಳುತ್ತಿದ್ದ ಗಡಿ ಭದ್ರತಾ ಪಡೆ ಗುಡ್ಡಗಾಡು ರಸ್ತೆಯಿಂದ ಕಂದಕಕ್ಕೆ ಬಿದ್ದ ಪರಿಣಾಮ ಮೂವರು ಬಿಎಸ್‌ಎಫ್ ಸಿಬ್ಬಂದಿ ಸಾವನ್ನಪ್ಪಿದ್ದು, 32 ಮಂದಿ ಗಾಯಗೊಂಡಿದ್ದಾರೆ.

ಗಾಯಗೊಂಡವರಲ್ಲಿ 6 ಮಂದಿಗೆ ಗಂಭೀರ ಗಾಯಗಳಾಗಿವೆ. ಘಟನೆಯಲ್ಲಿ ಬಸ್ಸಿನ ನಾಗರಿಕ ಚಾಲಕ ಕೂಡ ಗಾಯಗೊಂಡಿದ್ದಾರೆ. ರಕ್ಷಣಾ ಕಾರ್ಯಾಚರಣೆ ಮುಂದುವರಿದ್ದು ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗಬಹುದು ಎನ್ನಲಾಗಿದೆ. ಗಾಯಾಳುಗಳನ್ನು ಖಾನ್ ಸಾಹಿಬ್ ಮತ್ತು ಬುದ್ಗಾಮ್ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ.

2024 ರಲ್ಲಿ ಜಮ್ಮು ಮತ್ತು ಕಾಶ್ಮೀರ ವಿಧಾನಸಭಾ ಚುನಾವಣೆಯ ಎರಡನೇ ಹಂತದ ಚುನಾವಣೆಗಾಗಿ ಪುಲ್ವಾಮಾದಿಂದ ಬುದ್ಗಾಮ್‌ಗೆ ಸೈನಿಕರನ್ನು ಸಾಗಿಸುತ್ತಿದ್ದ ಬಸ್ ಈ ಘಟನೆ ಸಂಭವಿಸಿದೆ.

ಸಿಬ್ಬಂದಿ ಇದ್ದ ಬಸ್ ಪೊಲೀಸ್ ಪೋಸ್ಟ್‌ನಿಂದ ಕೇವಲ 600 ಮೀಟರ್ ದೂರದಲ್ಲಿರುವ ಕಮರಿಗೆ ಬಿದ್ದಿತು. ಇಬ್ಬರು ಯೋಧರು ವಾಹನದೊಳಗೆ ಸಿಲುಕಿಕೊಂಡಿದ್ದಾರೆ. ಪಾರುಗಾಣಿಕಾ ಪ್ರಯತ್ನಗಳು ನಡೆದಿವೆ. ಸ್ಥಳೀಯ ಪೊಲೀಸ್ ಮತ್ತು ನಾಗರಿಕರ ರಕ್ಷಣಾ ಕಾರ್ಯದಲ್ಲಿ ನಿರತಗಾಗಿದ್ದಾರೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಒಟ್ಟು 90 ಸ್ಥಾನಗಳಿಗೆ ಮೂರು ಹಂತಗಳಲ್ಲಿ ಚುನಾವಣೆ ನಡೆಸಲಾಗುತ್ತಿದೆ. ಮೊದಲ ಹಂತ ಸೆಪ್ಟೆಂಬರ್ 18 ರಂದು ಜಮ್ಮುವಿನ ಮೂರು ಮತ್ತು ಕಾಶ್ಮೀರ ಕಣಿವೆಯ ನಾಲ್ಕು ಜಿಲ್ಲೆಗಳಲ್ಲಿ 24 ಕ್ಷೇತ್ರಗಳಿಗೆ ನಡೆದಿದ್ದು ಎರಡನೇ ಹಂತ ಇದೇ 25 ರಂದು ಹಾಗು ಮೂರನೇ ಹಂತ ಅಕ್ಟೋಬರ್ 1 ರಂದು ನಡೆಯಲಿದ್ದು ಅಕ್ಟೋಬರ್ 8 ರಂದು ಮತ ಎಣಿಕೆ ನಡೆಯಲಿದೆ.

---

# ಭಾರತೀಯ ರಾಯಭಾರ ಕಚೇರಿ ಅಧಿಕಾರಿಯ ನಿಗೂಢ ಸಾವು

## • ಸ್ಥಳೀಯ ಪೊಲೀಸರು ಮತ್ತು ಸೀಕ್ರೆಸ್ ಸರ್ವೀಸ್ ಅಧಿಕಾರಿಗಳು ಪ್ರಸ್ತುತ ಪ್ರಕರಣದ ತನಿಖೆ ನಡೆಸುತ್ತಿದ್ದಾರೆ

**ವಾಷಿಂಗ್ಟನ್:** ಅಮೆರಿಕದಲ್ಲಿನ ಭಾರತೀಯ ರಾಯಭಾರ ಕಚೇರಿಯ ಅಧಿಕಾರಿಯೊಬ್ಬರು ವಾಷಿಂಗ್ಟನ್‌ನ ಕಚೇರಿಯ ಆವರಣದಲ್ಲಿ ನಿಗೂಢ ರೀತಿಯಲ್ಲಿ ಮೃತಪಟ್ಟಿದ್ದಾರೆ ಎಂದು ವರದಿಯಾಗಿದೆ.

ಈ ಘಟನೆ ನಡೆದಿದ್ದು, ಸ್ಥಳೀಯ ಪೊಲೀಸರು ಮತ್ತು ಸೀಕ್ರೆಸ್ ಸರ್ವೀಸ್ ಅಧಿಕಾರಿಗಳು ಪ್ರಸ್ತುತ ಪ್ರಕರಣದ ತನಿಖೆ ನಡೆಸುತ್ತಿದ್ದಾರೆ.

ಆತ್ಮಹತ್ಯೆಯ ಸಾಧ್ಯತೆ ಇರುವ ಅಯಾಮದಿಂದಲೂ ತನಿಖೆ ನಡೆಯುತ್ತಿದೆ ಎಂದು ಪಿಟಿಐ ಸುದ್ದಿಸಂಸ್ಥೆ ವರದಿ ಮಾಡಿದೆ. ಅಧಿಕಾರಿಯ ದಿಢೀರ್ ಸಾವಿನ ಸಂಗತಿಯನ್ನು ರಾಯಭಾರ ಕಚೇರಿಯು ಅಧಿಕೃತ ಹೇಳಿಕೆಯಲ್ಲಿ ಶುಕ್ರವಾರ ಖಚಿತಪಡಿಸಿದೆ.

**ಅಮೆರಿಕ ಅಧಿಕಾರಿಗಳು ತನಿಖೆ**

ಆದರೆ ಈ ಬಗ್ಗೆ ಯಾವುದೇ ಹೆಚ್ಚಿನ ಮಾಹಿತಿ ನೀಡಿಲ್ಲ. ಭಾರತದ ರಾಯಭಾರ ಕಚೇರಿಯ ಸದಸ್ಯರೊಬ್ಬರು 2024ರ ಸೆ 18ರಂದು ಸಂಜೆ ನಿಧನರಾಗಿದ್ದಾರೆ ಎಂದು ತೀವ್ರ ವಿಷಾದದೊಂದಿಗೆ, ಖಚಿತಪಡಿಸಲು ಬಯಸುತ್ತೇವೆ. ಅವರ ಪಾರ್ಥಿವ ಶರೀರವನ್ನು ಭಾರತಕ್ಕೆ ತ್ವರಿತವಾಗಿ ವರ್ಗಾಯಿಸಲು ಸಾಧ್ಯವಾಗುವಂತೆ ನೋಡಿಕೊಳ್ಳಲು ಸಂಬಂಧಿಸಿದ ಎಲ್ಲಾ ಸಂಸ್ಥೆಗಳು ಮತ್ತು ಕುಟುಂಬದ ಸದಸ್ಯರ ಜತೆ ನಾವು ಸಂಪರ್ಕದಲ್ಲಿ ಇದ್ದೇವೆ ಎಂದು ರಾಯಭಾರ ಕಚೇರಿ ಹೇಳಿಕೆ ತಿಳಿಸಿದೆ.

ಕುಟುಂಬದ ಖಾಸಗಿತನವನ್ನು ಗಮನದಲ್ಲಿ ಇರಿಸಿಕೊಂಡು, ಮೃತರ ಕುರಿತು ಹೆಚ್ಚಿನ ವಿವರಗಳನ್ನು ನಾವು ಬಿಡುಗಡೆ ಮಾಡುತ್ತಿಲ್ಲ. ಈ ದುಃಖದ ಸಂದರ್ಭದಲ್ಲಿ ಆ ಕುಟುಂಬಕ್ಕೆ ಅದನ್ನು ಭರಿಸುವ ಶಕ್ತಿ ಸಿಗಲಿ ಎಂದು ಪ್ರಾರ್ಥಿಸುತ್ತೇವೆ. ಇದನ್ನು ಮನದಟ್ಟು ಮಾಡಿಕೊಳ್ಳುತ್ತಿರುವುದಕ್ಕೆ ನಿಮಗೆ ಧನ್ಯವಾದಗಳು ಎಂದು ಕಚೇರಿ ತಿಳಿಸಿದೆ.

ಅಧಿಕಾರಿ ಸಾವಿನ ಬಗ್ಗೆ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತೀವ್ರ ಶೋಕ ವ್ಯಕ್ತಪಡಿಸಿದೆ. ಅಮೆರಿಕದಲ್ಲಿನ ಸಂಬಂಧ ಪಟ್ಟ ಅಧಿಕಾರಿಗಳ ಜತೆ ಸಂಪರ್ಕದಲ್ಲಿ ಇರುವುದಾಗಿ ಅದು ತಿಳಿಸಿದೆ. ಅಮೆರಿಕಕ್ಕೆ ಉನ್ನತ ವ್ಯಾಸಂಗದ ಸಲುವಾಗಿ ತೆರಳಿದ ಭಾರತದ ಅನೇಕ ವಿದ್ಯಾರ್ಥಿಗಳ ಇತ್ತೀಚೆಗೆ ಸಾವಿಗೀಡಾಗುತ್ತಿರುವ ಘಟನೆಗಳ ನಡುವೆ ಅಧಿಕಾರಿಯ ಸಾವು ಸಂಭವಿಸಿದೆ.

ಭಾರತೀಯ ವಿದ್ಯಾರ್ಥಿಗಳ ಮೇಲೆ ಅಮೆರಿಕದಲ್ಲಿ ಹಲ್ಲೆಗಳು ಹೆಚ್ಚುತ್ತಿದ್ದು, ಅನೇಕರನ್ನು ಹತ್ಯೆ ಮಾಡಲಾಗಿದೆ. ಇನ್ನು ಕೆಲವರು ಪ್ರಾಕೃತಿಕ ವಿಕೋಪದಿಂದ ಮೃತಪಟ್ಟಿದ್ದಾರೆ ಎಂದು ಅಮೆರಿಕ ಅಧಿಕಾರಿಗಳು ಹೇಳಿದ್ದರು.




- ಅಮೆರಿಕದಲ್ಲಿ ಭಾರತೀಯ ರಾಯಭಾರ ಕಚೇರಿಯಲ್ಲಿ ಅಧಿಕಾರಿಯ ನಿಗೂಢ ಸಾವು
- ಸಂಜೆ ಕಚೇರಿ ಆವರಣದಲ್ಲಿ ಶವವಾಗಿ ಪತ್ತೆಯಾಗಿದ್ದ ಭಾರತದ ಅಧಿಕಾರಿ
- ಅಧಿಕಾರಿಯ ಸಾವನ್ನು ದೃಢಪಡಿಸಿದ ರಾಯಭಾರ ಕಚೇರಿ, ಹೆಚ್ಚಿನ ವಿವರ ನೀಡಲು ನಕಾರ

**ಶುಕ್ರವಾರದವರೆಗೂ ಈ ಘಟನೆಯನ್ನು ಬಹಿರಂಗಪಡಿಸಿರಲಿಲ್ಲ. ಬಹಳ ನಿಗೂಢ ರೀತಿಯಲ್ಲಿ ಅಧಿಕಾರಿಯ ಶವ ಪತ್ತೆಯಾಗಿದೆ ಎಂದು ಹೇಳಲಾಗಿದೆ. ಇದು ಆತ್ಮಹತ್ಯೆಯೇ, ಕೊಲೆಯೇ ಅಥವಾ ಸಹಜ ಸಾವೇ ಎನ್ನುವುದು ದೃಢಪಟ್ಟಿಲ್ಲ. ಇದನ್ನು ಖಚಿಪಡಿಸಿಕೊಳ್ಳಲು ಅಮೆರಿಕ ಅಧಿಕಾರಿಗಳು ತನಿಖೆ ನಡೆಸುತ್ತಿದ್ದು, ಅದಕ್ಕೆ ಎಲ್ಲಾ ರೀತಿಯ ನೆರವು ನೀಡುತ್ತಿರುವುದಾಗಿ ಭಾರತದ ರಾಯಭಾರ ಕಚೇರಿ ಅಧಿಕಾರಿಗಳು ತಿಳಿಸಿದ್ದಾರೆ.**

---

## ಮಿನಿ ನ್ಯೂಸ್

### ಜಗನ್‌ಗೆ ಹಿಂದೂ ಸಂಪ್ರದಾಯಗಳು ಮತ್ತು ಪದ್ಧತಿಗಳ ಅರಿವಿಲ್ಲ



**ಅಮರಾವತಿ:** ವೈಎಸ್‌ಆರ್‌ಸಿಪಿ ಮುಖ್ಯಸ್ಥ ವೈಎಸ್ ಜಗನ್ ಮೋಹನ್ ರೆಡ್ಡಿ ಅವರಿಗೆ ಹಿಂದೂ ಸಂಪ್ರದಾಯಗಳು ಮತ್ತು ಪದ್ಧತಿಗಳ ಬಗ್ಗೆ ಅರಿವಿಲ್ಲ ಎಂದು ಬಿಜೆಪಿ ನಾಯಕ ಎಲ್ ದಿನಕರ್ ಆರೋಪಿಸಿದ್ದಾರೆ.

ಹಿಂದಿನ ವೈಎಸ್‌ಆರ್‌ಸಿಪಿ ಆಡಳಿತದಲ್ಲಿ ಪ್ರಸಿದ್ಧ ತಿರುಪತಿ ಲಡ್ಡು ಪ್ರಸಾದವನ್ನು ಅಪವಿತ್ರಗೊಳಿಸಲಾಗಿದೆ ಎಂಬ ಆರೋಪಕ್ಕೆ ರೆಡ್ಡಿ ತಡವಾಗಿ ಪ್ರತಿಕ್ರಿಯಿಸಿದ ಹಿನ್ನೆಲೆಯಲ್ಲಿ ದಿನಕರ್ ಅವರು ಈ ಕಾಮೆಂಟ್ ಮಾಡಿದ್ದಾರೆ.

ಸಾರ್ವಜನಿಕ ಬೊಕ್ಕಸವನ್ನು ಲೂಟಿ ಮಾಡುವುದು ಮತ್ತು ಹಿಂದೂ ಸಂಪ್ರದಾಯಗಳು ಮತ್ತು ಸಂಪ್ರದಾಯಗಳಿಗೆ ಕಳಂಕ ತರುವುದನ್ನು ಬಿಟ್ಟರೆ ಅವರ ಆಡಳಿತ ಮತ್ತು ಸಮಾಜದಲ್ಲಿನ ವ್ಯವಸ್ಥೆಗಳ ಬಗ್ಗೆ ರೆಡ್ಡಿ ಅವರಿಗೆ ಜ್ಞಾನವಿಲ್ಲ ಎಂದು ದಿನಕರ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಲಡ್ಡು ಕಲಬೆರಕೆ ಆರೋಪದ ಬಗ್ಗೆ ಪ್ರತಿಕ್ರಿಯಿಸುವ ಬದಲು ಬಿಜೆಪಿ ನಾಯಕರನ್ನು ಅರ್ಧ ಜ್ಞಾನ ಹೊಂದಿರುವವರು ಎಂದು ಮಾಜಿ ಸಿಎಂ ಕರೆದಿರುವುದು ಅವರ ಮೂರ್ಖತನಕ್ಕೆ ಹಿಡಿದ ಕೈಗನ್ನಡಿ ಎಂದು ಅವರು ಕಿಡಿ ಕಾರಿದ್ದಾರೆ.

### ಮಣಿಪುರ ಸಚಿವ ಆಪ್ತಸಹಾಯಕನ ಅಪಹರಣ

**ಇಂಫಾಲ್:** ಮಣಿಪುರದ ಸಚಿವ ನಿವಾಸದೆದುರೇ ಆಪ್ತಸಹಾಯಕನನ್ನ ದುಷ್ಕರ್ಮಿಗಳು ಅಪಹರಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಕರಣವನ್ನು ರಾಷ್ಟ್ರೀಯ ತನಿಖಾ ದಳ (ಎನ್‌ಐಎಗೆ) ವಹಿಸಲಾಗಿದೆ. ಮಣಿಪುರದ ಗ್ರಾಹಕ ವ್ಯವಹಾರಗಳ ಸಚಿವ ಎಲ್.ಸುಸಿಂದ್ರೋ ಅವರ ಆಪ್ತಸಹಾಯಕ ಎಸ್. ಸೊಮೊರೆಂಡ್ರೊ (43 ವರ್ಷ) ಅಪಹರಣವಾಗಿರುವ ವ್ಯಕ್ತಿಯಾಗಿದ್ದಾರೆ. ಆಪ್ತಸಹಾಯಕನನ್ನ ಅಪಹರಿಸಲು ಕಾರಣವೇನು ಎಂಬು ಅಸ್ಪಷ್ಟವಾಗಿದೆ. ಘಟನೆಯ ಬಗ್ಗೆ ಯಾವು ಗುಂಪು ಕೂಡ ಹೊಣೆಹೊತ್ತಿಲ್ಲ. ದುಷ್ಕರ್ಮಿಗಳನ್ನ ಹಿಡಿಯಲು ಪೊಲೀಸರು ಬಲೆ ಬೀಸಿದ್ದಾರೆ. ಈ ಘಟನೆಗೂ ಮುನ್ನ ಹಿಂದಿನ ದಿನ ಬಿಷ್ಣುಪುರ ಜಿಲ್ಲೆಯ ಮಾಜಿ ಮುಖ್ಯ ಕಾರ್ಯದರ್ಶಿ ಓಯಿನಮ್ ನಬಕಿಶೋರ್ ಅವರ ಮನೆ ಮೇಲೂ ಶಸ್ತ್ರಸಜ್ಜಿತ ದಾಳಿಕೋರರು ಕನಿಷ್ಟ 5 ಸುತ್ತು ಗುಂಡು ಹಾರಿಸಿದ ಘಟನೆ ನಡೆದಿದೆ.

2023ರ ಮೇ ತಿಂಗಳಿನಲ್ಲಿ ಮೈತೆ-ಕುಕಿ ಜನಾಂಗೀಯ ಹಿಂಸಾಚಾರ ಆರಂಭವಾಗಿದ್ದರಿಂದ ಬಿಜೆಪಿ ವಕ್ತಾರ ಟಿ. ಮೈಕಲ್ ಲಮ್‌ಜತಾಂಗ್ ಮನೆ ಮೇಲೆ 3ನೇ ಬಾರಿಗೆ ದಾಳಿ ನಡೆದಿದೆ.

### ಬಾಲಕಿ ಮೇಲೆ ಗ್ಯಾಂಗ್ ರೇಪ್

**ಮಥುರಾ:** ಚಲಿಸುತ್ತಿದ್ದ ವ್ಯಾನ್‌ನಲ್ಲಿ ಅಪ್ರಾಪ್ತ ವಯಸ್ಸಿನ ದಲಿತ ಬಾಲಕಿಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆದಿರುವ ಘಟನೆ ಉತ್ತರ ಪ್ರದೇಶದಲ್ಲಿ ಗುರುವಾರ ವರದಿಯಾಗಿದೆ.

13 ವರ್ಷದ ಬಾಲಕಿಗೆ ಮತ್ತು ಬರುವ ಔಷಧ ನೀಡಿದ ನಂತರ ಆಕೆಯನ್ನು ಮೂವರು ಯುವಕರು ಅಪಹರಿಸಿದ್ದು, ಚಲಿಸುತ್ತಿದ್ದ ವ್ಯಾನ್‌ನಲ್ಲಿ ಸಾಮೂಹಿಕ ಅತ್ಯಾಚಾರ ನಡೆಸಿದ್ದಾರೆ ಎಂದು ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ. ಸಾಮೂಹಿಕ ಅತ್ಯಾಚಾರದ ಬಳಿಕ ಆ ಬಾಲಕಿಯನ್ನು ಫ್ಲೈಓವರ್ ಅಡಿಯಲ್ಲಿ ಎಸೆದು ಕಿರಾತಕರು ಪರಾರಿಯಾಗಿದೆ. ಬಾಲಕಿಗೆ ಪ್ರಜ್ಞೆ ಬಂದಾಗ ಮನೆಗೆ ಬಂದಿದ್ದು, ನಡೆದ ಹೀನಕೃತ್ಯವನ್ನು ತನ್ನ ಪೋಷಕರಿಗೆ ತಿಳಿಸಿದ್ದಾಳೆ.

ಬಾಲಕಿ ಕಿರಾಣಿ ಅಂಗಡಿಯೊಂದಕ್ಕೆ ಹೋಗಿದ್ದ ವೇಳೆ ಯುವಕನೊಬ್ಬ ನೀರಿನ ಬಾಟಲಿ ನೀಡಿದ್ದಾನೆ. ಬಾಟಲಿಯಲ್ಲಿನ ಮತ್ತು ಬರುವ ಔಷಧಿ ಸೇವಿಸಿದ ನಂತರ ಒಮ್ಮೆಲೇ ತಲೆಸುತ್ತು ಬಂದಂತಾಗಿದೆ. ಇದಾದ ನಂತರ ಮತ್ತಿಬ್ಬರು ಯುವಕರು ಸೇರಿಕೊಂಡು ಆಕೆಯನ್ನು ಬಲವಂತವಾಗಿ ವ್ಯಾನ್ ಗೆ ಹತ್ತಿಸಿಕೊಂಡು ವೇಗವಾಗಿ ಚಲಾಯಿಸಿಕೊಂಡು ಹೋಗಿದ್ದಾರೆ. ಸಂತ್ರಸ್ತೆಯ ತಂದೆ ನೀಡಿದ ದೂರಿನ ಆಧಾರದ ಮೇಲೆ ಛಾಟಾ ಪೊಲೀಸರು ಪರಾರಿಯಾಗಿರುವ ಮೂವರು ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

### ಹಾಸ್ಟೆಲ್‌ನಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ವಿದ್ಯಾರ್ಥಿನಿ ಶವ ಪತ್ತೆ

**ಪಾಟ್ನಾ:** ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಪಾಟ್ನಾದ ವಿದ್ಯಾರ್ಥಿನಿ ರಾಜಧಾನಿಯ ಹೊರವಲಯ ಬಿಹ್ತಾದಲ್ಲಿರುವ ಕ್ಯಾಂಪಸ್‌ನ ತನ್ನ ಹಾಸ್ಟೆಲ್ ಕೋಣೆಯಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾಳೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ.

ಆಂಧ್ರಪ್ರದೇಶ ಮೂಲದ ವಿದ್ಯಾರ್ಥಿನಿಯಾಗಿದ್ದು, ಆಕೆಯ ಶವ ಹಾಸ್ಟೆಲ್ ಕೋಣೆಯ ಸೀಲಿಂಗ್ ಫ್ಯಾನ್‌ಗೆ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ. ಸ್ಥಳದಲ್ಲಿ ಡೆತ್ ನೋಟ್ ಕೂಡ ಸಿಕ್ಕಿದೆ.

ಮೊನ್ನೆ ರಾತ್ರಿ 10.15ರ ಸುಮಾರಿಗೆ ಪೊಲೀಸರಿಗೆ ಕರೆ ಬಂದಿದ್ದು, ವಿದ್ಯಾರ್ಥಿನಿಯೊಬ್ಬಳು ತನ್ನ ಹಾಸ್ಟೆಲ್ ಕೊಠಡಿಯೊಳಗೆ ಸೀಲಿಂಗ್ ಫ್ಯಾನ್‌ಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಮಾಹಿತಿ ನೀಡಿದರು. ಪೊಲೀಸರು ಅಲ್ಲಿಗೆ ತಲುಪಿ ಆಕೆಯನ್ನು ಸರ್ಕಾರಿ ಆಸ್ಪತ್ರೆಗೆ ಸಾಗಿಸಿದರು. ಅಲ್ಲಿ ಮೃತಪಟ್ಟಿದ್ದಾಳೆ ಎಂದು ಘೋಷಿಸಲಾಯಿತು. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ. ವಿದ್ಯಾರ್ಥಿನಿ ಪೋಷಕರು ಆಂಧ್ರ ಪ್ರದೇಶದಲ್ಲಿದ್ದು, ಕುಟುಂಬ ಸದಸ್ಯರಿಗೆ ಮಾಹಿತಿ ನೀಡಲಾಗಿದೆ. ಸ್ಥಳದಿಂದ ಎಲ್ಲಾ ವೈಜ್ಞಾನಿಕ ಪುರಾವೆಗಳನ್ನು ಸಂಗ್ರಹಿಸಲಾಗುತ್ತಿದ್ದು, ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಪಲ್ಸರ್ ಸುನಿ ಜೈಲಿನಿಂದ ಬಿಡುಗಡೆ

**ತಿರುವನಂತಪುರ:** 2017ರ ಕೇರಳದಲ್ಲಿ ನಟಿಯ ಅಪಹರಣ ಮತ್ತು ಅತ್ಯಾಚಾರ ಪ್ರಕರಣದ ವಿಚಾರಣೆ ಆಮೆಗತಿಯಲ್ಲಿ ಸಾಗುತ್ತಿರುವುದನ್ನು ಮತ್ತು ಪ್ರಮುಖ ಆರೋಪಿ ಸುನಿಲ್ ಎಸ್. ಅಲಿಯಾಸ್ ಪಲ್ಸರ್ ಸುನಿ ಕಳೆದ ಏಳು ವರ್ಷಗಳಿಂದಲೂ ಜೈಲಿನಲ್ಲಿರುವುದನ್ನು ಪರಿಗಣಿಸಿ ಸರ್ವೋಚ್ಚ ನ್ಯಾಯಾಲಯವು ಆತನಿಗೆ ಜಾಮೀನು ಮಂಜೂರು ಮಾಡಿದೆ. ಪ್ರಕರಣದಲ್ಲಿ ಜಾಮೀನು ಕೋರಿ ಪಲ್ಸರ್ ಸುನಿ ಅರ್ಜಿ ಸಲ್ಲಿಸಿದ ಬಳಿಕ ನ್ಯಾಯಮೂರ್ತಿಗಳಾದ ಎ.ಎಸ್.ಓಕಾ ಮತ್ತು ಪಂಕಜ ಮಿತ್ತಲ್ ಅವರ ಪೀಠವು ರಾಜ್ಯ ಸರಕಾರದಿಂದ ವರದಿಯನ್ನು ಕೇಳಿತ್ತು.

ಈ ವರ್ಷದ ಜೂ.6ರಂದು ಕೇರಳ ಉಚ್ಚ ನ್ಯಾಯಾಲಯವು ತನ್ನ ಜಾಮೀನು ಅರ್ಜಿಯನ್ನು ತಿರಸ್ಕರಿಸಿದ ಬಳಿಕ ಸುನಿ ಸರ್ವೋಚ್ಚ ನ್ಯಾಯಾಲಯದ ಮೆಟ್ಟಿಲೇರಿದ್ದ. ಪ್ರಕರಣದಲ್ಲಿಯ ಇತರ ಎಲ್ಲಾ ಆರೋಪಿಗಳು ಜಾಮೀನು ಬಿಡುಗಡೆಗೊಂಡಿದ್ದರೂ ಸುನಿ ಏಳು ವರ್ಷಗಳಿಗೂ ಅಧಿಕ ಜೈಲುವಾಸವನ್ನು ಅನುಭವಿಸಿದ್ದಾನೆ.



# ನುನಕುಳಿ: ಹೊಸ ರೆಕಾರ್ಡ್ ಕ್ರಿಯೇಟ್

ಒಟಿಟಿ ಪ್ಲಾಟ್ಫಾರ್ಮ್ ದಿನದಿಂದ ದಿನಕ್ಕೆ ದೊಡ್ಡದಾಗುತ್ತಿದೆ. ಹೊಸ ಸಿನಿಮಾಗಳನ್ನು ಖರೀದಿಸಿ ಪ್ರಸಾರ ಮಾಡುವಲ್ಲಿ ಅನೇಕ ಒಟಿಟಿ ಸಂಸ್ಥೆಗಳ ನಡುವೆ ಪೈಪೋಟಿ ಇದೆ. ಅದರಲ್ಲೂ 'ಜೀ5' ಸದಾಭಿರುಚಿ ಚಿತ್ರಗಳನ್ನು ಪ್ರೇಕ್ಷಕರಿಗೆ ನೀಡುವಲ್ಲಿ ಮೊದಲ ಸ್ಥಾನದಲ್ಲಿ ಕಾಣಿಸುತ್ತದೆ. ಇದೇ ಸೆಪ್ಟಂಬರ್ 13ರಂದು ಜೀ5 ಒಟಿಟಿ ಪ್ಲಾಟ್‌ಫಾರ್ಮ್‌ನಲ್ಲಿ ಸ್ಟ್ರೀಮಿಂಗ್ ಕಂಡ 'ನುನಕುಳಿ' ಚಿತ್ರ ದಾಖಲೆ ಬರೆದಿದೆ. 100 ಮಿಲಿಯನ್ಸ್ ಸ್ಟ್ರೀಮಿಂಗ್ ಮಿನಿಟ್ ಕಾಣುವ ಮೂಲಕ ಹೊಸ ರೆಕಾರ್ಡ್ ಕ್ರಿಯೇಟ್ ಮಾಡಿದೆ. ಮಲಯಾಳಂನಲ್ಲಿ ನುನಕುಜ್ಹೈ ಎಂದು ಹೆಸರಿಡಲಾಗಿದೆ.

ಇತ್ತೀಚೆಗಷ್ಟೇ ಕೇರಳದ ನಡೆದ ಕ್ರೀಡಾ ಸಮಾರಂಭವೊಂದರಲ್ಲಿ ಅಲ್ಲಿ ಶಿಕ್ಷಣ ಮತ್ತು ಕಾರ್ಮಿಕ ಸಚಿವ ವಿ ಶಿವನ್ ಕುಟ್ಟಿ ಅವರ ಸಮ್ಮುಖದಲ್ಲಿ ಚಿತ್ರದ 10,000 ಸ್ಕ್ವೇರ್ ಫೀಟ್ ಪೋಸ್ಟರ್ ನ್ನು ಜೀ5 ಅನಾವರಣ ಮಾಡಿದೆ.

ಕ್ರೈಮ್ ಕಾಮಿಡಿ ಥ್ರಿಲ್ಲರ್ ಚಿತ್ರ 'ನುನಕುಳಿ' ಮಲಯಾಳಂ ಮಾತ್ರವಲ್ಲ ಕನ್ನಡ ಮತ್ತು ತೆಲುಗು ಭಾಷೆಗಳಲ್ಲಿಯೂ ವೀಕ್ಷಣೆ ಮಾಡಬಹುದು. ನುನಕುಳಿಯಲ್ಲಿ ಬೇಸಿಲ್ ಜೋಸೆಫ್, ಗ್ರೇಸ್ ಆಂಟೋನಿ, ಸಿದ್ದಿಕಿ, ಬೈಜು ಸಂತೋಷ್, ನಿಖಿಲಾ ವಿಮಲ್ ಪ್ರಮುಖ ಪಾತ್ರ ನಿರ್ವಹಿಸಿದ್ದಾರೆ.






# ಥಗ್ ಲೈಫ್ 150 ಕೋಟಿಗೆ ಮಾರಾಟ

ಆಫ್ಟರ್ ಎ ಲಾಂಗ್‌ಟೈಂ ಮಣಿರತ್ನಂ ಹಾಗೂ ಕಮಲ್ ಹಾಸನ್ ಕಾಂಬಿನೇಷನ್‌ನಲ್ಲಿ 'ಥಗ್ ಲೈಫ್ ' ಸಿನಿಮಾ ಮೂಡಿ ಬರ್ತಿದೆ. ಸಿನಿಮಾ ರಿಲೀಸ್‌ಗೂ ಮುನ್ನವೇ ಭಾರಿ ಮೊತ್ತಕ್ಕೆ ಓಟಿಟಿ ರೈಟ್ಸ್ ಸೇಲ್ ಆಗಿರೋದು ಎಲ್ಲಾರೂ ಹುಬ್ಬೇರಿಸುವಂತೆ ಮಾಡಿದೆ. ಬರೋಬ್ಬರಿ 149.7 ಕೋಟಿಗೆ ಸಿನಿಮಾದ ಓಟಿಟಿ ಹಕ್ಕನ್ನ ನೆಟ್‌ಫ್ಲಿಕ್ಸ್ ಸಂಸ್ಥೆ ತನ್ನ ತನ್ನದಾಗಿಸಿಕೊಂಡಿದೆ. ಕಮಲ್ ಹಾಸನ್, ತ್ರಿಶಾ ಕೃಷ್ಣನ್, ಸಿಲಂಬರಸನ್, ಅಶೋಕ್ ಸೆಲ್ವನ್, ನಾಸರ್ ಸೇರಿದಂತೆ ಅತೀದೊಡ್ಡ ತಾರಾಗಣ 'ಥಗ್ ಲೈಫ್' ಸಿನಿಮಾದಲ್ಲಿದೆ.

ಈಗಾಗಲೇ ಚಿತ್ರತಂಡ ಬಿಟ್ಟಿರುವ ಮೇಕಿಂಗ್‌ನಿಂದಲೇ ಇಡೀ ದೇಶದ ಗಮನಸೆಳೆದಿರುವ ಈ ಸಿನಿಮಾ ರಿಲೀಸ್‌ಗೂ ಮುನ್ನವೇ ಕ್ರೇಜ್ ಕ್ರಿಯೇಟ್ ಮಾಡಿದೆ. ಕಮಲ್ ಹಾಸನ್ ಫ್ಯಾನ್ಸ್ ಈ ಸುದ್ದಿ ಕೇಳಿ ರಣಕೇಕೆ ಹಾಕಿದ್ದಾರೆ. 'ಪೊನ್ನಿಯನ್ ಸೆಲ್ವನ್' ಪಾರ್ಟ್-2 ಸಿನಿಮಾದ ನಂತರ ಮಣಿರತ್ನಂ ನಿರ್ದೇಶನಕ್ಕೆ ಕೈಹಾಕಿದ ಸಿನಿಮಾ 'ಥಗ್ ಲೈಫ್'. ಹೀಗಾಗಿನೇ ಸಿನಿಮಾ ರಿಲೀಸ್‌ಗೂ ಮುನ್ನವೇ ಭಾರಿ ಸೌಂಡ್ ಮಾಡ್ತಿದೆ. ಹತ್ತತ್ತಿರ 150 ಕೋಟಿಗೆ ಈ ಸಿನಿಮಾ ಓಟಿಟಿ ಹಕ್ಕು ಸೇಲ್ ಮಾಡಿ ಕಮಾಲ್ ಮಾಡ್ತಿದೆ. ಹಾಗಾಗಿ ಕಮಲ್ ಹಾಸನ್ ಹಾಗೂ ಮಣಿರತ್ನಂ ಕಾಂಬಿನೇಷನ್‌ಗೆ ಇರೋ ತಾಕತ್ತು ಇದೇ ಅಂತಾ ಅವರ ಅಭಿಮಾನಿ ಬಳಗ ಕೂಗಿ ಹೇಳುತ್ತಿದೆ. ಪ್ಯಾನ್ ಇಂಡಿಯಾ ಕಾನ್ಸೆಪ್ಟ್‌ನಲ್ಲಿ ತಯಾರಾಗಿರುವ 'ಥಗ್ ಲೈಫ್' ಸಿನಿಮಾ ಭಾರತದಾದ್ಯಂತ ಸುತ್ತಿ ಶೂಟಿಂಗ್ ಮಾಡಿದೆ. ಇನ್ನು ಥಿಯೇಟರ್‌ಗೆ ಬರುವ ಮುನ್ನವೇ ಭರ್ಜರಿ ಮೊತ್ತಕ್ಕೆ ಓಟಿಟಿ ಹಕ್ಕು ಮಾರಾಟವಾಗಿರೋದು ಇಡೀ ಚಿತ್ರತಂಡಕ್ಕೆ ಎಲ್ಲಿಲ್ಲದ ಸಂಭ್ರಮ.

# ವಿದ್ಯಾಪತಿ ಶೂಟಿಂಗ್ ಮುಕ್ತಾಯ



ಧನಂಜಯ್ ಒಡೆತನದ ಡಾಲಿ ಪಿಕ್ಚರ್ಸ್‌ನ ನಾಲ್ಕನೇ ಸಿನಿಮಾ ವಿದ್ಯಾಪತಿ. ಟೈಟಲ್ ಹಾಗೂ ಸ್ಯಾಂಪಲ್ಸ್ ನಿಂದಲೇ ಕುತೂಹಲ ದುಪ್ಪಟ್ಟು ಮಾಡಿರುವ ಈ ಚಿತ್ರದ ಶೂಟಿಂಗ್ ಮುಕ್ತಾಯಗೊಂಡಿದೆ. ವಿದ್ಯಾಪತಿಗೆ ಕುಂಬಳಕಾಯಿ ಪ್ರಾಪ್ತಿಯಾಗಿದೆ. ಟಗರು ಪಲ್ಯ ಮೂಲಕ ಮಸ್ತ್ ಮನರಂಜನೆ ನೀಡಿದ್ದ ನಾಗಭೂಷಣ್ ನಾಯಕನಾಗಿ ನಟಿಸಿದ್ದು, ಉಪಾಧ್ಯಕ್ಷನ ಬೆಡಗಿ ಮಲೈಕಾ ವಸೂಪಾಲ್ ಜೋಡಿಯಾಗಿ ಸಾಥ್ ಕೊಟ್ಟಿದ್ದಾರೆ. ಕರಾಟೆ ಕಿಂಗ್ ಗೆಟಪ್‌ನಲ್ಲಿ ನಾಗಭೂಷಣ್ ಕಾಣಿಸಿಕೊಂಡಿದ್ದು, ಅವರಿಗೆ ಮಾಸ್ಟರ್ ಆಗಿ ರಂಗಾಯಣ ರಘು ಅಭಿನಯಿಸಿದ್ದಾರೆ. ಈ ಹಿಂದೆ ಇಕ್ಕಟ್ ಸಿನಿಮಾ ಮೂಲಕ ಭರವಸೆ ಹುಟ್ಟಿಸಿದ್ದ ಇಶಾಂ ಮತ್ತು ಹಸೀಂ ಖಾನ್ ವಿದ್ಯಾಪತಿ ಸಿನಿಮಾಕ್ಕೆ ಆಕ್ಷನ್ ಕಟ್ ಹೇಳಲಿದ್ದಾರೆ. ಜೊತೆಗೆ ಸಿನಿಮಾವನ್ನು ಇವರೆ ಬರೆದು, ಸಂಕಲನದ ಜವಾಬ್ದಾರಿಯನ್ನು ತಾವೇ ಹೊತ್ತುಕೊಂಡಿದ್ದಾರೆ. ಚಿತ್ರಕ್ಕೆ ಲವಿತ್ ಛಾಯಾಗ್ರಹಣ, ಡಾಸ್ಮೋಡ್ ಸಂಗೀತ ನಿರ್ದೇಶನ, ಮುರುಳಿ ನೃತ್ಯ ನಿರ್ದೇಶನ, ಸುಜಿತ್ ವೆಂಕಟರಾಮಯ್ಯ ಸಾಹಿತ್ಯ, ಅರ್ಜುನ್ ಮಾಸ್ಟರ್ ಆಕ್ಷನ್ ವಿದ್ಯಾಪತಿ ಸಿನಿಮಾಕ್ಕಿದೆ. ಡಾಲಿ ಧನಂಜಯ್ ವಿದ್ಯಾಪತಿ ಚಿತ್ರಕ್ಕೂ ದುಡ್ಡು ಹಾಕುತ್ತಿದ್ದಾರೆ. ಟಗರು ಪಲ್ಯ ಸಿನಿಮಾ ಬಳಿಕ ಈ ಸಿನಿಮಾ ಪ್ರೊಡ್ಯೂಸ್ ಮಾಡುತ್ತಿದ್ದಾರೆ. ಇನ್ನುಳಿದಂತೆ ವಿದ್ಯಾಪತಿ ಸಿನಿಮಾದಲ್ಲಿ ಆಕ್ಷನ್ ಇದೆ. ಹಾಸ್ಯದ ಹೊನಲು ಇರಲಿದೆ. ಸದ್ಯ ಚಿತ್ರೀಕರಣ ಮುಗಿಸಿರುವ ಚಿತ್ರತಂಡ ಶೀಘ್ರದಲ್ಲೇ ಪ್ರಚಾರ ಕಾರ್ಯವನ್ನು ಆರಂಭಿಸಲಿದೆ.

# ಬರ್ತ್‌ಡೇ ಸಂಭ್ರಮದಲ್ಲಿ ಕರೀನಾ

ಬಿಟೌನ್‌ನ ಬ್ಯೂಟಿ ಕರೀನಾ ಕಪೂರ್‌ಗೆ ಹುಟ್ಟುಹಬ್ಬದ ಸಂಭ್ರಮ. 44ನೇ ಹುಟ್ಟುಹಬ್ಬವನ್ನ ಆಚರಿಸಿಕೊಳ್ಳುತ್ತಿರುವ ನಟಿ ಕರೀನಾ ಕಪೂರ್ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕಿದ್ದಾರೆ. ಕೆಂಪು ಬಣ್ಣದ ಗೌನ್‌ನಲ್ಲಿ ಸಖತ್ತಾಗೇ ಅಟ್ರ್ಯಾಕ್ಟ್ ಮಾಡ್ತಿದ್ದಾರೆ ಕರೀನಾ. ಇನ್‌ಸ್ಟಾದ ಪೋಸ್ಟ್‌ಗೆ ಫ್ಯಾನ್ಸ್ ಕಮೆಂಟ್ ಮೇಲೆ ಕಮೆಂಟ್ ಹಾಕ್ತಿದ್ದಾರೆ.

ಅಂದಹಾಗೆ ಕರೀನಾ ಬರ್ತ್‌ಡೇ ಜೊತೆಗೆ ಮತ್ತೊಂದು ಸಂತೋಷದ ಸುದ್ದಿ ಕೂಡಾ ಅಭಿಮಾನಿಗಳು ಹಬ್ಬ ಮಾಡೋಕೆ ಕಾರಣವಾಗಿದೆ. ಹೌದು, ಕರೀನಾ ಕಪೂರ್ ಬಾಲಿವುಡ್ ಇಂಡಸ್ಟ್ರಿಗೆ ಕಾಲಿಟ್ಟು 25 ವರ್ಷವಾಗಿದೆ. ಈ ಹಿನ್ನೆಲೆ ಬಾಲಿವುಡ್‌ನಲ್ಲಿ ಕೆಕೆಕೆ ಫಿಲ್ಮ್ ಫೆಸ್ಟಿವಲ್ ಮಾಡೋಕೆ ಸಕಲ ಸಿದ್ಧತೆಗಳು ನಡೆಯುತ್ತಿವೆ. ಕೆಕೆಕೆ ಫಿಲ್ಮ್ ಫೆಸ್ಟಿವಲ್, 15 ನಗರಗಳಲ್ಲಿ 30 ಚಿತ್ರಮಂದಿರಗಳಲ್ಲಿ ವಿಶೇಷ ಚಲನಚಿತ್ರೋತ್ಸವ ನಡೆಸಲಾಗುತ್ತೆ. 'ಜಬ್ ವಿ ಮೇಟ್', 'ಚಮೇಲಿ', 'ಹೀರೋಯಿನ್' ಸಿನಿಮಾಗಳಲ್ಲಿ ತಮ್ಮ ವಿಭಿನ್ನ ಪಾತ್ರದ ಮೂಲಕ ಗಮನ ಸೆಳೆದಿದ್ದಾರೆ. ಮಾಡೆಲಿಂಗ್ ಹಾಗೂ ಸಿನಿಮಾ ರಂಗದಲ್ಲಿ ಈಗಲೂ ತೊಡಗಿಸಿಕೊಂಡಿರುವ 44 ವರ್ಷದ ಈ ಬ್ಯೂಟಿ ಕರೀನಾ.

ಮಾಡೆಲಿಂಗ್ ಹಾಗೂ ಸಿನಿಮಾ ರಂಗದ ಕೆಲಸದ ನಡೆವೆಯೂ ಫ್ಯಾಮಿಲಿಗೂ ಸಮಯವನ್ನ ಮೀಸಲಿಟ್ಟಿರುತ್ತಾ ಕರೀನಾ ಕಪೂರ್. ಚಿತ್ರರಂಗದಲ್ಲಿ 25 ವರ್ಷ ಪೂರೈಸಿದ ಖುಷಿ ಒಂದು ಕಡೆಯಾದ್ರೆ, 44 ವರ್ಷದ ಹುಟ್ಟುಹಬ್ಬ ಮತ್ತೊಂದು ತರದ ಖುಷಿ ಕೊಟ್ಟಿದೆ. ಇನ್ನು ಹೆಚ್ಚು ಹೆಚ್ಚು ಸಿನಿಮಾಗಳನ್ನ ಮಾಡಿ ಕರೀನಾ ಅಭಿಮಾನಿಗಳನ್ನ ರಂಜಿಸಲಿ ಅಂತಾ ಹಾರೈಸೋಣ.

# ರಾಶಿಗೆ ನಾಯಕಿಯಾಗಿ ಸಮೀಕ್ಷಾ



ಧ್ರುವನ್ ಫಿಲಂಸ್ ಲಾಂಛನದಲ್ಲಿ ನಿರ್ಮಾಣವಾಗುತ್ತಿರುವ , ವಿಜಯ್ ಪಾಳೇಗಾರ್ ನಿರ್ದೇಶಿಸುತ್ತಿರುವ ಹಾಗೂ ಸುಪ್ರೀಂ ಹೀರೋ ಶಶಿಕುಮಾರ್ ಅವರ ಪುತ್ರ ಆದಿತ್ಯ ಶಶಿಕುಮಾರ್ ನಾಯಕನಾಗಿ ನಟಿಸುತ್ತಿರುವ ನೂತನ ಚಿತ್ರದ ಶೀರ್ಷಿಕೆ ಅನಾವರಣ ಸಮಾರಂಭ ಇತ್ತೀಚೆಗೆ ಅದ್ದೂರಿಯಾಗಿ ನೆರವೇರಿತು. ಈ ಸುಂದರ ಪ್ರೇಮ ಕಥಾನಕಕ್ಕೆ 'ರಾಶಿ' ಎಂದು ಹೆಸರಿಡಲಾಗಿದೆ. ಆದಿತ್ಯ ಶಶಿಕುಮಾರ್ ಅವರ ಹುಟ್ಟುಹಬ್ಬದ ದಿನವೇ ಈ ಚಿತ್ರದ ಶೀರ್ಷಿಕೆ ಅನಾವರಣ ಮಾಡುವ ಮೂಲಕ ನಾಯಕನಿಗೆ ಚಿತ್ರತಂಡ ವಿಶೇಷ ಉಡುಗೊರೆ ನೀಡಿದೆ. ರಾಜ್ಯಸಭಾ ಸದಸ್ಯರು ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಕಮಿಟಿಯ ಕಾರ್ಯಾಧ್ಯಕ್ಷರಾದ ಜಿ.ಎಸ್.ಚಂದ್ರಶೇಖರ್, ನಟ ಶಶಿಕುಮಾರ್, ಬೆಂಗಳೂರು ಪೊಲೀಸ್ ಉಪ ಆಯುಕ್ತರಾದ ಸಿದ್ದರಾಜು, ಮಂಡ್ಯ ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷರಾದ ಎಸ್ ಚಿದಂಬರ್ ಸೇರಿದಂತೆ ಮುಂತಾದ ಗಣ್ಯರು ಈ ಚಿತ್ರದ ಶೀರ್ಷಿಕೆ ಅನಾವರಣ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದರು. ಆನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ಇದು ನಾನು ನಾಯಕನಾಗಿ ನಟಿಸುತ್ತಿರುವ ಮೂರನೇ ಚಿತ್ರ ಎಂದು ಮಾತನಾಡಿದ ನಾಯಕ ಆದಿತ್ಯ ಶಶಿಕುಮಾರ್, ಈ ಚಿತ್ರದ ಕಥೆ ಬಹಳ ಚೆನ್ನಾಗಿದೆ. ನನ್ನ ಹುಟ್ಟುಹಬ್ಬದ ದಿನ ಈ ಚಿತ್ರದ ಶೀರ್ಷಿಕೆ ಅನಾವರಣವಾಗಿದ್ದು ಖುಷಿಯಾಗಿದೆ. ಇಷ್ಟು ದಿನ ಅಕ್ಷಿತ್ ಶಶಿಕುಮಾರ್ ಆಗಿದ್ದ ನಾನು, ಈಗ ಆದಿತ್ಯ ಶಶಿಕುಮಾರ್ ಎಂದು ಹೆಸರು ಬದಲಿಸಿಕೊಂಡಿದ್ದೇನೆ. ಇನ್ನು ಮುಂದೆ ಎಲ್ಲಾರೂ ಆದಿತ್ಯ ಶಶಿಕುಮಾರ್ ಎಂದೇ ಕರೆಯಬೇಕೆಂದು ವಿನಂತಿಸುತ್ತೇನೆ ಎಂದರು.

ಮಂತ್ರಾಲಯದಲ್ಲಿ ರಾಯರ ದರ್ಶನ ಮುಗಿಸಿಕೊಂಡು ಬರುವಾಗ ನಿರ್ಮಾಪಕ ಅಖಿಲೇಶ್ ಅವರು ನನ್ನನ್ನು ಕರೆದು ಈ ಚಿತ್ರವನ್ನು ನಿರ್ದೇಶಿಸಬೇಕೆಂದರು. ಅಖಿಲೇಶ್ ಅವರೆ ಈ ಚಿತ್ರದ ಕಥೆ ಬರೆದಿದ್ದಾರೆ. ನಾನು ಚಿತ್ರಕಥೆ, ಬರೆದು, ಗೀತರಚನೆ ಮಾಡಿ, ಸಂಗೀತ ನಿರ್ದೇಶನದೊಂದಿಗೆ ನಿರ್ದೇಶನನ್ನು ಮಾಡುತ್ತಿದ್ದೇನೆ. ''ಟ್ರಿಗರ್'' ಚಿತ್ರದ ನಂತರ ನಾನು ನಿರ್ದೇಶಿಸುತ್ತಿರುವ ಎರಡನೇ ಚಿತ್ರವಿದು.

# ವಿಶಿಷ್ಟ ದಾಖಲೆ ಬರೆದ ರಶೀದ್ ಖಾನ್




ಪ್ರಸ್ತುತ ಶಾರ್ಜಾ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆಯುತ್ತಿರುವ ಆಫ್ಘಾನಿಸ್ತಾನ ಮತ್ತು ದಕ್ಷಿಣ ಆಫ್ರಿಕಾ ವಿರುದ್ಧದ ಏಕದಿನ ಸರಣಿ ಪಂದ್ಯ ಇದೀಗ ಒಂದಷ್ಟು ದಾಖಲೆಗಳಿಗೆ ಸಾಕ್ಷಿಯಾಗುತ್ತಿದೆ.

ಕ್ಯಾಪ್ಟನ್ ಹಶ್ಮತುಲ್ಲಾ ಶಾಹಿದಿ ನೇತೃತ್ವದಲ್ಲಿ ಸೌತ್ ಆಫ್ರಿಕಾ ತಂಡಕ್ಕೆ ಬೆವರಿಳಿಸುತ್ತಿರುವ ಆಫ್ಘಾನ್ ಪಡೆ, ಮೂರು ಪಂದ್ಯಗಳ ಸರಣಿಯಲ್ಲಿ ಈಗಾಗಲೇ ಎರಡು ಪಂದ್ಯವನ್ನು ಗೆದ್ದು ಏಕದಿನ ಸರಣಿಯನ್ನು ವಶಪಡಿಸಿಕೊಂಡಿದೆ.

ಇನ್ನು ಈ ಮಧ್ಯೆ, ವಿಶಿಷ್ಟ ದಾಖಲೆಯೊಂದಕ್ಕೆ ಸಾಕ್ಷಿಯಾದ ಆಫ್ಘಾನಿಸ್ತಾನ ತಂಡದ ಸ್ಟಾರ್ ಬೌಲರ್ ರಶೀದ್ ಖಾನ್, ಈ ಹಿಂದೆ ಯಾರೊಬ್ಬರು ಮಾಡದ ದಾಖಲೆಯನ್ನು ತಮ್ಮ ಮುಡಿಗೇರಿಸಿಕೊಂಡಿರುವುದು ವಿಶೇಷ.ಇಂದು ನಡೆದ ದಕ್ಷಿಣ ಆಫ್ರಿಕಾ ವಿರುದ್ಧದ ಎರಡನೇ ಏಕದಿನ ಪಂದ್ಯದಲ್ಲಿ ತಂಡದ ಪರ ರಶೀದ್ ಖಾನ್ ಅದ್ಭುತ ಫಾರ್ಮ್ ಪ್ರದರ್ಶಿಸಿದರು. ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಆಫ್ಘಾನ್ 50 ಓವರ್ ಅಂತ್ಯಕ್ಕೆ 4 ವಿಕೆಟ್ ಕಳೆದುಕೊಂಡು 311 ರನ್ ಕಲೆಹಾಕುವಲ್ಲಿ ಶಕ್ತವಾಯಿತು. ಈ ಗುರಿಯನ್ನು ಬೆನ್ನಟ್ಟಿದ ಸೌತ್ ಆಫ್ರಿಕಾ ತಂಡ ಕೇವಲ 134ಕ್ಕೆ ಆಲ್‌ಔಟ್ ಆಗಿ ಹೀನಾಯ ಸೋಲನ್ನು ಅನುಭವಿಸಿತು. ಎದುರಾಳಿಗಳ ವಿಕೆಟ್‌ಗಾಗಿ ಅದ್ಭುತ ಬೌಲಿಂಗ್ ದಾಳಿ ನಡೆಸಿದ ರಶೀದ್, ತಮ್ಮ ಜನ್ಮದಿನದಂದೇ ಬರೋಬ್ಬರಿ ಐದು ವಿಕೆಟ್ ಪಡೆದು ಆಫ್ಘಾನಿಸ್ತಾನ ಗೆಲುವಿಗೆ ಕಾರಣವಾಗುವುದರ ಜತೆಗೆ ಐತಿಹಾಸಿಕ ದಾಖಲೆ ಬರೆದರು.

53 ವರ್ಷಗಳ ಏಕದಿನ ಕ್ರಿಕೆಟ್ ಇತಿಹಾಸದಲ್ಲಿ ತಮ್ಮ ಹುಟ್ಟುಹಬ್ಬದಂದೇ ಐದು ವಿಕೆಟ್ ಪಡೆದ ಮೊದಲ ಕ್ರಿಕೆಟಿಗ ಎಂಬ ಹೆಗ್ಗಳಿಕೆಗೆ ಪಾತ್ರರಾಗಿರುವ ರಶೀದ್ ಖಾನ್, ಈ ವಿಶಿಷ್ಟ ದಾಖಲೆಗೆ ಭಾಜನರಾಗಿದ್ದಾರೆ. ಜನ್ಮದಿನದಂದೇ ಈ ಹೊಸ ರೆಕಾರ್ಡ್ ಮಾಡಿರುವ ಖಾನ್, ತಂಡದಿಂದ ಹಾಗೂ ಕ್ರಿಕೆಟ್ ಅಭಿಮಾನಿಗಳಿಂದ ವ್ಯಾಪಕ ಪ್ರಶಂಸೆ ಸ್ವೀಕರಿಸಿದ್ದಾರೆ. ಏಕದಿನ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ 177 ರನ್‌ಗಳ ಭರ್ಜರಿ ಜಯ ದಾಖಲಿಸಿದ ಆಫ್ಘಾನಿಸ್ತಾನ, ಇಲ್ಲಿಯವರೆಗೂ ಆಡಿರುವ ಏಕದಿನ ಪಂದ್ಯಗಳಲ್ಲಿ ಇದೇ ಮೊದಲು ಇಷ್ಟು ದೊಡ್ಡ ಅಂತರದಲ್ಲಿ ಗೆಲುವನ್ನು ಸಾಧಿಸಿರುವುದು.

ಮೊದಲ ಮ್ಯಾಚ್‌ನಲ್ಲಿ 6 ವಿಕೆಟ್‌ಗಳಿಂದ ಜಯ ಸಾಧಿಸಿದ ಆಫ್ಘಾನ್ ಪಡೆ, ಇದೀಗ ಎರಡನೇ ಪಂದ್ಯದಲ್ಲಿ ಬರೋಬ್ಬರಿ 177 ರನ್‌ಗಳಿಂದ ಸೌತ್ ಆಫ್ರಿಕಾ ತಂಡವನ್ನು ಬಗ್ಗುಬಡಿದಿದೆ.



# ಯುವಕನ ಬ್ಯಾಟಿಂಗ್‌ಗೆ ಕೊಹ್ಲಿ ದಾಖಲೆ ಉಡೀಸ್!



ಸಂವೇದನಾಶೀಲತೆಯ ಕೇರಾಫ್ ಅಡ್ರೆಸ್ ಆಗಿರುವ ಅಫ್ಘಾನಿಸ್ತಾನ ಮತ್ತೊಂದು ಅದ್ಭುತ ಗೆಲುವು ಸಾಧಿಸಿದೆ. ದಕ್ಷಿಣ ಆಫ್ರಿಕಾವನ್ನು 177 ರನ್‌ಗಳ ಬೃಹತ್ ಅಂತರದಿಂದ ವಿಶ್ವ ನಂ.3 ಶ್ರೇಯಾಂಕ ಪಡೆದಿದೆ. ಇನ್ನೂ ಒಂದು ಪಂದ್ಯ ಬಾಕಿ ಇರುವಂತೆಯೇ ಏಕದಿನ ಸರಣಿಯನ್ನು 2-0 ಅಂತರದಿಂದ ವಶಪಡಿಸಿಕೊಂಡಿದೆ. ಶಾರ್ಜಾದಲ್ಲಿ ನಡೆದ ಎರಡನೇ ಏಕದಿನ ಪಂದ್ಯದಲ್ಲಿ ಆಲ್ ರೌಂಡ್ ಪ್ರದರ್ಶನದೊಂದಿಗೆ ಸಂಪೂರ್ಣ ಪ್ರಾಬಲ್ಯ ಮೆರೆದರು. ಮೊದಲ ಬಾರಿಗೆ ದಕ್ಷಿಣ ಆಫ್ರಿಕಾ ವಿರುದ್ಧ ದ್ವಿಪಕ್ಷೀಯ ಸರಣಿ ಗೆದ್ದಿದೆ. ಇದಲ್ಲದೆ, ರನ್‌ಗಳ ವಿಷಯದಲ್ಲಿ ಇದು ಅಫ್ಘಾನಿಸ್ತಾನಕ್ಕೆ ಏಕದಿನದಲ್ಲಿ ಭಾರಿ ಜಯವಾಗಿದೆ. ಮೊದಲು ಬ್ಯಾಟ್ ಮಾಡಿದ ಅಫ್ಘಾನಿಸ್ತಾನ ನಿಗದಿತ 50 ಓವರ್‌ಗಳಲ್ಲಿ ನಾಲ್ಕು ವಿಕೆಟ್‌ಗೆ 311 ರನ್ ಗಳಿಸಿತು. ಗುರ್ಬಾಜ್ (105; 110 ಎಸೆತ, 10 ಬೌಂಡರಿ, 3 ಸಿಕ್ಸರ್) ಶತಕ ಸಿಡಿಸಿದ್ದರು. ಅಜ್ಮತುಲ್ಲಾ (86; 50 ಎಸೆತ, 5 ಬೌಂಡರಿ, 6 ಸಿಕ್ಸರ್) ಧನಾಧನ್ ಇನ್ನಿಂಗ್ಸ್ ಆಡಿದರು. ರಹಮತ್ (50; 66 ಎಸೆತ, 2 ಬೌಂಡರಿ) ಅರ್ಧಶತಕ ಸಿಡಿಸಿ ಮಿಂಚಿದರು. ಎಂಗಿಡಿ, ಬರ್ಗರ್, ಪೀಟರ್ ಮತ್ತು ಮಾರ್ಕ್ರಾಮ್ ವಿಕೆಟ್ ಪಡೆದರು. ಆಟಗಾರನ ಸಲಹೆಗೆ ಒಪ್ಪಿ ಫೀಲ್ಡರ್‌ಗಳ ಜಾಗ ಬದಲಿಸಿದ ಎದುರಾಳಿ ತಂಡದ ಕ್ಯಾಪ್ಟನ್‌ಬಳಿಕ 312 ರನ್‌ಗಳ ಗುರಿಯೊಂದಿಗೆ ಕಣಕ್ಕೆ ಇಳಿದ ದಕ್ಷಿಣ ಆಫ್ರಿಕಾ 34.2 ಓವರ್‌ಗಳಲ್ಲಿ 134 ರನ್‌ಗಳಿಗೆ ಆಲೌಟಾಯಿತು. ನಾಯಕ ಬಾವುಮಾ (38; 47 ಎಸೆತ, 4 ಬೌಂಡರಿ, 1 ಸಿಕ್ಸರ್) ಗರಿಷ್ಠ ಸ್ಕೋರರ್ ಎನಿಸಿಕೊಂಡರು. ಟೋನಿ ಡಿಜಾರ್ಜ್ (31; 44 ಎಸೆತ, 1 ಬೌಂಡರಿ, 2 ಸಿಕ್ಸರ್), ಮಾರ್ಕ್ರಂ (21; 30 ಎಸೆತ, 1 ಬೌಂಡರಿ) ಮತ್ತು ರೀಜಾ ಹೆಂಡ್ರಿಕ್ಸ್ (17; 34 ಎಸೆತ, 1 ಬೌಂಡರಿ) ಮಾತ್ರ ಎರಡಂಕಿ ಮೊತ್ತ ಗಳಿಸಿದರು. ಬರ್ತ್ ಡೇ ಬಾಯ್ ರಶೀದ್ ಖಾನ್ (5/19) ಐದು ವಿಕೆಟ್ ಹಾಗೂ ಖರೋಟೆ (4/26) ನಾಲ್ಕು ವಿಕೆಟ್ ಕಬಳಿಸಿ ದಕ್ಷಿಣ ಆಫ್ರಿಕಾದ ಕುಸಿತಕ್ಕೆ ಕಾರಣರಾದರು. ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಆಫ್ಘಾನಿಸ್ತಾನದ ಆರಂಭಿಕ ಆಟಗಾರ ರಹಮಾನುಲ್ಲಾ ಗುರ್ಬಾಜ್ ಅಪರೂಪದ ಸಾಧನೆ ಮಾಡಿದರು. ಗುರ್ಬಾಜ್ ಏಕದಿನದಲ್ಲಿ ಅಫ್ಘಾನಿಸ್ತಾನ ಪರ ಅತಿ ಹೆಚ್ಚು ಶತಕಗಳನ್ನು ಗಳಿಸಿದ ಆಟಗಾರ ಎನಿಸಿಕೊಂಡರು. ಗುರ್ಬಾಜ್ ಅವರು 22 ನೇ ವಯಸ್ಸಿನಲ್ಲಿ ಈ ದಾಖಲೆಯನ್ನು ಪಡೆದರು ಎಂಬುದು ಗಮನಾರ್ಹ.

# ಟೀಮ್ ಇಂಡಿಯಾ ಗೆಲುವಿಗೆ 6 ವಿಕೆಟ್‌ಗಳ ಅವಶ್ಯಕತೆ



ಚೆನ್ನೈನಲ್ಲಿ ನಡೆಯುತ್ತಿರುವ ಬಾಂಗ್ಲಾದೇಶ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ಮೇಲುಗೈ ಸಾಧಿಸಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಬಾಂಗ್ಲಾದೇಶ್ ತಂಡದ ನಾಯಕ ನಜ್ಮುಲ್ ಹೊಸೈನ್ ಶಾಂತೊ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಪ್ರಥಮ ಇನಿಂಗ್ಸ್ ಆಡಿದ ಟೀಮ್ ಇಂಡಿಯಾ ಪರ ರವಿಚಂದ್ರನ್ ಅಶ್ವಿನ್ (113) ಶತಕ ಬಾರಿಸಿದರೆ, ರವೀಂದ್ರ ಜಡೇಜಾ (86) ಹಾಗೂ ಯಶಸ್ವಿ ಜೈಸ್ವಾಲ್ (56) ಅರ್ಧಶತಕ ಸಿಡಿಸಿದರು. ಈ ಮೂಲಕ ಟೀಮ್ ಇಂಡಿಯಾ ಪ್ರಥಮ ಇನಿಂಗ್ಸ್ ನಲ್ಲಿ 371 ರನ್ ಕಲೆಹಾಕಿ ಆಲೌಟ್ ಆಯಿತು. ಇದರ ಬೆನ್ನಲ್ಲೇ ಪ್ರಥಮ ಇನಿಂಗ್ಸ್ ಆರಂಭಿಸಿದ ಬಾಂಗ್ಲಾದೇಶ್ ತಂಡವು ಭಾರತೀಯ ವೇಗಿಗಳ ಸಾಂಘಿಕ ದಾಳಿಗೆ ತತ್ತರಿಸಿತು. ಪರಿಣಾಮ ಕೇವಲ 147 ರನ್ ಗಳಿಗೆ ಆಲೌಟ್ ಆಗಿ 227 ರನ್ ಗಳ ಹಿನ್ನಡೆ ಅನುಭವಿಸಿತು. ಮೊದಲ ಇನಿಂಗ್ಸ್ ಮುನ್ನಡೆಯೊಂದಿಗೆ ದ್ವಿತೀಯ ಇನಿಂಗ್ಸ್ ಶುರು ಮಾಡಿದ ಭಾರತವು ಉತ್ತಮ ಆರಂಭ ಪಡೆದಿರಲಿಲ್ಲ. ಆದರೆ ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಶುಭ್ಮನ್ ಗಿಲ್ ಹಾಗೂ ರಿಷಬ್ ಪಂತ್ ತಂಡಕ್ಕೆ ಆಸರೆಯಾಗಿ ನಿಂತರು. ಇದರ ನಡುವರ ರಿಷಬ್ ಪಂತ್ 126 ಎಸೆತಗಳಲ್ಲಿ ಶತಕ ಪೂರೈಸಿದರೆ, ಶುಭ್ಮನ್ ಗಿಲ್ (119) 5ನೇ ಟೆಸ್ಟ್ ಸೆಂಚುರಿ ಸಿಡಿಸಿದರು. ಈ ಮೂಲಕ ಟೀಮ್ ಇಂಡಿಯಾ ದ್ವಿತೀಯ ಇನಿಂಗ್ಸ್ ನಲ್ಲಿ 4 ವಿಕೆಟ್ ಕಳೆದುಕೊಂಡು 287 ರನ್ ಕಲೆಹಾಕಿ ಡಿಕ್ಲೇರ್ ಘೋಷಿಸಿತು.

**515 ರನ್ ಗಳ ಕಠಿಣ ಗುರಿ:**

ಮೊದಲ ಇನಿಂಗ್ಸ್ ಹಿನ್ನಡೆಯೊಂದಿಗೆ ದ್ವಿತೀಯ ಇನಿಂಗ್ಸ್ ನಲ್ಲಿ 515 ರನ್ ಗಳ ಗುರಿ ಪಡೆದ ಬಾಂಗ್ಲಾದೇಶ್ ತಂಡಕ್ಕೆ ಝಾಕಿರ್ ಹಸನ್ ಹಾಗೂ ಶಾದ್ಮನ್ ಇಸ್ಲಾಂ ಉತ್ತಮ ಆರಂಭ ಒದಗಿಸಿದ್ದರು. ಮೊದಲ ವಿಕೆಟ್ ಗೆ 62 ರನ್ ಪೇರಿಸಿದ ಬಳಿಕ ಝಾಕಿರ್ (33) ಬುಮ್ರಾ ಎಸೆತದಲ್ಲಿ ಔಟಾದರು. ಇದರ ಬೆನ್ನಲ್ಲೇ ದಾಳಿಗಿಳಿದ ರವಿಚಂದ್ರನ್ ಅಶ್ವಿನ್ ಶಾದ್ಮನ್ (35), ಮೊಮಿನುಲ್ ಹಕ್ (13) ಹಾಗೂ ಮುಷ್ಫಿಕುರ್ ರಹೀಮ್ (13) ವಿಕೆಟ್ ಪಡೆದರು. ಇನ್ನು ಬಾಂಗ್ಲಾದೇಶ್ ತಂಡವು 4 ವಿಕೆಟ್ ಕಳೆದುಕೊಂಡು 158 ರನ್ ಗಳಿಸಿದ್ದ ವೇಳೆ ಮಂದ ಬೆಳಕಿನ ಕಾರಣ ಮೂರನೇ ದಿನದಾಟವನ್ನು ಅಂತ್ಯಗೊಳಿಸಲಾಯಿತು. ಇನ್ನೆರಡು ದಿನದಾಟಗಳು ಉಳಿದಿದ್ದು, ಬಾಂಗ್ಲಾದೇಶ್ ತಂಡಕ್ಕೆ ಗೆಲ್ಲಲು 357 ರನ್ ಗಳ ಅವಶ್ಯಕತೆ ಇದೆ. ಅತ್ತ ಟೀಮ್ ಇಂಡಿಯಾ 6 ವಿಕೆಟ್ ಕಬಳಿಸಿದರೆ ಜಯ ತನ್ನದಾಗಿಸಿಕೊಳ್ಳಬಹುದು.

# ಆತನನ್ನ ಕಂಡರೆ ನನಗೆ ಅಸೂಯೆ

## ಜಡೇಜಾ ಬಗ್ಗೆ ಮೆಚ್ಚುಗೆ



ಭಾರತ ಮತ್ತು ಬಾಂಗ್ಲಾದೇಶ ಟೆಸ್ಟ್ ಪಂದ್ಯದ ಆರಂಭದ ಮೊದಲು, ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಹೆಚ್ಚು ಚರ್ಚೆಯ ವಿಷಯವಾಗಿದ್ದರು. ಆದರೆ ಪಂದ್ಯ ಆರಂಭವಾದ ಕೂಡಲೇ ರವಿಚಂದ್ರನ್ ಅಶ್ವಿನ್ ಮತ್ತು ರವೀಂದ್ರ ಜಡೇಜಾ ಎಂಟ್ರಿ ಕೊಟ್ಟಿದ್ದು ಎಲ್ಲಾರ ಗಮನ ಭಾರತದ ಈ ಇಬ್ಬರು ಆಲ್ ರೌಂಡರ್ ಗಳತ್ತ ನೆಟ್ಟಿದೆ. ಪಂದ್ಯದ ಎರಡನೇ ದಿನ ಬಾಂಗ್ಲಾದೇಶದ ಮೇಲೆ ಭಾರತ ತನ್ನ ಹಿಡಿತ ಸಾಧಿಸಿದ್ದು, ಭಾರತ ಗೆಲುವಿನತ್ತ ದಾಪುಗಾಲು ಇಡುತ್ತಿದೆ. ಇದರಲ್ಲಿ ಅಶ್ವಿನ್ ಮತ್ತು ಜಡೇಜಾ ಅವರ ಪಾತ್ರ ದೊಡ್ಡದಿದೆ. ಜಡೇಜಾರನ್ನ ಕಂಡರೆ ನನಗೆ ಅಸೂಯೆ ಎಂದ ಅಶ್ವಿನ್: ಟೀಮ್ ಇಂಡಿಯಾದ ಈ ಇಬ್ಬರು ಆಟಗಾರರು ತಮ್ಮ ಬ್ಯಾಟಿಂಗ್ ಮೂಲಕ ಎಲ್ಲಾರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಟೀಮ್ ಇಂಡಿಯಾದ ಆಲ್‌ರೌಂಡರ್ ಜಡೇಜಾ ಅವರನ್ನು ಹೊಗಳಿದ ಅಶ್ವಿನ್, ಅವರ ಬಗ್ಗೆ ಸ್ವಲ್ಪ ಮಟ್ಟಿಗೆ ಅಸೂಯೆ ಇದೆ ಎಂದು ಒಪ್ಪಿಕೊಂಡರು. ಶುಕ್ರವಾರ ಎರಡನೇ ದಿನದಾಟದ ಅಂತ್ಯದ ನಂತರ ಆಫ್-ಸ್ಪಿನ್ನರ್ ರವಿಚಂದ್ರನ್ ಅಶ್ವಿನ್, 'ರವೀಂದ್ರ ಜಡೇಜಾ ಎಷ್ಟು ಪ್ರತಿಭಾವಂತ ಆಟಗಾರ ಎಂದು ನಾನು ಯಾವಾಗಲೂ ಅಸೂಯೆಪಡುತ್ತೇನೆ. ಅವರು ತಮ್ಮ ಸಾಮರ್ಥ್ಯವನ್ನು ಹೆಚ್ಚಿಸಲು ಒಂದು ಮಾರ್ಗವನ್ನು ಕಂಡುಕೊಂಡಿದ್ದಾರೆ. ನಾನು ಹಾಗೆ ಆಗಬಹುದಿತ್ತು ಎಂದು ಹಲವು ಬಾರಿ ಅಂದುಕೊಂಡಿದ್ದೇನೆ, ಆದರೆ ನಾನು ಇದ್ದ ರೀತಿಯಲ್ಲಿ ನಾನು ಸಂತೋಷವಾಗಿದ್ದೇನೆ ಎಂದು ಹೇಳಿದ್ದಾರೆ.

**ಜಡೇಜಾ ಅಸಾಧಾರಣ ಕ್ರಿಕೆಟಿಗ:** 37 ವರ್ಷದ ಅಶ್ವಿನ್ ಅವರಿ ಶತಕ ಗಳಿಸಲು ಇನ್ನೊಂದು ತುದಿಯಲ್ಲಿದ್ದ ರವೀಂದ್ರ ಜಡೇಜಾ ಸಹಾಯ ಮಾಡಿರು ಎಂದು ಅಶ್ವಿನ್ ಒಪ್ಪಿಕೊಂಡ್ರು, 'ಅವರೊಬ್ಬ ಅಸಾಧಾರಣ ಕ್ರಿಕೆಟಿಗ. ವರ್ಷಗಳಲ್ಲಿ ಅವರು ಬ್ಯಾಟ್ ಮಾಡುವುದನ್ನು ನೋಡುವುದಕ್ಕೆ ನನಗೆ ಹೆಚ್ಚು ಸಂತೋಷವಾಗುತ್ತದೆ' ಎಂದು ಟೀಮ್ ಇಂಡಿಯಾ ಆಫ್ ಸ್ಪಿನ್ನರ್ ಅಶ್ವಿನ್ ಜಡೇಜಾ ಬಗ್ಗೆ ಮೆಚ್ಚುಗೆಯ ಮಾತುಗಳನ್ನಾಡಿದ್ರು.

**ಜಡೇಜಾಗೆ ಶತಕದ ಕ್ರೆಡಿಟ್:**

ತಮ್ಮ ಶತಕಕ್ಕೆ ಪಾರ್ಟ್ನರ್ ಜಡೇಜಾ ಕಾರಣ ಎಂದು ತಿಳಿಸಿದ್ದಾರೆ. ರವೀಂದ್ರ ಜಡೇಜಾ ಅವರ ನೆರವಿನಿಂದ ಶತಕ ಗಳಿಸಲು ಸಾಧ್ಯವಾಯಿತು. ಈ ಪಿಚ್ ಕೆಂಪು ಮಣ್ಣಾಗಿದ್ದು, ಶಾಟ್ ಮಾಡುವುಕ್ಕೆ ಸೂಕ್ತವಾಗಿದೆ. ಈ ಇನ್ನಿಂಗ್ಸ್ ನಲ್ಲಿ ಜಡೇಜಾ ನನ್ನ ಬೆಂಬಲಕ್ಕೆ ನಿಂತರು. ಒಂದು ಹಂತದಲ್ಲಿ ನಾನು ಸುಸ್ತಾಗಿದ್ದೆ. ಇದನ್ನು ತ್ವರಿತವಾಗಿ ಗ್ರಹಿಸಿದ ಜಡೇಜಾ, ನನಗೆ ಮಾರ್ಗದರ್ಶನ ನೀಡಿ, ಮೋಟಿವೇಟ್ ಮಾಡಿದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966